ಸಂಪುಟ: 05 ಸಂಚಿಕೆ: 178 ಪುಟಗಳು: 08 ಗುರುವಾರ 11 ಸೆಪ್ಟೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

UV
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಅಶಕ್ತ ಎಂದೂ ಕ್ಷಮಿಸಲಾರ. ಕ್ಷಮೆ ಎನ್ನುವುದು ಶಕ್ತಿ ಅಥವಾ ಸಾಮರ್ಥ್ಯದ ಸಂಕೇತವಿದ್ದಂತೆ.

# ಪಾಕಿಸ್ತಾನದ ಪರ ಘೋಷಣೆ ಕೂಗಿದವರಿಗೆ ಜಾಮೀನು ಸಿಗದ ಹಾಗೆ ಮಾಡ್ತೀವಿ!

**ಪ್ರದೀಪ್ ಈಶ್ವರ್ ಎಚ್ಚರಿಕೆ**

• **ಉದಯವಾಹಿನಿ, ಬೆಂಗಳೂರು**

ಪಾಕಿಸ್ತಾನದ ಪರ ಘೋಷಣೆ ಕೂಗಿದವರನ್ನು ಜಾಮೀನು ಸಿಗದ ಹಾಗೆ ಮಾಡ್ತೀವಿ ಎಂದು ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಎಚ್ಚರಿಕೆ ನೀಡಿದರು. ಬೆಂಗಳೂರಿನಲ್ಲಿ ಬುಧವಾರ ಮಾತನಾಡಿದ ಅವರು, ಯಾರು ಕೂಗಿದ್ದಾನೋ ಅವನಿಗೆ ಜಾಮೀನು ಸಿಗಬಾರದು. ಅಂತಹ ಸೆಕ್ಷನ್ ಹಾಕಿ ಒಳಗೆ ಹಾಕ್ತೀವಿ. ಯಾವನೋ ಕೂಗಿದರೆ ಸರ್ಕಾರ ಏನು ಮಾಡೋಕೆ ಆಗುತ್ತೆ ಎಂದು ಪ್ರಶ್ನಿಸಿದರು. ಭದ್ರಾವತಿಯಲ್ಲಿ ಪಾಕಿಸ್ತಾನದ ಪರವಾಗಿ ಘೋಷಣೆ ಕೂಗಲಾಗಿದೆ ಎಂಬ ವಿಡಿಯೋ ಹರಿದಾಡುತ್ತಿದೆ. ಈ ಸಂಬಂಧಿಸಿದಂತೆ ಪೊಲೀಸರು ಈಗಾಗಲೇ ಸ್ವಯಂಪ್ರೇರಿತ ದೂರು ದಾಖಲು ಮಾಡಿದ್ದಾರೆ. ಈ ವಿಚಾರವನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ವಿಪಕ್ಷ ವಾಗ್ದಾಳಿ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿದ ಪ್ರದೀಪ್ ಈಶ್ವರ್, ನಾನು ಗೃಹ ಸಚಿವರಿಗೆ ಮನವಿ ಮಾಡುತ್ತೇನೆ. ಅದೇನೋ ಪದ ಬಳಸಿದನಲ್ಲ ಆ ಪದ ಬಳಸಲ್ಲ. ಶತ್ರು ದೇಶವನ್ನ ದ್ವೇಷ ಮಾಡುತ್ತೇನೆ. ಹಾಗಾಗಿ ಜಾಮೀನು ಕೂಡ ಸಿಗದ ಸೆಕ್ಷನ್ ಹಾಕಿ ಒದ್ದು ಒಳಗೆ ಹಾಕಬೇಕು ಎಂದು ಮನವಿ ಮಾಡಿದರು. ಗಣೇಶ ಹಬ್ಬ ಸಂದರ್ಭದಲ್ಲೇ ಯಾಕೆ ಹೀಗೆ ಆಗೋದು ಕಾನೂನು ಸುವ್ಯವಸ್ಥೆ ನಿಯಂತ್ರಣ ಮಾಡುವಾಗಲೇ ಒಂದು ಕೋತಿ ಮೈಸೂರಿಂದ ಬರುತ್ತೆ ಇನ್ನೊಂದು ಕೋತಿ ವಿಜಯಪುರದಿಂದ ಬರುತ್ತೆ. ಮಾತಾಡಿದರೆ ಜೆಸಿಬಿ ಅಂತಾರೆ ಯೋಗಿ ಆದಿತ್ಯ ನಾಥ್ ಅಂತಾರೆ .ಅಂದರೆ ಕರ್ನಾಟಕದಲ್ಲಿ ಯಾವ ಮುಖ್ಯ ಮಂತ್ರಿಯು ಯೋಗಿ ಆದಿತ್ಯನಾಥ್ ರೀತಿ ಇರಲಿಲ್ವಾ ಎಂದು ಕಿಡಿಕಾರಿದರು.



ಕರ್ನಾಟಕದ ಬಿಜೆಪಿ ಮುಖ್ಯಮಂತ್ರಿಗಳು ಎಲ್ಲರೂ ಅಯೋಗ್ಯರು ಅಂತಾ ಬಿಜೆಪಿಯವರು ಹೀಗೆ ಮಾಡಿದರೆ ಅವರ ಮೇಲೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು. ಮಂಡ್ಯದ ಮದ್ದೂರಿನಲ್ಲಿ ಕಲ್ಲು ತೂರಾಟ ಮಾಡಿದವರ ಮೇಲೆ ಸೂಕ್ತ ಕ್ರಮ ತಗೆದುಕೊಳ್ಳುತ್ತೇವೆ. ಅವರನ್ನು ಸಮರ್ಥನೆ ಮಾಡುತ್ತಿಲ್ಲ. ಆದರೆ ಇವರು ಬೆಂಕಿ ಹಚ್ಚುತ್ತಿದ್ದಾರೆ. ಅದರ ಬಗ್ಗೆ ನಮಗೆ ಬೇಜಾರು ಅಷ್ಟೆ ಎಂದರು.

ಶಿವಮೊಗ್ಗದ ಭದ್ರಾವತಿಯಲ್ಲಿ ಈದ್ ಮಿಲಾದ್ ಹಬ್ಬದ ಕಾರ್ಯಕ್ರಮದ ವೇಳೆ, ಪಾಕಿಸ್ತಾನ ಪರವಾಗಿ ಘೋಷಣೆಗಳು ಕೂಗಿಬಂದಿವೆ. ಇದೇ ಕಾರ್ಯಕ್ರಮದಲ್ಲಿ ಭದ್ರಾವತಿ ಶಾಸಕರಾದ ಬಿ.ಕೆ.ಸಂಗಮೇಶ್‌ರು ಮುಂದಿನ ಜನ್ಮದಲ್ಲಿ ಮುಸ್ಲಿಮನಾಗಿ ಹುಟ್ಟುವ ಆಸೆಯಿದೆ ಎಂದು ಹೇಳಿದ್ದಾರೆ. ಈದ್ ಮಿಲಾದ್ ಮೆರವಣಿಗೆಯನ್ನು ಮತ್ತೆ ಆರಂಭಿಸಿದ ಕಾಂಗ್ರೆಸ್ ಸರ್ಕಾರದ ಬಗ್ಗೆಯೂ ಅವರು ಮೆಚ್ಚುಗೆಯನ್ನು ಇದೇ ಕಾರ್ಯಕ್ರಮದಲ್ಲಿ ವ್ಯಕ್ತಪಡಿಸಿದ್ದಾರೆ.

**ನಾನು ಮದ್ದೂರಿಗೆ ಬರೋ ಮುನ್ನ, ಮುಸಲ್ಮಾನ ಗೂಂಡಾಗಳನ್ನು ಬಂಧಿಸಿ**

ಇತ್ತೀಚೆಗೆ, ಮದ್ದೂರಿನಲ್ಲಿ ನಡೆದ ಹಿಂದೂ ಮುಸ್ಲಿಂ ಗಲಾಟೆಯ ಬಗ್ಗೆ ಬಿಜೆಪಿ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಗುಡುಗಿದ್ದಾರೆ.

ತಾವು ಸದ್ಯದಲ್ಲೇ ಮದ್ದೂರಿಗೆ ಬರುವುದಾಗಿ ಸೆ. 10ರಂದು ಟ್ವೀಟ್ ಮಾಡಿರುವ ಅವರು, ತಾವು ಬರುವದಕ್ಕೂ ಮುನ್ನವೇ ಮದ್ದೂರಿನಲ್ಲಿರುವ ಮುಸ್ಲಿಂ ಗೂಂಡಾಗಳನ್ನು ಬಂಧಿಸಿ. ಇಲ್ಲದಿದ್ದರೆ ಪ್ರತಿಭಟನೆ ಮತ್ತಷ್ಟು ತೀವ್ರ ಆಗುತ್ತದೆ ಎಂದು ಅವರು ಗುಡುಗಿದ್ದಾರೆ.

## ಕೊಪ್ಪಳದಲ್ಲಿ ಉಕ್ಕು ಘಟಕ ಸ್ಥಾಪನೆಗೆ 2,345 ಕೋಟಿ

• **ಉದಯವಾಹಿನಿ, ಬೆಂಗಳೂರು**

ಬಜಾಜ್ ಸಮೂಹದ ಮುಕುಂದ ಸುಮಿ ಸಹಭಾಗಿತ್ವದಲ್ಲಿ ಕೊಪ್ಪಳದಲ್ಲಿ ಉಕ್ಕು ತಯಾರಿಕಾ ಘಟಕ ಸ್ಥಾಪನೆಗೆ ಜಪಾನಿನ ಸುಮಿಟಾವೊ ಕಂಪನಿ 2,345 ಕೋಟಿ ಹೂಡಿಕೆ ಮಾಡಲಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಬಂಡವಾಳ ಆಕರ್ಷಣೆಗಾಗಿ ಜಪಾನ್ ಪ್ರವಾಸದಲ್ಲಿರುವ ಅವರು ಸುಮಿಟಾವೊ ಪ್ರತಿನಿಧಿಗಳ ಜತೆಗಿನ ಸಭೆಯ ನಂತರ ಈ ಮಾಹಿತಿ ನೀಡಿದ್ದಾರೆ. 'ಈ ಘಟಕವು ವಾರ್ಷಿಕ 3.50 ಲಕ್ಷ ಟನ್ ಉಕ್ಕು ತಯಾರಿಸುವ ಸಾಮರ್ಥ್ಯ ಹೊಂದಿರಲಿದೆ. 2028ರ ವೇಳೆಗೆ ಘಟಕ ಕಾರ್ಯಾರಂಭ ಮಾಡಲಿದೆ. ಅಲ್ಲದೆ ಸುಮಿಟಾವೊ ಕಂಪನಿಯು ರಾಜ್ಯದಲ್ಲಿ ಬಯೊಮಾಸ್ ಘಟಕವನ್ನೂ ಸ್ಥಾಪಿಸಲಿದೆ' ಎಂದಿದ್ದಾರೆ. 'ಹುಬ್ಬಳ್ಳಿಯಲ್ಲಿರುವ ಎನ್‌ಜಿಇಎಫ್ ಕಾರ್ಖಾನೆಯ ಪುನರಾರಂಭದ ಸಂಬಂಧ ಜೆಎಫ್‌ಇ ಷೋಜಿ ಕಂಪನಿಯ ಪ್ರತಿನಿಧಿಗಳ ಜತೆಗೆ ಮಾತುಕತೆ ನಡೆಸಲಾಗಿದೆ. 400 ಕೋಟಿ ಹೂಡಿಕೆ ಮಾಡಲು ಕಂಪನಿ ಮುಂದೆ ಬಂದಿದೆ. ವಿದ್ಯುತ್‌ಚಾಲಿತ ವಾಹನಗಳ ಮೋಟರ್‌ಗಳ ಕೋರ್‌ಗಳನ್ನು ಈ ಕಾರ್ಖಾನೆಯಲ್ಲಿ ತಯಾರಿಸುವ ಬಗ್ಗೆ ಪರಿಶೀಲನೆ ನಡೆಯಲಿದೆ. ಅದರ ಭಾಗವಾಗಿ ಜೆಎಫ್‌ಇ ಷೋಜಿ ಪ್ರತಿನಿಧಿಗಳನ್ನು ಎನ್‌ಜಿಇಎಫ್ ಕಾರ್ಖಾನೆ ಭೇಟಿಗೆ ಆಹ್ವಾನಿಸಲಾಗಿದೆ' ಎಂದು ಮಾಹಿತಿ ನೀಡಿದ್ದಾರೆ.

## 65 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್ ರದ್ದು: ಸಿಎಂ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಅನರ್ಹರಿಗೆ ನೀಡಲಾಗಿದ್ದ ಬಿಪಿಎಲ್ ಪಡಿತರ ಕಾರ್ಡ್‌ಗಳ ಪೈಕಿ 3.65 ಲಕ್ಷ ಕಾರ್ಡ್‌ಗಳನ್ನು ಪತ್ತೆ ಮಾಡಿ ರದ್ದುಪಡಿಸಲಾಗಿದೆ. ಇನ್ನೂ ಸಾಕಷ್ಟು ಮಂದಿ ಅನರ್ಹರು ಬಿಪಿಎಲ್ ಕಾರ್ಡ್‌ಗಳನ್ನು ಹೊಂದಿದ್ದು ಅವುಗಳನ್ನೂ ರದ್ದುಪಡಿಸಿ ಎಂದು ಸಿಎಂ ಸಿದ್ದರಾಮಯ್ಯ ಅವರು ಆಹಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

'ಈ ಕಾರ್ಯಚರಣೆಯಲ್ಲಿ ಅರ್ಹರಿಗೆ ಯಾವುದೇ ತೊಂದರೆ ಆಗಬಾರದು. ಒಬ್ಬ ಅರ್ಹ ವ್ಯಕ್ತಿಯ ಬಿಪಿಎಲ್ ಕಾರ್ಡ್ ಸಹ ರದ್ದಾಗಬಾರದು. ಅರ್ಹರಿಗೆ ಈವರೆಗೆ ಬಿಪಿಎಲ್ ಕಾರ್ಡ್ ನೀಡಿಲ್ಲದೇ ಇದ್ದರೆ, ವಿತರಿಸಲು ತಕ್ಷಣವೇ ಕ್ರಮ ತೆಗೆದುಕೊಳ್ಳಬೇಕು' ಎಂದು ತಾಕೀತು ಮಾಡಿದರು. 'ಪಡಿತರ ವಿತರಣೆ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಬೇಕು. ಆಹಾರ ಧಾನ್ಯಗಳನ್ನು ಸರಬರಾಜು ಮಾಡುತ್ತಿರುವ ಜಿಪಿಎಸ್ ಟ್ರ್ಯಾಕ್ಟರ್‌ಗಳನ್ನು ವಾಹನಗಳಿಗೆ ಅಳವಡಿಸಬೇಕು. ರಾಜ್ಯದಲ್ಲಿರುವ ಎಲ್ಲಾ ಗೋದಾಮುಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಲು ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ಸೂಚಿಸಿದರು.

## ಕಾಂಗ್ರೆಸ್ ಶಾಸಕ ಸಂಗಮೇಶ್ ಮತಾಂತರವಾಗಲಿ

• **ಉದಯವಾಹಿನಿ, ಬೆಂಗಳೂರು**

'ಭದ್ರಾವತಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಮುಂದಿನ ಜನ್ಮದಲ್ಲಿ ಮುಸ್ಲಿಮನಾಗಿ ಹುಟ್ಟುತ್ತೇನೆ ಎಂದಿದ್ದಾರೆ. ಮುಂದಿನ ಜನ್ಮದವರೆಗೆ ಕಾಯವುದು ಬೇಡ, ಈ ಜನ್ಮದಲ್ಲಿಯೇ ಮತಾಂತರವಾಗಿಬಿಡಲಿ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು. 'ಭದ್ರಾವತಿ ಶಾಸಕ ಬಿ.ಕೆ.ಸಂಗಮೇಶ್ ಅವರು ಮುಸ್ಲಿಮನಾಗಿ ಹುಟ್ಟಲು ಬಯಸುತ್ತೇನೆ' ಎಂದು ಹೇಳಿರುವ ಬಗ್ಗೆ ಸುದ್ದಿಗಾರರು ಪ್ರತಿಕ್ರಿಯೆ ಕೇಳಿದಾಗ ವಿಜಯೇಂದ್ರ ಮೇಲಿನಂತೆ ಪ್ರತಿಕ್ರಿಯಿಸಿದರು. 'ರಾಜ್ಯ ಸರ್ಕಾರದ ಕುಮ್ಮಕ್ಕಿನಿಂದಲೇ ಹಿಂದೂಗಳ ಮೇಲೆ ಕಲ್ಲು ತೂರಾಟ, ಹಿಂದೂ ಕಾರ್ಯಕರ್ತರ ಮೇಲೆ ಹಲ್ಲೆ ನಡೆಯುತ್ತಿದೆ.

ಅಂತಹ ದುಷ್ಟಶಕ್ತಿಗಳಿಗೆ ಪೂರಕವಾದ ವಾತಾವರಣವನ್ನು ರಾಜ್ಯ ಸರ್ಕಾರ ನಿರ್ಮಿಸಿದೆ. ಕಾಂಗ್ರೆಸ್ ನಾಯಕರ ಆಡುವ ಇಂತಹ ಮಾತುಗಳೂ ದಾಳಿಕೋರರಿಗೆ ಪ್ರಚೋದನೆ ನೀಡುತ್ತದೆ' ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಹಿಂದೂಗಳು ಗಣೇಶನ ಹಬ್ಬವನ್ನು ನೆಮ್ಮದಿಯಿಂದ ಆಚರಿಸಲು ಸಾಧ್ಯವಾಗಿಲ್ಲ. ಸರ್ಕಾರವು ಒಂದು ಸಮುದಾಯದ ಕಡೆ ವಾಲಿದೆ. ಮದ್ದೂರಿನ ಘಟನೆಗಳು ಇದನ್ನು ಸಾಬೀತುಪಡಿಸುವಂತಿದೆ' ಎಂದರು.

# ಮದ್ದೂರು ಕೇಸರಿಮಯ



**ಬಿಜೆಪಿ ಮುಖಂಡರ ಸಮ್ಮುಖದಲ್ಲಿ ಗಣೇಶ ವಿಸರ್ಜನೆ ಬೃಹತ್ ಮೆರವಣಿಗೆ**

**ಮದ್ದೂರು ಗಲಭೆ: ಕೇಂದ್ರ ಸರ್ಕಾರ ಉರುಳಿಸುವ ಷಡ್ಯಂತ್ರ**



**ಸರ್ಕಾರದ ವಿರುದ್ಧ ರಣಕಹಳೆ**

• **ಉದಯವಾಹಿನಿ, ಮಂಡ್ಯ**

ಮದ್ದೂರಲ್ಲಿ ಗಲಭೆ ಉಂಟಾದ ಬಳಿಕ, ಪೊಲೀಸ್ ಕಟ್ಟೆಚ್ಚರದಲ್ಲಿ ಬಿಜೆಪಿ ನಿಯೋಗದ ಮುಖಂಡರ ಸಮ್ಮುಖದಲ್ಲಿ ಬೃಹತ್ ಗಣೇಶ ವಿಸರ್ಜನಾ ಶೋಭಾಯಾತ್ರೆ ನಡೆಸಲಾಗುತ್ತಿದೆ. ಮದ್ದೂರಿನ ವಿವಿಧ ಕಡೆ ಪ್ರತಿಷ್ಠಾಪನೆ ಮಾಡಿದ್ದ 28 ಗಣೇಶ ಮೂರ್ತಿಗಳನ್ನು ಮೆರವಣಿಗೆ ಮೂಲಕ ತಂದು ಸಾಮೂಹಿಕ ವಿಸರ್ಜನೆಯತ್ತ ಕೊಂಡೊಯ್ಯಲಾಗುತ್ತಿದೆ. ಮೆರವಣಿಗೆ ಮುನ್ನವೇ ಜಾನಪದ ಕಲಾ ತಂಡಗಳೊಂದಿಗೆ ಹಿಂದೂ ಕಾರ್ಯಕರ್ತರು ತಮಟೆ ಸದ್ದಿಗೆ ಕುಣಿದು ಕುಪ್ಪಳಿಸಿದರು. 10ಕ್ಕೂ ಹೆಚ್ಚು ಕಲಾತಂಡಗಳು, ಪೂಜಾಕುಣಿತ, ಡೊಳ್ಳು ಕುಣಿತ, ಗಾರುಡಿ ಗೊಂಬೆ, ತಮಟೆ ಸೇರಿದಂತೆ ಹಲವು ಕಲಾ ತಂಡಗಳು ಸಾಥ್ ನೀಡಿದವು.


**ದೇಗುಲಕ್ಕೆ ಆಗಮಿಸಿದ ಬಿಜೆಪಿ ಪಡೆ:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಕಾಶಿ ವಿಶ್ವನಾಥ ದೇಗುಲದಲ್ಲಿ ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ಕೊಡಲಾಯಿತು. ಸಾಮೂಹಿಕ ಗಣೇಶ ವಿಸರ್ಜನೆ ಮೆರವಣಿಗೆಗೆ ಚಾಲನೆ. ಬಿ.ವೈ. ವಿಜಯೇಂದ್ರ ಅವರಿಗೆ ವಿಪಕ್ಷ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಿ.ಟಿ.ರವಿ, ಯದುವೀರ್, ಅಶ್ವತ್ಥ ನಾರಾಯಣ ಮತ್ತಿತರರು ಸಾಥ್ ಕೊಟ್ಟರು.

**ನಾಯಕರನ್ನು ಕುಣಿಸಿದ ಕಾರ್ಯಕರ್ತರು:** ಗಣೇಶ ಮೆರವಣಿಗೆಗೆ ಜನ ಸಾಗರವೇ ನೆರೆದಿತ್ತು. ಸಾವಿರಾರು ಸಂಖ್ಯೆಯಲ್ಲಿ ಜಮಾಯಿಸಿದ ಜನ, ಕೇಸರಿ ಶಾಲು ಧರಿಸಿ ಮೆರವಣಿಗೆಯಲ್ಲಿ ಭಾಗಿಯಾದರು. ಮೆರವಣಿಗೆಯುದ್ದಕ್ಕೂ ಜೈ ಶ್ರೀರಾಮ್ ಘೋಷಣೆ ಕೂಗಿದರು. ಇನ್ನು ಕಾರ್ಯಕರ್ತರ ಅಭಿಮಾನಕ್ಕೆ ಕೇಸರಿ ನಾಯಕರು ಖುಷಿಯಾಗಿದ್ದಾರೆ. ಮೆರವಣಿಗೆ ವೇಳೆ ಅಶೋಕ್, ಅಶ್ವತ್ಥ ನಾರಾಯಣರನ್ನ ಹೆಗಲ ಮೇಲೆ ಹೊತ್ತು ಕಾರ್ಯಕರ್ತರು ಕುಣಿದಿದ್ದಾರೆ. ಮದ್ದೂರು ಬಿಜೆಪಿ ಕಚೇರಿ ಎದುರಿನಿಂದ ಗಣೇಶ ವಿಸರ್ಜನೆ ಮೆರವಣಿಗೆ ಆರಂಭ ಆಯಿತು. ಮೆರವಣಿಗೆಗೆ ಜಾನಪದ ಕಲಾ ತಂಡಗಳ ಮೆರುಗು ನೀಡಿದ್ದು, ಮೆರವಣಿಗೆಯುದ್ದಕ್ಕೂ ಸಿಡಿಮದ್ದುಗಳು ಅಬ್ಬರಿಸಿತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್, ಸಿ.ಟಿ.ರವಿ, ಪ್ರತಾಪ್ ಸಿಂಹ, ಛಲವಾದಿ ನಾರಾಯಸ್ವಾಮಿ, ಸುಮಲತಾ ಅಂಬರೀಶ್ ಸೇರಿದಂತೆ ಹಲವು ನಾಯಕರು ಸಾಮೂಹಿಕ ಗಣೇಶ ವಿಸರ್ಜನಾ ಮೆರವಣಿಗೆಯಲ್ಲಿ ಭಾಗಿಯಾದರು. ಅದಕ್ಕೂ ಮುನ್ನ ಕಲ್ಲೆಸೆತದಲ್ಲಿ ಗಾಯಗೊಂಡವರ ಮನೆಗೆ ಭೇಟಿ. ನೀಡಿ, ಸ್ಥಳೀಯರಿಗೆ ಧೈರ್ಯ ತುಂಬಿದರು. ನಂತರ ಲಾಠಿ ಚಾರ್ಜ್ ವೇಳೆ ಗಾಯಗೊಂಡವರ ಮನೆಗಳಿಗೂ ಭೇಟಿ ನೀಡಲಾಯಿತು.

**ಖಾಕಿ ಸರ್ಪಗಾವಲಿನಲ್ಲಿ ಪೊಲೀಸ್ ಮೆರವಣಿಗೆ:** ಮದ್ದೂರು ಪಟ್ಟಣದಾದ್ಯಂತ ಖಾಕಿ ಸರ್ಪಗಾವಲು ವ್ಯವಸ್ಥೆ ಮಾಡಲಾಗಿತ್ತು. ದಕ್ಷಿಣ ವಲಯದ ಐಜಿಪಿ ಬೋರಲಿಂಗಯ್ಯ ನೇತೃತ್ವದಲ್ಲಿ ಬಿಗಿ ಭದ್ರತೆ ಕಲ್ಪಿಸಿ, 5 ಮಂದಿ ಎಸ್ಪಿ, 4 ಮಂದಿ ಎಎಸ್ಪಿ ಸೇರಿದಂತೆ ಸಾವಿರಾರು ಪೊಲೀಸರು ಭದ್ರತೆಗೆ ನಿಯೋಜನೆ ಮಾಡಲಾಗಿತ್ತು. ಮಂಡ್ಯ, ಮೈಸೂರು, ಬೆಂಗಳೂರು, ರಾಮನಗರ, ಚಾಮರಾಜನಗರ, ಹಾಸನ ಸೇರಿ ಹಲವು ಜಿಲ್ಲೆಗಳ ಪೊಲೀಸರ ನಿಯೋಜನೆಯಾಗಿತ್ತು. ಕೆಎಸ್‌ಆರ್‌ಪಿ, ಡಿಎಆರ್ ತುಕಡಿ, ರ್ಯಾಪಿಡ್ ಆಯಕ್ಷನ್ ಫೋರ್ಸ್ ಸೇರಿ 2 ಸಾವಿರ ಪೊಲೀಸ್ ಸಿಬ್ಬಂದಿಗಳು ಕೂಡಾ ಇದ್ದರು.

**ತನಿಖೆ ಆಗಲಿ:** ವಿಜಯೇಂದ್ರ, ಮಾತನಾಡಿ, ಜಿಲ್ಲಾಧಿಕಾರಿ, ಎಸ್ಪಿ, ನಡೆದಿರುವ ಘಟನೆ ಬಗ್ಗೆ ಮಾಹಿತಿ ಕೊಟ್ಟಿದ್ದಾರೆ. ಒಂದು ಕೋಮಿನ ಜನ ಹಿಂದುಗಳು ಮೆರವಣಿಗೆ ಮಾಡಬಾರದು ಅಂತ ಗುಂಡಾವರ್ತನೆ ಉಲ್ಲೇಖ ಮಾಡಿದ್ದಾರೆ. ದುಷ್ಕರ್ಮಿಗಳ ಅಟ್ಟಹಾಸ ಎಷ್ಟರ ಮಟ್ಟಿಗೆ ಇದೆ ಅನ್ನೋದು ಗೊತ್ತಾಗುತ್ತದೆ. ಹಿಂದು ಮಹಿಳೆಯರು ಯಾವತ್ತು ರಸ್ತೆಗಿಳಿದು ಆಕ್ರೋಶ ವ್ಯಕ್ತಪಡಿಸಿರಲಿಲ್ಲ. ರಸ್ತೆಯಲ್ಲಿ ಹೆಣ್ಣು ಮಕ್ಕಳು ನಡೆದುಕೊಂಡು ಹೋಗುವುದಕ್ಕೆ ಆಗ್ತಿಲ್ಲ ಎಂದರು.

**ಕಾಂಗ್ರೆಸ್ ಸರ್ಕಾರಕ್ಕೆ ಬುದ್ಧಿ ಕಲಿಸಬೇಕು**



**ಮದ್ದೂರಿನಲ್ಲಿ ಮಾಜಿ ಡಿಸಿಎಂ ಅಶ್ವತ್ಥ್ ನಾರಾಯಣ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಓಲೈಕೆ ರಾಜಕೀಯ ಮಾಡ್ತಾ ಇದೆ. ನಮ್ಮ ತಾಳ್ಮೆಯನ್ನು ಪರೀಕ್ಷೆ ಮಾಡುತ್ತಿದೆ. ಪೊಲೀಸ್ ಠಾಣೆಯನ್ನು ಸುಡಲು ಹೋದವರು ಈ ಮುಸ್ಲಿಮರು. ಇಂತವರ ಮೇಲೆ ಕೇಸ್ ದಾಖಲು ಮಾಡಲು ಹಿಂಜರಿಯುತ್ತಾರೆ. ಕೇಸ್ ಹಾಕಿದ ಮೇಲೆ ಕೇಸ್ ಹಿಂದೆ ತಗೊಳುತ್ತಾರೆ. ಇದು ಕಾನೂನು ಸುವ್ಯವಸ್ಥೆ ಕಾಪಾಡುವ ಸರ್ಕಾರ ಅಲ್ಲ. ಇದು ಜನ ವಿರೋಧಿ ಸರ್ಕಾರ. ನಾಗಮಂಗಲದಲ್ಲಿ ಹೋದ ವರ್ಷ ಗಲಾಟೆ ಮಾಡಿದ್ರು. ಕೆರಗೋಡಿನಲ್ಲಿ ಧ್ವಜ ಹಾರಿಸಲು ಬಿಡಲಿಲ್ಲ. ನಮ್ಮ ಸ್ವಾತಂತ್ರ್ಯಕ್ಕೆ ಅಡಚಣೆ ಮಾಡುತ್ತಿರುವ ಈ ಸರ್ಕಾರ, ಕಲ್ಲು ತೂರಿದವರ ಮೇಲೆ ಕಾನೂನು ಕೇಸ್ ಹಾಕುವ ಬದಲು ನಾಟಕ ಆಡುತ್ತಿದೆ ಎಂದು ದೂರಿದ್ದಾರೆ.**

**ಸರ್ಕಾರ ಅಪರಾಧಿಗಳ ರಕ್ಷಿಸಿ, ಅಮಾಯಕರಿಗೆ ಶಿಕ್ಷೆ ಕೊಡ್ತಿದೆ**



**ಸುಮಲತಾ ಅಂಬರೀಶ್ ಮಾತನಾಡಿ, ನಾವೆಲ್ಲ ನಿಂತಿರೋದು ನಮ್ಮ ನೋವು ಹಂಚಿಕೊಳ್ಳಲು. ಸರ್ಕಾರ ನಮ್ಮ ವಿರುದ್ಧ ಯಾವ ರೀತಿ ನಡೆದುಕೊಳ್ತಿದೆ ಅಂತ ನೋಡ್ತಿದ್ದೀರಿ. ಈಗ ಅಭಿಮಾನಿಗಳು ನನ್ನ ಅಡ್ಡ ಹಾಕಿ ಹೇಳಿದ್ರು. ಅಕ್ಕ ಅಂಬರೀಶ್ ಅಣ್ಣ ಇರಬೇಕು ಅಂತ ಹೇಳಿದ್ರು.ನಮಗೆ ರಕ್ಷಣೆ ಕೊಡುವ ನಾಯಕರು ಸರಿಯಾಗಿದ್ರೆ ಎಲ್ಲಾ ಸರಿ ಇರುತ್ತೆ. ನಾಯಕರು ಅಸಮರ್ಥ ಆದಾಗ ಇಂತಹ ಘಟನೆ ನಡೆಯುತ್ತೆ. ಬಿಟ್ಟಿ ಭಾಗ್ಯಗಳನ್ನ ನಂಬಿ ನಾವು ನೆಮ್ಮದಿ ಕಳೆದುಕೊಂಡಿದ್ದೇವೆ. ಮೋದಿ ನಾಯಕತ್ವದಲ್ಲಿ ದೇಶ ಮೂರನೇ ಆರ್ಥಿಕ ಸ್ಥಿತಿಗೆ ಬಂದಿದೆ.**

**ಸಿಟಿ ರವಿ ಪ್ರಚೋದನೆ ಹೇಳಿಕೆ**



**ಅಣ್ಣ ಅಂದವರನ್ನು ನಾವು ಅಣ್ಣ ಅಂತೀವಿ. ನೀವು ಏನ್ಲ ಅಂದ್ರೆ, ನಿಮ್ ತಲೆ ತೆಗಯುತ್ತೇವೆ. ನಮ್ಮಲ್ಲಿ ಉರೀಗೌಡ, ನಂಜೇಗೌಡರು ಇದ್ದಾರೆ ಎಂದು ಮಂಡ್ಯದ ಮದ್ದೂರಿನಲ್ಲಿ ಬಿಜೆಪಿ ಶಾಸಕ ಸಿಟಿ ರವಿ ಹೇಳಿದರು. ಮದ್ದೂರಿನಲ್ಲಿ ಸಾಮೂಹಿಕ ಗಣೇಶ ಮೆರವಣಿಗೆ ನಡೆಯಿತು. ಜೊತೆಗೆ ಭಾನುವಾರ ಕಲ್ಲು ತೂರಾಟದಲ್ಲಿ ತೀವ್ರ ಗಾಯಗೊಂಡಿದ್ದ ಗಾಯಾಳು ಮನೆಗಳಿಗೆ ಬಿಜೆಪಿ ನಾಯಕರು ಭೇಟಿ ನೀಡಿ ಆರೋಗ್ಯ ವಿಚಾರಿಸಿ, ಸಾಂತ್ವಾನ ಹೇಳಿದರು. ಗಣೇಶ ವಿಸರ್ಜನಾ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಪ್ರಚೋದನಾಕಾರಿಯಾಗಿ ಮಾತನಾಡಿದರು. ನಮ್ಮ ಗಣೇಶ ಮೆರವಣಿಗೆ ಮೇಲೆ ಕಲ್ಲು ತೂರಾಟ ಮಾಡಲಾಗಿದೆ. ಇಲ್ಲಿ ಬಂದಿರುವವರು ಹಿಂದೂ ಭಾವನೆಗಳಿಗೆ ಧಕ್ಕೆ ಆಗಿದೆ ಅಂತ.ಯಾರೂ ರಾಜಕಾರಣ ಮಾಡೋಕೆ ಬಂದಿಲ್ಲ. ವಿಷ್ಣು ವಾಮನ ಅವತಾರ ಎತ್ತಿ ಮೂರು ಲೋಕಗಳನ್ನ ಎತ್ತಿದ್ದಾನೆ. ಇಡೀ ಭೂ ಮಂಡಲವೇ ಹಿಂದುಗಳು ಅನ್ನೋದಾ. ಎಂದು ಸಿಟಿ ರವಿ ಮದ್ದೂರಿನಲ್ಲಿ ಮಾತನಾಡಿದರು.**

# ವಿವಿಧ ವಸತಿ ಯೋಜನೆಗಳ ಪ್ರಗತಿ ಪರಿಶೀಲನೆ

**42 ಸಾವಿರ ಮನೆಗಳ ನಿರ್ಮಾಣ**

• **ಉದಯವಾಹಿನಿ, ಬೆಂಗಳೂರು**

ವಿವಿಧ ವಸತಿ ಯೋಜನೆಗಳ ಅಡಿ ಮನೆಗಳ ನಿರ್ಮಾಣಕ್ಕೆ ಅಗತ್ಯ ಇರುವ ಅನುದಾನ ಹಂಚಿಕೆ ಕುರಿತು ಪ್ರಸ್ತಾವಗಳನ್ನು ಸಲ್ಲಿಸುವಂತೆ ಆರ್ಥಿಕ ಇಲಾಖೆಯ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದಾರೆ.

ರಾಜ್ಯದಲ್ಲಿ ಜಾರಿಯಲ್ಲಿರುವ ವಿವಿಧ ವಸತಿ ಯೋಜನೆಗಳ ಪ್ರಗತಿ ಪರಿಶೀಲನೆ ಬುಧವಾರ ನಡೆಸಿದ ಅವರು, 'ಮನೆಗಳ ನಿರ್ಮಾಣವನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ, ಅರ್ಹ ಫಲಾನುಭವಿಗಳಿಗೆ ಶೀಘ್ರವಾಗಿ ಹಸ್ತಾಂತರಿಸಲು ಕ್ರಮಗಳನ್ನು ಕೈಗೊಳ್ಳಬೇಕು' ಎಂದು ನಿರ್ದೇಶನ ನೀಡಿದ್ದಾರೆ.

'ಹಿಂದೆ ನಮ್ಮ ಸರ್ಕಾರ ಇದ್ದಾಗ ಪ್ರಧಾನಮಂತ್ರಿ ಅವಾಸ್ ಯೋಜನೆಯಡಿ (ನಗರ) 43,874 ಮನೆಗಳು ಸೇರಿದಂತೆ ಒಟ್ಟು 47,848 ಮನೆಗಳನ್ನು ಮಂಜೂರು ಮಾಡಲಾಗಿತ್ತು. ಈ ಪೈಕಿ, 13,303 ಮನೆಗಳು ಬಹುತೇಕ ಪೂರ್ಣಗೊಂಡಿವೆ. ಒಟ್ಟು 25,815 ಮನೆಗಳು ನಿರ್ಮಾಣ ಹಂತದಲ್ಲಿವೆ. ಇದರಲ್ಲಿ ಫಲಾನುಭವಿಗಳ ವಂತಿಕೆ ರೂ. 134 ಕೋಟಿ ಸಂಗ್ರಹಿಸಲಾಗಿದೆ. ಮೊದಲ ಹಂತದಲ್ಲಿ 7,900 ಮನೆಗಳು ಬಹುತೇಕ ಪೂರ್ಣಗೊಂಡಿದ್ದು, ಫಲಾನುಭವಿಗಳ ವಂತಿಕೆ



ಮೊತ್ತ ರೂ. 216 ಕೋಟಿ ಬಾಕಿಯಿದೆ. ಮನೆ ಹಂಚಿಕೆ ಮಾಡಲು ಸಾಧ್ಯವಾಗುವಂತೆ, ಈ ಬಾಕಿ ಮೊತ್ತದ ಪಾವತಿ ಬಗ್ಗೆ ಹುಡ್ಕೋದಿಂದ ಸಾಲ ಪಡೆಯುವುದು ಸೇರಿದಂತೆ ಸೂಕ್ತ ಪ್ರಸ್ತಾವ ಸಿದ್ಧಪಡಿಸಬೇಕು' ಎಂದೂ ಅಧಿಕಾರಿಗಳಿಗೆ ಸಿದ್ದರಾಮಯ್ಯ ಹೇಳಿದ್ದಾರೆ.

ಬಜೆಟ್‌ನಲ್ಲಿ ಅಂಬೇಡ್ಕರ್ ವಸತಿ ಯೋಜನೆಯಡಿ 900 ಕೋಟಿ ಅನುದಾನ ನಿಗದಿಪಡಿಸಲಾಗಿದೆ.

ಈ ಯೋಜನೆಯಡಿ 94,939 ಮನೆಗಳನ್ನು ನಿರ್ಮಿಸಲಾಗುತ್ತಿದ್ದು, 56,682 ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ' ಎಂದು ಸಭೆಗೆ ಅಧಿಕಾರಿಗಳು ಮಾಹಿತಿ ನೀಡಿದರು. 'ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ (ಸ್ಲಂ ಬೋರ್ಡ್) ಅಡಿ 42 ಸಾವಿರ ಮನೆಗಳನ್ನು ನಿರ್ಮಿಸಲಾಗುತ್ತಿದೆ.

ಇಲ್ಲಿ ರಸ್ತೆ ಸೇರಿದಂತೆ ಮೂಲಸೌಲಭ್ಯಗಳನ್ನು ಕಲ್ಪಿಸಲು ಅನುದಾನ ಒದಗಿಸಲಾಗುವುದು' ಎಂದು ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ. ವಸತಿ ಸಚಿವ ಜಮೀರ್ ಅಹಮದ್ ಖಾನ್, ಮುಖ್ಯಮಂತ್ರಿಯ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೇರಿದಂತೆ ವಸತಿ ಇಲಾಖೆಯ ಅಧಿಕಾರಿಗಳು ಇದ್ದರು.

# ಮುನಿಸಿನ ಬೆನ್ನಲ್ಲೇ ಸಂಧಾನ! ಹೊರಟ್ಟಿ ನಿವಾಸಕ್ಕೆ ಖುದ್ದು ಯುಟಿ ಖಾದರ್ ಆಗಮನ

## ಕಾರ್ಯಕ್ರಮಗಳನ್ನು ನಡೆಸುವ ಸಂದರ್ಭದಲ್ಲಿ ಯಾವುದನ್ನೂ ಗಮನಕ್ಕೆ ತರುತ್ತಿಲ್ಲ ಎಂದು ಹೊರಟ್ಟಿ ಆರೋಪ

• **ಉದಯವಾಹಿನಿ, ಬೆಂಗಳೂರು**

ಸ್ಪೀಕರ್ ಖಾದರ್ ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿ ಸಭಾಪತಿ ಬಸವರಾಜ ಹೊರಟ್ಟಿ ಮಾಡಿದ್ದ ಆರೋಪ ಚರ್ಚೆಗೆ ಗ್ರಾಸವಾಗಿತ್ತು.

ಇದರ ಬೆನ್ನಲ್ಲೇ ಸ್ಪೀಕರ್ ಕೂಡಾ ಪತ್ರವನ್ನು ಬರೆದು ಸ್ಪಷ್ಟನೆ ನೀಡಿದ್ದರು. ಈ ನಡುವೆ ಸ್ವತಃ ಯು.ಟಿ ಖಾದರ್ ಬಸವರಾಜ ಹೊರಟ್ಟಿ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ.

ವಿಧಾನಸೌಧದಲ್ಲಿ ಆಯೋಜಿಸಿದ್ದ ಪುಸ್ತಕ ಮೇಳ, ವಿಧಾನಸೌಧಕ್ಕೆ ಲೈಟಿಂಗ್ಸ್ ಹಾಗೂ ಇತರ ಕಾರ್ಯಕ್ರಮಗಳನ್ನು ನಡೆಸುವ ಸಂದರ್ಭದಲ್ಲಿ ಯಾವುದನ್ನೂ ಗಮನಕ್ಕೆ ತರುತ್ತಿಲ್ಲ ಎಂದು ಹೊರಟ್ಟಿ ಆರೋಪ ಮಾಡಿದ್ದರು. ಬದಲಾಗಿ ಏಕಪಕ್ಷೀಯವಾಗಿ ತೀರ್ಮಾನವನ್ನು ಕೈಗೊಳ್ಳಲಾಗುತ್ತಿದೆ ಎಂದು ಬೇಸರ ತೋಡಿಕೊಂಡಿದ್ದರು. ಹೊರಟ್ಟಿ ಸ್ವತಃ ಯು.ಟಿ ಖಾದರ್ ಅವರಿಗೆ ಈ ನಿಟ್ಟಿನಲ್ಲಿ ಪತ್ರವನ್ನು ಬರೆದು ನಮ್ಮ ಬೇಸರ ಹೊರ ಹಾಕಿದ್ದರು. ಇದರ ಬೆನ್ನಲ್ಲೇ ಯು.ಟಿ ಖಾದರ್ ಪತ್ರದ ಮೂಲಕ ಇದಕ್ಕೆ ಸ್ಪಷ್ಟನೆಯನ್ನು ನೀಡಿದ್ದರು. ಅಲ್ಲದೆ ಅಂತಹ ಯಾವುದೇ ಏಕಪಕ್ಷೀಯ ತೀರ್ಮಾನ ಕೈಗೊಂಡಿಲ್ಲ ಎಂದು ಹೇಳಿಕೊಂಡಿದ್ದರು.



**ಅಸಮಾಧಾನದ ಪತ್ರಕ್ಕೆ ಸ್ಪಷ್ಟನೆ**

**ಸಭಾಪತಿ ನಿವಾಸಕ್ಕೆ ದಿಢೀರ್ ಭೇಟಿ!:** ಈ ಬೆಳವಣಿಗೆಯ ಬೆನ್ನಲ್ಲೇ ಸ್ಪೀಕರ್ ಯು.ಟಿ ಖಾದರ್ ಅವರು ಸಭಾಪತಿ ಅವರ ಸರ್ಕಾರಿ ನಿವಾಸಕ್ಕೆ ದಿಢೀರ್ ಭೇಟಿ ನೀಡಿದ್ದಾರೆ. ಹೊರಟ್ಟಿಯವರನ್ನು ಸಮಾಧಾನಪಡಿಸಲು ತಾವೇ ಖುದ್ದು ಆಗಮಿಸಿದ ಯುಟಿ ಖಾದರ್, ಕೆಲಹೊತ್ತು ಮಾತುಕತೆಯನ್ನು ನಡೆಸಿದರು.

**ಚರ್ಚೆಗೆ ಗ್ರಾಸವಾಗಿದ್ದ ಪತ್ರ**

**ಸ್ಪೀಕರ್ ಹಾಗೂ ಸಭಾಪತಿಗಳ ನಡುವೆ ಇಂತಹ ಅಸಮಾಧಾನ ಸ್ಫೋಟಗೊಳ್ಳುವುದು ಅಪರೂಪ. ಆದರೆ ಸಭಾಪತಿ ಹೊರಟ್ಟಿ ಬರೆದ ಪತ್ರ ರಾಜಕೀಯ ಹಾಗೂ ಸಾರ್ವಜನಿಕ ವಲಯದಲ್ಲೂ ಚರ್ಚೆಗೆ ಗ್ರಾಸವಾಗಿತ್ತು. ಈ ನಡುವೆ ಬುಧವಾರ ಬೆಂಗಳೂರಿಗೆ ಆಗಮಿಸಿದ್ದ ಖಾದರ್ ಹೊರಟ್ಟಿ ಅವರನ್ನು ಖುದ್ದಾಗಿ ಭೇಟಿ ಮಾಡುವ ಮೂಲಕ ಗೊಂದಲಕ್ಕೆ ಅಂತ್ಯ ಹಾಡಿದ್ದಾರೆ.**

ಹೊರಟ್ಟಿ ಅವರ ಆರೋಪಕ್ಕೆ ಪತ್ರದಲ್ಲಿ ಪ್ರತಿಕ್ರಿಯೆ ನೀಡಿದ್ದ ಅವರು, ವಿಧಾನ ಮಂಡಲದಿಂದ ಆಯೋಜಿಸಲ್ಪಡುವ ಎಲ್ಲಾ ಕಾರ್ಯಕ್ರಮಗಳನ್ನು ಸದಾ ಸೂಕ್ಷ್ಮವಾಗಿ ಗಮನಿಸಿ, ಆಗಾಗ ತಮಗೂ ತಿಳಿಸಿ, ಹಿರಿಯರಾದ ತಮ್ಮೊಂದಿಗೆ ಚರ್ಚಿಸಿ ನಿರ್ವಹಿಸಿದ್ದೇನೆ ಎಂಬುದು ನನ್ನ ನಂಬಿಕೆ. ಆದರೂ. ತಮ್ಮ ಪತ್ರವನ್ನು ಸಕಾರಾತ್ಮಕವಾಗಿ ಸ್ವೀಕರಿಸಿರುತ್ತೇನೆ. ಇನ್ನು ಮುಂದೆ ಸಣ್ಣ ಸಣ್ಣ ನ್ಯೂನ್ಯತೆಗಳಿದ್ದಲ್ಲಿ ಅವುಗಳನ್ನು ಚರ್ಚಿಸಿ ಸಮನ್ವಯದಿಂದ ಪರಿಹರಿಸಿಕೊಂಡು, ಕಾರ್ಯನಿರ್ವಹಿಸಿ, ವಿಧಾನ ಮಂಡಲದ ಮತ್ತು ರಾಜ್ಯದ ಕೀರ್ತಿಗೆ ಭಾಜನರಾಗೋಣವೆಂಬುದು ನನ್ನ ಆಶಯ ಎಂದು ಹೇಳಿಕೊಂಡಿದ್ದರು.

ರಾಜಕೀಯ ನಾಯಕರ ನಡುವೆ ನಡೆಯುತ್ತಿದ್ದ ಮುಸುಕಿನ ಗುದ್ದಾಟ ಈಗ ಸಾಂವಿಧಾನಿಕ ಹುದ್ದೆಯಾದ ಸ್ಪೀಕರ್ ಮತ್ತು ಸಭಾಪತಿಯ ನಡುವೆಯೂ ನಡೆಯುತ್ತಿರುವುದು ಬಹಿರಂಗಗೊಂಡಿದೆ.

ವಿಧಾನಮಂಡಲದಲ್ಲಿ ವಿಧಾನಸಭೆ ಮತ್ತು ವಿಧಾನಪರಿಷತ್ ಒಂದೇ ನಾಣ್ಯದ ಎರಡು ಮುಖಗಳಂತೆ ಕೆಲಸ ಮಾಡುತ್ತವೆ ಎಂಬ ಸಾಮಾನ್ಯ ನಂಬಿಕೆಯೂ ಹುಸಿಯಾಗತೊಡಗಿದೆ. ಸಭಾಪತಿ ಹೊರಟ್ಟಿ ಹಾಗೂ ಸ್ಪೀಕರ್ ಯು.ಟಿ.ಖಾದರ್ ನಡುವೆ ಸದನೇತರ ಕಾರ್ಯಚಟುವಟಿಕೆಗಳ ನಿರ್ಣಯಗಳ ವಿಚಾರದಲ್ಲಿ ಜಟಾಪಟಿ ನಡೆದಿತ್ತು.


ಸಭಾಪತಿ ಅವರ ಅಸಮಾಧಾನದ ಪತ್ರಕ್ಕೆ ಸ್ಪಷ್ಟನೆಯೊಂದಿಗೆ ಉತ್ತರ ನೀಡಿರುವ ಖಾದರ್, ವಿಧಾನಮಂಡಲದಿಂದ ಆಯೋಜನೆಯಾಗುವ ಎಲ್ಲಾ ಕಾರ್ಯಕ್ರಮಗಳನ್ನೂ ಹಿರಿಯರಾದ ತಮ್ಮೊಂದಿಗೆ ಚರ್ಚಿಸಿಯೇ ನಿರ್ವಹಿಸಿದ್ದೇನೆ. ಸಣ್ಣಪುಟ್ಟ ನ್ಯೂನತೆಗಳಿದ್ದಲ್ಲಿ ಅವುಗಳನ್ನು ಚರ್ಚಿಸಿ ಸಮನ್ವಯದಿಂದ ಪರಿಹರಿಸಿಕೊಂಡು ಕಾರ್ಯನಿರ್ವಹಿಸುವ ಮೂಲಕ ರಾಜ್ಯ ವಿಧಾನಮಂಡಲದ ಕೀರ್ತಿಗೆ ಇಬ್ಬರೂ ಭಾಜನರಾಗೋಣ'' ಎಂಬ ಸದಾಶಯ ವ್ಯಕ್ತಪಡಿಸಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,051/Gram24ct ₹10,130/Gram22ct | ಬೆಳ್ಳಿ: ₹130.00/Gram

# 1,200 ಚ.ಅಡಿ ನಿವೇಶನದ ಕಟ್ಟಡಕ್ಕೆ ಒಸಿ, ಸಿಸಿಯಿಂದ ವಿನಾಯಿತಿ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಕ್ಷೆ ಮಂಜೂರಾತಿ ಪಡೆದು ನಿರ್ದಿಷ್ಟ ಮಹಡಿವರೆಗಿನ ಮಿತಿಯಲ್ಲಿ ನಿರ್ಮಾಣಗೊಂಡಿರುವ ಹೊಸದಾಗಿ ನಿರ್ಮಿಸಲಿರುವ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಪಡೆಯುವುದರಿಂದ ವಿನಾಯಿತಿ ನೀಡುವ ಮಹತ್ವದ ತೀರ್ಮಾನ ಕೈಗೊಂಡಿರುವ ರಾಜ್ಯ ಸರಕಾರ, ಈ ಸಂಬಂಧ ಮಂಗಳವಾರ ಆದೇಶ ಹೊರಡಿಸಿದೆ.


ಉದಯವಾಹಿನಿ ಚಿತ್ರ

ಅದರಂತೆ, 1200 ಚದರಡಿ ವಿಸ್ತೀರ್ಣದವರೆಗಿನ ನಿವೇಶನದಲ್ಲಿ ನಕ್ಷೆ ಮಂಜೂರಾತಿ ಪಡೆದು ನಿರ್ಮಾಣಗೊಂಡಿರುವ ಮತ್ತು ನಿರ್ಮಿಸುವ ನೆಲಮಹಡಿ ಸಹಿತ ಎರಡು ಅಂತಸ್ತು ಅಥವಾ ತಳ ಮಹಡಿ (ಸ್ಟಿಲ್ಟ್) ಸಹಿತ ಮೂರು ಮಹಡಿ ವಾಸದ ಕಟ್ಟಡಕ್ಕೆ ಒಸಿ ಪಡೆಯುವುದರಿಂದ ವಿನಾಯಿತಿಸಿಗಲಿದೆ. ಜತೆಗೆ, ಕುಡಿಯುವ ನೀರು ಮತ್ತು ವಿದ್ಯುತ್ ಸಂಪರ್ಕ ಪಡೆಯುವಲ್ಲಿನ ಅಡಚಣೆ ನಿವಾರಣೆಗೆ ದಾರಿ ಸುಗಮವಾಗಲಿದೆ.

ಸ್ವಾಧೀನಾನುಭವ ಪತ್ರ, ವಿನಾಯಿತಿ ನೀಡಿರುವ ವಾಸದ ಕಟ್ಟಡಗಳ ನಿರ್ಮಾಣಕ್ಕೆ ಆರಂಭಿಕ ಪ್ರಮಾಣ ಪತ್ರ (ಸಿಸಿ) ಪಡೆಯುವ ಅಗತ್ಯವಿಲ್ಲ ಎಂದು ಮೂಲಗಳು ಹೇಳಿವೆ. ಹಾಗಾಗಿ, ನಿವೇಶನದಾರರಿಗೆ ಒಸಿ ಮತ್ತು ಸಿಸಿ ಎರಡರಿಂದಲೂ ವಿನಾಯಿತಿ ಸಿಕ್ಕಂತಾಗಲಿದೆ.

ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ 1200 ಚ.ಅಡಿ ವಿಸ್ತೀರ್ಣ ಮೀರದಂತಹ ನಿವೇಶನಗಳಲ್ಲಿ ನಿರ್ಮಿಸುವ ಕಟ್ಟಡಗಳಿಗೆ ಪ್ರಾರಂಭಿಕ ಪ್ರಮಾಣಪತ್ರ (ಸಿಸಿ), ಸ್ವಾಧೀನಾನುಭವ ಪ್ರಮಾಣಪತ್ರ (ಒಸಿ) ಪಡೆಯುವುದರಿಂದ ವಿನಾಯಿತಿ ನೀಡುವ ಸಂಬಂಧ ಬಿಬಿಎಂಪಿಯ ನಗರ ಯೋಜನೆ ವಿಭಾಗವು ಈ ಹಿಂದೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಈ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಇಲಾಖೆ ಆದೇಶ ಹೊರಡಿಸಿದೆ.

ಗ್ರೇಟರ್ ಬೆಂಗಳೂರು ಆಡಳಿತ ಕಾಯಿದೆ 2024ರ ಸೆಕ್ಷನ್ 241(7)ರಲ್ಲಿ ಸ್ವಾಧೀನಾನುಭವ ಪ್ರಮಾಣಪತ್ರದಿಂದ ವಿನಾಯಿತಿ ನೀಡುವ ಅಧಿಕಾರವನ್ನು ಸರಕಾರಕ್ಕೆ ನೀಡಲಾಗಿದೆ. ಈ ಅವಕಾಶವು ಬಿಬಿಎಂಪಿ ಕಾಯಿದೆ-2020, ಕೆಎಂಸಿ ಕಾಯಿದೆ 1976 ಹಾಗೂ ಕರ್ನಾಟಕ ಪುರಸಭೆಗಳ ಕಾಯಿದೆ 1964ರಲ್ಲಿ ಇರಲಿಲ್ಲ.

2025ರ ಜುಲೈ 3ರಂದು ಸಿಎಂ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಗ್ರೇಟರ್ ಬೆಂಗಳೂರು ಆಡಳಿತ ಕಾಯಿದೆ-2024ರ ಸೆಕ್ಷನ್ 241(7)ರಲ್ಲಿನ ಅವಕಾಶದಡಿ 1200 ಚ.ಅಡಿ ವಿಸ್ತೀರ್ಣ ಮೀರದಂತಹ ನಿವೇಶನಗಳಲ್ಲಿ ನೆಲ ಮತ್ತು 2 ಅಂತಸ್ತು ಅಥವಾ ಸ್ಟಿಲ್ಟ್ ಮತ್ತು 3 ಅಂತಸ್ತಿನವರೆಗಿನ ಕಟ್ಟಡಗಳಿಗೆ ಒಸಿಯಿಂದ ವಿನಾಯಿತಿ ನೀಡಲು ತೀರ್ಮಾನಿಸಲಾಗಿತ್ತು.

> **ಗ್ರೇಟರ್ ಬೆಂಗಳೂರು ಆಡಳಿತ ಕಾಯಿದೆ-2024ರ ಅಧ್ಯಾಯ 7ರ ನಿಬಂಧನೆಗಳ ಅನ್ವಯ ಕಟ್ಟಡ ಮತ್ತು ನಗರ ಯೋಜನಾ ನಿಯಮಗಳ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಕಾರ್ಯಗತಗೊಳಿಸಲು ಲಭ್ಯವಿರುವ ಕಾರ್ಯಪಡೆಯೊಂದಿಗೆ ದೃಢವಾದ ಆಡಳಿತ ರಚನೆಯನ್ನು ವಿನ್ಯಾಸಗೊಳಿಸುವಂತೆ ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ (ಜಿಬಿಎ, ಬೆಂನಪಾ-1) ಎನ್.ಕೆ. ಲಕ್ಷ್ಮೀಸಾಗರ್ ಅವರು ಪ್ರಾಧಿಕಾರದ ಮುಖ್ಯ ಆಯುಕ್ತರಿಗೆ ಆದೇಶದಲ್ಲಿ ನಿರ್ದೇಶನ ನೀಡಿದ್ದಾರೆ.**

## ಅಕ್ರಮ ಗಣಿಗಾರಿಕೆ ತಡೆ, ಆಸ್ತಿ ಜಪ್ತಿ ಕಾನೂನಿಗೆ ಅಧಿಕೃತ ಮುದ್ರೆ

• ಉದಯವಾಹಿನಿ, ಬೆಂಗಳೂರು

ಅಕ್ರಮ ಗಣಿಗಾರಿಕೆ ವಿರುದ್ಧದ ಕ್ರಮಗಳನ್ನು ಬಲಪಡಿಸುವ, ಕಾನೂನುಬಾಹಿರ ವಿಧಾನಗಳ ಮೂಲಕ ಸಂಗ್ರಹಿಸಲಾದ ಆಸ್ತಿಗಳನ್ನು ವಶಪಡಿಸಿಕೊಳ್ಳಲು ರಾಜ್ಯ ಸರ್ಕಾರ ಹೊಸ ಕಾನೂನು ಜಾರಿಗೊಳಿಸಿದೆ. ಸೆ. 9 ರಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಕರ್ನಾಟಕ ಅಕ್ರಮ ಗಣಿಗಾರಿಕೆ ಕಾನೂನುಬಾಹಿರ



ಸ್ವತ್ತನ್ನು ವಶಪಡಿಸಿಕೊಳ್ಳುವುದಕ್ಕಾಗಿ ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕಾತಿ ಅಧಿನಿಯಮ, 2025 ಕ್ಕೆ ಸಹಿ ಹಾಕಿದ್ದು, ಅದನ್ನು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದೆ. ರಾಜ್ಯದಾದ್ಯಂತ ಜಪ್ತಿ ಮುಟ್ಟುಗೋಲು ಪ್ರಕ್ರಿಯೆಗಳನ್ನು ಮೇಲ್ವಿಚಾರಣೆ ಮಾಡಲು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಗಿಂತ ಕಡಿಮೆಯಿಲ್ಲದ ಹಿರಿಯ ಅಧಿಕಾರಿಯನ್ನು ವಸೂಲಾತಿ ಆಯುಕ್ತರಾಗಿ ನೇಮಕ ಮಾಡುವುದಕ್ಕೆ ಈ ಕಾಯ್ದೆ ಅವಕಾಶ ನೀಡುತ್ತದೆ. ಕಾಯ್ದೆಯಡಿಯಲ್ಲಿ, ವಸೂಲಾತಿ ಆಯುಕ್ತರು ಅಕ್ರಮ ಗಣಿಗಾರಿಕೆಯಿಂದ ಸಂಪಾದಿಸಿದ ಚರ, ಸ್ಥಿರ ಆಸ್ತಿಗಳನ್ನು ವಶಪಡಿಸಿಕೊಳ್ಳುವ, ಅಧೀನ ಅಧಿಕಾರಿಗಳನ್ನು ಮೇಲ್ವಿಚಾರಣೆ ಮಾಡುವ, ಸಿವಿಲ್ ನ್ಯಾಯಾಲಯಕ್ಕೆ ಸಮಾನವಾದ ಅಧಿಕಾರವನ್ನು ಚಲಾಯಿಸುವ ಅಧಿಕಾರ ಹೊಂದಿರುತ್ತಾರೆ.

## ಇಡಿ ಕಾಂಗ್ರೇಸ್ ಶಾಸಕರನ್ನು ಮಾತ್ರ ಗುರಿಯಾಗಿಸಿಕೊಂಡಿದೆ; ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಶಾಸಕ ಸತೀಶ್ ಕೃಷ್ಣ ಸೈಲ್ ಬಂಧನದ ನಂತರ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಜಾರಿ ನಿರ್ದೇಶನಾಲಯ (ಇಡಿ) ಕಾಂಗ್ರೇಸ್ ಪಕ್ಷದ ಸದಸ್ಯರನ್ನು ಮಾತ್ರ ಗುರಿಯಾಗಿಸಿಕೊಂಡಿದೆ ಎಂದು ಆರೋಪಿಸಿದ್ದಾರೆ. ಶಾಸಕ ಸತೀಶ್ ಸೈಲ್ ಬಂಧನವನ್ನು ಪ್ರಶ್ನಿಸಿದ ಅವರು, 'ಸತೀಶ್ ಸೈಲ್ ಅವರನ್ನು ಬಂಧಿಸುವ ಅಗತ್ಯ ಏನಿತ್ತು ಅವರು ಕಾಂಗ್ರೇಸ್ ಶಾಸಕರನ್ನು ಮಾತ್ರ ಗುರಿಯಾಗಿಸಿಕೊಂಡಿದ್ದಾರೆ. ನಮ್ಮನ್ನು ಗುರಿಯಾಗಿಸಿಕೊಳ್ಳಲು ಅವರು ಬೇಕಾದ ಎಲ್ಲವನ್ನು ಮಾಡುತ್ತಿದ್ದಾರೆ' ಎಂದು ಹೇಳಿದರು. ಕಬ್ಬಿಣದ ಅದಿರು ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಕಾರವಾರ-ಅಂಕೋಲಾ ವಿಧಾನಸಭಾ ಕ್ಷೇತ್ರದ ಕಾಂಗ್ರೇಸ್ ಶಾಸಕ ಸತೀಶ್ ಸೈಲ್ ಅವರನ್ನು ಬಂಧಿಸಿದ ನಂತರ ಡಿಕೆ ಶಿವಕುಮಾರ್ ಈ ಹೇಳಿಕೆ ನೀಡಿದ್ದಾರೆ. ರಾತ್ರಿ ಜಾರಿ ನಿರ್ದೇಶನಾಲಯದ ಬೆಂಗಳೂರು ವಲಯ ಕಚೇರಿಯು ಶಾಸಕರನ್ನು ದಿನವಿಡೀ ವಿಚಾರಣೆ ನಡೆಸಿದ ನಂತರ ಬಂಧಿಸಿತು. ಆ ದಿನ ಮೊದಲು ಅವರು ಏಜೆನ್ಸಿಯ ಮುಂದೆ ವಿಚಾರಣೆಗೆ ಹಾಜರಾಗಿದ್ದರು.

## ಲಂಚ ಪ್ರಕರಣ: ಕಾರ್ಮಿಕ ಅಧಿಕಾರಿ ಶ್ಯಾಮರಾವ್ ಬಂಧನ

• ಉದಯವಾಹಿನಿ, ಬೆಂಗಳೂರು

ಕಾರ್ಮಿಕ ಚೀಟಿ ನೀಡಲು ರೂ.10,000 ಲಂಚ ಪಡೆಯುತ್ತಿದ್ದ ವೇಳೆ ಕಾರ್ಮಿಕ ಅಧಿಕಾರಿ ಶ್ಯಾಮರಾವ್ ಎಂಬುವವರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ. ಕೆ.ಆರ್.ಪುರ ನಿವಾಸಿ ವೆಂಕಟಾಚಲಪತಿ ಅವರು ಕಾರ್ಮಿಕ ಚೀಟಿಗಾಗಿ, ಕಾರ್ಮಿಕ ಇಲಾಖೆಯ ಬೆಂಗಳೂರು ನಗರ ವಿಭಾಗ-05ರ ಕಚೇರಿಯಲ್ಲಿ ಅರ್ಜಿ ಸಲ್ಲಿಸಿದ್ದರು. ಈ ಕಚೇರಿಯ ಕಾರ್ಮಿಕ ಅಧಿಕಾರಿ ರೂ.10,000 ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಈ ಸಂಬಂಧ ವೆಂಕಟಾಚಲಪತಿ ದೂರು ನೀಡಿದ್ದರು. ಎಸ್‌ಪಿ ಶಿವಪ್ರಕಾಶ್ ದೇವರಾಜು ಅವರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ರೂಪಿಸಲಾಗಿತ್ತು. ಅದರಂತೆ ದೂರುದಾರರು ಕಾರ್ಮಿಕ ಇಲಾಖೆ ಕಚೇರಿಗೆ ತೆರಳಿ ಆರೋಪಿಯ ಖಾಸಗಿ ಕಾರು ಚಾಲಕ ದೇವರಾಜ್‌ಗೆ ಹಣ ನೀಡಿದರು. ಅದೇ ವೇಳೆ ದಾಳಿ ನಡೆಸಿ, ಬಂಧಿಸಲಾಯಿತು ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ.

# ಜಲಮಂಡಳಿಗೆ ನಿತ್ಯ 90 ಎಂಎಲ್‌ಡಿ ನೀರು ಉಳಿತಾಯ


### ಜಲಮಂಡಳಿಯು ನಿರಂತರವಾಗಿ ಜಾಗೃತಿ ಮೂಡಿಸಿ, ದಂಡ ಪ್ರಯೋಗದ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ನೀರಿನ ಅತಿಯಾದ ಬಳಕೆಯ ಮೇಲೆ ಮಿತಿ ಹೇರಲೆಂದೇ ನಗರದಲ್ಲಿ ಮೊದಲ ಬಾರಿಗೆ ಪರಿಚಯಿಸಿರುವ ಏರೇಟರ್‌ಗಳ ಅಳವಡಿಕೆಯಿಂದ ಬೆಂಗಳೂರು ಜಲಮಂಡಳಿಗೆ ನಿತ್ಯ 90 ಎಂಎಲ್‌ಡಿ ನೀರು ಉಳಿತಾಯವಾಗುತ್ತಿದೆ. 15 ತಿಂಗಳ ಅವಧಿಯಲ್ಲಿ 14,33,316 ಏರೇಟರ್‌ಗಳನ್ನು ಅಳವಡಿಸಲಾಗಿದೆ. ಈ ಮೂಲಕ ನೀರಿನ ಬಳಕೆಯನ್ನು ಮಿತಿಗೊಳಿಸಿ, ವ್ಯರ್ಥವಾಗುವುದನ್ನು ತಪ್ಪಿಸಿದ್ದರಿಂದ ನಗರದಲ್ಲಿ ನೀರಿನ ಬೇಡಿಕೆ ಶೇಕಡ 30ರಷ್ಟು ತಗ್ಗಿದೆ. ಅಲ್ಲದೆ ಹೆಚ್ಚಿನ ಗ್ರಾಹಕರಿಗೆ ನೀರು ಲಭ್ಯವಾಗುತ್ತಿದ್ದು ದೂರುಗಳು ಕಡಿಮೆಯಾಗಿವೆ.

ಸದ್ಯ ಅಪಾರ್ಟ್‌ಮೆಂಟ್, ಸರ್ಕಾರಿ ಕಚೇರಿಗಳು, ಹೋಟೆಲ್, ಮಾಲ್‌ಗಳನಲ್ಲಿಗಳಿಗೆ ಬಳಕೆಯಾಗುತ್ತಿರುವ ಏರಿಯೇಟರ್‌ಗಳನ್ನು ಪ್ರತಿ ಮನೆಗೂ ಅಳವಡಿಸಬೇಕು ಎನ್ನುವುದು ಜಲಮಂಡಳಿಯ ಉದ್ದೇಶ. ಈ ನಿಟ್ಟಿನಲ್ಲಿ ಪ್ರಯತ್ನ ಆರಂಭವಾಗಿದ್ದು ಹಂತ ಹಂತವಾಗಿ ವಿಸ್ತರಣೆ ಮಾಡಲಾಗುತ್ತದೆ.

ನೀರಿನ ಸಂರಕ್ಷಣೆಯ ಭಾಗವಾಗಿ ಏರೇಟರ್‌ಗಳನ್ನು ಅಳವಡಿಸಿದ್ದೇವೆ. ನಮ್ಮ ನಿರೀಕ್ಷೆಯಂತೆ ನೀರಿನ ಬಳಕೆಯಲ್ಲಿ



ಗಮನಾರ್ಹ ಇಳಿಕೆಯಾಗಿರುವುದು ಕಂಡು ಬಂದಿದೆ. ಇದು ಜಲ ಸಂರಕ್ಷಣೆ ಹಾಗೂ ಪರಿಸರದ ಮೇಲೆ ಬೀರುವ ಪರಿಣಾಮವನ್ನು ತಪ್ಪಿಸುವ ಕ್ರಮವೂ ಹೌದು ಎನ್ನುತ್ತಾರೆ ಬೆಂಗಳೂರು ಜಲಮಂಡಳಿ ಅಧ್ಯಕ್ಷ ರಾಮ್‌ಪ್ರಸಾತ್ ಮನೋಹರ್. ನಗರದಲ್ಲಿನ ಅಪಾರ್ಟ್‌ಮೆಂಟ್‌ಗಳು, ರೆಸ್ಟೋರೆಂಟ್, ಸ್ಟಾರ್ ಹೋಟೇಲ್‌ಗಳು, ಮಾಲ್‌ಗಳು, ಸರ್ಕಾರಿ ಕಚೇರಿಗಳು, ವಾಣಿಜ್ಯ ಕಟ್ಟಡಗಳು, ಧಾರ್ಮಿಕ ಸ್ಥಳಗಳನ್ನು ಗುರುತಿಸಿ ಅಲ್ಲಿ ಬಳಸುವನಲ್ಲಿಗಳಿಗೆ ಏರಿಯೇಟರ್‌ಗಳ ಅಳವಡಿಕೆ ಮಾಡಲಾಯಿತು. ಆರಂಭದಲ್ಲಿ ಕೆಲವು ಅಪಾರ್ಟ್‌ಮೆಂಟ್‌ಗಳಲ್ಲಿ ಮಾತ್ರ ಇದ್ದ ಏರೇಟರ್‌ಗಳ ಬಳಕೆಯನ್ನು, ಕ್ರಮೇಣ ಎಲ್ಲಾ ಕಡೆ ಕಡ್ಡಾಯವಾಗಿ ಬಳಸುವಂತೆ ತಾಕೀತು ಮಾಡಲಾಗಿದೆ. ಇದುವರೆಗೆ ಏರೇಟರ್ ಅಳವಡಿಕೆ ಮಾಡಿಕೊಳ್ಳದವರ ಸಂಖ್ಯೆ ಬಹಳಷ್ಟಿದೆ.

ಅಂತಹವರಿಗೆ ಬಿಲ್‌ನೊಂದಿಗೆ ಸೂಚನೆ ನೀಡಲಾಗುತ್ತಿದೆ. ಹೊಸದಾಗಿ ಜಲಮಂಡಳಿಯ ನೀರಿನ ಸಂಪರ್ಕ ಪಡೆಯಲು ಬಂದವರಿಗೆ ಕಡ್ಡಾಯವಾಗಿ ಏರಿಯೇಟರ್ ಅಳವಡಿಸುವಂತೆ ನಿರ್ದೇಶನ ನೀಡಲಾಗುತ್ತಿದೆ ಎಂದು ಜಲಮಂಡಳಿಯ ಮುಖ್ಯ ಎಂಜಿನಿಯರ್ ಬಿ.ಎಸ್. ದಲಾಯತ್ ಹೇಳಿದರು.

ಜಲಮಂಡಳಿ ಕಾಯ್ದೆ 1964ರ ಸೆಕ್ಷನ್ 109ರ ಅಡಿಯಲ್ಲಿ ನೀರಿನ ಬಳಕೆ ಮಿತಗೊಳಿಸಲೆಂದೇ ಏರಿಯೇಟರ್‌ಗಳನ್ನು ಅಳವಡಿಸುವ ಯೋಜನೆ ರೂಪಿಸಲಾಗಿದೆ. ಜನರು ಅನಗತ್ಯವಾಗಿ ನೀರು ವ್ಯಯ ಮಾಡುವುದನ್ನು ತಪ್ಪಿಸಬೇಕು. ನೀರಿನ ಬಳಕೆ ಕುರಿತು ಜಾಗೃತಿ ಮೂಡಿಸಬೇಕು ಎನ್ನುವುದು ಜಲಮಂಡಳಿಯ ಆಶಯವಾಗಿದೆ.

**ಇಂಜಿನಿಯರ್ ಬಿ.ಎಸ್. ದಲಾಯತ್ ಹೇಳಿಕೆ**

> **2024ರ ಮಾರ್ಚ್ ಕೊನೆಯ ವಾರದೊಳಗೆ ಏರೇಟರ್ ಅಳವಡಿಸಿಕೊಳ್ಳದೇ ಇದ್ದವರಿಗೆ ರೂ. 5,000 ದಂಡ ವಿಧಿಸುವ ಜತೆಗೆ ಶೇ 50ರಷ್ಟು ನೀರು ಸರಬರಾಜು ಕಡಿಮೆ ಮಾಡುವುದಾಗಿ ಎಚ್ಚರಿಕೆ ನೀಡಲಾಯಿತು. ಆರಂಭದಲ್ಲಿ ಈ ಯೋಜನೆಗೆ ಅಷ್ಟಾಗಿ ಪ್ರತಿಕ್ರಿಯೆ ಸಿಗಲಿಲ್ಲ. ಜಲಮಂಡಳಿಯು ನಿರಂತರವಾಗಿ ಜಾಗೃತಿ ಮೂಡಿಸಿ, ದಂಡ ಪ್ರಯೋಗದ ಎಚ್ಚರಿಕೆ ನೀಡಿದ್ದರಿಂದ ಏರಿಯೇಟರ್ ಬಳಸುವವರ ಪ್ರಮಾಣ ಹೆಚ್ಚಾಯಿತು. ಮುಂದಿನ ಬೇಸಿಗೆ ವೇಳೆಗೆ ಇನ್ನಷ್ಟು ಹೆಚ್ಚುವ ನಿರೀಕ್ಷೆ ಇದೆ' ಎಂದು ರಾಮ್ ಪ್ರಸಾತ್ ಮನೋಹರ್ ತಿಳಿಸಿದರು.**

**ಉಳಿತಾಯ ಹೇಗೆ**

**ಒಂದು ನಲ್ಲಿಗೆ ಏರಿಯೇಟರ್ ಅಳವಡಿಸಿದರೆ ಒಂದು ನಿಮಿಷಕ್ಕೆ ಮೂರು ಲೀಟರ್‌ವರೆಗೂ ನೀರು ಪಡೆಯಬಹುದು. ಏರಿಯೇಟರ್ ಅಳವಡಿಸದೇ ಇದ್ದರೆ ಹತ್ತು ಲೀಟರ್ ನೀರನ್ನು ಪಡೆಯಬಹುದಿತ್ತು. ಈ ಕ್ರಮದಿಂದ ಬಳಸುವ ಪ್ರಮಾಣದಲ್ಲಿ ಶೇ 30ರಷ್ಟು ಉಳಿತಾಯವಾಗಿದೆ ಎನ್ನುವುದು ಜಲಮಂಡಳಿ ವಿವರಣೆ.**

## ನಮ್ಮ ಮೆಟ್ರೋ ಹಳದಿ ಮಾರ್ಗಕ್ಕೆ ಮತ್ತೊಂದು ರೈಲು ಸೇರ್ಪಡೆ

• ಉದಯವಾಹಿನಿ, ಬೆಂಗಳೂರು

ಎಲೆಕ್ಟ್ರಾನಿಕ್ ಸಿಟಿ ಸಂಪರ್ಕಿಸುವ ಆರ್.ವಿ. ರಸ್ತೆ-ಬೊಮ್ಮಸಂದ್ರ ಮಾರ್ಗದ ನಮ್ಮ ಮೆಟ್ರೋ ಹಳದಿ ಮಾರ್ಗದಲ್ಲಿ 4ನೇ ರೈಲು ಸಂಚಾರ ಬುಧವಾರದಿಂದ ಆರಂಭವಾಗಿದೆ. 4ನೇ ರೈಲಿನ ಸಂಚಾರದೊಂದಿಗೆ ರೈಲುಗಳ ಸಂಚಾರದ ವೇಳಾಪಟ್ಟಿ ಬದಲಾವಣೆಯಾಗಿದ್ದು ರೈಲುಗಳ ನಡುವಿನ ಅಂತರ 25 ನಿಮಿಷದಿಂದ 19 ನಿಮಿಷಕ್ಕೆ ಇಳಿಕೆಯಾಗಿದೆ. ಆ.10 ರಿಂದ 3 ರೈಲುಗಳೊಂದಿಗೆ ಕಾರ್ಯಾರಂಭ ಮಾಡಲಾಗಿತ್ತು. 3 ವಾರದ ಹಿಂದೆ ಕೊಲ್ಕತ್ತಾದ ತೀತಾಗಢ್ ರೈಲು ಫ್ಯಾಕ್ಟರಿಯಿಂದ ಈ ರೈಲು ಸೆಟ್‌ಗಳು ಬೆಂಗಳೂರಿಗೆ ಬಂದು ಹೆಬ್ಬಗೋಡಿ ಡಿಪೋದಲ್ಲಿ ಜೋಡಣೆ ಮಾಡಲಾಗಿದೆ. ಕಳೆದ ವಾರದಿಂದ ರಾತ್ರಿ ರೈಲುಗಳ ಪ್ರಾಯೋಗಿಕ ಸಂಚಾರ ನಡೆಸಿ ಇದೀಗ


ಉದಯವಾಹಿನಿ ಚಿತ್ರ

ಪ್ರಯಾಣಿಕರ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ. ಹಳದಿ ಮಾರ್ಗದಲ್ಲಿ ಸೋಮವಾರದಿಂದ ಶನಿವಾರದವರೆಗೆ ಮೊದಲ ರೈಲಿನ ಸೇವೆ ಬೆಳಗ್ಗೆ 6 ಗಂಟೆಗೆ ಆರಂಭವಾಗಲಿದೆ. ಭಾನುವಾರ ಮೊದಲ ರೈಲು ಸೇವೆ ಬೆಳಗ್ಗೆ 7 ಗಂಟೆಗೆ ಶುರುವಾಗಲಿದೆ. ರಾತ್ರಿ ಕೊನೆಯ ರೈಲು ಸಮಯ ಎಂದಿನಂತೆ ಇರಲಿದ್ದು, ಆರ್.ವಿ. ರಸ್ತೆಯಿಂದ ರಾತ್ರಿ 11:55 ಕ್ಕೆ, ಬೊಮ್ಮಸಂದ್ರದಿಂದ ರಾತ್ರಿ 10:42ಕ್ಕೆ ಹೊರಡಲಿದೆ.

ಹಳದಿ ಮಾರ್ಗ ಆರಂಭವಾದ ದಿನದಿಂದ ಕೇವಲ 3 ರೈಲುಗಳು ಮಾತ್ರ ಸಂಚಾರ ನಡೆಸುತ್ತಿವೆ. ಪ್ರಯಾಣಿಕರಿಗೆ ಪ್ರತಿ 25 ನಿಮಿಷಕ್ಕೊಂದು ರೈಲು ಲಭ್ಯವಾಗುತ್ತಿತ್ತು. ಈ ಮಾರ್ಗದಲ್ಲಿ ಪ್ರಯಾಣಿಕರ ಸಂಖ್ಯೆ ಭಾರೀ ಹೆಚ್ಚಿದ್ದ ಕಾರಣ ದಟ್ಟಣೆ ಹೆಚ್ಚಿತ್ತು. ಸದ್ಯ ನಾಲ್ಕನೇ ರೈಲಿನ ಸೇರ್ಪಡೆಯಿಂದಾಗಿ ಒಂದು ರೈಲಿನಿಂದ ಮತ್ತೊಂದು ರೈಲಿನ ಅಂತರವು 19 ನಿಮಿಷಕ್ಕೆ ಇಳಿಕೆಯಾಗಿದೆ. ಇದರಿಂದ ಪ್ರಯಾಣಿಕರಿಗೆ ಕೊಂಚ ರಿಲೀಫ್ ಸಿಕ್ಕಂತಾಗಲಿದೆ.

## ವಿಧಾನ ಪರಿಷತ್ ಸದಸ್ಯರಿಗೆ ಅಭಿವೃದ್ಧಿ ನಿಧಿ ಹಂಚಿಕೆ ಬಗ್ಗೆ ಸಿಎಂ ಸ್ಪಂದನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಸದಸ್ಯರಿಗೆ ಎಂಎಲ್‌ಸಿ ನಿಧಿ ನೀಡುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಕರಾತ್ಮಕವಾಗಿ ಸ್ಪಂದಿಸಿದ್ದಾರೆ ಎನ್ನಲಾಗಿದೆ, ಮಂಗಳವಾರ ಕಾಂಗ್ರೇಸ್ ಪರಿಷತ್ ಸದಸ್ಯರ ಜೊತೆ ಸಿಎಂ ಸಭೆ ನಡೆಸಿದರು. ಸಭೆಯಲ್ಲಿ ಎಂಎಲ್‌ಸಿಗಳು ನಿಧಿ ಬಗ್ಗೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದಾರೆ.

ಎಂಎಲ್‌ಸಿಗಳು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಹಣವನ್ನು ಕೋರಿದ್ದಾರೆ. ನಮ್ಮಲ್ಲಿ ಶಾಸಕರಿಗೆ ನೀಡಬೇಕಾದ 8,000 ಕೋಟಿ ರೂ. ಹಣವಿದೆ. ನಾನು ಅವರಿಗೆ ಇಷ್ಟು ಮೊತ್ತದ ಹಣ ನೀಡುತ್ತೇನೆ ಎಂದು ಭರವಸೆ ನೀಡಲು ಬಯಸುವುದಿಲ್ಲ, ಆದರೆ ಕೆಲ ಪ್ರಮಾಣದಲ್ಲಿ ಹಣವನ್ನು ಹಂಚಿಕೆ ಮಾಡಲಾಗುವುದು ಎಂದು ಭರವಸೆ ನೀಡಿದ್ದೇನೆ ಎಂದು ಸಿಎಂ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು. ಸಿದ್ದರಾಮಯ್ಯ ಅವರು ಆಡಳಿತ ಪಕ್ಷದ ಎಂಎಲ್‌ಸಿಗಳೊಂದಿಗೆ ಸುಮಾರು ಮೂರು ಗಂಟೆಗಳ ಕಾಲ ಸಭೆ ನಡೆಸಿದ್ದು, 30 ಎಂಎಲ್‌ಸಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಇತ್ತೀಚೆಗೆ ನಡೆದ ಕಾಂಗ್ರೇಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ, ಎಂಎಲ್‌ಸಿಗಳು ಸಿಎಂ ಅವರನ್ನು ಶಾಸಕರೊಂದಿಗೆ ಮಾಡುವಂತೆಯೇ ಸಭೆ ಕರೆಯುವಂತೆ ಒತ್ತಾಯಿಸಿದ್ದರು.

ಹಲವು ರಾಜ್ಯ ಸಮಸ್ಯೆಗಳು, ಗ್ಯಾರಂಟಿ ಯೋಜನೆಗಳ ಬಗ್ಗೆ ಚರ್ಚಿಸಲಾಯಿತು. ನಮ್ಮ ಬೇಡಿಕೆಗಳಲ್ಲಿ ಒಂದಾದ ನಿಧಿಯನ್ನು ಮಂಜೂರು ಮಾಡುವುದು ಪ್ರಮುಖವಾಗಿತ್ತು, ಅದಕ್ಕೆ ಮುಖ್ಯಮಂತ್ರಿ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದರು ಎಂದು ಎಂಎಲ್‌ಸಿ ಸಲೀಮ್ ಅಹ್ಮದ್ ತಿಳಿಸಿದರು. ರಾಜ್ಯಪಾಲರು ನಾಲ್ಕು ಎಂಎಲ್‌ಸಿಗಳ ನಾಮನಿರ್ದೇಶನಕ್ಕೆ ಒಪ್ಪಿಗೆ ನೀಡಿರುವುದರಿಂದ ಮೇಲ್ಮನೆಯಲ್ಲಿ ಕಾಂಗ್ರೇಸ್ ಸದಸ್ಯರ ಸಂಖ್ಯೆ 37 ಆಗಲಿದೆ, ಇದು ಬಿಜೆಪಿ ಮತ್ತು ಜೆಡಿಎಸ್ ಎಂಎಲ್‌ಸಿಗಳನ್ನು ಒಟ್ಟುಗೂಡಿಸಿದರೆ ಸಮನಾಗಿರುತ್ತದೆ. ಸ್ವತಂತ್ರ ಎಂಎಲ್‌ಸಿ ಲಖನ್ ಜಾರಕಿಹೊಳಿ ಕಾಂಗ್ರೇಸ್‌ಗೆ ಬೆಂಬಲ ನೀಡುವ ಸಾಧ್ಯತೆಯಿದೆ, ಹೀಗಾಗಿ ಪರಿಷತ್ತಿನಲ್ಲಿ ಕಾಂಗ್ರೇಸ್ ಮೇಲುಗೈ ಸಿಗುತ್ತದೆ. ಬಿಜೆಪಿ ಮತ್ತು ಜೆಡಿಎಸ್‌ನಿಂದ ಆಯ್ಕೆಯಾದ ಪರಿಷತ್ ಅಧ್ಯಕ್ಷ ಬಸವರಾಜ ಹೊರಟ್ಟಿ ಅವರನ್ನು ಬದಲಾಯಿಸುವ ಬಗ್ಗೆ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ, ಚಳಿಗಾಲದ ಅಧಿವೇಶನದವರೆಗೆ ನಾವು ಕಾಯುತ್ತೇವೆ ಎಂದು ಮೂಲಗಳು ತಿಳಿಸಿವೆ.

## ಪಿಯು ವಿದ್ಯಾರ್ಥಿಗಳಿಂದ ರ‍್ಯಾಗಿಂಗ್; ಬಟ್ಟೆಬಿಚ್ಚಿಸಿ ಡ್ಯಾನ್ಸ್, ಸಂತ್ರಸ್ತ ವಿದ್ಯಾರ್ಥಿ ಕಣ್ಣೀರು!

• ಉದಯವಾಹಿನಿ, ಬೆಂಗಳೂರು

ಹಾಸ್ಟೆಲ್‌ಗೆ ಹೊಸದಾಗಿ ಸೇರಿಕೊಂಡಿದ್ದ 10ನೇ ತರಗತಿಯ ವಿದ್ಯಾರ್ಥಿಗೆ ಹಿರಿಯ ವಿದ್ಯಾರ್ಥಿಗಳು ರ‍್ಯಾಗಿಂಗ್ ಮಾಡಿರುವ ಆರೋಪ ಕೇಳಿಬಂದಿದೆ.

ಅಲ್ಲದೆ ಹಾಸ್ಟಲ್‌ನಲ್ಲಿ ಬಟ್ಟೆ ಬಿಚ್ಚಿ ಡ್ಯಾನ್ಸ್ ಮಾಡುವಂತೆ ಒತ್ತಾಯಿಸಿದ್ದಾರೆ ಎಂದು ಬನ್ನೇರುಘಟ್ಟ ಪೊಲೀಸ್ ಠಾಣೆಯಲ್ಲಿ ಸಂತ್ರಸ್ತ ವಿದ್ಯಾರ್ಥಿಯ ತಂದೆ ದೂರು ನೀಡಿದ್ದಾರೆ. ಬನ್ನೇರುಘಟ್ಟ ಠಾಣಾ ವ್ಯಾಪ್ತಿಯ ಖಾಸಗಿ ಶಾಲೆಯೊಂದರಲ್ಲಿ ಘಟನೆ ನಡೆದಿದೆ. ಈ ಕುರಿತು ಸಂತ್ರಸ್ತ ವಿದ್ಯಾರ್ಥಿ ಪ್ರಾಂಶುಪಾಲರಿಗೆ ದೂರು ನೀಡಿದ್ದನು. ಇನ್ನು ಈ ಬಗ್ಗೆ ಪ್ರಾಂಶುಪಾಲರು ಹಾಗೂ ವಾರ್ಡನ್ ಯಾವುದೇ ಕ್ರಮಕೈಗೊಂಡಿರಲಿಲ್ಲ. ಇನ್ನು ದೂರಿ


ಉದಯವಾಹಿನಿ ಚಿತ್ರ

ನೀಡಿದ್ದಕ್ಕೆ ಕೋಪಗೊಂಡಿದ್ದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಲೈಂಗಿಕ ದೌರ್ಜನ್ಯ ನಡೆಸಿದ್ದು ಅಲ್ಲದೆ ಕಬ್ಬಿಣದ ಹ್ಯಾಂಗರ್ ನಿಂದ ಹಲ್ಲೆ ಮಾಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

> **ಸೆ. 3 ರಿಂದ 6ರವರೆಗೆ ಕೋಣೆಯಲ್ಲಿ ನನ್ನ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ್ದಾರೆ. ಅಲ್ಲದೆ ಬಟ್ಟೆ ಬಿಚ್ಚಿಸಿ ಡ್ಯಾನ್ಸ್ ಮಾಡಿದ್ದಾರೆ. ಈ ಬಗ್ಗೆ ದೂರು ನೀಡಿದ್ದರು ಪ್ರಾಂಶುಪಾಲರು ಹಾಗೂ ವಾರ್ಡನ್ ಯಾವುದೇ ಕ್ರಮಗೊಂಡಿಲ್ಲ. ಹೀಗಾಗಿ ಸಂತ್ರಸ್ತ ವಿದ್ಯಾರ್ಥಿಯ ತಂದೆ ಬನ್ನೇರುಘಟ್ಟ ಪೊಲೀಸ್ ಠಾಣೆಗೆ ತೆರಳಿ ಐವರು ವಿದ್ಯಾರ್ಥಿಗಳು, ಪ್ರಾಂಶುಪಾಲ ಮತ್ತು ವಾರ್ಡನ್ ವಿರುದ್ಧ ದೂರು ನೀಡಿದ್ದಾರೆ.**

## ಫ್ರೀಡಂ ಪಾರ್ಕ್‌ನಲ್ಲಿ ಸ್ಪೃಶ್ಯ ಸಮುದಾಯದಿಂದ ಉಗ್ರ ಹೋರಾಟ, ಆತ್ಮಹತ್ಯೆಗೆ ಮಹಿಳೆ ಯತ್ನ!

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿ ಒಳ ಮೀಸಲಾತಿ ಹಂಚಿಕೆಯಲ್ಲಿ ಅನ್ಯಾಯವಾಗಿದೆ ಎಂದು ಆರೋಪಿಸಿ ಬಂಜಾರ, ಭೋವಿ, ಕೊರಚ, ಕೊರಮ ಸ್ಪೃಶ್ಯ ಸಮುದಾಯಗಳು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿವೆ. ಸ್ಪೃಶ್ಯ ಜಾತಿಗಳಾದ ಬಂಜಾರ, ಭೋವಿ, ಕೊರಮ, ಕೊರಚ ಜಾತಿಗಳನ್ನು ಅ ವರ್ಗಕ್ಕೆ ಸೇರ್ಪಡೆ ಮಾಡಿ ಶೇ.5 ರಷ್ಟು ಮೀಸಲಾತಿ ನೀಡಲಾಗಿದೆ. ಆದರೇ, ಹೀಗೆ ಮೀಸಲಾತಿ ಹಂಚಿಕೆ ಮಾಡಿದ್ದರಿಂದ ಸ್ಪೃಶ್ಯ ಜಾತಿಗಳಿಗೆ ಅನ್ಯಾಯ ಆಗಿದೆ ಎಂದು ಸ್ಪೃಶ್ಯ ಜಾತಿಗಳ ಜನರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಭಾರಿ ಪ್ರತಿಭಟನೆ ನಡೆಸಿದ್ದಾರೆ.

ಈ ವೇಳೆ ರೊಚ್ಚಿಗೆದ್ದ ಪ್ರತಿಭಟನೆಕಾರರು ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ ಮಹಿಳೆಯೊಬ್ಬರು ಸ್ಥಳದಲ್ಲೇ ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆದಿದೆ. ಇನ್ನು ಮಹಾರಾಣಿ ಕಾಲೇಜು ಬಳಿ ಪ್ರತಿಭಟನಾಕಾರರು ರಸ್ತೆ ತಡೆದು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.

ರಸ್ತೆ ತಡೆಯಿಂದಾಗಿ ಕೆ.ಆರ್.ಸರ್ಕಲ್ ಬಳಿ ಫುಲ್


ಉದಯವಾಹಿನಿ ಚಿತ್ರ

ಟ್ರಾಫಿಕ್ ಜಾಮ್ ಆಗಿದ್ದು, ವಾಹನಗಳು ಕಿಲೋ ಮೀಟರ್ ಉದ್ದ ನಿಂತಲ್ಲೇ ನಿಂತುಕೊಂಡಿವೆ. ಇದರಿಂದ ವಾಹನ ಸವಾರರು ಪರದಾಡುವಂತಾಗಿದೆ. ಎಡಗೈ ಸಮುದಾಯಕ್ಕೆ ಶೇ. 6 ರಷ್ಟು, ಬಲ ಸಮುದಾಯಕ್ಕೆ ಶೇ. 6 ರಷ್ಟು, ಸ್ಪೃಶ್ಯ ಸಮುದಾಯಕ್ಕೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲು ತೀರ್ಮಾನ ಮಾಡಲಾಗಿದೆ ಎಂದು ಸಿದ್ದರಾಮಯ್ಯ ಆ.20ರಂದು ವಿಧಾನಸೌಧದಲ್ಲಿ ಘೋಷಿಸಿದ್ದರು. ನ್ಯಾ.ನಾಗಮೋಹನ್ ದಾಸ್ ವರದಿಯ ಶಿಫಾರಸುಗಳನ್ನು ಕೆಲ ಮಾರ್ಪಾಡುಗಳೊಂದಿಗೆ ಒಳ ಮೀಸಲಾತಿ ಕಲ್ಪಿಸಲಾಗಿದೆ. ಎಂದು ವರ್ಗೀಕರಣ ಮಾಡಿ ಮೀಸಲಾತಿ ಹಂಚಲಾಗಿದ್ದು, ಈ ಮೂಲಕ ದಶಗಳ ಹೋರಾಟಕ್ಕೆ ನಮ್ಮ ಸರ್ಕಾರ ನ್ಯಾಯ ಒದಗಿಸಿದೆ ಎಂದು ಸಿಎಂ ತಿಳಿಸಿದರು.

# ಕೆಂಪೇಗೌಡ ಲೇಔಟ್‌ನಲ್ಲಿ ಸೈಟುಗಳ ಬೆಲೆ 2 ತಿಂಗಳಲ್ಲಿ ನಾಲ್ಕು ಲಕ್ಷ ಏರಿಕೆ!


### ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದ ಕೂಡಲೇ ಬಿಡಿಎ ಸೈಟುಗಳ ರೇಟು ಭಾರೀ ಏರಿಕೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಇದೇ ಸೆಪ್ಟಂಬರ್ ಮೊದಲ ವಾರದಲ್ಲಿ ಬಿಬಿಎಂಪಿ ಯುಗಾಂತ್ಯವಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಿಬಿಎ ಅಸ್ತಿತ್ವಕ್ಕೆ ಬಂದಿದೆ. ಅದರ ಪರಿಣಾಮವಾಗಿ, ಬೆಂಗಳೂರು ದಕ್ಷಿಣದಲ್ಲಿ, ಅದರಲ್ಲೂ ವಿಶೇಷವಾಗಿ ಮೈಸೂರು ಹೆದ್ದಾರಿಯ ಆಜುಬಾಜು ಪ್ರದೇಶಗಳಲ್ಲಿ ಭೂಮಿಯ ಬೆಲೆ ಯದ್ವಾತದ್ವಾ ಏರಿಕೆಯಾಗಿದೆ. ಯಾವಾಗ ರಾಮನಗರ ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡಲಾಯಿತೋ ಆಗಿನಿಂದ ಇಲ್ಲಿ ಬೆಲೆಗಳು ನಿಧಾನವಾಗಿ ಏರುತ್ತಲೇ ಇದ್ದವು.

ಈಗ ಬೆಂಗಳೂರಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ಯುಗಾಂತ್ಯವಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆಡಳಿತ ಅಸ್ತಿತ್ವಕ್ಕೆ ಬಂದ ಮೇಲೆ ದರಗಳು ರಾಕೆಟ್ ನಂತೆ ಮೇಲಕ್ಕೆ ಹೋಗಿವೆ. ಮಧ್ಯಮ ವರ್ಗದವರ ಕೈಗೆಟುಕದಷ್ಟರ ಮಟ್ಟಿಗೆ ಸೈಟುಗಳ ಬೆಲೆಗಳು ಏರಿಕೆಯಾಗಿದ್ದು, ಅದರಲ್ಲೂ ವಿಶೇಷವಾಗಿ ಬಿಡಿಎ ಸೈಟುಗಳ ಬೆಲೆ ಗಗನಕ್ಕೇರಿದೆ.

ಫುಲ್ ಸೈಟ್ ಬಿಡಿ ಹಾಫ್ ಸೈಟ್ ಅಂದರೆ 20X30 ಅಡಿ ನಿವೇಶನಗಳನ್ನೂ ಕೊಳ್ಳಲು ಆಗದಷ್ಟು ದುಬಾರಿಯಾಗಿವೆ ಬಿಡಿಎ


ಉದಯವಾಹಿನಿ ಚಿತ್ರ

**ಸೈಟುಗಳ ಬೆಲೆ ಸುಮಾರು 2 ಲಕ್ಷ ರೂ. ಏರಿಕೆ**

ಸೈಟುಗಳು. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬರುವುದಾಗಿ ಘೋಷಣೆ ಮಾಡಿದ ಕೂಡಲೇ ಹಾಫ್ ಸೈಟುಗಳ ಬೆಲೆ ಸುಮಾರು 2 ಲಕ್ಷ ರೂ. ಏರಿಕೆಯಾಗಿತ್ತು. ಈಗ ಗ್ರೇಟರ್ ಬೆಂಗಳೂರು ಅಸ್ತಿತ್ವಕ್ಕೆ ಬಂದ ನಂತರ ಮತ್ತೆರಡು ಲಕ್ಷ ರೂ. ಏರಿಕೆಯಾಗಿದ್ದು, ಇನ್ನೂ ಜನವಸತಿ ಸರಿಯಾಗಿಲ್ಲದ ಕೆಂಪೇಗೌಡ ಲೇಔಟ್ ನಲ್ಲೇ 20 X30 ಚದುರಡಿ ನಿವೇಶನದ ಬೆಲೆ ಈಗ ಗರಿಷ್ಠ 62 ಲಕ್ಷ ರೂ.ಗಳಿಗೆ ಮುಟ್ಟಿದೆ

ಸಾಮಾನ್ಯವಾಗಿ, 30 X 40 ವಿಸ್ತೀರ್ಣದ ಸೈಟುಗಳಿಗೆ ಪ್ರತಿ ಚದುರಡಿಗೆ ಇಂತಿಷ್ಟು ಹಣ ಅಂತ ನಿಗದಿಯಾಗಿರುತ್ತದೆ. ಆದರೆ, ಹಾಫ್ ಸೈಟುಗಳಾದ 20 X 30ರ ನಿವೇಶಗಳಿಗೆ ಅದು ಅನ್ವಯವಾಗುವುದಿಲ್ಲ. ಆ ಸೈಟುಗಳಿಗೆ ಒಂದು ಮೊತ್ತವನ್ನು ನಿಗದಿಗೊಳಿಸಲಾಗುತ್ತದೆ. ಇದೇ ಜುಲೈ ತಿಂಗಳಲ್ಲಿ ಕೆಂಪೇಗೌಡ ಲೇಔಟ್ ನಲ್ಲಿ ಪೂರ್ವ ಅಥವಾ ಉತ್ತರ ದಿಕ್ಕಿಗೆ ಇರುವ 20 X 30 ಸೈಟುಗಳಿಗೆ 56ರಿಂದ 58 ಲಕ್ಷ ರೂ. ಇತ್ತು. ಆದರೀಗ ಏಕ್ ದಂ 62 ಲಕ್ಷ ರೂ.ಗಳಿಗೆ ಏರಿಕೆಯಾಗಿದೆ. ಅದೂ ಕೇವಲ ಎರಡೇ ತಿಂಗಳ ಅವಧಿಯಲ್ಲಿ.

ಇನ್ನು, 30 X 40 ಅಳತೆಯ ಸೈಟುಗಳಿಗೆ ಪ್ರತಿ ಚದುರಡಿಗೆ 8 ಸಾವಿರ ರೂ. ಇತ್ತು. ಅದೀಗ, 9 ಸಾವಿರ ರೂ.ಗಳಾಗಿದೆ. ಅಲ್ಲಿಗೆ, ಒಂದು 30 X 40 ಅಳತೆಯ ಸೈಟಿನ ಬೆಲೆ 1 ಕೋಟಿ 8 ಸಾವಿರ ರೂ.ಗಳಾಗಿವೆ. ಇವತ್ತು ಇದ್ದ ಬೆಲೆ ಇನ್ನೆರಡು ದಿನಕ್ಕೆ ಬದಲಾಗಿರುವ ಸಾಧ್ಯತೆಯಿರುತ್ತದೆ. ಪ್ರತಿ ಚದುರಡಿಗೆ ವಾರಕ್ಕೆ 100ರಿಂದ 200 ರೂ. ಏರಿಕೆಯಂತೂ ಖಚಿತ ಎನ್ನುವಂತಾಗಿದೆ. ಕೆಂಪೇಗೌಡ ಲೇಔಟ್‌ನಲ್ಲಿ ಸದ್ಯಕ್ಕೆ ಮಾರಾಟವಾಗುತ್ತಿರುವುದು ರೈತರ ಸೈಟುಗಳು.

ಅಂದರೆ, ಕೆಂಪೇಗೌಡ ಲೇಔಟ್ ರಚನೆಗಾಗಿ ಭೂಮಿ ಕೊಟ್ಟ ರೈತರಿಗೆ ಪರಿಹಾರ ರೂಪದಲ್ಲಿ ಕೊಡಲಾಗಿರುವ ಸೈಟುಗಳು. ಅವುಗಳು ಈಗ ನೇರವಾಗಿ ರೈತರಿಂದ ಲಭ್ಯವಿಲ್ಲ. ಕೆಂಪೇಗೌಡ ಲೇಔಟ್ ರಚನೆಯಾದಾಗ 2002-03ರಲ್ಲಿ ನೀಡಲಾಗಿರುವ ಸೈಟುಗಳನ್ನು ಧನಿಕರು, ಉಳ್ಳವರು ಅಂದೇ ರೈತರಿಂದ ಪಡೆದು ಇಟ್ಟುಕೊಂಡಿದ್ದು ಈಗ ಅವುಗಳನ್ನು ಮಾರಾಟ ಮಾಡುತ್ತಿದ್ದಾರೆ. ಆ ದಿನ ಅತ್ಯಲ್ಪ ಮೊತ್ತಕ್ಕೆ ಖರೀದಿ ಮಾಡಿದ್ದ ಅವರೀಗ ಅವೇ ಸೈಟುಗಳನ್ನು ಅಪಾರ ಲಾಭದಲ್ಲಿ ಮಾರಾಟ ಮಾಡುತ್ತಿದ್ದಾರೆ. ಇನ್ನು, ವಿಶ್ವೇಶ್ವರಯ್ಯ ಲೇಔಟ್‌ನಲ್ಲಿ ಸೈಟುಗಳನ್ನು ಮಾತಾಡಿಸುವ ಹಾಗಿಲ್ಲ. ಅಲ್ಲೀಗ ಹಾಫ್ ಸೈಟುಗಳ ಬೆಲೆಯೇ 80 ಲಕ್ಷ ರೂ. ಗಳಿಂದ 85 ಲಕ್ಷ ರೂ.ಗಳಷ್ಟಿದೆ. 30 X 40 ಅಳತೆಯ ಸೈಟುಗಳ ಬೆಲೆ ಒಂದೂವರೆ ಕೋಟಿ ದಾಟಿದೆ. ಅಲ್ಲಿಗೆ, ಕೇವಲ ಸಂಬಳವನ್ನೇ ನೆಚ್ಚಿಕೊಂಡಿರುವ ಬಾಡಿಗೆ ಮನೆಯಲ್ಲಿದ್ದುಕೊಂಡು ದುಬಾರಿ ಜೀವನ ನಡೆಸುತ್ತಿರುವ ಬೆಂಗಳೂರಿನ ಮಧ್ಯಮ ವರ್ಗಕ್ಕೆ ಬಿಡಿಎ ಸೈಟುಗಳು ಗಗನಕುಸುಮ ಎಂಬಂತಾಗಿವೆ.

**ಇನ್ನೂ ಹೆಚ್ಚಾಗುತ್ತೆ ಬೆಲೆ!**

**ಕೆಂಪೇಗೌಡ ಲೇಔಟ್‌ನಲ್ಲಿ ಬಿಡಿಎ ವತಿಯಿಂದ ಅಲಾಟ್ಮೆಂಟ್ ಮೂಲಕ ಪಡೆದಿರುವ ಸೈಟುಗಳ ಮಾಲೀಕರಿಗೆ 20 ವರ್ಷಗಳ ಕಾಲ ಆ ಸೈಟುಗಳನ್ನು ಮಾರದಂತೆ ನಿಬಂಧನೆಯಿದೆ. 2004-05ರಲ್ಲಿ ಮೊದಲ ಸುತ್ತಿನ ಅಲಾಟ್ಮೆಂಟ್‌ನಲ್ಲಿ ಸೈಟುಗಳನ್ನು ಪಡೆದಿರುವವರ ಈ ನಿಬಂಧನೆ 2025-26ರಕ್ಕೆ ಮುಕ್ತಾಯವಾಗುತ್ತದೆ. ಆಗ ಅವರಲ್ಲಿ ಹಲವರು ತಮ್ಮ ಸೈಟುಗಳನ್ನು ಮಾರಾಟ ಮಾಡಲಿದ್ದಾರೆ. ಆಗ, ಕೆಂಪೇಗೌಡ ಲೇಔಟ್‌ನಲ್ಲಿ ಸೈಟುಗಳ ಬೆಲೆ ಮತ್ತಷ್ಟು ಅಧಿಕವಾಗುವ ಸಾಧ್ಯತೆಗಳಿವೆ.**


### ಎತ್ತಿನಹೊಳೆ ಕಾಮಗಾರಿ ಪೂರ್ಣಗೊಳ್ಳೋದು ಯಾವಾಗ? ಚಾಲನೆ ಸಮಯ ಘೋಷಿಸಿದ ಪರಮೇಶ್ವರ್

# ಎತ್ತಿನಹೊಳೆ ಯೋಜನೆಯ ಮೂಲಕ ಶಾಶ್ವತ ನೀರಿನ ಸಮಸ್ಯೆ ಪರಿಹಾರ

• **ಉದಯವಾಹಿನಿ, ತುರುವೇಕೆರೆ**

2027ಕ್ಕೆ ಎತ್ತಿನಹೊಳೆ ಯೋಜನೆ ಸಂಪೂರ್ಣಗೊಂಡು ಶಾಶ್ವತ ನೀರಿನ ಸಮಸ್ಯೆ ಪರಿಹಾರಕ್ಕೆ ಸಿಎಂ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ಇದರಿಂದ ರಾಜ್ಯ ಕಾಂಗ್ರೆಸ್ ಸರಕಾರ ಅಭಿವೃದ್ಧಿ ಜತೆ - ಜನಪರ ಆಡಳಿತಕ್ಕೆ ಸಾಕ್ಷಿಯಾಗಲಿದೆ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ್ ತಿಳಿಸಿದರು. ತುರುವೇಕೆರೆ ಪಟ್ಟಣದಲ್ಲಿ ನೂತನವಾಗಿ ನಿರ್ಮಿತಗೊಂಡ ಸರಕಾರದ ಮಹತ್ವಾಕಾಂಕ್ಷೆ ಯೋಜನೆಯ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ ಮಾತನಾಡಿದ ಅವರು, ಟೀಕೆ-ಟಿಪ್ಪಣಿಗಳು ಸ್ವಾಭಾವಿಕ. ಆದರೆ ಅಭಿವೃದ್ಧಿ ಮುಖ್ಯ. ಅದರಂತೆ ಜಿಲ್ಲೆಯ ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಯೋಜನೆಯ 2027ಕ್ಕೆ ಸಂಪೂರ್ಣಗೊಂಡು ಸಿಎಂ ಸಿದ್ದರಾಮಯ್ಯನವರು ಶಾಶ್ವತ ನೀರಿನ ಬವಣೆ ನೀಗಿಸಲಿದ್ದಾರೆ ಎಂದರು. ಹಾಗೆಯೇ, ಇಂದಿರಾ ಕ್ಯಾಂಟೀನ್ ಸಿದ್ದರಾಮಯ್ಯರ ಮೊದಲ ಆಡಳಿತದಲ್ಲಿ ಆರಂಭಗೊಳ್ಳಬೇಕಿತ್ತು. ಹಲವು ಕಾರಣಗಳಿಂದ ನನೆಗುದಿಗೆ ಬಿದ್ದಿದ್ದ ಕಾರಣ ಇಂದು ಲೋಕಾರ್ಪಣೆಗೊಂಡಿದೆ.

ಹಸಿವು ಮುಕ್ತ ಕರ್ನಾಟಕ ನಿರ್ಮಾಣದ ಉದ್ದೇಶದಿಂದ ಪ್ರಾರಂಭಗೊಂಡ ಈ ಯೋಜನೆಯು ರಾಜ್ಯಾದ್ಯಂತ ಜಿಲ್ಲಾ, ತಾಲ್ಲೂಕು ಕೇಂದ್ರಗಳಲ್ಲಿ ತಲಾ 2-4ರಂತೆ ಲೋಕಾರ್ಪಣೆಗೊಂಡು ಬಡವರು, ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳು, ಇತರೆ ಎಲ್ಲಾ ಸಾರ್ವಜನಿಕರಿಗಾಗಿ ಅತೀ ಕಡಿಮೆ ದರದಲ್ಲಿ ಊಟ ಮತ್ತು ತಿಂಡಿ ದೊರಕಿಸಿ ಹಸಿವು



ಉದಯವಾಹಿನಿ ಚಿತ್ರ

- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯೋಜನೆಗೆ ಚಾಲನೆ ನೀಡಲಿದ್ದಾರೆ ಎಂದ ಡಾ.ಜಿ. ಪರಮೇಶ್ವರ್
- ಇದೇ ವೇಳೆ ತುರುವೇಕೆರೆ ಪಟ್ಟಣದಲ್ಲಿ ನೂತನವಾಗಿ ನಿರ್ಮಿತಗೊಂಡ ಇಂದಿರಾ ಕ್ಯಾಂಟೀನ್ ಉದ್ಘಾಟನೆ

ನೀಗಿಸುವುದು ನಮ್ಮ ಸರಕಾರದ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಎಂ.ಟಿ. ಕೃಷ್ಣಪ್ಪ ಮಾತನಾಡಿ, ಕಡಿಮೆ ದರದಲ್ಲಿ ಊಟ ಒದಗಿಸುವ ಇಂದಿರಾ ಕ್ಯಾಂಟೀನ್ ಯೋಜನೆ ಸ್ವಾಗತಾರ್ಹ. ಆದರೆ ಇದು ಕೇವಲ ಬಡವರಿಗೆ ಮಾತ್ರ ಸೀಮಿತವಲ್ಲ. ಬಡವ-ಶ್ರೀಮಂತ ಭೇದವಿಲ್ಲದೆ ಎಲ್ಲರೂ ಅನುಕೂಲ ಪಡೆಯಬೇಕು. ಹಾಗೆಯೇ ಇಲ್ಲಿ ನಿತ್ಯವೂ ಉತ್ತಮ ಆಹಾರ ನೀಡಬೇಕು. ಆಹಾರದಲ್ಲಿ ಕಳಪೆ, ಬದಲಾವಣೆಗೊಂಡಲ್ಲಿ ಕಾನೂನು ಕ್ರಮ ನಿಶ್ಚಿತ ಎಂದು ಎಚ್ಚರ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ತಾಲ್ಲೂಕು ದಸಂಸ ಅಂಬೇಡ್ಕರ್ ಸಮುದಾಯದ ಹಣ ಬಿಡುಗಡೆಗೊಳಿಸುವಂತೆ ಒತ್ತಾಯಿಸಿ ಡಾ.ಜಿ. ರಮೇಶ್ವರ್ ಅವರಿಗೆ ಮನವಿ ಪತ್ರ ಸಲ್ಲಿಸಿತು.

**ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ:** ಜಿಲ್ಲೆಯಲ್ಲಿ ಸುಮಾರು ಹತ್ತು ಸಾವಿರ ಕುಟುಂಬಗಳಿಗೆ ಪೋಡಿ ಆಗದೆ ಬಾಕಿ ಉಳಿದಿದೆ. ಶೀಘ್ರವಾಗಿ ಜಿಲ್ಲಾದ್ಯಂತ ಈಗಾಗಲೇ ಪೋಡಿ ಕೆಲಸ ಪ್ರಾರಂಭಗೊಂಡಿದ್ದು ಎಲ್ಲಾ ಗೊಲ್ಲರಹಟ್ಟಿ ಕುಟುಂಬಗಳಿಗೂ ತಮ್ಮ ಜಮೀನಿನ ಹಕ್ಕು ಪತ್ರ ವಿತರಿಸಲಾಗುವುದು. ಸಿಎಂ ಸಿದ್ದರಾಮಯ್ಯನವರ ಆಶಯದಂತೆ ಕಂದಾಯ ಸಚಿವ ಕೃಷ್ಣೆ ಭೈರೇಗೌಡರು ಈ ಕೆಲಸಕ್ಕೆ ವೇಗ ನೀಡಿ ಜನರಿಗೆ ಹಕ್ಕು ಪತ್ರ ಒದಗಿಸಲು ಮುಂದಾಗಿದ್ದಾರೆ ಎಂದು ಸಚಿವ ಪರಮೇಶ್ವರ್ ಹೇಳಿದರು.

**ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ**

**ತುರುವೇಕೆರೆಯಲ್ಲಿ ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ಇಂದಿರಾ ಕ್ಯಾಂಟೀನ್ ಉದ್ಘಾಟಿಸಿದರು. 2027ಕ್ಕೆ ಎತ್ತಿನಹೊಳೆ ಯೋಜನೆ ಪೂರ್ಣಗೊಳ್ಳಲಿದೆ ಎಂದು ಅವರು ಇದೇ ಸಂದರ್ಭದಲ್ಲಿ ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಾಶ್ವತ ನೀರಿನ ಸಮಸ್ಯೆಗೆ ಪರಿಹಾರ ನೀಡಲಿದ್ದಾರೆ ಎಂದಿರುವ ಗೃಹ ಸಚಿವರು, ರಜತಾದ್ರಿಪುರದಲ್ಲಿ ಎತ್ತಿನಹೊಳೆ ಕಾಮಗಾರಿ ಪರಿಶೀಲನೆ ನಡೆಸಿ ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ ನೀಡಿದರು.**

ಕಟ್ಟಡ ಉದ್ಘಾಟನೆಗೂ ಮುನ್ನ ತಾಲೂಕಿನ ಬಾಣಸಂದ್ರ ಹೋಬಳಿಯ ಮಾರಸಂದ್ರ ಗ್ರಾಪಂ ವ್ಯಾಪ್ತಿಯಲ್ಲಿನ ಸುಮಾರು ವರ್ಷಗಳಿಂದ ಪೋಡಿ ಆಗದೆ ಇರುವ ಕುಟುಂಬಗಳಿಗೆ ದರಖಾಸ್ತು ಪೋಡಿ ಆಂದೋಲನ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಸಚಿವರು ಹಕ್ಕು ಪತ್ರ ಸಹ ವಿತರಿಸಿದರು.

**ಎತ್ತಿನ ಹೊಳೆ ವೀಕ್ಷಣೆ:** ತುರುವೇಕೆರೆ ತಾಲ್ಲೂಕಿನ ರಜತಾದ್ರಿಪುರದಲ್ಲಿ ಹಾದುಹೋಗಿರುವ ಎತ್ತಿನಹೊಳೆ ಯೋಜನೆ ಕಾಮಗಾರಿ ಪ್ರಗತಿ ಪರಿಶೀಲಿಸಿದ ಡಾ.ಜಿ. ಪರಮೇಶ್ವರ್, ಕಾಮಗಾರಿಯಲ್ಲಿ ಯಾವುದೇ ರೀತಿ ಕಳಪೆ ಆಗದಂತೆ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಈ ಕಾಮಗಾರಿಯನ್ನು ಬಹುಬೇಗನೆ ಪೂರ್ಣಗೊಳ್ಳಬೇಕೆಂದು ಸಿಎಂ ಸಿದ್ದರಾಮಯ್ಯನವರು ಕನಸು ಕಂಡಿದ್ದಾರೆ ಎಂದರು.

# ಅರಣ್ಯ ಇಲಾಖೆ ಸಿಬ್ಬಂದಿಯನ್ನೇ ಬೋನಿಗೆ ಕೂಡಿ ಹಾಕಿದ ಜನ

• **ಉದಯವಾಹಿನಿ, ಚಾಮರಾಜನಗರ**

ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಅರಣ್ಯ ಪ್ರದೇಶ ಹೆಚ್ಚಿದೆ. ಅರಣ್ಯದ ಅಂಚಿನ ಗ್ರಾಮಗಳಿಗೆ ಹುಲಿ, ಚಿರತೆಗಳು ನುಗ್ಗಿ ಜನ ಜಾನುವಾರುಗಳ ಮೇಲೆ ದಾಳಿ ಮಾಡುವುದು ಸಾಮಾನ್ಯವಾಗಿದೆ. ಜೀವ ಭಯದಲ್ಲಿರುವ ಜನರಿಗೆ ಅರಣ್ಯ ಇಲಾಖೆ ನೆರವು ನೀಡುತ್ತಿಲ್ಲ ಎಂದು ಆರೋಪಿಸಿ, ಹುಲಿ ಹಿಡಿಯಲು ಇಟ್ಟಿದ್ದ ಬೋನಿನಲ್ಲಿ ಸಿಬ್ಬಂದಿ ಕೂಡಿ ಹಾಕಿದ ಘಟನೆ ತಾಲ್ಲೂಕಿನ ಬೊಮ್ಮಲಾಪುರದಲ್ಲಿ ನಡೆದಿದೆ. ಹುಲಿ, ಚಿರತೆ ದಾಳಿಗೆ ಬೇಸತ್ತ ರೈತರು ಅರಣ್ಯ ಇಲಾಖೆ ಸಿಬ್ಬಂದಿ ಮೇಲೆ ಆಕ್ರೋಶ ವ್ಯಕ್ತಪಡಿಸಿ, ಸ್ಥಳಕ್ಕೆ ಹುಲಿ ಹಿಡಿಯಲು ಎಂದು ಬಂದಿದ್ದ ಅರಣ್ಯ ಇಲಾಖೆ ಸಿಬ್ಬಂದಿಯನ್ನ ಜನರು ತರಾಟೆಗೆ ತೆಗೆದುಕೊಂಡಿದ್ದಾರೆ. ಪ್ರಾಣ ಭಯದಲ್ಲಿ ಜೀವ ನಡೆಸುತ್ತಿರುವ ನಮಗೆ ರಕ್ಷಣೆ ನೀಡುತ್ತಿಲ್ಲ ಎಂದು ಜಮೀನಿನಲ್ಲಿ ಇದ್ದ ಬೋನಿನಲ್ಲಿ ಸಿಬ್ಬಂದಿ ಕೂಡಿ ಹಾಕಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ 2 ತಿಂಗಳಿನಿಂದ ಗ್ರಾಮದ ಹೊರವಲಯದಲ್ಲಿ



ಉದಯವಾಹಿನಿ ಚಿತ್ರ

**ಹುಲಿ ಹಿಡಿಯಲು ವಿಫಲ**

ಹುಲಿ ಹಾಗೂ ಚಿರತೆ ಕಾಣಿಸಿಕೊಳ್ಳುತ್ತಿವೆ. ಈ ಬಗ್ಗೆ ಜನರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಅದರಂತೆ, ಬೊಮ್ಮಲಾಪುರ ಗ್ರಾಮದ ಗಂಗಪ್ಪ ಎಂಬವರ ಜಮೀನಿನಲ್ಲಿ ಬೋನು ಇಡಲಾಗಿದೆ.

ಹುಲಿ ಮತ್ತೆ ಕಾಣಿಸಿಕೊಂಡಿದ್ದು, ಈ ಬಗ್ಗೆ ಜನರು ಅರಣ್ಯ ಸಿಬ್ಬಂದಿಗೆ ಮಾಹಿತಿ ರವಾನಿಸಿದ್ದಾರೆ. ಅರಣ್ಯ ಇಲಾಖೆ ಸಿಬ್ಬಂದಿಯನ್ನ ಬೋನ್‌ನಲ್ಲಿ ಇರಿಸಿದ ಬಗ್ಗೆ ಮಾಹಿತಿ ಪಡೆದ ಗುಂಡ್ಲುಪೇಟೆ ವಲಯದ ಎಸಿಎಫ್ ಸುರೇಶ್, ಬಂಡೀಪುರ ವಲಯದ ಎಸಿಎಫ್ ನವೀನ್ ಕುಮಾರ್ ಸ್ಥಳಕ್ಕೆ ಭೇಟಿ ನೀಡಿದ್ದಾರೆ.

ಈ ವೇಳೆ, ರೈತರು ಹಾಗೂ ಅರಣ್ಯಾಧಿಕಾರಿಗಳ ನಡುವೆ ಮಾತಿನ ಚಕಮಕಿ ನಡೆಯಿತು. ಕಾಡುಪ್ರಾಣಿಗಳ ಭೀತಿಯಲ್ಲಿ ನಾವು ಜೀವನ ನಡೆಸುತ್ತಿದ್ದೇವೆ. ಈ ಬಗ್ಗೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ತರಾಟೆಗೆ ತೆಗೆದುಕೊಂಡರು. ಬಳಿಕ ಸಿಬ್ಬಂದಿಯನ್ನ ಬೋನಿನಿಂದ ಹೊರ ಬಿಡುವಂತೆ ಅರಣ್ಯ ಇಲಾಖೆ ಸಿಬ್ಬಂದಿ ಮನವೊಲಿಸಿದರು.

**ಜಾನುವಾರುಗಳ ಮೇಲೆ ದಾಳಿ**

**ತಿಂಗಳಿನಿಂದ ಗ್ರಾಮದ ಸುತ್ತಲೂ ಓಡಾಡುತ್ತಿರುವ ಹುಲಿ ಜಾನುವಾರುಗಳ ಮೇಲೆ ದಾಳಿ ಮಾಡಿ ಕೊಂದು ಹಾಕಿತ್ತು. ರೈತರ ಒತ್ತಾಯದ ಮೇರೆಗೆ ಅರಣ್ಯ ಇಲಾಖೆ ಬೋನ್ ಇರಿಸಿತ್ತು. ನಂತರ ಅರಣ್ಯ ಸಿಬ್ಬಂದಿ ಹಾಗೂ ಅಧಿಕಾರಿಗಳು ಇತ್ತ ಸುಳಿಯದೇ ಇರುವುದು ರೈತರು ಪಿತ್ತ ನೆತ್ತಿಗೇರಿಸಿತ್ತು.**

# ಕ್ಯಾನ್ಸರ್ ಪೀಡಿತರಿಗೆ ಆತ್ಮಸ್ಥೈರ್ಯ ತುಂಬಿ

• **ಉದಯವಾಹಿನಿ, ಮೈಸೂರು**

ಕ್ಯಾನ್ಸರ್ ಅನ್ನು ಆರಂಭದಲ್ಲೇ ಪತ್ತೆ ಮಾಡುವ ಜೊತೆಗೆ ರೋಗಿಗಳಿಗೆ ಆತ್ಮಸ್ಥೈರ್ಯ ತುಂಬುವುದೂ ಮುಖ್ಯ ಎಂದು ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ನಿವೃತ್ತ ನಿರ್ದೇಶಕಿ ಡಾ. ವಿಜಯಲಕ್ಷ್ಮೀ ದೇಶಮಾನೆ ಹೇಳಿದರು. ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ, ಮೈಸೂರು ವೈದ್ಯಕೀಯ ಕಾಲೇಜಿನ ಕ್ಯಾನ್ಸರ್ ವಿಭಾಗದ ಸಹಯೋಗದಲ್ಲಿ ಜೆ.ಕೆ. ಮೈದಾನದ ಸಭಾಂಗಣದಲ್ಲಿ ನಡೆದ ಕ್ಯಾನ್ಸರ್ ಮತ್ತು ಕಾರ್ಸಿನೋ ಯೋಗ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಯಾನ್ಸರ್ ಬಂದಾಗ ರೋಗಿಗೆ ಕೊನೆಯವರೆಗೂ ಕೇವಲ ಕಿಮೋಥೆರಪಿ ನೀಡಬಾರದು. ಜೊತೆಗೆ ಆತ್ಮಸ್ಥೈರ್ಯ ತುಂಬಬೇಕು. ಯೋಗ, ಧ್ಯಾನ, ಪ್ರಾರ್ಥನೆಯಂತಹ ಸಮಗ್ರ ಚಿಕಿತ್ಸಾ ವಿಧಾನಗಳನ್ನು ಅನುಸರಿಸಬೇಕು ಎಂದು ಸಲಹೆ ನೀಡಿದರು. ಭಾರತದಲ್ಲೂ ಈಚೆಗೆ ಕ್ಯಾನ್ಸರ್ ಪ್ರಕರಣಗಳು ಹೆಚ್ಚುತ್ತಲಿವೆ. ರೋಗಲಕ್ಷಣಗಳನ್ನು ಬೇಗ ಪತ್ತೆ ಮಾಡಿ, ಸೂಕ್ತ ಸಮಯದಲ್ಲಿ ಚಿಕಿತ್ಸೆ ಪಡೆದರೆ ಗುಣಮುಖವಾಗಬಹುದು. ಅದಕ್ಕೆ ತಕ್ಕಂತೆ ನಮ್ಮ ಜೀವನ ವಿಧಾನವನ್ನೂ ಬದಲಿಸಿಕೊಳ್ಳುವ ಅಗತ್ಯವಿದೆ' ಎಂದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಕುಮಾರಸ್ವಾಮಿ ಯೋಗವು ಜೀವನದ ಅವಿಭಾಜ್ಯ ಅಂಗ. ಯೋಗ ಮತ್ತು ಆಯುರ್ವೇದದಿಂದಲೂ ರೋಗ ಗುಣಪಡಿಸಬಹುದು ಎಂದು ಅಷ್ಟಾಂಗ ಯೋಗದ ಧಾರಣ ಪದ್ಧತಿಯ ಬಗ್ಗೆ ವಿವರಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ. ಲಕ್ಷ್ಮೀನಾರಾಯಣ ಶೆಣೈ ಯೋಗ ದಿನಾಚರಣೆ ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ವರ್ಷವಿಡೀ ನಡೆಯಬೇಕು ಎಂಬ ಉದ್ದೇಶದಿಂದ ಜಯದೇವ ಹೃದ್ರೋಗ ಸಂಸ್ಥೆಯಲ್ಲಿ ಕಾರ್ಡಿಯೋ, ಮೈಸೂರು ವೈದ್ಯಕೀಯ ಕಾಲೇಜಿನಲ್ಲಿ ಮಾನಸ ಯೋಗ, ಮೈಸೂರು ವಿವಿಯಲ್ಲಿ ಯುವ ಯೋಗ ಹಾಗೂ ಇದೀಗ ಕಾರ್ಸಿನೋ ಯೋಗ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣಗಳನ್ನು ನಡೆಸಿ, ಅರಿವು ಮೂಡಿಸಲಾಗುತ್ತಿದೆ ಎಂದರು.

# ನಿರಂತರ ಮಳೆಯಿಂದ ಕಾಫಿ ಬೆಳೆಗಾರರು ಕಂಗಾಲು; ಬಿಜೆಪಿ ನಿಯೋಗದಿಂದ ಸರ್ವೇ ಕಾರ್ಯ

• **ಉದಯವಾಹಿನಿ, ಮಡಿಕೇರಿ**

ಕೊಡಗು ಜಿಲ್ಲೆಯಲ್ಲಿ ಈ ಬಾರಿ ಮೇ ತಿಂಗಳಿನಿಂದಲ್ಲೇ ನಿರಂತರ ಮಳೆಯಾಗುತ್ತಿರುವುದರಿಂದ ನಾನಾ ರೀತಿಯ ಅವಾಂತರ ಮುಂದುವರೆದಿದೆ. ಅಲ್ಲದೆ ಸುರಿಯುತ್ತಿರುವ ಮಳೆಯ ಪರಿಣಾಮ ಸೋಮವಾರಪೇಟೆ ಹಾಗೂ ಮಡಿಕೇರಿ ತಾಲ್ಲೂಕಿನ ಹಲವಾರು ಭಾಗದಲ್ಲಿ ಕಾಫಿ ಬೆಳೆಗಳು ನೆಲಕಚ್ಚಿದೆ. ಕಾಫಿ ತೋಟಗಳು ಸಂಪೂರ್ಣವಾಗಿ ಹಾಳಾಗಿದ್ದು ಈ ವರ್ಷ ಹಾಗೂ ಮುಂದಿನ ವರ್ಷಕ್ಕೆ ಬೆಳೆಯೇ ಇಲ್ಲದಂತಾಗಿ ಬೆಳೆಗಾರರು ಕಂಗಾಲಾಗಿದ್ದಾರೆ. ಕಾಫಿ ಬೆಳೆಗಾರರ ಸ್ಥಿತಿಯನ್ನ ಅರಿತ ಕೊಡಗಿನ ಬಿಜೆಪಿ ನಿಯೋಗ ಕಾಫಿ ತೋಟಗಳಲ್ಲಿ ಸರ್ವೇ ಕಾರ್ಯ ನಡೆಸಿ ಕೇಂದ್ರ, ರಾಜ್ಯ ಸರ್ಕಾರಕ್ಕೆ ವರದಿ ನೀಡಲು ಮುಂದಾಗಿದೆ.

ಜಿಲ್ಲೆಯಲ್ಲಿ ಈ ಬಾರಿ ದೀರ್ಘಾವಧಿ ಮಳೆ ಆಗಿರುವುದರಿಂದ ಪ್ರಮುಖ ಬೆಳೆ ಕಾಫಿ ಸೇರಿದಂತೆ ಇತರ ತೋಟಗಾರಿಕಾ ಬೆಳೆಗಳಿಗೂ ಕೊಳೆ ರೋಗದ ಸಮಸ್ಯೆ ಎದುರಾಗಿದೆ. ಅತಿಹೆಚ್ಚು ಮಳೆ ಬೀಳುವ ಪ್ರದೇಶದಲ್ಲಿ ಈಗಾಗಲೇ ಕಾಫಿ ಉದುರಲಾರಂಭಿಸಿದೆ. ಇದರಿಂದ ಈ ಬಾರಿ ಜಿಲ್ಲೆಯಲ್ಲಿ ಕಾಫಿ ಉತ್ಪಾದನೆದು ಮೇಲೆ ಪರಿಣಾಮ ಬೀರಲಿದೆ. ಅಲ್ಲದೇ ಜಿಲ್ಲೆಯಲ್ಲಿ ಶೀತಗಾಳಿ ಹೆಚ್ಚಾಗಿರುವ ಪರಿಣಾಮ ತೋಟಗಾರಿಕಾ



ಉದಯವಾಹಿನಿ ಚಿತ್ರ

ಬೆಳೆಗಳ ಮೇಲೂ ವ್ಯತಿರಿಕ್ತ ಪರಿಣಾಮ ಉಂಟುಮಾಡಿದೆ. ಮುಖ್ಯವಾಗಿ ಕಾಫಿ ಬೆಳೆ ಗಾರರಿಗೆ ಬೆಳೆ ನಷ್ಟದ ಭೀತಿ ಎದುರಾಗಿದೆ. ಜೊತೆಗೆ ಕಾಳು ಮೆಣಸು, ಅಡಿಕೆ ಸೇರಿದಂತೆ ಎಲ್ಲಾ ರೀತಿಯ ತೋಟಗಾರಿಕಾ ಬೆಳೆಗಳಿಗೆ ಸಮಸ್ಯೆ ಉಂಟಾಗಿದೆ. ಕೊಡಗಿಗೆ ನಿರಂತರವಾಗಿ ಮಳೆ ಬಂದ್ರೆ ಬೆಂಗಳೂರು, ಮೈಸೂರು, ಮಂಡ್ಯ ಜಿಲ್ಲೆಗಳಿಗೆ ಕುಡಿಯುವ ನೀರು ಬಂತು ಎಂದು ನಿಟ್ಟುಸಿರು ಬಿಡುತ್ತಾರೆ. ಆದರೆ ಇಲ್ಲಿನ ಜನರ ಪರಿಸ್ಥಿತಿಯ ಬಗ್ಗೆ ಯಾರಿಗೂ ಅರಿವು ಅಗೋಲ್ಲ. ಮೇ ತಿಂಗಳಿನಿಂದ ಸೆಪ್ಟೆಂಬರ್ ತಿಂಗಳವರೆಗೂ ನಿರಂತರವಾಗಿ 200 ಮಿಮಿ ನಷ್ಟು ಮಳೆ ಆಗಿದೆ. ಇದರಿಂದ ಮುಂದಿನ ವರ್ಷದ ಬೆಳೆ ಪ್ರಮಾಣದ ಮೇಲೂ ಪರಿಣಾಮ ಬೀರಲಿದೆ. ಹೀಗಾಗಿ ರಾಜ್ಯ ಸರ್ಕಾರ ತಕ್ಷಣವೇ ಸಮೀಕ್ಷೆ ನಡೆಸಿ ಪರಿಹಾರ ನೀಡಬೇಕು ಎಂದು ಒತ್ತಾಯಿಸುತ್ತಿದ್ದಾರೆ.

**2 ಲಕ್ಷ ಪರಿಹಾರಕ್ಕೆ ಆಗ್ರಹ:** ಈ ಕುರಿತು ಮಾಜಿ ಸ್ಪೀಕರ್ ಕೆ.ಜಿ ಬೋಪಯ್ಯ ಹಾಗೂ ಮಾಜಿ ಶಾಸಕ ಅಪ್ಪಚ್ಚು ರಂಜನ್ ಮಾತಾನಾಡಿ, ಅತೀ ಹೆಚ್ಚು ಮಳೆಯಾಗಿರುವ ತೋಳೂರು ಶೆಟ್ಟಳ್ಳಿ, ಶಾಂತಳ್ಳಿ, ಬೆಟ್ಟದಳ್ಳಿ, ಹಮ್ಮಿಯಾಲ, ಮುಟ್ಟು, ಮುಕ್ಕೋಡ್ಲು, ಕಾಲೂರು, ಗಾಳಿಬೀಡು, ಬೆಟ್ಟಗೇರಿ, ಚೇರಂಬಾಣೆ, ಚೆಟ್ಟಿಮಾನಿ, ಭಾಗಮಂಡಲ, ಬಲ್ಲಮಾವಟಿ, ಕಕ್ಕಬ್ಬೆ ವಿಭಾಗಗಳಿಗೆ ಪಕ್ಷದ ತಂಡ ಭೇಟಿ ನೀಡಿ ಸಮೀಕ್ಷೆ ನಡೆಸಲಿದೆ. ಭಾರೀ ಮಳೆಯಿಂದ ಜಿಲ್ಲೆಯ ಪ್ರಮುಖ ಕೃಷಿಯಾದ ಕಾಫಿಗೆ ಅಪಾರ ಹಾನಿಯಾಗಿದೆ. ಅರೇಬಿಕಾ ಕಾಫಿ ಫಸಲು ಅಧಿಕ ಮಳೆಯಿಂದ ಕೊಳೆತು ಉದುರಿದ್ದರೆ, ರೋಬಸ್ಟಾ ಕಾಫಿಯೂ ಕೊಳೆ ರೋಗದ ಸಮಸ್ಯೆಗೆ ತುತ್ತಾಗಿದ್ದು, ಬೆಳೆಗಾರರು ಆತಂಕಕ್ಕೆ ಒಳಗಾಗಿದ್ದಾರೆ. ಹೀಗಿದ್ದೂ ಜಿಲ್ಲೆಯ ಶಾಸಕರಾಗಲಿ, ಉಸ್ತುವಾರಿ ಸಚಿವರಾಗಲಿ ಕಾಳಜಿ ವಹಿಸಿಲ್ಲವೆಂದು ಆರೋಪಿಸಿದ್ದಾರೆ. ಪ್ರಸ್ತುತ ಪರಿಸ್ಥಿಗಳ ನಡುವೆ ಬೆಳೆಗಾರಿಗೆ ತಲಾ 2 ಲಕ್ಷ ಪರಿಹಾರವನ್ನಾದರೂ ನೀಡಬೇಕೆಂದು ಆಗ್ರಹಿಸಿದ್ದಾರೆ.

ಬಿಜೆಪಿ ಅಧಿಕಾರದಲ್ಲಿದ್ದ ಅವಧಿಯಲ್ಲಿ ಸತತ 3 ವರ್ಷ ಬೆಳೆಗಾರರಿಗೆ ಪರಿಹಾರ ವಿತರಿಸಲಾಗಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ಪರಿಹಾರ ನೀಡಿಲ್ಲ. ಇದೀಗ ಬೆಳೆಹಾನಿ ಸಮೀಕ್ಷಾ ತಂಡವನ್ನು ಜಿಲ್ಲಾಡಳಿತ ರಚಿಸಿದೆ. ಇದು ಸಮೀಕ್ಷೆ ಮಾಡುವುದರ ಒಳಗಾಗಿ ಕೊಳೆತು ಉದುರಿ ಹೋಗಿರುವ ಕಾಫಿ ಕರಗಿ ಹೋಗಿರುತ್ತದೆ. ಆಗ ನಿಖರ ಮಾಹಿತಿ ದೊರೆಯುವುದಿಲ್ಲ. ಆದ್ದರಿಂದ ನಮ್ಮ ಪಕ್ಷದ ನಿಯೋಗ ಸಮೀಕ್ಷೆರ ನಡೆಸುತ್ತಿದ್ದು, ರಾಜ್ಯ, ಕೇಂದ್ರ ಸರ್ಕಾರಕ್ಕೆ ಸಮೀಕ್ಷೆ ವರದಿ ನೀಡಲಾಗುತ್ತದೆ ಎಂದು ವಿವರಿಸಿದ್ರು.

**ಬಿಜೆಪಿ ನಿಯೋಗದಿಂದ ಸಮೀಕ್ಷೆ**

**ಕೊಡಗಿನ ಬಿಜೆಪಿ ನಾಯಕರು ಸೋಮವಾರಪೇಟೆ ತಾಲ್ಲೂಕು ಹಾಗೂ ಮಡಿಕೇರಿ ತಾಲ್ಲೂಕಿನ ಹಲವಾರು ಗ್ರಾಮೀಣ ಭಾಗದ ಕಾಫಿ ತೋಟಗಳಿಗೆ ತೆರಳಿ ಕಾಫಿ ತೋಟಗಳ ಸರ್ವೇ ಕಾರ್ಯ ನಡೆಸಿದ್ದಾರೆ.**

# 3.53 ಕೋಟಿ ವೆಚ್ಚದ ಕಾಮಗಾರಿಗಳಿಗೆ ಚಾಲನೆ

• **ಉದಯವಾಹಿನಿ, ನಂಜನಗೂಡು:**

ತಾಲ್ಲೂಕಿನ ಹುಲ್ಲಹಳ್ಳಿ, ಬೆಳಲೆ, ಮೊಬ್ಬಹಳ್ಳಿ, ಗೀಕಹಳ್ಳಿ, ಕೋಡಿನರಸೀಪುರ, ದೇವನೂರು, ನಂಜನಹಳ್ಳಿ, ಗ್ರಾಮಗಳಲ್ಲಿ 3.53 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ತಿಳಿಸಿದರು. ತಾಲ್ಲೂಕಿನ ದೇವನೂರು ಗ್ರಾಮದಲ್ಲಿ ಮಂಗಳವಾರ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮೊಬ್ಬಹಳ್ಳಿ ಗ್ರಾಮದಲ್ಲಿ 15 ಲಕ್ಷ, ಬೆಳಲೆ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ಬೀದಿಯ ರಸ್ತೆ ಅಭಿವೃದ್ಧಿ, ಗೀಕಹಳ್ಳಿ ಗ್ರಾಮದಲ್ಲಿ 13 ಲಕ್ಷ ವೆಚ್ಚದಲ್ಲಿ ಬಸ್ ತಂಗುದಾಣ, ದೇವನೂರು ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ಬೀದಿಯ ಅಭಿವೃದ್ಧಿ, ಟಿಎಸ್‌ಪಿ ಯೋಜನೆಯಡಿ 20 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ, ಎಸ್‌ಇಪಿ ಯೋಜನೆಯಡಿ ಪರಿಶಿಷ್ಟ ಜಾತಿಯವರ ಬೀದಿಯಲ್ಲಿ ಸಿಸಿ ರಸ್ತೆ ನಿರ್ಮಾಣ ಸೇರಿದಂತೆ ಒಟ್ಟು 3.53 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಕ್ಷೇತ್ರಕ್ಕೆ ಕಳೆದ ಎರಡು ವರ್ಷಗಳಲ್ಲಿ 4.80 ಕೋಟಿ ಅನುದಾನ ಬಿಡುಗಡೆಗೊಂಡಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

**ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವೆ**

**ನಂಜನಗೂಡು ಜನರು ನೀಡಿರುವ ಜವಾಬ್ದಾರಿಯಂತೆ ಕ್ಷೇತ್ರದ ಅಭಿವೃದ್ಧಿಗೆ ಸದಾ ಶ್ರಮಿಸುತ್ತೇನೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು ತಾಲ್ಲೂಕಿನ ಹುಲ್ಲಹಳ್ಳಿ ಗ್ರಾಮದಲ್ಲಿ ಮಂಗಳವಾರ ಪಿಯುಸಿ ಕಾಲೇಜು ಕಟ್ಟಡ ನಿರ್ಮಾಣದ ಭೂಮಿ ಪೂಜೆ ನಡೆಸಿ ಮಾತನಾಡಿದರು. ಹುಲ್ಲಹಳ್ಳಿ ಗ್ರಾಮಕ್ಕೆ ಎರಡು ವರ್ಷಗಳಲ್ಲಿ ಹೆಚ್ಚಿನ ಅನುದಾನ ತಂದು ಅಭಿವೃದ್ಧಿ ನಡೆಸಲಾಗಿದೆ ಪಿಯುಸಿ ಕಾಲೇಜನ್ನು 1. 38 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಇದುವರೆಗೆ ಹುಲ್ಲಹಳ್ಳಿ ಗ್ರಾಮದಕ್ಕೆ 1.68 ಕೋಟಿ ವೆಚ್ಚ ಮಾಡಲಾಗಿದೆ ಎಂದರು.**


# ಸವಲತ್ತು ರೈತರಿಗೇ ಸಿಗಲಿ

• **ಉದಯವಾಹಿನಿ, ಪಿರಿಯಾಪಟ್ಟಣ**

ರಾಗಿ ಖರೀದಿ ಕೇಂದ್ರದಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದೆ. ರಾಗಿ ಬೆಳೆದ ರೈತರ ಖಾತೆಗೆ ಸರಿಯಾಗಿ ಹಣ ಜಮಾವಾಗುವಂತೆ ಕ್ರಮವಹಿಸಿ ಎಂದು ಪಶುಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು. ಪಟ್ಟಣದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಪ್ರಗತಿಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ರಾಗಿ ಖರೀದಿ ವ್ಯವಹಾರದಲ್ಲಿ ನಿಜವಾದ ರೈತರಿಗೆ ಈ ಸವಲತ್ತು ಸಿಗಬೇಕು. ಆದರೆ ಮಧ್ಯವರ್ತಿಗಳ ಹಾವಳಿಯಿಂದ ವ್ಯಾಪಾರಸ್ಥರಿಗೆ ಬೆಂಬಲ ಬೆಲೆಯ ಹಣ ದೊರಕುತ್ತಿದೆ. ಇದಕ್ಕೆ ಕಡಿವಾಣ ಹಾಕಿ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರವಿ ಅವರಿಗೆ ಸೂಚಿಸಿದರು. ಕೃಷಿ ಇಲಾಖೆಯ ಜೆಡಿ ಉತ್ತರಿಸಿ, ರೈತರು ಮಧ್ಯವರ್ತಿಗಳಿಗೆ ತಮ್ಮ ಖಾತೆಗಳ ವಿವರ ಮತ್ತು ಆಧಾರ್ ಕಾರ್ಡ್ ನೀಡಬಾರದು. ಹಾಗಾದಾಗ ರೈತರಿಗೆ ನೇರವಾಗಿ ಹಣ ತಲುಪುತ್ತದೆ. ರೈತರ ಸಹಕಾರ ಮುಖ್ಯ ಎಂದು ಸಮಜಾಯಿಶಿ ನೀಡಿದರು.

**ಪುರುಷರಿಗೆ ಸೀಟು ಮೀಸಲು:** ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯ ಪ್ರಯಾಣಿಸುವುದರಿಂದ ಪುರುಷರಿಗೆ ಬಸ್‌ಗಳಲ್ಲಿ ಸೀಟು ಸಿಗದೆ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಪುರುಷರಿಗೆ ಕನಿಷ್ಠ ಶೇ 60ರಷ್ಟು ಸೀಟುಗಳನ್ನು ಮೀಸಲಿರಿಸಿ ಎಂದು ಪುರುಷ ಪ್ರಯಾಣಿಕರು ಮನವಿ ಮಾಡಿಕೊಂಡಿದ್ದು,

**ಇದರ ಬಗ್ಗೆ ಚರ್ಚಿಸಿ:** 60x40ರ ಅನುಪಾತದಲ್ಲಿ ಆಸನದ ವ್ಯವಸ್ಥೆ ಮಾಡಿ ಈ ಬಗ್ಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರ ಬಳಿ ಮಾತನಾಡುತ್ತೇನೆ ಎಂದು ಕೆಎಸ್‌ಆರ್‌ಟಿಸಿ ವಿಭಾಗಿಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ಅವರಿಗೆ ಸೂಚಿಸಿದರು.



ಉದಯವಾಹಿನಿ ಚಿತ್ರ

**ಸಮನ್ವಯ ಅಗತ್ಯ:** ತಾಲ್ಲೂಕಿನ ಹಾಡಿಗಳಿಗೆ ವಿದ್ಯುತ್ ಸಂಪರ್ಕ ನೀಡುವ ಸಂಬಂದ 21 ಹಾಡಿಗಳಲ್ಲಿ ಕೆಲಸ ಆರಂಭಿಸಿದ್ದು, ಕೆಲವೆಡೆಗಳಲ್ಲಿ ಅರಣ್ಯ ಇಲಾಖೆ ತೊಂದರೆ ನೀಡುತ್ತಿದೆ. ಇದು ಸರಿಯಲ್ಲ ಹಾಡಿಜನರಿಗೆ ಸೌಕರ್ಯ ಕಲ್ಪಿಸುವ ಸರ್ಕಾರದ ನಡೆಗೆ ಸಹಕಾರಿಯಾಗಿ ವರ್ತಿಸಬೇಕು, ಗಿರಿಜನರಿಗೆ ಸೌಲಭ್ಯ ಒದಗಿಸಲು ಇಲಾಖೆಗಳು ಸಮನ್ವಯದಲ್ಲಿ ಕೆಲಸ ಮಾಡಬೇಕು ಎಂದು ಸೂಚಿಸಿದರು. ನಾಗರಹೊಳೆ ಬಫರ್ ಜೋನ್‌ನಲ್ಲಿ ಬರುವ ಗ್ರಾಮಗಳು, ಒತ್ತುವರಿಯಾಗಿರುವ ಪ್ರದೇಶಗಳಲ್ಲಿ ಕರಡಿ ಬೊಕ್ಕೆ ಗ್ರಾಮದಲ್ಲಿ ಅನಧಿಕೃತ ಮನೆಗಳಿಗೆ ಅವುಗಳಿಗೆ ಸೌಲಭ್ಯ ಕಲ್ಪಿಸಲು ಅರಣ್ಯ ಇಲಾಖೆಯ ಕಾಯ್ದೆ ಪ್ರಕಾರ ಕಾನೂನಿನಲ್ಲಿ ಅವಕಾಶವಿಲ್ಲ 'ಎಂದು ಡಿಸಿಎಫ್ ಎಂ. ಡಿ.ಫಯಾಜುದೀನ್ ಸಭೆಗೆ ತಿಳಿಸಿದರು. ಇದು ಒತ್ತುವರಿ ಪ್ರದೇಶ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು. ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಮಾತನಾಡಿ, ಈಗಾಗಲೇ ಮುಖ್ಯಮಂತ್ರಿ ನೇತೃತ್ವದಲ್ಲಿ ಸಭೆ ನಡೆದು ಕ್ರಮವಹಿಸಿದೆ. ಕರಡಿಬೊಕ್ಕೆ ಹಾಡಿಯ ಬಗ್ಗೆ ಸಭೆ ಕರೆದು ಸಮಸ್ಯೆಯನ್ನು ಸ್ಥಳೀಯರೊಂದಿಗೆ ಚರ್ಚಿಸಿ ತೀರ್ಮಾನಿಸಬೇಕು ಎಂದು ಸಚಿವರು ಉಪ ವಿಭಾಗಾಧಿಕಾರಿ ವಿಜಯ್‌ಕುಮಾರ್ ಅವರಿಗೆ ತಿಳಿಸಿದರು.

**ಇಇಗೆ ತರಾಟೆ:** ಮಾಲಂಗಿ ಗೋಮಾಳದಲ್ಲಿ ಸೇತುವೆ ಕುಸಿದು 2 ವರ್ಷ ಕಳೆದಿದ್ದರೂ ಅದರ ಕಾಮಗಾರಿ ಆಗಿಲ್ಲ. ನೀವು ಬಂದು ವರ್ಷ ಕಳೆದರು ತಾಲ್ಲೂಕಿನ ಕೆಲಸಗಳ ಕಡೆ ಗಮನಕೊಡುತ್ತಿಲ್ಲ ಎಂದು ಲೋಕೋಪಯೋಗಿ ಇಇ ಮುತ್ತುರಾಜ್ ಅವರನ್ನು ಸಚಿವರು ತರಾಟೆಗೆ ತೆಗೆದುಕೊಂಡರು. ಎಲ್ಲಾ ಇಲಾಖೆ ಅಧಿಕಾರಿಗಳು ಬಂದು ಏನು ಕೆಲಸ ಆಗಬೇಕು ಎನ್ನುತ್ತಿದ್ದಾರೆ ನೀವು ಮಾತ್ರ ನಿರ್ಲಕ್ಷ್ಯ ವಹಿಸುತ್ತಿದ್ದೀರಾ. ಕೆಲಸ ತ್ವರಿತಗೊಳಿಸಲು ಸೂಚಿಸಿದರು.

# ಅಳತೆ ಪ್ರಮಾಣ ಪತ್ರ ಪ್ರಕ್ರಿಯೆಗೆ ಮುಂದಾದ ಅಭಿವೃದ್ಧಿ ಪ್ರಾಧಿಕಾರ

### ಟೌನ್‌ಶಿಪ್‌ಗೆ ಭೂಸ್ವಾಧೀನ: ಮೊಬೈಲ್ ಆ್ಯಪ್ ಆಧಾರಿತ ಜಂಟಿ ಸರ್ವೆ: 90 ದಿನದಲ್ಲಿ 9000 ಎಕರೆ ಜೆಎಂಸಿ ಪ್ರಮಾಣ ಪತ್ರ

• **ಉದಯವಾಹಿನಿ, ರಾಮನಗರ**

ಭೂಸ್ವಾಧೀನ ಸಂದರ್ಭದಲ್ಲಿ ರೈತರಿಗೆ ಯಾವುದೇ ಕಿರಿಕಿರಿ ಆಗದಂತೆ ನಿಖರ ಮತ್ತು ಪಾರದರ್ಶಕ ಭೂ ಪರಿಹಾರ ನೀಡಲು ಮೊಬೈಲ್ ಆ್ಯಪ್ ಆಧಾರಿತ ಜಂಟಿ ಅಳತೆ ಪ್ರಮಾಣ ಪತ್ರ ಪ್ರಕ್ರಿಯೆಗೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮುಂದಾಗಿದೆ. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು ದಕ್ಷಿಣ ಜಿಲ್ಲೆ, ಬಿಡದಿ ಹೋಬಳಿ ಭೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 9 ಸಾವಿರ ಎಕರೆ ಭೂಮಿಯನ್ನು ಸ್ವಾಧೀನಕ್ಕೆ ತೆಗೆದುಕೊಳ್ಳುತ್ತಿದ್ದು, ಈಗಾಗಲೇ ಅಧಿಸೂಚನೆ ಹೊರಡಿಸಿದೆ. ಈ ಹಂತದಲ್ಲಿ ರಾಜ್ಯದಲ್ಲಿ ಇದೇ ಮೊದಲ ಬಾರಿ ಜಂಟಿ ಅಳತೆ ಪ್ರಮಾಣ ಪತ್ರ ಪ್ರಕ್ರಿಯೆಗೆ ತಂತ್ರಜ್ಞಾನದ ನೆರವಿನ ಮೂಲಕ ಮೊಬೈಲ್ ಆ್ಯಪ್ ಅನ್ನು ಅಭಿವೃದ್ಧಿಪಡಿಸಿದೆ. ಸೆ.11 ರಿಂದ 15 ತಂಡಗಳು ಜಿಪಿಎಸ್ ಆಧಾರಿತ ಮೊಬೈಲ್ ಆ್ಯಪ್ ಮೂಲಕ ಜಂಟಿ ಅಳತೆ ಮಾಡಲಿದೆ. 90 ದಿನಗಳಲ್ಲಿ ನಿಖರ, ಪಾರದರ್ಶಕ ಹಾಗೂ ದೋಷರಹಿತ ಜೆಎಂಸಿ ಪ್ರಮಾಣ ಪತ್ರವನ್ನು ರೈತರಿಗೆ ವಿತರಿಸುವ ಗುರಿ ಹಾಕಿಕೊಂಡಿದೆ.

**ಏನಿದು ಜೆಎಂಸಿ ಮೊಬೈಲ್ ಆ್ಯಪ್?:** ಈವರೆಗೆ ನಡೆದ ಎಲ್ಲಾ ಭೂ ಸ್ವಾಧೀನ ಪಕ್ರಿಯೆಗಳು ಕ್ಲಿಷ್ಟಕರವಾಗಿರುತ್ತಿತ್ತು. ಜಂಟಿ ಅಳತೆ ಪ್ರಮಾಣಪತ್ರ ಪ್ರಕ್ರಿಯನ್ನು ಮ್ಯಾನ್ಯುಯಲ್ ಮೂಲಕ ಮಾಡಲಾಗುತ್ತಿತ್ತು. ಈ ವೇಳೆ ಹಲವು ದೋಷಗಳು ಕಂಡು ಬರುತ್ತಿದ್ದವು. ಕೈಬರಹದ ವರದಿಗಳು ತಿದ್ದುಪಡಿಯಾಗುವ, ನಕಲಾಗುವ, ನಾಶವಾಗುತ್ತಿದ್ದ ಸಂದರ್ಭಗಳು ಎದುರಾಗುತ್ತಿದ್ದವು. ಇಲ್ಲಿ ರೈತರಿಗೆ ವಂಚನೆ ಆಗುತ್ತಿತ್ತು. ಭ್ರಷ್ಟಾಚಾರಕ್ಕೆ ಎಡೆ ಮಾಡಿಕೊಡುತ್ತಿತ್ತು. ನಿಖರ ಮತ್ತು ಪಾರದರ್ಶಕತೆಯ ಕೊರತೆಯಿಂದ ನೂರಾರು ಆಕ್ಷೇಪಣೆಗಳು ಸಲ್ಲಿಕೆಯಾಗುತ್ತಿದ್ದವು. ಒಟ್ಟಾರೆ ಭೂ ಪರಿಹಾರ ಪಡೆಯಲು ರೈತರು ಹೈರಾಣಾಗುತ್ತಿದ್ದರು.

ಇದೀಗ ನಡೆಯುತ್ತಿರುವ ಟೌನ್‌ಶಿಪ್ ಭೂ ಸ್ವಾಧೀನಕ್ಕೆ ಒಳಪಡುವ ಭೂಮಿಯನ್ನು ಈಗಾಗಲೇ ಸ್ಯಾಟ್‌ಲೈಟ್ ಸರ್ವೆ ಮಾಡಲಾಗಿದೆ. ಭೂ ದಾಖಲೆಗಳನ್ನು ಡಿಜಿಟಲೀಕರಿಸಿ ಅಭಿವೃದ್ಧಿಪಡಿಸಲಾದ ಮೊಬೈಲ್ ಆ್ಯಪ್‌ನಲ್ಲಿ ದಾಖಲಿಸಲಾಗಿದೆ. ಜಿಪಿಎಸ್ ಆಧಾರಿತ ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾಗಲು ಸಾಧ್ಯವಿಲ್ಲ. ಸಿಬ್ಬಂದಿಗೆ ಬಾಡಿ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದ್ದು. ಪಾರದರ್ಶಕತೆ ಕಾಯ್ದುಕೊಳ್ಳಲು ಸಾಧ್ಯವಾಗಲಿದೆ.



ಉದಯವಾಹಿನಿ ಚಿತ್ರ

**ಪಾರದರ್ಶಕ ಭೂ ಪರಿಹಾರ**

**ನಿಖರ, ಪಾರದರ್ಶಕ ಜಂಟಿ ಅಳತೆ ಮಾಡಲು ಇದೇ ಮೊದಲ ಬಾರಿಗೆ ಮೊಬೈಲ್ ಆ್ಯಪ್ ಆಧಾರಿತ ವ್ಯವಸ್ಥೆ ಅಳವಡಿಸಿಕೊಳ್ಳಲಾಗಿದೆ. ಇದರಿಂದ ದೋಷ ರಹಿತ ಭೂ ಪರಿಹಾರ ನಿಗದಿ ಸಾಧ್ಯವಾಗಲಿದೆ. ಇದೊಂದು ಮಾದರಿ ವ್ಯವಸ್ಥೆಯಾಗಿದ್ದು, 9 ಸಾವಿರ ಎಕರೆ ಭೂಮಿಗೆ 90 ದಿನದೊಳಗೆ ಜೆಎಂಸಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸುತ್ತೇವೆ.**

**-ಗಾಣಕಲ್ ನಟರಾಜು , ಅಧ್ಯಕ್ಷರು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ**

**ಟ್ಯಾಂಪರಿಂಗ್ ಮಾಡಲು ಸಾಧ್ಯವಿಲ್ಲ**

**ಆ್ಯಪ್‌ನಲ್ಲಿ ಜಿಪಿಎಸ್ ವಿಡಿಯೋ, ಫೋಟೋ ಕ್ಯಾಪ್ಚರ್ ಮೂಲಕ ರೈತರ ಜಮೀನಿನ ನಿಖರ ವಿಸ್ತೀರ್ಣ, ಯಾವ ಯಾವ ಮರ ಗಿಡಗಳು ಎಷ್ಟೆಷ್ಟಿವೆ ತೋಟದ ಮನೆ ಹಾಗೂ ಇನ್ನಿತರ ನಿರ್ಮಾಣ ಅಳತೆ ಮತ್ತು ಮೌಲ್ಯಮಾಪನ, ಬೋರ್‌ವೆಲ್ ಇನ್ನಿತರ ಆಸ್ತಿಗಳ ಮೌಲ್ಯಮಾಪನ ವ್ಯವಸ್ಥೆಯನ್ನು ನಿಖರವಾಗಿ ಮಾಡಲಾಗುತ್ತದೆ. ಅಲ್ಲದೇ ಸ್ಥಳದಲ್ಲೇ ಭೂ ಮಾಪನಾ ಸಿಬ್ಬಂದಿ, ಕಂದಾಯ, ಕೃಷಿ, ತೋಟಗಾರಿಕೆ, ರೇಷ್ಮೆ ಸಂಬಂಧಿಸಿದ ಇನ್ನಿತರ ಇಲಾಖೆಗಳ ಸಿಬ್ಬಂದಿ, ಭೂ ಮಾಲೀಕನ ಅಧಿಕೃತ ಒಪ್ಪಿಗೆಯನ್ನು ಆ್ಯಪ್ ಮೂಲಕವೇ ಪಡೆಯಲಾಗುವುದು. ನಂತರ ಇದನ್ನು ಟ್ಯಾಂಪರಿಂಗ್ ಮಾಡಲು ಸಾಧ್ಯವಿಲ್ಲ.**

## ಮಿನಿ ನ್ಯೂಸ್

### ಜೈಲು ಅಧಿಕಾರಿ, ಸಿಬ್ಬಂದಿ ಮೇಲೆ ಹಲ್ಲೆ ಬಾಂಬೆ ಸಲೀಂ ಬಳ್ಳಾರಿ ಜೈಲಿಗೆ ಶಿಫ್ಟ್

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಇಲ್ಲಿನ ಜಿಲ್ಲಾ ಕಾರಾಗೃಹದಿಂದ ಕುಖ್ಯಾತ ಕಿಡ್ನಾಪರ್ ದರೋಡೆಕೋರ ಬಾಂಬೆ ಸಲೀಂ ಹಾಗೂ ಸಹಚರರಿಂದ ಜೈಲು ಅಧಿಕಾರಿಗಳು ಹಾಗೂ ಸಿಬ್ಬಂದಿ ಮೇಲೆ ಹಲ್ಲೆ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಂಬೆ ಸಲೀಂ ಸೇರಿ 9 ಮಂದಿಯನ್ನ ರಾಜ್ಯದ ಬೇರೆ ಬೇರೆ ಜೈಲುಗಳಿಗೆ ರಾತ್ರೋರಾತ್ರಿ ಶಿಫ್ಟ್ ಮಾಡಲಾಗಿದೆ. ಚಿಕ್ಕಬಳ್ಳಾಪುರ ಜೈಲಿನಿಂದ ಬಳ್ಳಾರಿಯ ಜೈಲಿಗೆ ಬಾಂಬೆ ಸಲೀಂ ನನ್ನ ಶಿಫ್ಟ್ ಮಾಡಲಾಗಿದೆ. ಅಂದಹಾಗೆ ಉಪಹಾರ ನೀಡದೆ ನ್ಯಾಯಾಲಯಕ್ಕೆ ಕಳುಹಿಸಿದ ಆರೋಪ ಮಾಡಿ ಜೈಲು ಮುಖ್ಯ ವೀಕ್ಷಕ ಶಶಿಕುಮಾರ್ ಮೇಲೆ ಹಲ್ಲೆ ಮಾಡಿ, ಬಾಡಿ ವಾರ್ನ್ ಕ್ಯಾಮೆರಾ ಹೊಡೆದು ಹಾಕಿದ್ರು. ಈ ವೇಳೆ ಅಡ್ಡ ಬಂದ ಜೈಲು ಸಹಾಯಕ ಅಧಿಕಾರಿ ಬಳಿ ದಾಸ್ತಾನು ಕೊಠಡಿ ಬೀಗ ಕಸಿದುಕೊಂಡು ಮಲ್ಲಿಕಾರ್ಜುನ್ ರನ್ನ ಕೊಠಡಿಯಲ್ಲಿ ಕೂಡಿ ಹಾಕಿ ಹಲ್ಲೆ ಮಾಡಿದ್ರು.

ನಂತರ ಪಾಕಶಾಲೆಯಲ್ಲಿನ ಅಡುಗೆ ಸಿಲಿಂಡರ್, ಅಗ್ನಿ ನಿರೋಧಕ ಸಿಲಿಂಡರ್‌ಗಳನ್ನ ತಂದು ಬಿಸಾಡಿದ್ದರು. ಇವರ ಗೂಂಡಾಗಿರಿ ಮಾಹಿತಿ ಮೇರೆಗೆ ಸ್ವತಃ ಕಾರಾಗೃಹ ಇಲಾಖೆ ಡಿಜಿಪಿ ದಿವ್ಯ ಶ್ರೀ ಚಿಕ್ಕಬಳ್ಳಾಪುರ ಜೈಲಿಗೆ ಆಗಮಿಸಿ ವಿಚಾರಣೆ ಸಹ ನಡೆಸಿದ್ರು. ಘಟನೆ ಸಂಬಂಧ ಚಿಕ್ಕಬಳ್ಳಾಪುರ ಗ್ರಾಮಾಂತರ ಠಾಣೆಯಲ್ಲಿ ಕುಖ್ಯಾತ ರೌಡಿ ಹಾಗೂ ಕಿಡ್ನಾಪರ್, ಮೊಹಮದ್ ಖಲೀಲ್ ಉಲ್ಲಾ ಆಲಿಯಾಸ್ ಬಾಂಬೆ ಸಲೀಂ, ಸಹಚರರಾದ ಆಕಾಶ್, ಸಯ್ಯದ್ ಉಸ್ಮಾನ್, ದಿಲೀಪ್, ಮಹಾದೇವ, ಅಂಬರೀಶ, ವೇಣುಗೋಪಾಲ, ರೇವಂತ್, ಮುಬಾರಕ್ ಷರೀಫ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಈ 9 ಮಂದಿ ಖೈದಿಗಳನ್ನ ರಾತ್ರೋರಾತ್ರಿ ರಾಜ್ಯದ ನಾನಾ ಕಡೆ ಇತರೆ ಜೈಲಿಗಳಿಗೆ ಶಿಫ್ಟ್ ಮಾಡಲಾಗಿದೆ.

### ಸೆ.12ರ ನಂತರ ಮದ್ದೂರಿಗೆ ಹೆಚ್.ಡಿ.ಕುಮಾರಸ್ವಾಮಿ

• **ಉದಯವಾಹಿನಿ, ಮಂಡ್ಯ**

ಸೆ.12ರ ನಂತರ ಕೇಂದ್ರ ಸಚಿವ, ಮಂಡ್ಯ ಸಂಸದ ಹೆಚ್‌ಡಿ ಕುಮಾರಸ್ವಾಮಿ ಅವರು ಮದ್ದೂರಿಗೆ ಭೇಟಿ ನೀಡಲಿದ್ದಾರೆ. ಸದ್ಯ ಹೆಚ್‌ಡಿ ಕುಮಾರಸ್ವಾಮಿ ಅವರು ದೆಹಲಿಯಲ್ಲಿದ್ದಾರೆ. ಶುಕ್ರವಾರ (ಸೆ.12) ಉಪರಾಷ್ಟ್ರಪತಿಗಳ ಪ್ರಮಾಣವಚನ ಸ್ವೀಕಾರ ಕಾರ್ಯಕ್ರಮ ನಡೆಯಲಿದೆ. ಈ ಹಿನ್ನೆಲೆ ಕಾರ್ಯಕ್ರಮ ಮುಗಿಸಿಕೊಂಡು ಸೆ.12ರಂದೇ ಬೆಂಗಳೂರಿಗೆ ವಾಪಸ್ ಆಗಲಿದ್ದಾರೆ. ಬಳಿಕ ಮದ್ದೂರಿಗೆ ಭೇಟಿನೀಡಲಿದ್ದಾರೆ ಎಂದು ತಿಳಿದುಬಂದಿದೆ. ಮದ್ದೂರಿನಲ್ಲಿ ಗಣೇಶ ಮೆರವಣಿಗೆ ವೇಳೆ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿನಿತ್ಯ ಎಸ್ಪಿ, ಡಿಸಿಯಿಂದ ಮಾಹಿತಿ ಪಡೆಯುತ್ತಿದ್ದಾರೆ.

### ಸೋಲೂರು ಸೇರ್ಪಡೆಗೆ ಬೆಳಗುಂಬ ಗ್ರಾ.ಪಂ ವಿರೋಧ

• **ಉದಯವಾಹಿನಿ, ಮಾಗಡಿ**

ಸೋಲೂರು ಹೋಬಳಿಯನ್ನು ನೆಲಮಂಗಲ ತಾಲ್ಲೂಕಿಗೆ ಸೇರಿಸುವ ವಿಚಾರವಾಗಿ ಬೆಳಗುಂಬ ಗ್ರಾಮ ಪಂಚಾಯಿತಿ ವಿಶೇಷ ತುರ್ತು ಸಭೆಯಲ್ಲಿ ಯಾವುದೇ ಕಾರಣಕ್ಕೂ ಸೇರ್ಪಡೆ ಮಾಡದಂತೆ ತೀರ್ಮಾನ ಕೈಗೊಳ್ಳಲಾಯಿತು. ವಿಶೇಷ ಸಭೆಯನ್ನು ಗ್ರಾ.ಪಂ.ಅಧ್ಯಕ್ಷ ಎಂ.ಸಿ.ಚಂದ್ರಕಲಾ ವೆಂಕಟೇಶ್ ನೇತೃತ್ವದಲ್ಲಿ ತೀರ್ಮಾನ ಕೈಗೊಳ್ಳಲಾಯಿತು. ಬಂಟರಕುಪ್ಪೆ, ತೊರೆಚೇನಹಳ್ಳಿ, ತೊರೆರಾಂಪುರ, ಬಂಟರ ಕುಪ್ಪೆ ಕಾಲೊನಿ ಗ್ರಾಮಗಳು ಬೆಳಗುಂಬ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಟ್ಟಿವೆ. ಭೌಗೋಳಿಕವಾಗಿ ಮಾಗಡಿ ಕಸಬಾ ಹೋಬಳಿಗೆ ಹೊಂದಿಕೊಂಡಿದೆ. ಇಲ್ಲಿನ ಸಾರ್ವಜನಿಕರು ಪ್ರತಿಯೊಂದು ಕೆಲಸಕ್ಕೂ 7ಕಿ.ಮೀ ದೂರದಲ್ಲಿರುವ ಮಾಗಡಿ ತಾಲ್ಲೂಕಿಗೆ ದಿನನಿತ್ಯ ಭೇಟಿ ಕೊಡಬೇಕಾಗಿದೆ. 27ಕಿ.ಮೀ ದೂರವಿರುವ ನೆಲಮಂಗಲಕ್ಕೆ ಹೋಗುವುದು ಬಹಳ ಕಷ್ಟಕರ. ಯಾವುದೇ ಕಾರಣಕ್ಕೂ ಈ ಗ್ರಾಮಗಳನ್ನು ಬೆಳಗುಂಬ ಗ್ರಾಮ ಪಂಚಾಯಿತಿಯಿಂದ ಬೇರ್ಪಡಿಸಬಾರದು ಎಂದು ಎಲ್ಲಾ ಸದಸ್ಯರು ಸರ್ವಾನು ಮತದಿಂದ ತೀರ್ಮಾನಿಸಿದರು.

ರಾಜಕೀಯವಾಗಿ ಮೇಲುಗೈ ಸಾಧಿಸಲು ನೆಲಮಂಗಲ ಶಾಸಕ ಶ್ರೀನಿವಾಸ್ ಅವರು ಕೆಲವು ಹಿಂಬಾಲಕರ ಮಾತು ಕೇಳಿ ಸಚಿವ ಸಂಪುಟದಲ್ಲಿ ಸೇರ್ಪಡೆ ಮಾಡಲು ಒಪ್ಪಿಗೆ ಕೊಡಿಸಿದ್ದಾರೆ. ಆದರೆ, ಈ ಭಾಗದ ರೈತರಿಗೆ ಎಷ್ಟು ಅನಾನುಕುಲವಾಗುತ್ತದೆ ಎಂಬುದನ್ನು ಮನವರಿಕೆ ಮಾಡಿಕೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿದಿನವೂ ತಾಲ್ಲೂಕು ಕಚೇರಿ ಹಾಗೂ ವಿವಿಧ ಸರ್ಕಾರಿ ಕಚೇರಿಗಳಿಗೆ ನೆಲಮಂಗಲಕ್ಕೆ ಎರಡು ಟೋಲ್ ಪಾವತಿಸಿ ಹೋಗಬೇಕು. ಅಲ್ಲದೆ, ಸರಿಯಾದ ಬಸ್ ವ್ಯವಸ್ಥೆಯೂ ಇಲ್ಲ. ಈ ವಿಚಾರವಾಗಿ ಜಿಲ್ಲಾಧಿಕಾರಿಗೂ ಸಭೆ ತೀರ್ಮಾನದ ಬಗ್ಗೆ ತಿಳಿಸಿ ಸೇರ್ಪಡೆಗೆ ತೀವ್ರ ವಿರೋಧ ವ್ಯಕ್ತಪಡಿಸಲಾಗುವುದು ಎಂದು ಅಧ್ಯಕ್ಷೆ ಚಂದ್ರಕಲಾ ಸಭೆಯಲ್ಲಿ ತಿಳಿಸಿದರು.

### ಆರು ತಿಂಗಳಲ್ಲಿ ಪ್ರಧಾನಿ ಬದಲಾವಣೆ ಸಚಿವ ಸಂತೋಷ್ ಲಾಡ್

• **ಉದಯವಾಹಿನಿ, ಕೋಲಾರ**

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಆಗಲಿದೆಯೇ ಎಂಬ ಪ್ರಶ್ನೆಗೆ, ಇನ್ನು ಆರು ತಿಂಗಳಲ್ಲಿ ಪ್ರಧಾನಿಯ ಬದಲಾವಣೆ ಆಗಲಿದೆ ನೋಡುತ್ತಿರಿ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದರು. ನಗರದ ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿ, ಪಾಕಿಸ್ತಾನಕ್ಕೆ ನೀರು ಕೊಡಲ್ಲ, ಒಡನಾಟ ಬೇಡ, ಸಿನಿಮಾ ಬೇಡ ಎನ್ನುವವರು ಅವರ ಎದುರು ಕ್ರಿಕೆಟ್ ಆಡಲು ಒಪ್ಪಿರುವುದು ಏಕೆ ಎಂದು ಪ್ರಶ್ನಿಸಿದರು. ಹಿಂದೂ, ಮುಸ್ಲಿಂ ಗಲಾಟೆ ಬಿಟ್ಟರೆ ಬಿಜೆಪಿ ಏನೂ ಮಾಡುತ್ತಿಲ್ಲ. ಪದೇಪದೇ ಹಿಂದುತ್ವ ಎನ್ನುವವರು ಮೊದಲಿಗೆ ಅಂತರ್ಜಾತಿ ವಿವಾಹ ಮಾಡಿಸಲಿ, ಬಿಜೆಪಿ ಮುಖಂಡರು ಬಡವರಿಗೆ ತಮ್ಮ ಆಸ್ತಿ ಕೊಡಲಿ ಎಂದು ತಿರುಗೇಟು ನೀಡಿದರು.



ಮದ್ದೂರಿನಲ್ಲಿ ಕಲ್ಲು ತೂರಾಟ ನಡೆಸಿದವರಿಗೆ ಕಾನೂನು ಪ್ರಕಾರ ಶಿಕ್ಷೆಯಾಗಲಿ. ಆದರೆ, ಬಿಜೆಪಿ ನಾಯಕರ ಮಕ್ಕಳು ಯಾವ ಪ್ರತಿಭಟನೆಗೆ ಬಂದಿದ್ದಾರೆ? ದೇವಸ್ಥಾನಗಳನ್ನು ಕಟ್ಟಿಸಿದ್ದು ನಾವು. ಬಿಜೆಪಿಯವರು ಏನು ಮಾಡಿದ್ದಾರೆ ಎಂದು ಕೇಳಿದರು.

ಭದ್ರಾವತಿ ಕಾಂಗ್ರೆಸ್ ಶಾಸಕ ಸಂಗಮೇಶ್ ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟುವುದಾಗಿ ನೀಡಿರುವ ಹೇಳಿಕೆ ಕುರಿತು, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು, ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟಬೇಕು ಎಂದಿದ್ದರು. ಅವರ ಬಗ್ಗೆ ನನಗೆ ಗೌರವ ಇದೆ. ನಮ್ಮ ಶಾಸಕ ಆ ರೀತಿ ಮಾತನಾಡಬಾರದೇ' ಎಂದು ಪ್ರಶ್ನಿಸಿದರು. ದೇಶದಲ್ಲಿ ಈಗ ಇರುವುದು ಕರ್ನಾಟಕ ಮಾಡೆಲ್ ಮಾತ್ರ. ಗುಜರಾತ್ ಮಾಡೆಲ್ ಇಲ್ಲ. ಇಡೀ ದೇಶದಲ್ಲಿ ಕರ್ನಾಟಕ ರಾಜ್ಯ ಆರ್ಥಿಕವಾಗಿ ನಂಬರ್ 1 ಸ್ಥಾನದಲ್ಲಿದೆ. ಗ್ಯಾರಂಟಿಗೆ ವರ್ಷಕ್ಕೆ 60 ಸಾವಿರ ಕೋಟಿ ನೀಡಿ ಅಭಿವೃದ್ಧಿಗೆ 83 ಸಾವಿರ ಕೋಟಿ ನೀಡಲಾಗುತ್ತಿದೆ ಎಂದರು.

ಅಂತರಾಳದಿಂದ.. EDITORIAL

# ಕೋಮು ರಾಜಕೀಯದ ವಿರುದ್ಧ ಸಾಮರಸ್ಯದ ಸಹಪಯಣ ಅಗತ್ಯ



ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣದಲ್ಲಿ ಎರಡು ಗುಂಪುಗಳು ಪರಸ್ಪರ ಕಲ್ಲುತೂರಾಟ ನಡೆಸಿದ ಘಟನೆ ಕೋಮು ಉದ್ವಿಗ್ನಕ್ಕೆ ಕಾರಣವಾಗಿದೆ. ಪರಿಸ್ಥಿತಿ ತಿಳಿಗೊಳಿಸಿ, ಎಲ್ಲರನ್ನೂ ಒಂದುಗೂಡಿಸಬಹುದಾಗಿದ್ದ ಕಾನೂನಾತ್ಮಕ ಕ್ರಮವನ್ನು ಜಿಲ್ಲಾಡಳಿತ ಕೈಗೊಂಡಿತ್ತು. ಅಷ್ಟರಲ್ಲೇ ರಾಜಕೀಯ ನಾಯಕರು ಮದ್ದೂರಿಗೆ ನುಗ್ಗಿದ್ದರಿಂದಾಗಿ ಪರಿಸ್ಥಿತಿ ಉಲ್ಬಣಗೊಂಡಿತು. ಮದ್ದೂರು ಪಟ್ಟಣದ ಸಿದ್ದಾರ್ಥ ನಗರದ ಐದನೇ ತಿರುವಿನಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ಸೆಪ್ಟೆಂಬರ್ 8ರ ರಾತ್ರಿ ರಾಮ್ ರಹೀಂ ನಗರದ ಮಸೀದಿ ಬಳಿ ಸಾಗುತ್ತಿದ್ದಾಗ, ಅಲ್ಲಿದ್ದ ದೀಪವನ್ನು ನಿಗೂಢ ವ್ಯಕ್ತಿಗಳು ಆರಿಸಿದ್ದಾರೆ. ಆ ವೇಳೆ, ಮೆರವಣಿಗೆ ಮೇಲೆ ಕಲ್ಲು ತೂರಲಾಗಿದೆ. ಮೆರವಣಿಗೆಯಲ್ಲಿದ್ದವರು ಅದಕ್ಕೆ ಪ್ರತಿಯಾಗಿ ಕಲ್ಲುತೂರಾಟ ನಡೆಸಿದ್ದಾರೆ. ಎರಡು ಗುಂಪುಗಳ ಮಧ್ಯೆ ಘರ್ಷಣೆ ನಡೆದಿದೆ. ಘಟನೆಯಲ್ಲಿ ನಾಲ್ವರು ಪೊಲೀಸರು ಸೇರಿದಂತೆ ಒಟ್ಟು 8 ಮಂದಿಗೆ ಗಾಯಗಳಾಗಿವೆ. ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸರು ನಿಷೇಧಾಜ್ಞೆ ಜಾರಿಗೊಳಿಸಿದ್ದರು. ಸೆಪ್ಟೆಂಬರ್ 9ರ ಬೆಳಿಗ್ಗೆಯೇ ಮದ್ದೂರು ಪಟ್ಟಣದಲ್ಲಿ ಸೇರಿದ್ದ ಸಾವಿರಾರು ಮಂದಿ ಪ್ರತಿಭಟನೆಗೆ ಮುಂದಾಗಿದ್ದಾರೆ. ಮಸೀದಿಯ ಮುಂದೆ ಪ್ರತಿಭಟನೆ ನಡೆಸಿದ ಕೆಲವರು ಕಲ್ಲುತೂರಾಟ ನಡೆಸಿದ್ದಾರೆ. ಪರಿಸ್ಥಿತಿ ನಿಭಾಯಿಸಲು ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿದ್ದಾರೆ. ಇದು ಅಲ್ಲಿಗೇ ಮುಕ್ತಾಯವಾಗಲು ಸಾಧ್ಯವಿತ್ತು. ಆದರೆ, ಅಕ್ಕಪಕ್ಕದ ಜಿಲ್ಲೆಯ ಬಿಜೆಪಿ, ಜೆಡಿಎಸ್ ನಾಯಕರು ಮದ್ದೂರಿಗೆ ದೌಡಾಯಿಸಿ ಪ್ರಚೋದನಾಕಾರಿ ಭಾಷಣ ಮಾಡಿದ್ದಲ್ಲದೇ, ಮದ್ದೂರು ಘಟನೆಯನ್ನು ರಾಜಕೀಯಗೊಳಿಸಲು ಮುಂದಾಗಿದ್ದಾರೆ. ವಿವಿಧ ಹೋರಾಟ, ಸೌಹಾರ್ದಕ್ಕೆ ಹೆಸರಾಗಿದ್ದ ಮಂಡ್ಯ ಎಂದೂ ಕೋಮು ಸೂಕ್ಷ್ಮ ಜಿಲ್ಲೆ ಎಂಬ ಹಣೆಪಟ್ಟಿ ಕಟ್ಟಿಕೊಂಡಿರಲಿಲ್ಲ. ಉರೀಗೌಡ ನಂಜೇಗೌಡ ಎಂಬ ಸುಳ್ಳು ಪಾತ್ರ ಸೃಷ್ಟಿಯ ಹುಸಿ ಸಂಕಥನದಿಂದ ಮಂಡ್ಯದ ಚಿತ್ರಣವೇ ಬದಲಾಗತೊಡಗಿತು.

**ವರ್ಷದಿಂದ ವರ್ಷಕ್ಕೆ ಮಂಡ್ಯ ಜಿಲ್ಲೆಯ ಒಂದೊಂದೇ ತಾಲ್ಲೂಕಿಗೆ ಕೋಮು ಕಿಚ್ಚು ಪಸರಿಸುತ್ತಿರುವುದು ಜಿಲ್ಲೆಯ ಅಭಿವೃದ್ಧಿಗೆ ಅಹಿತಕರ ಬೆಳವಣಿಗೆ. ಹಿಂದಿನ ವರ್ಷಗಳ ಕಹಿ ಘಟನೆಗಳನ್ನು ನೆನಪಿಟ್ಟುಕೊಂಡು, ಎಚ್ಚರ ವಹಿಸಬೇಕಾದ ಜಿಲ್ಲಾ ಪೊಲೀಸ್ ಇಲಾಖೆ, ಈ ಬಾರಿ ಗಣೇಶ ಮೂರ್ತಿ ವಿಸರ್ಜನೆಯ ವೇಳೆ ಸಾಕಷ್ಟು ಜಾಗ್ರತವಾಗಿರಬೇಕಾಗಿತ್ತು. ಘಟನೆ ಬಳಿಕ. ಮದ್ದೂರಿಗೆ ಭೇಟಿ ನೀಡಿದ್ದ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಅನ್ಯ ಜಿಲ್ಲೆಗಳಿಂದ ಬಂದ ಕೆಲವರಿಂದ ಈ ಕೃತ್ಯ ನಡೆದಿದೆ ಎಂದು ಸಂಶಯ ವ್ಯಕ್ತಪಡಿಸಿದ್ದಾರೆ.**

ಬೇರೆ ಜಿಲ್ಲೆಗಳ ಕೋಮುವಾದಿ ನಾಯಕರು ಅಲ್ಲಿಗೆ ಭೇಟಿ ನೀಡಿ, ಪ್ರಚೋದನಾಕಾರಿ ಭಾಷಣ ಮಾಡ ತೊಡಗಿದ ಬಳಿಕ, ಕೋಮು ಸಂಘರ್ಷದ ಬೆಳೆ ತೆಗೆಯುವ ನೆಲ ಹದಗೊಳ್ಳತೊಡಗಿತು. ಕಳೆದ ವರ್ಷ ನಾಗಮಂಗಲ ಪಟ್ಟಣದಲ್ಲಿ ಗಣೇಶ ಮೂರ್ತಿ ವಿಸರ್ಜನೆ ವೇಳೆ ಮಸೀದಿ ಬಳಿಯೇ ಕಲ್ಲುತೂರಾಟ ನಡೆದು, ಹತ್ತಾರು ಅಂಗಡಿಗಳಿಗೆ ಬೆಂಕಿ ಹಚ್ಚಲಾಗಿತ್ತು.

ತಮ್ಮ ಸ್ವಕ್ಷೇತ್ರ ನಾಗಮಂಗಲದ ಗಲಭೆ ಬಗ್ಗೆಯೂ ಅವರು ಹೀಗೆಯೇ ಪ್ರತಿಕ್ರಿಯಿಸಿದ್ದರು. ಸಚಿವರಿಗೆ ಗೊತ್ತಿರುವ ಸಂಗತಿ ಜಿಲ್ಲಾಡಳಿತಕ್ಕೆ ಗೊತ್ತಾಗಲಿಲ್ಲವೇ ಅಥವಾ ಗೊತ್ತಾಗದಷ್ಟು ಪೊಲೀಸ್ ಇಲಾಖೆ ಜಾಗ್ರತ ಸ್ಥಿತಿಯನ್ನೇ ಕಳೆದುಕೊಂಡಿದೆಯೇ ಎಂಬ ಪ್ರಶ್ನೆ ಮುನ್ನೆಲೆಗೆ ಬರುತ್ತದೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆ ವಿಫಲವಾಗಿರುವುದನ್ನು ಈ ಪ್ರಕರಣ ತೋರಿಸುತ್ತದೆ. ಇಂತಹ ಸಂಘರ್ಷಗಳಿಂದ ಹಾನಿ ಅನುಭವಿಸುವವರು ನಿತ್ಯದ ಅನ್ನ ದುಡಿದು ತಿನ್ನುವ ಶ್ರೀಸಾಮಾನ್ಯರು. ಘಟನೆ ಮರುಕಳಿಸದಂತೆ ಎಚ್ಚರವಹಿಸಬೇಕಾದುದು ಪೊಲೀಸ್ ಇಲಾಖೆಯ ಆದ್ಯ ಕರ್ತವ್ಯ. ಸ್ಥಳೀಯವಾಗಿ ಸಂಭವಿಸುವ ಘಟನೆಗಳನ್ನು ತಮ್ಮ ರಾಜಕೀಯ ಅನುಕೂಲಕ್ಕೆ, ತಮ್ಮ ನೆಲೆ ವಿಸ್ತರಿಸಿಕೊಳ್ಳಲು ಬಳಸಿಕೊಳ್ಳುವ ರಾಜಕೀಯ ಶಕ್ತಿಗಳು ಹಿಂದೆಂದಿಗಿಂತಲೂ ಈಗ ಪ್ರಬಲವಾಗಿದೆ. ಹೀಗಾಗಿಯೇ, ಇದನ್ನು ಜಾಗತಿಕ ವಿದ್ಯಮಾನವೆಂಬಂತೆ ಬಿಂಬಿಸಲು ಬಿಜೆಪಿ ನಾಯಕರು ಯತ್ನಿಸಿದ್ದಾರೆ. ಇದು ಸಮರ್ಥನೀಯವಲ್ಲ. ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ನಾಯಕರು ತಮ್ಮ ಪಕ್ಷದ ಹಿತಾಸಕ್ತಿಗಾಗಿ ಇಂತಹ ಪ್ರಕರಣಗಳನ್ನು ಬಳಸಿಕೊಳ್ಳುವ ಕುತ್ಸಿತ ರಾಜಕಾರಣವನ್ನು ಬಿಡಬೇಕು. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಪೂರ್ಣ ಹೊಣೆ ಹಾಗೂ ಸ್ವಾತಂತ್ರ್ಯವನ್ನು ಜಿಲ್ಲಾಡಳಿತಕ್ಕೆ ನೀಡಬೇಕು.

ಕಲ್ಲು ತೂರಿ, ಸಂಘರ್ಷಕ್ಕೆ ಕಾರಣವಾಗುವರು, ಧರ್ಮದ ಹೆಸರಿನಲ್ಲಿ ಮತ್ತೊಂದು ಸಮುದಾಯವನ್ನು ಹೀನಾಯವಾಗಿ ಬೈಯುವವರು, ಗಲಭೆಯ ಸಂಚು ನಡೆಸುವ ಯಾರೊಬ್ಬರೂ ಧರ್ಮದ ಶ್ರದ್ಧಾಳುಗಳಾಗಿರಲು ಸಾಧ್ಯವಿಲ್ಲ. ಅವರದು ರಾಜಕೀಯ ಸ್ವಾರ್ಥವಷ್ಟೆ. ಅಂತಹವರನ್ನು ಕಾನೂನಡಿ ತಂದು ಹೆಡೆಮುರಿ ಕಟ್ಟಿದರಷ್ಟೇ ಜನರಿಗೆ ನೆಮ್ಮದಿ ಲಭಿಸಿ. ರಾಜ್ಯ ಪ್ರಗತಿಯತ್ತ ಮುನ್ನಡೆಯಲು ಸಾಧ್ಯ. ಈ ನಿಟ್ಟಿನತ್ತ ಸರ್ಕಾರ ದಿಟ್ಟ ಹೆಜ್ಜೆ ಇಡಬೇಕಿದೆ. ಸಂಘರ್ಷವನ್ನು ಉತ್ತುಂಗಕ್ಕೆ ಒಯ್ಯುವ ಪ್ರಯತ್ನದ ಬದಲು, ಪರಿಸ್ಥಿತಿ ತಿಳಿಗೊಳಿಸುವತ್ತ ಧಾರ್ಮಿಕ, ರಾಜಕೀಯ ನಾಯಕರು ತಮ್ಮ ಶ್ರಮ ಹಾಕಬೇಕಿರುವುದು ಇಂದಿನ ತುರ್ತು.

# ರಾಮಾಯಣ



## ಪಂಚವಟಿಯಲ್ಲಿ ಶ್ರೀರಾಮನ ವಾಸ

• ಹಿಂದಿನ ಸಂಚಿಕೆಯಿಂದ **119 ನೆಯ ಅಧ್ಯಾಯ**

ನೀನು ಸಮೀಪದಲ್ಲಿಯೇ ವಾಸವಾಗಿರು. ನೀನು ಲಕ್ಷ್ಮಣಸಮೇತನಾಗಿ ಕಾರ್ಯಾರ್ಥವಾಗಿ ಹೋದರೆ ನಾನು ಸೀತಾದೇವಿಯನ್ನು ರಕ್ಷಿಸಿಕೊಂಡಿರುತ್ತೇನೆ ಎಂದು ಹೇಳಿದನು.

ಆ ಮಾತನ್ನು ಕೇಳಿ ಶ್ರೀರಾಮನು ಜಟಾಯುವನ್ನು ಆಲಿಂಗಿಸಿಕೊಂಡು ನಮಸ್ಕರಿಸಿ ತನ್ನ ತಂದೆಯಾದ ದಶರಥರಾಯನಿಗೂ ಜಟಾಯುವಿಗೂಇದ್ದ ಸ್ನೇಹ ವಿಶೇಷವನ್ನು ಕೇಳುತ್ತ ಸೀತಾಲಕ್ಷ್ಮಣಸಮೇತನಾಗಿ ಅಗ್ನಿಜ್ವಾಲೆಯು ಕಿರುಗಿಡಗಳನ್ನು ಸುಡುವಂತೆ ಸಮಸ್ತ ಶತ್ರುಗಳನ್ನೂ ದಹಿಸಲಿಚ್ಛಿಸಿ ಜಟಾಯುವನ್ನು ಸಹಾಯವಾಗಿ ಕರೆದುಕೊಂಡು ಪಂಚವಟೀ ಕ್ಷೇತ್ರಕ್ಕೆ ಹೋದನು. ಇದೇ ಈ ಪ್ರಕಾರವಾಗಿ ಸೀತಾಲಕ್ಷ್ಮಣಸಮೇತನಾದ ಶ್ರೀರಾಮನು ನಾನಾ ವಿಧವಾದ ಪುಣ್ಯ ಮೃಗಗಳಿಂದ ಸೇವಿಸಲ್ಪಟ್ಟ ಪಂಚವಟೀ ಕ್ಷೇತ್ರವನ್ನೈದಿ ತೇಜೋಗುಣಸಂಪನ್ನನಾದ ಲಕ್ಷ್ಮಣನನ್ನು ಕುರಿತು ಲಕ್ಷ್ಮಣ, ಅಗಸ್ತ್ಯಮುನೀಶ್ವರನು ನಿರೂಪಿಸಿದ ಕುರುಹುಗಳುಳ್ಳ ಸ್ಥಳಕ್ಕೆ ಬಂದೆವು. ಪಂಚವಟೀ ಕ್ಷೇತ್ರ. ಎಲ್ಲಿ ನೋಡಿದರೂ ಪುಷ್ಪಿತವಾದ ವನಗಳಿಂದ ಈ ಕ್ಷೇತ್ರವು ಬಹು ರಮಣೀಯವಾಗಿದೆ. ನಾವು ಇರುವುದಕ್ಕೆ ಅನುಕೂಲವಾದ ಒಂದು ಸ್ಥಳವನ್ನು ನೋಡು ಎಂದು ನುಡಿದನು. ಒಂದು ರಮಣೀಯವಾದ ಸ್ಥಳವನ್ನು ಕಂಡು ಪುನಃ ಲಕ್ಷ್ಮಣನನ್ನು ಕರೆದು ಹೀಗೆಂದನು: ಲಕ್ಷ್ಮಣ, ಈ ಸ್ಥಳವು ನಮಗೆ ವಾಸಯೋಗ್ಯವಾದದ್ದು. ಇದರ ಸಮೀಪದಲ್ಲಿ ಉದಯವಾಗಿ ಬರುತ್ತಿರುವ ಸೂರ್ಯನ ಪ್ರಭೆಯಂತೆ ಒಪ್ಪುತ್ತ ಕೆಂದಾವರೆಗಳುಳ್ಳ ರಮಣೀಯವಾದ ಕೊಳವಿದೆ. ಅಗಸ್ತ್ಯ ಮುನೀಶ್ವರನು ಹೇಳಿದ ಗೋದಾವರೀನದಿಯು ಉಭಯತೀರಗಳಲ್ಲಿಯೂ ಪುಷ್ಪಿತವಾದ ವೃಕ್ಷಗಳಿಂದುದುರುವ ಧೂಳುಗಳಿಂದಲೂ ಪರಿಮಳಯುಕ್ತವಾದ ಉದಕ ಪ್ರವಾಹದಿಂದಲೂ ಹಂಸ ಮೊದಲಾದ ಜಲಚರಪಕ್ಷಿಗಳಿಂದಲೂ ಅತಿರಮಣೀಯವಾಗಿದೆ. ಈ ಆಶ್ರಮವು ಆ ನದಿಗೆ ಅತಿ ದೂರವಲ್ಲದೆಯೂ ಅತಿಸಮೀಪವಲ್ಲದೆಯೂ ಇದೆ. ನವಿಲುಗಳ ಕೇಂಕಾರಧ್ವನಿಗಳಿಂದಲೂ ಪುಷ್ಪ ಫಲಗಳಿಂದ ಮನೋಹರವಾದ ವೃಕ್ಷಗಳಿಂದಲೂ ರಮ್ಯವಾದ ತಪ್ಪಲುಗಳಿಂದಲೂ ಒತ್ತಿರುವ ಈ ಪರ್ವತಗಳನ್ನು ನೋಡು.

ಈ ಪರ್ವತಗಳ ತಪ್ಪಲುಗಳು ಸುವರ್ಣಮಯ ವಾಗಿಯೂ ರಜತಮಯವಾಗಿಯೂ ತಾಮ್ರಮಯವಾಗಿಯೂ ಕಾಂಸ್ಯಮಯವಾಗಿಯೂ ಇರುವ ಗೈರಿಕಾದಿ ಧಾತುಗಳಿಂದ ಕೂಡಿ ಮೆರೆಯುತ್ತಿದೆ. ಎಲ್ಲಿ ನೋಡಿದರೂ ತಾಳ, ಹರಿತಾಳ, ಖರ್ಜೂರ, ಹಲಸು, ಮಾವು, ಗೋರಟೆ, ಸುರಹೊನ್ನೆ, ಅಂಬಟೆ, ಅಶೋಕ, ತಿಲಕ, ಕೇತಕ್ಕಿ ಸಂಪಿಗೆ, ಚಂದನ, ಕೆಂದಡಸ, ಹಿಪ್ಪೆ, ಬಕುಳ, ಆಶ್ವಕರ್ಣಿ, ಬನ್ನಿ, ಮುಳ್ಳು ಮುತ್ತುಗ, ವಾದರಿ ಮೊದಲಾದ ವೃಕ್ಷಗಳು ಎಲ್ಲಾ ಋತುಗಳಲ್ಲಿಯೂ ಹುಟ್ಟುವ ಪುಷ್ಪಫಲಗಳಿಂದ ರಮ್ಯವಾಗಿದೆ. ಈ ಸ್ಥಳದಲ್ಲಿ ನಾವು ಆಶ್ರಮವನ್ನು ಮಾಡಿಕೊಂಡು ಸುಖವಾಗಿರೋಣ, ನಮಗೆ ಜಟಾಯುವೂ ಸಹಾಯವಾಗಿರಲಿ ಎಂದು ನುಡಿದನು. ಆ ಮಾತನ್ನು ಕೇಳಿ ಪರಬಲಮರ್ದನಸಮರ್ಥನಾದ ಲಕ್ಷ್ಮಣನು ಗೋದಾವರೀತೀರದಲ್ಲಿ ರಮ್ಯವಾದ ಒಂದು ಆಶ್ರಮವನ್ನು ಕಲ್ಪಿಸಿದನು.

**ಮುಂದುವರಿಯುವುದು...**



ಕಲಾ ಸಾಹಿತ್ಯ
ಕೃಷ್ಣಪ್ಪ ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

■ ಉದಯವಾಹಿನಿ, ವಿಶೇಷ

# ಭಾರತರತ್ನ ಆಚಾರ್ಯ ವಿನೋಬಾಭಾವೆರವರ 130ನೇ ವರ್ಷದ ಜನ್ಮದಿನಾಚರಣೆ

ಆಚಾರ್ಯ ವಿನೋಬಾ ಭಾವೆರವರು 1895 ಸೆಪ್ಟೆಂಬರ್ 11 ರಂದು ಮಹಾರಾಷ್ಟ್ರದ ಕೊಲಾಬಾ ಜಿಲ್ಲೆಗೆ ಸೇರಿದ ಗಾಗೋಜಿ ಎಂಬ ಗ್ರಾಮದ ಬ್ರಾಹ್ಮಣ ಕುಟುಂಬದಲ್ಲಿ ಜನಿಸಿದರು. ತಂದೆ ನರಹರಿ ಶಂಭುರಾವ್ ಭಾವೆ,ತಾಯಿರುಕ್ಮಿಣಿದೇವಿ. ವಿನೋಬಾ ಭಾವೆರವರಿಗೆ ತಂದೆತಾಯಿಯಿಂದ ಸಂಸ್ಕಾರ ಜೊತೆಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರಕಿತು. ವಿನೋಬಾಭಾವೆರವರು ಗಾಂಧೀಜಿಯವರ ಸತ್ಯ, ಧರ್ಮ,ಅಹಿಂಸೆಯ ಮೂಲ ತತ್ವವನ್ನು ಅರ್ಥಮಾಡಿಕೊಂಡು ಅವರ ಪ್ರಭಾವಕ್ಕೆ ಒಳಗಾಗಿ ಮುಂದೆ ಅವರ ಮುಖಂಡತ್ವದ ಸ್ವಾತಂತ್ರ್ಯ ಹೋರಾಟದಲ್ಲಿ ಸ್ವಇಚ್ಛೆಯಿಂದ ಭಾಗವಹಿಸಿರುತ್ತಾರೆ. 1916 ಜೂನ್ 07 ರಂದು ವಿನೋಬಾಭಾವೆರವರು ಗಾಂಧೀಜಿಯವರನ್ನು ಸಬರಮತಿ ಆಶ್ರಮದಲ್ಲಿ ಭೇಟಿಮಾಡಿದರು.

ಆ ಅಪೂರ್ವ ಭೇಟಿ ವಿನೋಬಾ ಅವರ ಜೀವನದ ದಿಕ್ಕನ್ನೇ ಬದಲಿಸಿತು. ದಿನಕಳೆದಂತೆ ಗಾಂಧೀಜಿ ಮತ್ತು ವಿನೋಬಾರವರ ಬಾಂಧವ್ಯದ ಬೆಸುಗೆ ಭದ್ರಗೊಂಡಿತು. ವಿನೋಬಾರವರು ಆಶ್ರಮದ ಎಲ್ಲಾ ಚಟುವಟಿಕೆಗಳಲ್ಲಿ ಅತ್ಯಾಸಕ್ತಿ ,ಶ್ರದ್ಧೆಯಿಂದ ಪಾಲ್ಗೊಂಡರು. ಬೋಧನೆ, ಅಧ್ಯಯನ,ಚರಕದಿಂದ ನೂಲು ತೆಗೆಯುವುದು ಮತ್ತು ಸಮುದಾಯದ ಬದುಕನ್ನು ಉತ್ತಮಗೊಳಿಸಲು ಹಲವು ವಿಧಾಯಕ ಕಾರ್ಯಗಳಲ್ಲಿ ಭಾಗವಹಿಸುವುದು ಅವರ ನಿತ್ಯದ ಕಾರ್ಯಗಳಾಗಿದ್ದವು. ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಿದರು. 1940 ರಲ್ಲಿ ಗಾಂಧೀಜಿಯವರು ವಿನೋಬಾರವರನ್ನು ಸ್ವತಂತ್ರ ಸತ್ಯಾಗ್ರಹಿಯನ್ನಾಗಿ ಆಯ್ಕೆ ಮಾಡಿದರು.



ಗಾಂಧೀಜಿ ರೂಪಿಸಿದ ಖಾದಿ ಚಳುವಳಿ,ಗ್ರಾಮೀಣ ಉದ್ಯೋಗಗಳ ಸುಧಾರಣೆ, ಮೂಲಶಿಕ್ಷಣ ಪ್ರಯೋಗಗಳು, ಅಸ್ಪೃಶ್ಯತಾ ನಿವಾರಣೆ ಇವುಗಳಿಗೆ ವಿನೋಬಾರವರು ತಾತ್ವಿಕ ಬುನಾದಿಯನ್ನು ನಿರ್ಮಿಸಿಕೊಟ್ಟರು. 1942 ಆಗಸ್ಟ್‌ರಲ್ಲಿ ನಡೆದ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಬ್ರಿಟಿಷರೇ ಭಾರತ ಬಿಟ್ಟು ತೊಲಗಿರಿ ಎಂಬ ಚಳುವಳಿಯಲ್ಲಿ ವಿನೋಬಾರವರು ಭಾಗವಹಿಸಿದ್ದಕ್ಕಾಗಿ ಸುಮಾರು 15 ತಿಂಗಳು ಸೆರೆಮನೆವಾಸ ಅನುಭವಿಸಿದರು. 1947 ರಲ್ಲಿ ದೇಶ ಇಬ್ಭಾಗವಾಗಿ ಆ ಸಮಯದಲ್ಲಿ ನಡೆದ ಕೋಮು ಘರ್ಷಣೆ ದೇಶವನ್ನು ಜರ್ಜರಿಗೊಳಿಸಿತ್ತು.

ಸಾವಿರಾರು ಹಿಂದೂ-ಮುಸ್ಲಿಮರ ಮಾರಣಹೋಮ ನಡೆಯಿತು. ಗಾಂಧೀಜಿ ಕೋಮುದ್ವೇಷದ ಜ್ವಾಲೆಯನ್ನು ನಂದಿಸಲು ಕಲ್ಕತ್ತಾದಲ್ಲಿ ಉಪವಾಸ ಸತ್ಯಾಗ್ರಹ ನಡೆಸಿದರು.

1948 ಜನವರಿ 30ರಂದು ಗಾಂಧೀಜಿಯವರು ಹಂತಕನ ಗುಂಡಿಗೆ ಬಲಿಯಾದರು. ಗಾಂಧೀಜಿಯವರ ಸಾವು ವಿನೋಬಾ ಅವರಿಗೆ ಮಾನಸಿಕವಾಗಿ ದೊಡ್ಡ ಆಘಾತವಾಯಿತು. ವಿನೋಬಾಭಾವೆರವರು ಭೂದಾನ ಚಳುವಳಿ ಪ್ರಾರಂಭಿಸಿದರು. ದೊಡ್ಡ ದೊಡ್ಡ ಜಮೀನ್ದಾರರ ಬಳಿಯಿದ್ದ ಭೂಮಿಯನ್ನು ದಾನವಾಗಿ ಪಡೆದು ಭೂಮಿ ಇಲ್ಲದವರಿಗೆ ಹಂಚಿದರು.

ಭೂದಾನದ ಜೊತೆಯಲ್ಲಿ ಸಂಪತ್ತುದಾನ,ಶ್ರಮದಾನ, ಸಮಯದಾನ ಹೀಗೆ ಜನರಲ್ಲಿ ಇವುಗಳಲ್ಲಿ ಯಾವುದನ್ನು ನೀಡುವ ಸಾಮರ್ಥ್ಯವಿದ್ದರೂ ನಿಸ್ವಾರ್ಥ ಮನೋಭಾವದಿಂದ ನೀಡಿ ಕೃತಾರ್ಥರಾಗಬೇಕೆಂದು ವಿನೋಬಾಜಿ ತಿಳಿಸಿದರು.

ಡಕಾಯಿತರಿದ್ದ ಚಂಬಲ್ ಕಣಿವೆಯಲ್ಲಿ ಪ್ರವಾಸ ಮಾಡಿ ಅವರನ್ನು ಅಹಿಂಸಾ ಮಾರ್ಗಕ್ಕೆ ತರಲು ಪ್ರಯತ್ನಿಸಿ ಸಫಲರಾದರು. ಆ ಬಳಿಕ ವಿನೋಬಾಜಿ ಗೋಹತ್ಯೆ ವಿರುದ್ಧ ಚಳುವಳಿ ನಡೆಸಿದರು. ಮುಂದೆ ಅವರು ಆಧ್ಯಾತ್ಮಿಕ ಸಾಧನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡರು.

ವಿನೋಬಾಜಿಯವರು ವಿಶ್ರಾಂತಿ ಜೀವನದ ತನ್ನ 87 ನೇ ವಯಸ್ಸಿನಲ್ಲಿ ವಯೋ ಸಹಜದಿಂದ ಅಂದರೆ 1982 ನ. 15 ರಂದು ಆಶ್ರಮದಲ್ಲಿಯೇ ದಿವಂಗತರಾದರು. 1983 ರಲ್ಲಿ ವಿನೋಬಾ ಭಾವೆ ರವರಿಗೆ ಮರಣೋತ್ತರವಾಗಿ ಭಾರತ ಸರ್ಕಾರ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು. ಇಂತಹ ಮಹಾನ್ ಚೇತನ, ಮಹಾನ್ ಮಾನವತವಾದಿ, ಆದರ್ಶ ಪುರುಷ, ಭೂದಾನ ಚಳುವಳಿಯ ಹರಿಕಾರ ಇಂದು ಅವರ 130 ನೇ ವರ್ಷದ ಜನ್ಮದಿನಾಚರಣೆಯ ಅಂಗವಾಗಿ ಭಾರತೀಯರಾದ ನಾವುಗಳು ಅವರನ್ನು ಸ್ಮರಿಸಿ ನೆನೆಯುತ್ತಾ ಅವರ ಆದರ್ಶಗಳನ್ನ ಪಾಲಿಸುವ ಸಂಕಲ್ಪ ಮಾಡೋಣ.

**ವಿನೋಬಾರವರು 13 ವರ್ಷಗಳ ಕಾಲ ಭಾರತದ ಉದ್ದಗಲಕ್ಕೂ ಪಾದಯಾತ್ರೆ ಮಾಡಿದರು. ಈ ಅವಧಿಯಲ್ಲಿ ಸಾವಿರಾರು ಮೈಲುಗಳನ್ನು ಕ್ರಮಿಸಿದರು. ಸಾವಿರಾರು ಸಭೆಗಳಲ್ಲಿ ಸಹಸ್ರಾರು ಜನರನ್ನು ಉದ್ದೇಶಿಸಿ ಭಾಷಣ ಮಾಡಿದರು. 43 ಲಕ್ಷ ಎಕರೆ ಭೂಮಿಯನ್ನು ಭೂಮಿ ಇಲ್ಲದ ರೈತರಿಗೆ ವಿತರಣೆ ಮಾಡಿದರು. ಜಾತಿ-ಮತ-ಪಂತ, ಭಾಷೆ, ಪ್ರಾಂತ್ಯ ಯಾವ ಭೇದವಿಲ್ಲದೇ ವಿನೋಬಾಜಿ ಜನರನ್ನು ಸಂಘಟಿಸಿ ಭೂದಾನ ಯಜ್ಞವನ್ನು ಯಶಸ್ವಿಗೊಳಿಸಿದರು.**

# ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯೋದ್ರಿಂದ ಯಾವೆಲ್ಲಾ ಸಮಸ್ಯೆಗಳಾಗುತ್ತೆ

ಬೆಳಗ್ಗೆ ಎದ್ದ ತಕ್ಷಣ ಚಹಾ ಕುಡಿಯುವುದು ಕೆಲವರಿಗೆ ಅಭ್ಯಾಸವಾಗಿರಬಹುದು. ಆದರೆ ಇದು ಯಾವೆಲ್ಲಾ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಲ್ಲದು ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

ಹಲವರಿಗೆ ಬೆಳಗ್ಗೆ ಎದ್ದ ತಕ್ಷಣ ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವ ಅಭ್ಯಾಸವಿದೆ. ಆ ನಂತರವೇ ಬೇರೆಲ್ಲಾ ಕೆಲಸದಲ್ಲಿ ತೊಡಗಿಕೊಳ್ಳುತ್ತಾರೆ. ಆದರೆ ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯೋದರಿಂದ ನಮ್ಮ ಆರೋಗ್ಯದ ಮೇಲೆ ಕೆಲವೊಂದು ಕೆಟ್ಟ ಪರಿಣಾಮಗಳನ್ನುಂಟು ಮಾಡುತ್ತದೆ. ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವುದರಿಂದ ಜೀರ್ಣಕ್ರಿಯೆಯ ಶಕ್ತಿ ದುರ್ಬಲಗೊಳ್ಳುತ್ತದೆ, ಆಮ್ಲೀಯತೆ ಹೆಚ್ಚಾಗುತ್ತದೆ ಮತ್ತು ದೇಹದಲ್ಲಿನ ಪೋಷಕಾಂಶಗಳ ಹೀರಿಕೊಳ್ಳುವಿಕೆಯ ಮೇಲೆ ಪರಿಣಾಮ ಬೀರುತ್ತದೆ. ಇನ್ನು ಯಾವೆಲ್ಲಾ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ ಎನ್ನುವುದನ್ನು ತಿಳಿಯೋಣ.



**ಪೋಷಕಾಂಶಗಳ ಹೀರಿಕೊಳ್ಳುವಿಕೆ ಕಡಿಮೆಯಾಗುವುದು ಚಹಾದಲ್ಲಿರುವ ಕೆಫೀನ್ ನಿಮ್ಮ ಆರೋಗ್ಯಕ್ಕೆ ಒಳ್ಳೆಯದಲ್ಲ. ದೀರ್ಘಕಾಲದವರೆಗೆ ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವ ಜನರಿಗೆ ಕಬ್ಬಿಣ ಮತ್ತು ರಕ್ತಹೀನತೆಯ ಸಮಸ್ಯೆಗಳು ಉಂಟಾಗಲು ಇದು ಕಾರಣವಾಗಿದೆ. ಹೆಚ್ಚು ಚಹಾ ಕುಡಿಯುವುದರಿಂದ ದೇಹದಲ್ಲಿ ಒತ್ತಡದ ಹಾರ್ಮೋನುಗಳು ಹೆಚ್ಚಾಗುತ್ತವೆ. ಖಾಲಿ ಹೊಟ್ಟೆಯಲ್ಲಿ ಕುಡಿಯುವಾಗ ಈ ಪರಿಣಾಮವು ಮತ್ತಷ್ಟು ತೀವ್ರಗೊಳ್ಳುತ್ತದೆ, ಇದು ಮನಸ್ಥಿತಿ ಬದಲಾವಣೆಗಳು, ಕಿರಿಕಿರಿ ಮತ್ತು ನಿದ್ರೆಯ ಸಮಸ್ಯೆಗಳನ್ನು ಉಂಟುಮಾಡಬಹುದು.**

**ಜೀರ್ಣಾಂಗ ವ್ಯವಸ್ಥೆಯ ಮೇಲೆ ಕೆಟ್ಟ ಪರಿಣಾಮ:** ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವುದರಿಂದ ಮೊದಲು ಆಮ್ಲೀಯತೆ ಗ್ಯಾಸ್ಟ್ರಿಕ್ ನಂತಹ ಸಮಸ್ಯೆಗಳು ಉಂಟಾಗುತ್ತವೆ. ಚಹಾದಲ್ಲಿರುವ ಕೆಫೀನ್ ಹೊಟ್ಟೆಯಲ್ಲಿ ಆಮ್ಲವನ್ನು ಹೆಚ್ಚಿಸುತ್ತದೆ, ಇದು ಜೀರ್ಣಕ್ರಿಯೆಯ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವುದರಿಂದ ಹಸಿವು ಕಡಿಮೆಯಾಗುತ್ತದೆ, ಇದರಿಂದಾಗಿ ದೇಹವು ಅಗತ್ಯವಾದ ಪೋಷಣೆಯನ್ನು ಪಡೆಯುವುದಿಲ್ಲ, ಪೌಷ್ಟಿಕಾಂಶದ ಕೊರತೆಗಳು ಉಂಟಾಗಬಹುದು.

**ನಿರ್ಜಲೀಕರಣದ ಅಪಾಯ:** ಚಹಾದಲ್ಲಿ ಕಂಡುಬರುವ ಕೆಫೀನ್ ಮೂತ್ರವರ್ಧಕ ಪರಿಣಾಮವನ್ನು ಉಂಟುಮಾಡುತ್ತದೆ. ಇದು ದೇಹದಿಂದ ನೀರನ್ನು ತೆಗೆದುಹಾಕುತ್ತದೆ. ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವುದರಿಂದ ದೇಹವನ್ನು ನಿರ್ಜಲೀಕರಣಗೊಳಿಸಬಹುದು, ಇದು ಚರ್ಮದ ಸಮಸ್ಯೆಗಳು, ಆಯಾಸ, ದೌರ್ಬಲ್ಯಕ್ಕೆ ಕಾರಣವಾಗಬಹುದು.

**ಹಲ್ಲುಗಳು, ಮೂಳೆಗಳ ಮೇಲೆ ಪರಿಣಾಮ ಬೀರುತ್ತದೆ:** ಚಹಾದಲ್ಲಿರುವ ಆಮ್ಲಗಳು, ವಿಶೇಷವಾಗಿ ಸಕ್ಕರೆಯೊಂದಿಗೆ ಸೇರಿದಾಗ, ಬಾಯಿಯಲ್ಲಿ ಆಮ್ಲ ಮಟ್ಟವನ್ನು ಹೆಚ್ಚಿಸಬಹುದು, ಇದು ಹಲ್ಲಿನ ದಂತಕವಚವನ್ನು ಸವೆಸುವ ಸಾಧ್ಯತೆಯಿದೆ. ಹೆಚ್ಚಿನ ಪ್ರಮಾಣದಲ್ಲಿ ಮತ್ತು ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವುದರಿಂದ ಹಲ್ಲುಗಳು ಹಳದಿ ಬಣ್ಣಕ್ಕೆ ತಿರುಗಬಹುದು ಮತ್ತು ದೀರ್ಘಾವಧಿಯಲ್ಲಿ ಮೂಳೆಗಳು ದುರ್ಬಲಗೊಳ್ಳಬಹುದು.

**ಯಾವಾಗ ಕುಡಿಯುವುದು ಉತ್ತಮ:** ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಚಹಾ ಕುಡಿಯುವುದು ಕೆಲವರಿಗೆ ಅಭ್ಯಾಸವಾಗಿರಬಹುದು.

ಆದರೆ ಅದು ಕ್ರಮೇಣ ಆರೋಗ್ಯಕ್ಕೆ ಹಾನಿಕಾರಕವೆಂದು ಸಾಬೀತುಪಡಿಸಬಹುದು. ಉಪಾಹಾರದ ನಂತರ ಅಥವಾ ದಿನದ ಮಧ್ಯದಲ್ಲಿ ಚಹಾ ಕುಡಿಯಲು ಉತ್ತಮ ಸಮಯ. ಆದ್ದರಿಂದ, ನೀವು ನಿಮ್ಮ ದಿನವನ್ನು ಚಹಾದೊಂದಿಗೆ ಪ್ರಾರಂಭಿಸಿದರೆ, ಈಗಲೇ ಈ ಅಭ್ಯಾಸವನ್ನು ಬದಲಾಯಿಸುವುದು ಉತ್ತಮ. ಒಂದು ವೇಳೆ ನಿಮಗೆ ಬೆಳಗ್ಗೆ ಚಹಾ ಕುಡಿಯಲೇ ಬೇಕು ಎಂದಿದ್ದರೆ ಗಿಡಮೂಲಿಕೆ ಚಹಾ ಕುಡಿಯುವುದು ಉತ್ತಮ.



# ಬಾಯಲ್ಲಿ ನೀರು ತರಿಸುವ ಬೆಳ್ಳುಳ್ಳಿ ಖಾರ ರೈಸ್! ಹೊಸ ರೀತಿ ತಿಂಡಿ ಇದು!

ಬ್ರೇಕ್‌ಫಾಸ್ಟ್‌ಗೆ ನೀವು ರುಚಿ ರುಚಿಯಾಗಿ ರೈಸ್‌ನಿಂದ ಮಾಡುವ ಯಾವುದಾದರು ಖಾದ್ಯ ಸವಿಯಲು ಇಷ್ಟಪಡಬಹುದು. ಅದ್ರಲ್ಲೂ ಹಲವರಿಗೆ ಪಲಾವ್, ಚಿತ್ರಾನ್ನ, ರೈಸ್ ಬಾತ್, ಚಿತ್ರಾನ್ನ ಸೇರಿ ಹಲವು ರೈಸ್‌ನಿಂದ ಮಾಡುವ ಖಾದ್ಯ ಅಂದ್ರೆ ಎಲ್ಲರಿಗೂ ಇಷ್ಟವಾಗೋದು ಖಚಿತ. ಅದ್ರಲ್ಲೂ ಕೆಲವೊಮ್ಮೆ ಸ್ಪೆಷಲ್ ಆಗಿ ರೈಸ್ ಬಳಸಿ ಮಾಡುವ ರುಚಿ ರುಚಿಯ ಖಾದ್ಯ ಅಂದ್ರೆ ಎಲ್ಲರ ಬಾಯಲ್ಲೂ ನೀರು ಬರುತ್ತೆ. ಆದ್ರೆ, ನಾವಿಂದು ಸುಲಭವಾಗಿ ಹಾಗೆ ಅತ್ಯಂತ ರುಚಿಕರ ರೀತಿಯಲ್ಲಿ ಮಾಡಿ ಸವಿಯಬಹುದಾದಂತಹ ಖಾದ್ಯವೊಂದರ ಕುರಿತಾಗಿ ತಿಳಿದುಕೊಳ್ಳೋಣ. ಬ್ರೇಕ್‌ಫಾಸ್ಟ್ ಸವಿಯಲು ಸುಲಭವಾಗಿ ಮಾಡುವಂತಹ ಬೆಳ್ಳುಳ್ಳಿ ರೈಸ್ ಮಾಡುವ ಕುರಿತು ತಿಳಿದುಕೊಳ್ಳೋಣ. ಬೆಳ್ಳುಳ್ಳಿ ಖಾರ ರೈಸ್ ಮಾಡಿದ್ರೆ ಬೆಳಗ್ಗೆ ತಿಂಡಿಗೆ ಮಾತ್ರವಲ್ಲದೆ ಮಧ್ಯಾಹ್ನದ ಬಾಕ್ಸ್‌ಗೂ ಸಹ ಬಳಸಬಹುದು.

ಈ ರೈಸ್ ರುಚಿ ಒಮ್ಮೆ ಸವಿದರೆ ನೋವುವಾರದಲ್ಲಿ ಮತ್ತೆ ಎರಡು ಮೂರು ಬಾರಿ ಮಾಡಿ ಸವಿಯಲು ಮುಂದಾಗೋದು ಖಚಿತ. ಹಾಗಾದ್ರೆ ನಾವಿಂದು ಈ ಖಾರ ಬೆಳ್ಳುಳ್ಳಿ ರೈಸ್ ಮಾಡುವುದು ಹೇಗೆ ನೋಡೋಣ. ಬೆಳ್ಳುಳ್ಳಿ ರೈಸ್ ಮಾಡಲು ಯಾವೆಲ್ಲಾ ವಸ್ತುಗಳು ಬೇಕು ಮಾಡುವ ವಿಧಾನವೇನು ಮಾಡಲು ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ತಿಳಿಯಿರಿ.

## ಬೆಳ್ಳುಳ್ಳಿ ರೈಸ್ ಮಾಡಲು ಯಾವೆಲ್ಲಾ ವಸ್ತುಗಳು ಬೇಕು

- ಅನ್ನ
- ಬೆಳ್ಳುಳ್ಳಿ
- ಕರಿಬೇವು
- ಕೊತ್ತಂಬರಿ ಸೊಪ್ಪು
- ಶುಂಠಿ
- ಈರುಳ್ಳಿ
- ಸಾಸಿವೆ
- ಜೀರಿಗೆ
- ಎಣ್ಣೆ
- ಉಪ್ಪು
- ಖಾರದ ಪುಡಿ
- ಅರಶಿಣ

**ಬೆಳ್ಳುಳ್ಳಿ ರೈಸ್ ಮಾಡುವ ವಿಧಾನವೇನು:** ಮೊದಲು 2 ಗಡ್ಡೆ ಬೆಳ್ಳುಳ್ಳಿಯನ್ನು ಬಿಡಿಸಿಕೊಂಡು ಮಿಕ್ಸಿ ಜಾರ್‌ಗೆ ಹಾಕಿಕೊಳ್ಳಿ ಹಾಗೆ ಇದಕ್ಕೆ 1 ಸ್ಪೂನ್ ಖಾರದ ಪುಡಿ ಕೂಡ ಹಾಕಿ 2 ಸುತ್ತು ರುಬ್ಬಿ. ಪುಡಿ ಪುಡಿಯಾದರೆ ಸಾಕು. ಕಲ್ಲಿನಲ್ಲಿ ಜಜ್ಜಿಕೊಂಡರೂ ಸಾಕಾಗುತ್ತದೆ. ಹಾಗೆ ಇದಕ್ಕೆ 1 ಪೀಸ್ ಶುಂಠಿ ಕೂಡ ಹಾಕಿ ರುಬ್ಬಿಕೊಂಡಿರಿ. ಅದು



ಚಟ್ನಿಯಂತೆ ಬರಬೇಕು, ಇದನ್ನು ಬೌಲ್‌ಗೆ ಹಾಕಿಟ್ಟುಕೊಳ್ಳಿ.

ಈಗ ಒಂದು ಬಾಣಲೆ ಒಲೆ ಮೇಲೆ ಇಟ್ಟು ಎಣ್ಣೆ ಹಾಕಿ ಬಿಸಿಯಾದ ಬಳಿಕ ಇದಕ್ಕೆ ಶೇಂಗಾ ಹಾಕಿ ಫ್ರೈ ಮಾಡಿಕೊಳ್ಳಿ. ನಂತರ ಇದನ್ನು ತೆಗೆದು ಬದಿಗಿಟ್ಟುಕೊಳ್ಳಿ. ಈಗ ಎಣ್ಣೆಗೆ ಒಣ ಮೆಣಸು ಕೂಡ ಹಾಕಿ ಫ್ರೈ ಮಾಡಿ ತೆಗೆದಿಟ್ಟುಕೊಳ್ಳಿ. ನಂತರ ಸಾಸಿವೆ, ಜೀರಿಗೆ, ಕತ್ತರಿಸಿಕೊಂಡ ಈರುಳ್ಳಿ ಹಾಕಿ 1 ನಿಮಿಷ ಫ್ರೈ ಮಾಡಿ. ಈಗ ಸ್ವಲ್ಪ ಕರಿಬೇವು ಸೇರಿಸಿ ಫ್ರೈ ಮಾಡಿಕೊಂಡು ಮೊದಲು ರುಬ್ಬಿಕೊಂಡಿದ್ದ ಬೆಳ್ಳುಳ್ಳಿ ಖಾರವನ್ನು ಇದಕ್ಕೆ ಹಾಕಿ ಮಿಕ್ಸ್ ಮಾಡಬೇಕು. ಎಣ್ಣೆ ಸ್ವಲ್ಪ ಹೆಚ್ಚಾಗಿ ಬಳಸಿಕೊಳ್ಳಿ. ಈ ಖಾರ ಚೆನ್ನಾಗಿ ಮಿಕ್ಸ್ ಆಗಬೇಕು. ಈಗ ಖಾರದ ಪುಡಿ, ಅರಶಿಣ ಹಾಕಿ ಮಿಶ್ರಣ ಮಾಡಿಕೊಳ್ಳಿ. ಉಪ್ಪು ಸಹ ಹಾಕಿಕೊಳ್ಳಿ. ಇದು ಗೊಜ್ಜಿನ ರೀತಿ ಬರಬೇಕು. ಬಳಿಕ ಕೊತ್ತಂಬರಿ ಸೊಪ್ಪು, ಹಾಗೆ ಮೊದಲೇ ಮಾಡಿಟ್ಟ ಅನ್ನವನ್ನು ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಹಾಗೆ ಕೊನೆಯಲ್ಲಿ ಫ್ರೈ ಮಾಡಿಕೊಂಡ ಶೇಂಗಾ ಬೀಜ ಹಾಗೆ ಮೆಣಸನ್ನು ಕೂಡ ಇದಕ್ಕೆ ಹಾಕಿ ಮಿಕ್ಸ್ ಮಾಡಿಕೊಳ್ಳಿ. ಮಸಾಲೆ ಚೆನ್ನಾಗಿ ಅನ್ನಕ್ಕೆ ಹಿಡಿಯಬೇಕು. ಹೀಗೆ ಮಾಡಿ ಸವಿದು ನೋಡಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಖಾರ ಬೆಳ್ಳುಳ್ಳಿ ಅನ್ನ ರೆಡಿಯಾಗುತ್ತದೆ. ಬ್ರೇಕ್‌ಫಾಸ್ಟ್‌ಗೆ ಇದು ಅದ್ಭುತ ರುಚಿ ನೀಡುವಂತಹ ಖಾದ್ಯ ಆಗಿರಲಿದೆ. ನೀವು ಕೂಡ ಮನೆಯಲ್ಲಿ ಇದನ್ನು ಒಮ್ಮೆ ಆದರೂ ಟ್ರೈ ಮಾಡಿ ನೋಡಿ.

# ಈ ಜ್ಯೂಸ್ ಕುಡಿದರೆ ಸಾಕು! ಮುಖದ ಸುಕ್ಕು, ಕಲೆಗಳು ಮಾಯ.. ಸ್ಕಿನ್ ಲಕ ಲಕ ಹೊಳೆಯುತ್ತೆ

ಪ್ರತಿದಿನ ಆಮ್ಲಾ ಜ್ಯೂಸ್ ಕುಡಿಯಿರಿ.. ಮುಖದ ಸುಕ್ಕುಗಳು, ಕಲೆಗಳಿಗೆ ಬೈಬೈ ಹೇಳಿ. ನಿಮ್ಮ ಚರ್ಮ ವಯಸ್ಸಾದಂತೆ ಕಾಣೋದಿಲ್ಲ. ಹೌದು, ಆಮ್ಲಾ ಅಥವಾ ನೆಲ್ಲಿಕಾಯಿಯನ್ನು ಆಯುರ್ವೇದದಲ್ಲಿ ಅಮೃತಫಲ ಎಂದು ಪರಿಗಣಿಸಲಾಗಿದೆ. ಇದರಲ್ಲಿ ಉತ್ಕರ್ಷಣ ನಿರೋಧಕಗಳು ಮತ್ತು ವಿಟಮಿನ್ ಸಿ ಹೇರಳವಾಗಿದ್ದು, ನಮ್ಮ ದೇಹ, ಚರ್ಮ, ಕೂದಲಿಗೆ ಅತ್ಯಂತ ಪ್ರಯೋಜನಕಾರಿ.

ಇದನ್ನು ನಿಯಮಿತವಾಗಿ ಸೇವಿಸುವುದರಿಂದ ಚರ್ಮ ಮತ್ತು ಕೂದಲಿನ ಸೌಂದರ್ಯ ಕಾಪಾಡಿಕೊಳ್ಳಬಹುದು. ನೆಲ್ಲಿಕಾಯಿಯಲ್ಲಿ ವಿಟಮಿನ್ ಸಿ, ಕಬ್ಬಿಣ, ಕ್ಯಾಲ್ಸಿಯಂ ವಿವಿಧ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ. ಇದು ರೋಗಗಳಿಂದ ಮುಕ್ತವಾಗಿರಲು ಸಹಾಯ ಮಾಡುತ್ತದೆ.

ಪ್ರತಿದಿನ ಅಥವಾ ನಿಯಮಿತವಾಗಿ ನೆಲ್ಲಿಕಾಯಿ ಜ್ಯೂಸ್ ಕುಡಿಯುವುದರಿಂದ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ಜೊತೆಗೆ ಜೀರ್ಣಕ್ರಿಯೆ ಸುಧಾರಿಸುತ್ತದೆ. ನೆಲ್ಲಿಕಾಯಿ ಜ್ಯೂಸ್ ಕೂದಲು ಮತ್ತು ಚರ್ಮಕ್ಕೆ ಅತ್ಯಂತ ಪ್ರಯೋಜನಕಾರಿ. ನೆಲ್ಲಿಕಾಯಿನಲ್ಲಿರುವ ವಿಟಮಿನ್ ಸಿ ಚರ್ಮವನ್ನು ಆಂತರಿಕವಾಗಿ ಗುಣಪಡಿಸಿ ಹೊಳಪನ್ನು ನೀಡುತ್ತದೆ. ಇದು ಕೂದಲು ಉದುರುವಿಕೆಯನ್ನು ಕಡಿಮೆ ಮಾಡಿ, ಕೂದಲನ್ನು ದಪ್ಪ ಮತ್ತು ಹೊಳೆಯುವಂತೆ ಮಾಡುತ್ತದೆ. ನೆಲ್ಲಿಕಾಯಿ ಜ್ಯೂಸ್ ಸೇವನೆಯ ಕೆಲವು ಪ್ರಯೋಜನಗಳನ್ನು ಈ ಲೇಖನದಲ್ಲಿ ತಿಳಿಸಲಾಗಿದೆ.

**ನೆಲ್ಲಿಕಾಯಿ ಜ್ಯೂಸ್‌ನ ಪ್ರಯೋಜನಗಳು**

**ರೋಗನಿರೋಧಕ ಶಕ್ತಿ ಹೆಚ್ಚಳ :** ನೆಲ್ಲಿಕಾಯಿನಲ್ಲಿರುವ ಉತ್ಕರ್ಷಣ ನಿರೋಧಕಗಳು ನಮ್ಮ ದೇಹಕ್ಕೆ ತುಂಬಾ ಪ್ರಯೋಜನಕಾರಿ. ಇದು ಯಾವುದೇ ರೀತಿಯ ಸೋಂಕು ಕಾಲೋಚಿತ ಕಾಯಿಲೆಗಳಿಂದ ದೇಹವನ್ನು ರಕ್ಷಿಸುತ್ತದೆ.



ನೆಲ್ಲಿಕಾಯಿ ಜ್ಯೂಸ್ ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಸಹಾಯ ಮಾಡುತ್ತದೆ. ಇದನ್ನು ಪ್ರತಿದಿನ ಕುಡಿಯುವುದರಿಂದ ಉತ್ತಮ ಆರೋಗ್ಯವನ್ನು ಕಾಪಾಡಿ ಕೊಳ್ಳಬಹುದು.

**ಮಲಬದ್ಧತೆ, ಗ್ಯಾಸ್ ಪ್ರಬ್ಲಂ ದೂರ :** ನೆಲ್ಲಿಕಾಯಿ ಜ್ಯೂಸ್ ಆಮ್ಲಾ ರಸ ಜೀರ್ಣಾಂಗ ವ್ಯವಸ್ಥೆಯನ್ನು ಸುಧಾರಿಸುತ್ತದೆ. ನೆಲ್ಲಿಕಾಯಿ ಅಲ್ಲಿ ನಾರಿನಂಶ ಸಮೃದ್ಧವಾಗಿದ್ದು, ಮಲಬದ್ಧತೆ ಮತ್ತು ಗ್ಯಾಸ್‌ನಂತಹ ಸಮಸ್ಯೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇದನ್ನು ನಿಯಮಿತವಾಗಿ ಸೇವಿಸುವುದರಿಂದ ಜೀರ್ಣಾಂಗ ವ್ಯವಸ್ಥೆಯು ಬಲಗೊಂಡು ಹೊಟ್ಟೆಗೆ ಸಂಬಂಧಿಸಿದ ಸಮಸ್ಯೆಗಳು ಕಡಿಮೆಯಾಗುತ್ತವೆ.

**ಸುಕ್ಕುಗಳು ಮಾಯ:** ನೆಲ್ಲಿಕಾಯಿನಲ್ಲಿರುವ ವಿಟಮಿನ್ ಸಿ, ಉತ್ಕರ್ಷಣ ನಿರೋಧಕಗಳು ಮುಖದ ಕಲೆಗಳು, ಸುಕ್ಕುಗಳನ್ನು ನಿವಾರಿಸಲು ಸಹಾಯ ಮಾಡುತ್ತವೆ. ಪ್ರತಿದಿನ ನೆಲ್ಲಿಕಾಯಿ ಜ್ಯೂಸ್ ಅನ್ನು ಕುಡಿಯುವುದರಿಂದ ಚರ್ಮದ ಹೊಳಪು ಹೆಚ್ಚುತ್ತದೆ. ಇದರಿಂದ ನಮ್ಮ ಚರ್ಮವು ಆರೋಗ್ಯಕರವಾಗಿ ಮತ್ತು ಹೊಳೆಯುವಂತೆ ಕಾಣುತ್ತದೆ.

**ತಲೆಹೊಟ್ಟು ಕಡಿಮೆ ಮಾಡುತ್ತೆ :** ನೆಲ್ಲಿಕಾಯಿ ಜ್ಯೂಸ್ ಅನ್ನು ಕುಡಿಯುವುದರಿಂದ ನಮ್ಮ ದೇಹದ ಜೊತೆಗೆ ಕೂದಲಿನ ಆರೋಗ್ಯವೂ ಸುಧಾರಿಸುತ್ತದೆ. ಇದನ್ನು ಪ್ರತಿದಿನ ಸೇವಿಸುವುದರಿಂದ ನಿರ್ಜೀವ ಮತ್ತು ಒಣ ಕೂದಲು ಸಹ ಆರೋಗ್ಯಕರವಾಗಿ ಮತ್ತು ಹೊಳೆಯುತ್ತದೆ. ಇದು ಕೂದಲನ್ನು ಬುಡದಿಂದ ಬಲಪಡಿಸುತ್ತದೆ. ತಲೆಹೊಟ್ಟು ಕಡಿಮೆ ಮಾಡುತ್ತದೆ ಮತ್ತು ಅಕಾಲಿಕವಾಗಿ ಬಿಳಿಯಾಗುವುದನ್ನು ತಡೆಯುತ್ತದೆ.

**ಫಿಟ್‌ನೆಸ್‌ಪ್ರಿಯರಿಗೆ ಅತ್ಯುತ್ತಮ:** ತೂಕ ಇಳಿಸಿಕೊಳ್ಳಲು ಬಯಸುವವರು ನೆಲ್ಲಿಕಾಯಿ ಜ್ಯೂಸ್ ಅನ್ನು ನಿಯಮಿತವಾಗಿ ಕುಡಿಯಬೇಕು. ನೆಲ್ಲಿಕಾಯಿ ಚಯಾಪಚಯವನ್ನು ವೇಗಗೊಳಿಸುತ್ತದೆ. ಇದು ಕೊಬ್ಬು ಕರಗಿಸಲು ಸಹಾಯ ಮಾಡುತ್ತದೆ. ತೂಕ ಇಳಿಸಿಕೊಳ್ಳಲು ಬಯಸುವವರಿಗೆ ಅಥವಾ ಫಿಟ್‌ನೆಸ್ ಪ್ರಿಯರಿಗೆ ಇದು ಅತ್ಯುತ್ತಮವಾಗಿದೆ.

**ಶುಗರ್ ಕಂಟ್ರೋಲ್‌ಗೆ ಸಹಕಾರಿ:** ಶುಗರ್ ಅಥವಾ ಮಧುಮೇಹ ರೋಗಿಗಳಿಗೆ ನೆಲ್ಲಿಕಾಯಿ ಜ್ಯೂಸ್ ಅಮೃತದಂತೆ. ಇದನ್ನು ಸೇವಿಸುವುದರಿಂದ ರಕ್ತದಲ್ಲಿನ ಶುಗರ್ ಲೆವೆಲ್ (ಸಕ್ಕರೆ ಮಟ್ಟ) ಅನ್ನು ನಿಯಂತ್ರಣದಲ್ಲಿಡಲು ಸಹಾಯ ಮಾಡುತ್ತದೆ. ಒಟ್ಟಾರೆಯಾಗಿ, ಪ್ರತಿದಿನ ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಒಂದು ಗ್ಲಾಸ್ ನೆಲ್ಲಿಕಾಯಿ ಜ್ಯೂಸ್ ಕುಡಿಯುವುದು ಒಳ್ಳೆಯದು. ಇದರಿಂದ ದೇಹ, ಚರ್ಮ ಮತ್ತು ಕೂದಲಿನ ಆರೋಗ್ಯವನ್ನು ಕಾಪಾಡಬಹುದು.

**ನೆಲ್ಲಿಕಾಯಿ ಏಕೆ ವಿಶೇಷ**

- ಆಯುರ್ವೇದದಲ್ಲಿ ಅಮೃತಫಲ ಎಂದು ಕರೆಯಲಾಗುತ್ತದೆ
- ವಿಟಮಿನ್ ಸಿ, ಕಬ್ಬಿಣ, ಕ್ಯಾಲ್ಸಿಯಂ, ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧ
- ದೇಹ, ಚರ್ಮ ಮತ್ತು ಕೂದಲಿಗೆ ಸಮಗ್ರ ಪ್ರಯೋಜನ

# ಜಾತಿ ಸಮೀಕ್ಷೆಗೆ ಭರದ ಸಿದ್ಧತೆ: ಜೆಸ್ಕಾಂ ನೌಕರರಿಂದ ಜಿಯೊ ಟ್ಯಾಗಿಂಗ್

## ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 90 ದಿನಗಳಲ್ಲಿ ಪೂರ್ಣಗೊಳಿಸುವ ಗುರಿ

• ಉದಯವಾಹಿನಿ ಕೊಪ್ಪಳ

ಜಿಲ್ಲಾದ್ಯಂತ ಹಿಂದುಳಿದ ವರ್ಗಗಳ ಸಮೀಕ್ಷೆ ಸೆ.22 ರಿಂದ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಭರದ ತಯಾರಿ ನಡೆದಿದೆ. ಜೆಸ್ಕಾಂನ ಮೀಟರ್ ರೀಡರ್‌ಗಳ ಮೂಲಕ ಈಗಾಗಲೇ ಶೇ. 40 ರಷ್ಟು ಮನೆಗಳ ಜಿಯೊ ಟ್ಯಾಗಿಂಗ್ ಪೂರ್ಣಗೊಂಡಿದೆ.


ಯಾವುದೇ ಮನೆಗಳು ತಪ್ಪಿ ಹೋಗದಂತೆ ಮುನ್ನೆಚ್ಚರಿಕೆ ವಹಿಸಲಾಗುತಿದ್ದು, ಈಗಾಗಲೇ ಮೀಟರ್ ಹೊಂದಿರುವ ಹಾಗೂ ಮೀಟರ್ ಹೊಂದಿರದ ಮನೆ ಪತ್ತೆ ಹಚ್ಚಿ, ಜೆಸ್ಕಾಂ ಸಿಬ್ಬಂದಿ, ಸ್ಟಿಕರ್ ಅಂಟಿಸಿದ್ದಾರೆ. ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 90 ದಿನಗಳಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಮೊದಲ ಹಂತದಲ್ಲಿ ಸಮೀಕ್ಷೆಗೆ ಸಂಬಂಧಿಸಿದ ಪೂರ್ವಭಾವಿ ಕೆಲಸಗಳಾಗಿರುವ ಮನೆ ಪಟ್ಟಿ ಹಾಗೂ ನಕ್ಷೆ ಸಿದ್ಧಪಡಿಸುವ ಕಾರ್ಯ ಭರದಿಂದ ಸಾಗಿದೆ. ಅಲ್ಲದೇ ಗ್ರಾಹಕರ ಮನೆ ಬಳಕೆ ವಿದ್ಯುತ್ ಸಂಪರ್ಕದ ಮೀಟರ್ ಓದುವುದು ಮತ್ತು ಬಿಲ್ಲಿಂಗ್ ಮಾಡುವುದರ ಜತೆಗೆ ಮನೆಗಳನ್ನು ಜಿಯೊ ಟ್ಯಾಗ್ ಮಾಡಿ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಕಾರ್ಯದ ವ್ಯಾಪ್ತಿಗೆ ಒಳಪಡಿಸುವ ಕೆಲಸ ನಡೆಯುತ್ತಿದೆ. ಸೆ.22 ರಿಂದ ಅ.7 ರವರೆಗೆ ದಸರಾ ರಜೆ ಅವಧಿಯಲ್ಲಿ ಸಮೀಕ್ಷೆ ಕಾರ್ಯ ನಡೆಯಲಿದೆ. ಹಿಂದುಳಿದ ವರ್ಗಗಳು ಹಾಗೂ ಇತರ ಎಲ್ಲಾ ಜನರ ದತ್ತಾಂಶಗಳನ್ನು ಸೆರೆಹಿಡಿಯುವುದಲ್ಲದೇ ಜನರಿಗೆ ಸರಕಾರಿ ಇಲಾಖೆಗಳಿಂದ ಪ್ರಾರಂಭಿಸಲಾಗಿರುವ ಹಾಗೂ ಮುಂದೆ ಪ್ರಾರಂಭಿಸಲಿರುವ ಎಲ್ಲಾ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಬಳಸಬಹುದಾದ ಉಪಯುಕ್ತ ದತ್ತಾಂಶ ಸಿಗಲಿದೆ.

**ಹಂತ 2, ಗಣತಿ ಕಾರ್ಯ:** ಮನೆ ಪಟ್ಟಿ ಪ್ರಕ್ರಿಯೆ ಪೂರ್ಣಗೊಂಡು ಎನ್ಯೂಮರೇಷನ್ ಬ್ಲಾಕ್‌ಗಳು ಸಿದ್ಧವಾದ ನಂತರ ಸಮೀಕ್ಷೆಯ ಎರಡನೇ ಮತ್ತು ಅತಿಮುಖ್ಯವಾದ ಹಂತ ಆರಂಭವಾಗುತ್ತದೆ. ಪ್ರತಿ ಎನ್ಯೂಮರೇಷನ್ ಬ್ಲಾಕ್‌ಗೆ ಒಬ್ಬರು ಗಣತಿದಾರರನ್ನು ನೇಮಿಸಲಾಗುತ್ತದೆ. ಈ ಕಾರ್ಯಕ್ಕಾಗಿ, ಸರಕಾರವು ಹೆಚ್ಚಾಗಿ ಶಿಕ್ಷಕರನ್ನು ಬಳಸಿಕೊಳ್ಳುತ್ತದೆ. ನೇಮಕಗೊಂಡ ಗಣತಿದಾರರು, ಸೆ.22 ರಿಂದ ತಮಗೆ ನಿಗದಿಪಡಿಸಿದ ಬ್ಲಾಕ್‌ನಲ್ಲಿರುವ ಪ್ರತಿ ಮನೆಗೆ ಭೇಟಿ ನೀಡುತ್ತಾರೆ. ಅಲ್ಲಿ ಅವರು ಆಯೋಗವು ಸಿದ್ಧಪಡಿಸಿದ ಪ್ರಶ್ನಾವಳಿಯನ್ನು ಬಳಸಿ, ಕುಟುಂಬದ ಪ್ರತಿಯೊಬ್ಬ ಸದಸ್ಯನ ವಿವರ ಸಂಗ್ರಹಿಸುತ್ತಾರೆ. ಈ ವೇಳೆ ಹೆಸರು, ವಯಸ್ಸು, ಲಿಂಗ, ಶೈಕ್ಷಣಿಕ ಅರ್ಹತೆ, ಉದ್ಯೋಗ, ಜಾತಿ, ಉಪಜಾತಿ, ಧರ್ಮ, ಮಾತೃಭಾಷೆ ಹಾಗೂ ಆದಾಯದ ಮೂಲ, ಕುಟುಂಬದ ಒಟ್ಟು ಆದಾಯ, ಆಸ್ತಿಪಾಸ್ತಿ ವಿವರ ಪಡೆಯಲಾಗುತ್ತಿದೆ. ಈ ಎಲ್ಲ ಮಾಹಿತಿ ಸಂಗ್ರಹಿಸಿ, ಆಯೋಗವು ಅದನ್ನು ಕ್ರೋಡೀಕರಿಸಿ, ವಿಶ್ಲೇಷಿಸಿ, ಅಂತಿಮವಾಗಿ ಸರಕಾರಕ್ಕೆ ವರದಿ ಸಲ್ಲಿಸಲಿದೆ.

ಹಿಂದುಳಿದ ವರ್ಗಗಳ ಸಮೀಕ್ಷೆ ಸೆ.22 ರಿಂದ ಆರಂಭವಾಗಲಿದೆ. ಅದಕ್ಕಾಗಿ ಪೂರ್ವ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಸಮೀಕ್ಷೆಗೆ ಶಿಕ್ಷಕರು ನಿಯೋಜನೆಗೊಂಡಿದ್ದು, ಒಬ್ಬ ಶಿಕ್ಷಕರಿಗೆ 150 ಮನೆ ಸಮೀಕ್ಷೆ ಮಾಡುವ ಗುರಿ ನೀಡಲಾಗಿದೆ ಎಂದಿದ್ದಾರೆ ನಾಗವೇಣಿ, ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಕೊಪ್ಪಳ ಸಮೀಕ್ಷೆಯ ಪೂರ್ವಭಾವಿಯಾಗಿ ಮನೆ-ಮನೆಗೆ ಸ್ಟಿಕರ್ ಅಂಟಿಸುವ ಕಾರ್ಯ ಭರದಿಂದ ಸಾಗಿದೆ. ಅರ್ಧದಷ್ಟು ಕೆಲಸ ಮುಗಿದಿದ್ದು, ಉಳಿದ ಮನೆಗಳಿಗೆ ಸ್ಟಿಕರ್ ಅಂಟಿಸುವುಧಿದನ್ನು ಆದಷ್ಟು ಬೇಗ ಪೂರ್ಣಗೊಳಿಸಲಾಗುವುದು ಎಂದಿದ್ದಾರೆ ಮೊಟ್ಲಾನಾಯ್ಕ ಎಇ, ಜೆಸ್ಕಾಂ, ಕೊಪ್ಪಳ.

ಉದಯವಾಹಿನಿ ಚಿತ್ರ

- ಮೀಟರ್ ಹೊಂದಿರುವ ಹಾಗೂ ಮೀಟರ್ ಹೊಂದಿರದ ಮನೆ ಪತ್ತೆ ಹಚ್ಚಿ, ಜೆಸ್ಕಾಂ ಸಿಬ್ಬಂದಿ, ಸ್ಟಿಕರ್ ಅಂಟಿಸಿದ್ದಾರೆ.
- ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 90 ದಿನಗಳಲ್ಲಿ ಪೂರ್ಣಗೊಳಿಸುವ ಗುರಿ
- ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಕಾರ್ಯದ ವ್ಯಾಪ್ತಿಗೆ ಒಳಪಡಿಸುವ ಕೆಲಸ ನಡೆಯುತ್ತಿದೆ.

### ಸಮೀಕ್ಷೆ ಕಾರ್ಯ ನಿರ್ವಹಣೆ ಹೇಗೆ?

ಸಮೀಕ್ಷೆಯು ಎರಡು ಪ್ರಮುಖ ಹಂತಗಳಾದ ಮನೆ ಪಟ್ಟಿ ಮತ್ತು ಗಣತಿ ಕಾರ್ಯದ ಮೂಲಕ ನಡೆಯುತ್ತಿದೆ. ಮನೆಗಳ ಗುರುತಿಸುವಿಕೆಯಡಿ ಆಯೋಗದ ಸಿಬ್ಬಂದಿ (ಗಣತಿದಾರರು) ಪ್ರತಿ ಮನೆಗೆ ಭೇಟಿ ನೀಡುತ್ತಾರೆ. ಅದಕ್ಕಾಗಿ, ಅವರು ಪ್ರತಿ ಮನೆಗೆ ಇರುವ ವಿದ್ಯುತ್ ಸಂಪರ್ಕದ ಆರ್.ಆರ್. ಸಂಖ್ಯೆಯನ್ನು ಆಧಾರವಾಗಿ ಬಳಸಿಕೊಳ್ಳುತ್ತಾರೆ. ಇದು ಯಾವುದೇ ಮನೆ ಸಮೀಕ್ಷೆಯಿಂದ ವ್ಯಾಪ್ತಿಯಿಂದ ಬಿಟ್ಟುಹೋಗದಂತೆ ಖಚಿತಪಡಿಸುತ್ತದೆ. ಇದಲ್ಲದೇ ವಿಶಿಷ್ಟ ಗುರುತಿನ ಸಂಖ್ಯೆ ನೀಡಲಾಗುತ್ತದೆ. ಪ್ರತಿ ಮನೆಗೆ ಭೇಟಿ ನೀಡಿದಾಗ, ಸಿಬ್ಬಂದಿ ಆ ಮನೆಗೆ ಒಂದು ವಿಶಿಷ್ಟವಾದ 'ಮನೆ ಐಡಿ' ಯನ್ನು ನೀಡಲಾಗುತ್ತದೆ. ಈ ಐಡಿಯನ್ನು ಒಳಗೊಂಡ ಸ್ಟಿಕರ್ ಅನ್ನು ಆ ಮನೆಯ ಬಾಗಿಲಿಗೆ ಅಂಟಿಸಲಾಗುತ್ತದೆ. ಹೀಗೆ ಎಲ್ಲಾ ಮನೆಗಳಿಗೆ ಐಡಿಗಳನ್ನು ನೀಡಲಾಗುತ್ತಿದೆ.

### ಜಿಲ್ಲೆಯಲ್ಲಿ 3.5 ಲಕ್ಷ ಮನೆ

ಜಿಲ್ಲೆಯಲ್ಲಿ 3.5 ಲಕ್ಷ ಮನೆಗಳಿದ್ದು, ಪ್ರತಿ 150 ಮನೆಗಳಿಗೆ ಒಬ್ಬರಂತೆ ಗಣತಿದಾರರನ್ನು ನೇಮಕ ಮಾಡಲಾಗುತ್ತಿದೆ. ಇದಕ್ಕಾಗಿ ಅಂದಾಜು 3 ಸಾವಿರ ಗಣತಿದಾರರನ್ನಾಗಿ ಶಿಕ್ಷಕರನ್ನು ಆಯ್ಕೆ ಮಾಡಲಾಗಿದೆ. ಪ್ರತಿ 20 ಗಣತಿದಾರರಿಗೆ ಒಬ್ಬರು ಮೇಲ್ವಿಚಾರಕರನ್ನು ನೇಮಿಸಲಾಗುತ್ತಿದೆ. ಜೆಸ್ಕಾಂ ಸಿಬ್ಬಂದಿ ಅಂಟಿಸುವ ಸ್ಟಿಕರ್‌ಗಳನ್ನು ಜನರು ತೆಗೆದು ಹಾಕುವುದು, ಮುಚ್ಚುವುದು ಅಥವಾ ನಾಶ ಪಡಿಸುವ ಕೆಲಸ ಮಾಡಬಾರದು. ಒಂದು ವೇಳೆ ಈ ರೀತಿ ಮಾಡಿದಲ್ಲಿ ಸಮೀಕ್ಷೆ ಕಾರ್ಯಕ್ಕೆ ಅಡಚಣೆ ಉಂಟಾಗಲಿದ್ದು, ಸಮೀಕ್ಷೆ ಕಾರ್ಯದ ದತ್ತಾಂಶ ಸಂಗ್ರಹಕ್ಕೆ ಅಡಚಣೆ ಉಂಟಾಗಲಿದೆ.

# ರಾಜ್ಯದಲ್ಲಿ 2ನೇ ಟಿಪ್ಪು ಸುಲ್ತಾನ್ ಆಳ್ವಿಕೆ: ವಿಧಾನ ಪರಿಷತ್ ಸದಸ್ಯ ರವಿಕುಮಾರ್

• ಉದಯವಾಹಿನಿ ಶಿವಮೊಗ್ಗ


ರಾಜ್ಯದಲ್ಲಿ ಎರಡನೇ ಟಿಪ್ಪು ಸುಲ್ತಾನ್ ಆಳ್ವಿಕೆ ನಡೆಯುತ್ತಿದೆ ಎನಿಸುತ್ತಿದೆಯೇ ವಿನಾ ಸಿದ್ದರಾಮಯ್ಯ ಅವರ ಆಡಳಿತ ಇದೆ ಎನಿಸುತ್ತಿಲ್ಲ. ಇದನ್ನು ಕೆಲವು ಕಿಡಿಗೇಡಿಗಳು ನಮ್ಮ ಸರಕಾರ ಎನ್ನುತ್ತಿದ್ದಾರೆ ಎಂದು ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ ರವಿಕುಮಾರ್ ತಿಳಿಸಿದರು.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಬ್ಬವೆಂದರೆ ಸಂಭ್ರಮ ಮನೆ ಮಾಡಿರುತ್ತದೆ. ನಾಡಹಬ್ಬ ದಸರಾ, ರಾಷ್ಟ್ರೀಯ ಹಬ್ಬ ಗಣಪತಿ ಉತ್ಸವಕ್ಕೆ ಸಿದ್ದರಾಮಯ್ಯ ಸರಕಾರ ವಿಘ್ನ ತಂದಿದೆ. ಈ ವಿಘ್ನ ನಿವಾರಣೆ ಆಗಬೇಕಾದರೆ ಆದಷ್ಟು ಬೇಗ ಸರಕಾರ ತೊಲಗಬೇಕು ಎಂದು ಹೇಳಿದರು.

**ಚಾಮುಂಡಿ ಬೆಟ್ಟ ಮುಸ್ಲಿಮರದ್ದಾ, ಟಿಪ್ಪುವಿನದ್ದಾ ಅಥವಾ ಹೈದರಾಲಿಯದ್ದಾ?:** ಚಾಮುಂಡಿ ಬೆಟ್ಟ ಹಿಂದೂಗಳದ್ದಲ್ಲ ಎಂದು ಕಾಂಗ್ರೆಸ್ ಹೇಳಿದೆ. ಹಾಗಾದರೆ, ಅದು ಮುಸ್ಲಿಮರದ್ದಾ, ಟಿಪ್ಪುವಿನದ್ದಾ ಅಥವಾ ಹೈದರಾಲಿಯದ್ದಾ? ಎಂದು ಪ್ರಶ್ನಿಸಿದ ಅವರು, ಮದ್ದೂರಿನಲ್ಲಿ ನಡೆದಿರುವುದು ಪೂರ್ವನಿಯೋಜಿತ ಕೃತ್ಯ. ಘಟನೆ ವೇಳೆ ಕರೆಂಟ್ ತೆಗೆಯಲಾಗಿತ್ತು. ದೊಣ್ಣೆ, ಕಲ್ಲುಗಳನ್ನು ಮುಂಚೆಯೇ ದಾಸ್ತಾನು ಮಾಡಲಾಗಿತ್ತು. ಇದನ್ನು ಮುಸ್ಲಿಂ ಸಮುದಾಯದ ಕೆಲವರು ಒಪ್ಪಿಕೊಂಡಿದ್ದಾರೆ. ಬಹಳಷ್ಟು ಮುಸ್ಲಿಮರು ಒಳ್ಳೆಯವರಿದ್ದಾರೆ. ಆದರೆ, ಕೆಲವರು ಗಲಭೆಗಳನ್ನು ಸೃಷ್ಟಿಸಿದ್ದಾರೆ ಎಂದರು. ಈ ಘಟನೆಗೆ ಬಿಜೆಪಿ, ಬಜರಂಗ ದಳದ ಕುಮ್ಮಕ್ಕು ನೀಡಿದೆ ಎಂದು ಕಾಂಗ್ರೆಸ್ ಆರೋಪಿಸುತ್ತಿದೆ. ಗಣಪತಿ ಹಬ್ಬಕ್ಕೆ ತೊಂದರೆ ನೀಡುತ್ತಿರುವುದು ಕಾಂಗ್ರೆಸ್ ವಿನಾ ಬಿಜೆಪಿಯಲ್ಲ. ಚಿತ್ರದುರ್ಗದಲ್ಲಿ ಡಿಜೆಗೆ ಅನುಮತಿ ನೀಡುತ್ತಿಲ್ಲ. ನಾವೇನು ಶವ ಯಾತ್ರೆ ಮಾಡುತ್ತಿದ್ದೇವಾ? ಗಣಪತಿ ಉತ್ಸವ ನಡೆಯುವ ಕಡೆ ಅಗತ್ಯವಿದ್ದರೆ ಹೆಚ್ಚು ಪೊಲೀಸರನ್ನು ನಿಯೋಜಿಸಲಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಲು ಯಾರು ಕಾರಣ ಎಂಬ ಮಾಹಿತಿ ನಿಮ್ಮ ಬಳಿ ಇಲ್ವ? ಸರಕಾರ ಇದೇ ರೀತಿಯ ಧೋರಣೆ ಮುಂದುವರಿಸಿದರೆ ಬಹುದೊಡ್ಡ ಪ್ರತಿಭಟನೆ ಮಾಡಲಾಗುವುದು ಎಂದರು.

**ಶೀಘ್ರ ದಿನಾಂಕ ನಿಗದಿ ಮಾಡಿ:** ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ವರ್ ಅವರು ಮುಸ್ಲಿಮರಾಗಲು ಶೀಘ್ರ ದಿನಾಂಕ ನಿಗದಿ ಮಾಡಬೇಕು ಎಂದು ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ ರವಿಕುಮಾರ್ ಆಗ್ರಹಿಸಿದರು. ಅವರು ರಾಜಕೀಯವಾಗಿ ಇಷ್ಟೊಂದು ಎತ್ತರಕ್ಕೆ ಬೆಳೆಯಲು ಕಾರಣ ಹಿಂದೂ ಸಮಾಜ. ಆದರೆ, ಅವರು ಮುಂದಿನ ಜನ್ಮದಿನದಲ್ಲಿ ಮುಸ್ಲಿಮರಾಗಿ ಹುಟ್ಟುವ ಆಸೆ ವ್ಯಕ್ತಪಡಿಸಿದ್ದಾರೆ. ಹೀಗಾಗಿ, ಆದಷ್ಟು ಬೇಗ ದಿನ ನಿಗದಿಪಡಿಸಬೇಕು ಎಂದರು.

- ರಾಜ್ಯದಲ್ಲಿ ಎರಡನೇ ಟಿಪ್ಪು ಸುಲ್ತಾನ್ ಆಳ್ವಿಕೆ ನಡೆಯುತ್ತಿದೆ ಎಂದ ಬಿಜೆಪಿ ಮುಖಂಡ.
- ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ ರವಿಕುಮಾರ್ ಸರ್ಕಾರದ ವಿರುದ್ಧ ಟೀಕೆ
- ಚಾಮುಂಡಿ ಬೆಟ್ಟ ಮುಸ್ಲಿಮರದ್ದಾ, ಟಿಪ್ಪುವಿನದ್ದಾ ಅಥವಾ ಹೈದರಾಲಿಯದ್ದಾ? ಎಂದು ರವಿಕುಮಾರ್ ಪ್ರಶ್ನೆ.



# ಖಾಸಗಿ ಶಿಕ್ಷಣ ಸಂಸ್ಥೆಗಳ ಬೇಡಿಕೆ ಈಡೇರಿಕೆಗೆ ಆಗ್ರಹ

• ಉದಯವಾಹಿನಿ ಬೀದರ

ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಎಂಟು ಪ್ರಮುಖ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕು ಎಂದು ಅಖಿಲ ಕರ್ನಾಟಕ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘ ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ.

ಸಂಘದ ಪದಾಧಿಕಾರಿಗಳು ಬೆಂಗಳೂರಿನಲ್ಲಿ ಮಂಗಳವಾರ ನಿಯೋಗದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಈ ಕುರಿತು ಮನವಿ ಪತ್ರ ಸಲ್ಲಿಸಿದರು. ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಳ್ಳಲು ಕಲಬುರಗಿಗೆ ಬರುವ ಮುನ್ನ ಬೇಡಿಕೆಗಳ ಈಡೇರಿಕೆ ಸಂಬಂಧ ಘೋಷಣೆ ಮಾಡಬೇಕು ಎಂದು ಸಂಘದ ರಾಜ್ಯ ಅಧ್ಯಕ್ಷ ರೇವಣಸಿದ್ದಪ್ಪ ಜಲಾದೆ ಒತ್ತಾಯಿಸಿದರು.

1995 ರ ನಂತರ ಆರಂಭಿಸಲಾದ ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಖಾಸಗಿ ಶಾಲೆಗಳಲ್ಲಿ ಆರ್‌ಟಿಇ ಮರು ಜಾರಿಗೊಳಿಸಬೇಕು. ಅನುದಾನಿತ ಶಾಲೆ, ಕಾಲೇಜುಗಳ ಖಾಲಿ ಹುದ್ದೆ ಭರ್ತಿ ಮಾಡಬೇಕು.



ಉದಯವಾಹಿನಿ ಚಿತ್ರ

ಖಾಸಗಿ ಅನುದಾನ ರಹಿತ ಶಾಲೆ, ಕಾಲೇಜು ಕಟ್ಟಡಗಳಿಗೆ ಕರ ವಿನಾಯಿತಿ ನೀಡಬೇಕು. ಉಚಿತ ವಿದ್ಯುತ್ ಒದಗಿಸಬೇಕು. ಕನ್ನಡ ಶಾಲೆ ಬಂದ್ ಮಾಡಿ ಕರ್ನಾಟಕ ಪಬ್ಲಿಕ್ ಶಾಲೆ ಹೆಸರಲ್ಲಿ ಆಂಗ್ಲ ಮಾಧ್ಯಮ ಶಾಲೆ ತೆರೆಯುವುದನ್ನು ಕೈಬಿಡಬೇಕು.

ಕನ್ನಡ ಮಾಧ್ಯಮ ಶಾಲೆ, ಕಾಲೇಜುಗಳ ನವೀಕರಣ ಪ್ರಕ್ರಿಯೆ ಸರಳೀಕರಿಸಬೇಕು. ಕಲ್ಯಾಣ ಕರ್ನಾಟಕ ಭಾಗದ ಖಾಸಗಿ ಅನುದಾನ ರಹಿತ ಶಾಲೆ, ಕಾಲೇಜುಗಳಿಗೆ ಸಂವಿಧಾನದ 371 (ಜೆ) ತಿದ್ದುಪಡಿ ಕಾಯ್ದೆ ಅನ್ವಯ ಸೌಲಭ್ಯ ಕಲ್ಪಿಸಬೇಕು ಎನ್ನುವುದು ಪ್ರಮುಖ ಸಂಘದ ಪ್ರಮುಖ ಬೇಡಿಕೆಗಳಾಗಿವೆ ಎಂದು ಹೇಳಿದರು.

# ಆರೋಗ್ಯ ರಕ್ಷಣೆ ಸಎಲ್ಲರ ಜವಾಬ್ದಾರಿ: ಭುವನೇಶ



• ಉದಯವಾಹಿನಿ ಧಾರವಾಡ

ಸಾರ್ವಜನಿಕರ ಆರೋಗ್ಯ ರಕ್ಷಣೆಯು ಸರ್ಕಾರದ ಜವಾಬ್ದಾರಿ ಮಾತ್ರ ಅಲ್ಲ, ಎಲ್ಲಾ ನಾಗರಿಕರ ಜವಾಬ್ದಾರಿಯೂ ಆಗಿದೆ. ವೈರಲ್ ಹೆಪಟೈಟಿಸ್ ಕುರಿತು ಜಾಗೃತಿ ಮೂಡಿಸುವುದು, ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರ ಪೂರೈಸುವುದರ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ವೈರಲ್ ಹೆಪಟೈಟಿಸ್ ದಿನಾಚರಣೆ ಮತ್ತು ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು. ಗ್ರಾಮೀಣ ಜನರಿಗೆ ಹಾಗೂ ಕೊಳಚೆ ಪ್ರದೇಶಗಳಲ್ಲಿನ ಜನರಿಗೆ ಸಾಂಕ್ರಾಮಿಕ ಕಾಯಿಲೆಗಳ ಬಗ್ಗೆ ಅರಿವು ಮೂಡಿಸಬೇಕು. ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಸಹ ಮಾಡಬೇಕು.

ಈ ಕಾಯಿಲೆ ಬಂದಿದೆ ಎಂದು ಯಾರೂ ಭಯಪಡುವ ಅವಶ್ಯಕತೆ ಇರುವುದಿಲ್ಲ. ಅದಕ್ಕಾಗಿ ಸರಕಾರದವರು ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಅದರ ಸದುಪಯೋಗವನ್ನು ಎಲ್ಲರೂ ಪಡೆಯಬೇಕು ಎಂದು ಹೇಳಿದರು.

ಧಾರವಾಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಮ್.ಹೊನಕೇರಿ ಅವರು ಮಾತನಾಡಿ, ಇದು ಬೇಗನೆ ಎಲ್ಲರಿಗೂ ಹರಡುವ ರೋಗ. ಸಮಯಕ್ಕೆ ತಕ್ಕ ಚಿಕಿತ್ಸೆ, ಲಸಿಕೆ ಹಾಗೂ ಆರೋಗ್ಯಕರ ಜೀವನಶೈಲಿ ಅನುಸರಿಸುವ ಮೂಲಕ ತಡೆಗಟ್ಟಬಹುದು. ಆರೋಗ್ಯ ಇಲಾಖೆ ನಡೆಸುತ್ತಿರುವ ಜಾಗೃತಿ ಕಾರ್ಯಕ್ರಮಗಳಿಗೆ ಜನ ಸಹಕಾರ ನೀಡಿದರೆ, ಭವಿಷ್ಯದಲ್ಲಿ ಹೆಪಟೈಟಿಸ್ ಹಾಗೂ ಕ್ಷಯರೋಗ ನಿರ್ಮೂಲನೆ ಸಾಧ್ಯವಾಗುತ್ತದೆ ಎಂದು ಹೇಳಿದರು. ಕ್ಷಯರೋಗಿಗಳಿಗಾಗಿ ನೀಡಲಾಗುತ್ತಿರುವ ಪೌಷ್ಠಿಕ ಆಹಾರವು ಅವರ ದೇಹದ ಶಕ್ತಿ ಹೆಚ್ಚಿಸಲು ನೆರವಾಗುತ್ತದೆ. ಹೆಪಟೈಟಿಸ್ ದಿನಾಚರಣೆಯ ಅಂಗವಾಗಿ ಜನರಲ್ಲಿ ರೋಗದ ಕಾರಣಗಳು, ತಡೆಗಟ್ಟುವ ಕ್ರಮಗಳು ಮತ್ತು ಚಿಕಿತ್ಸೆಯ ಕುರಿತು ಅರಿವು ಮೂಡಿಸುವುದು ನಮ್ಮ ಉದ್ದೇಶ ಎಂದು ಹೇಳಿದರು.

# ಪಟ್ಟಣದ ಅಂಚೆ ಕಛೇರಿಯಲ್ಲಿ ವಿದ್ಯುತ್ ಇದ್ದರೆ ಮಾತ್ರ ಕೆಲಸ: ಸಿಬ್ಬಂದಿಗಳಿಗೆ ಸಮಯಕ್ಕೆ ಸರಿಯಾಗಿ ಊಟ

• ಉದಯವಾಹಿನಿ ಚಡಚಣ

ಸ್ಥಳೀಯ ಮುಖ್ಯ ಅಂಚೆ ಕಛೇರಿಯಲ್ಲಿ ಬ್ಯಾಟರಿಗಳು ಸಂಪೂರ್ಣವಾಗಿ ಕೆಟ್ಟು ಹೋಗಿದ್ದು, ಸಾರ್ವಜನಿಕರು ಯಾವುದೇ ಕೆಲಸದ ನಿಮಿತ್ಯವಾಗಿ ಅಂಚೆ ಕಛೇರಿಗೆ ಹೋದರೆ, ವಿದ್ಯುತ್ ಇದ್ದರೆ ಮಾತ್ರ ಅವರ ಕೆಲಸ ಕಾರ್ಯಗಳು ಆಗುತ್ತವೆ. ಇಲ್ಲವಾದರೆ ವಿದ್ಯುತ್ ಬರುವವರೆಗೆ ಅವರು ಕಾಯಲೇಬೇಕು. ಏಕೆಂದರೆ ಕೆಟ್ಟು ಹೋಗಿರುವ ಬ್ಯಾಟರಿ, ಜನರೇಟರ್ ಇಲ್ಲದ ಕಾರಣ ಕಂಪ್ಯೂಟರ್, ಪ್ರಿಂಟರ್ ಕಾರ್ಯನಿರ್ವಹಿಸುವದಿಲ್ಲ. ನಮಗೆ ತುರ್ತು ಕೆಲಸ ಇದೆ ಎಂದು ಸಾರ್ವಜನಿಕರು ಹೇಳಿದರೆ, ಅಲ್ಲಿನ ಸಿಬ್ಬಂದಿಯ ಉತ್ತರ ಮಾತ್ರ ವಿದ್ಯುತ್ ಇಲ್ಲ. ವಿದ್ಯುತ್ ಬಂದ ಮೇಲೆ ನಿಮ್ಮ ಕೆಲಸ ಮಾಡುತ್ತೇವೆ ಎಂದು ನಿರ್ದಾಕ್ಷಿಣ್ಯವಾಗಿ ಹೇಳುತ್ತಾರೆ. ಮತ್ತು ಕುಳಿತುಕೊಳ್ಳಿ ಎಂಬ ಉತ್ತರ ಅಲ್ಲಿ ಕುಳಿತುಕೊಳ್ಳಲಿಕ್ಕೆ ಆಸನದ ವ್ಯವಸ್ಥೆ ಕೂಡಾ ಇಲ್ಲದಿರುವದು ಎದ್ದು ಕಾಣುತ್ತದೆ, ಅದು ಕಸದ ರಾಶಿ ತುಂಬಿರುವ ಸ್ವಚ್ಛತೆ ಇಲ್ಲದ ನೆಲದ ಮೇಲೆ ಕುಳಿತುಕೊಳ್ಳಬೇಕು.2 ಗಂಟೆ ಬಿಟ್ಟರು ಅಷ್ಟೆ ಅಲ್ಲ ಅಂಚೆ ಕಛೇರಿ ಅವಧಿ ಮುಗಿದರು ಅಲ್ಲೆ ಕುಳಿತಲ್ಲಿಯೆ ಕುಳಿತುಕೊಳ್ಳಬೇಕು.

ಒಟ್ಟಾರೆಯಾಗಿ ಸರಿಯಾಗಿ ಕೇಂದ್ರ ಸರಕಾರದ ಬ್ಯಾಂಕ್ ಮಾರ್ಗಸೂಚಿ ನಿಯಮಾವಳಿಗಳನ್ನು ಪಾಲಿಸದೆ ಇರುವದು ಎದ್ದು ಕಾಣುತ್ತದೆ ಇವರಿಗೆ ಸರಿಯಾದ ಕೌಶಲ್ಯ ತರಬೇತಿ ಪಡೆಯದೆ ಇರುವದು ಎದ್ದು ಕಾಣುತ್ತದೆ. ಗ್ರಾಹಕರಿಗೆ ಮೂಲಭೂತ ಸೌಕರ್ಯಗಳು ಇಲ್ಲದೆಇರುವದು ಸ್ವಚ್ಛವಾದ ಕುಡಿಯುವ ನೀರಿನ ವ್ಯವಸ್ಥೆ, ಮೂತ್ರಾಲಯ ಇಲ್ಲದಿರುವದು ಕೇಳಿದರೆ ಹಳ್ಳದ ದಂಡೆಗೆ ಹೋಗಿರಿ ಎಂಬ ಉಡಾಫೆ ಉತ್ತರ ಮಾತ್ರ ಸಿಗುತ್ತದೆ. ಯಾವೊಬ್ಬ ಅಧಿಕಾರಿ,ಸಿಬ್ಬಂಧಿ ಸರಿಯಾದ ಮಾಹಿತಿ ನೀಡದೆ ಕಳಿಸುತ್ತಾರೆ. ಇಲ್ಲಿಯ ಸಿಬ್ಬಂಧಿ ಹಾಗೂ ಅಧಿಕಾರಿಯನ್ನು ಕೂಡಲೆ ವರ್ಗಾವಣೆ ಮಾಡಬೇಕೆಂದು ಸಾರ್ವಜನಿಕರ ಆಗ್ರಹವಾಗಿದೆ.

ಕೇಂದ್ರ ಸರಕಾರ ಕೋಟ್ಯಾಂತರ ರೂ. ಖರ್ಚುಮಾಡಿ ಎಲ್ಲಾ ಅಂಚೆ ಕಛೇರಿಗಳಿಗೆ ಯು.ಪಿ.ಎಸ್. ಹಾಗೂ ಜನರೇಟರ್ ವ್ಯವಸ್ಥೆ ಕಲ್ಪಿಸಿದ್ದಾರೆ. ಆದರೆ ಪಟ್ಟಣದ ಅಂಚೆ ಕಛೇರಿಯಲ್ಲಿ ಜನರೇಟರ್ ಹಾಗೂ ಬ್ಯಾಟರಿಗಳು ಕೆಟ್ಟು ಹೋದರೂ ಕೂಡ ಇಲ್ಲಿನ ಸಿಬ್ಬಂದಿ ಅದರ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ. ಇನ್ನು ಸಾರ್ವಜನಿಕರು ಅಲ್ಲಿಯೇ ಕಾಯ್ದು ಕುಳಿತಿದಿದ್ದರೂ ಕೂಡ ವಿದ್ಯುತ್ ಬಂದಿದೆ ಎಂದು ಹೇಳಿದಾಗ ಸಧ್ಯ ನಮ್ಮ ಊಟದ ಸಮಯ. ಇನ್ನು 1 ಗಂಟೆ ಬಿಟ್ಟು ಬನ್ನಿ ಎಂದು ಹೇಳುತ್ತಾರೆ. ವಯೋವೃದ್ದರು ಬಂದರೆ ಕೈಗೆ ಫಾರ್ಮ ಕೊಟ್ಟು ಇದನ್ನು ತುಂಬಿ ಕೊಡಿ ಎಂದು ಹೇಳುತ್ತಾರೆ. ಇದರಿಂದಾಗಿ ವಯೋವೃದ್ಧರಿಗೆ ಫಾರ್ಮ ತುಂಬಿ ಕೊಡುವವರು ಯಾರೂ ಸಿಗದಿದ್ದರೆ ಇವರ ಗತಿ ಆ ದೇವರೆ ಬಲ್ಲ.




ಉದಯವಾಹಿನಿ ಚಿತ್ರ

### ಸಾರ್ವಜನಿಕರ ಆಗ್ರಹ

ಇಂತಹ ಅವ್ಯವಸ್ಥೆಯ ಆಗರವಾಗಿರುವ ಪಟ್ಟಣದ ಮುಖ್ಯ ಅಂಚೆ ಕಛೇರಿಯ ಸಿಬ್ಬಂದಿ ಹಾಗೂ ಅಧಿಕಾರಿಗಳು ಇನ್ನಾದರೂ ಎಚ್ಚೆತ್ತುಕೊಂಡು ವಯೋವೃದ್ಧರ ಮೇಲೆ ಕೊಂಚಿತ್ತಾದರೂ ಕರುಣೆ ತೋರಿ ಅವರ ಕೆಲಸಗಳನ್ನು ಬೇಗನೆ ಮಾಡಿ ಕೊಡಬೇಕು ಮತ್ತು ಕೆಟ್ಟು ಹೋಗಿರುವ ಜನರೇಟರ್, ಬ್ಯಾಟರಿಗಳ ಮಾಹಿತಿಯನ್ನು ಮೇಲಾಧಿಕಾರಿಗಳಿಗೆ ತಿಳಿಸಿ ಅವುಗಳನ್ನು ಸರಿಪಡಿಸಿಕೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

# ಸರ್ಕಾರಿ ವೈದ್ಯಕೀಯ ಕಾಲೇಜುಗಳ ಎನ್‌ಆರ್‌ಐ ಕೋಟಾ ರದ್ದುಪಡಿಸಲು ಆಗ್ರಹ

• ಉದಯವಾಹಿನಿ ಕಲಬುರಗಿ

ಎಐಡಿಎಸ್‌ಓ ಸಂಘಟನೆ ನೇತೃತ್ವದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಎನ್.ಆರ್.ಐ ಕೋಟಾ ರದ್ದುಪಡಿಸಲು ಆಗ್ರಹಿಸಿ ನಗರದ ಎಸ್‌ವಿಪಿ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ಜಿಲ್ಲಾಧಿಕಾರಿ ಕಚೇರಿ ಎದುರುಗಡೆ ಪ್ರತಿಭಟನೆಯನ್ನು ಉದ್ದೇಶಿಸಿ ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ತುಳಜರಾಮ ಎನ್.ಕೆ ಅವರು, ಮಾತನಾಡಿ ಇದೇ 2025-26ನೇ ಸಾಲಿನಿಂದ ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 15% ಎನ್.ಆರ್.ಐ ಕೋಟಾವನ್ನು ಆರಂಭಿಸುವ ಕರ್ನಾಟಕ ರಾಜ್ಯ ಸರ್ಕಾರದ ನಿರ್ಧಾರವು ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಅತ್ಯುಗ್ರವಾಗಿ ಖಂಡಿಸುತ್ತದೆ ಇದನ್ನು ಕೂಡಲೇ ರದ್ದು ಪಡಿಸುವಂತೆ ಅವರು ಒತ್ತಾಯಿಸಿದರು. ವೈದ್ಯಕೀಯ ಶಿಕ್ಷಣದ ಕನಸು ಹೊತ್ತ ರಾಜ್ಯದ ಬಡ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಬಹುದೊಡ್ಡ ಅನ್ಯಾಯ ಮಾಡುತ್ತಿದೆ. ಈಗಾಗಲೇ ಅಖಿಲ ಭಾರತ ಕೋಟಾದಡಿ 15% ಸೀಟುಗಳನ್ನು ನೀಡಲಾಗುತ್ತಿದೆ. ಇನ್ನೂ 15% ಸೀಟುಗಳು ಎನ್‌ಆರ್ಐ ಕೋಟಾಗೆ ನೀಡಿದರೆ 200 ವಿದ್ಯಾರ್ಥಿಗಳ ಒಂದು ಬ್ಯಾಚಿನಲ್ಲಿ ಕೇವಲ 140 ಸೀಟುಗಳು ಮಾತ್ರ ರಾಜ್ಯದ ವಿದ್ಯಾರ್ಥಿಗಳಿಗೆ ಉಳಿದಂತಾಗುತದೆ. ಸರ್ಕಾರಿ ವೈದ್ಯಕೀಯ ಕಾಲೇಜುಗಳು ಆರ್ಥಿಕ ಹಿನ್ನೆಲೆಯನ್ನು ಲೆಕ್ಕಿಸದೆ ಅರ್ಹ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉನ್ನತ ಶಿಕ್ಷಣವನ್ನು ಒದಗಿಸಲು ಸ್ಥಾಪಿಸಲಾಗಿದೆ. ಶ್ರೀಮಂತ ಎನ್.ಆರ್.ಐ ವಿದ್ಯಾರ್ಥಿಗಳಿಗೆ ಸೀಟುಗಳನ್ನು ಮೀಸಲಿಡುವ ಮೂಲಕ, ವೈದ್ಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸಲು ಬಯಸುವ ನೂರಾರು ಪ್ರತಿಭಾವಂತ ವಿದ್ಯಾರ್ಥಿಗಳ ಅವಕಾಶವನ್ನು ರಾಜ್ಯ ಸರ್ಕಾರವು ಮೊಟಕುಗೊಳಿಸುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.




ಉದಯವಾಹಿನಿ ಚಿತ್ರ

# ನಾಟಿ ಚಿಕಿತ್ಸೆಗೆ ಕಡಿವಾಣ

• ಉದಯವಾಹಿನಿ ದಾವಣಗೆರೆ

ಜಿಲ್ಲೆಯ ಜಗಳೂರು ತಾಲ್ಲೂಕಿನ ಗಡಿಮಾಕುಂಟೆ ಗ್ರಾಮದ 13 ವರ್ಷ ವಯಸ್ಸಿನ ಬಾಲಕಿಗೆ ಜಮೀನಿನಲ್ಲಿ ಹಾವೊಂದು ಕಚ್ಚಿದೆ. ಪಾಲಕರು ಸಮೀಪದ ಸೊಕ್ಕೆ ಗ್ರಾಮಕ್ಕೆ ಕರೆದೊಯ್ದು ನಾಟಿ ಔಷಧ ಕೊಡಿಸಿದ್ದಾರೆ. ಆರೋಗ್ಯದಲ್ಲಿ ಚೇತರಿಕೆ ಕಾಣದಿದ್ದಾಗ ಆಸ್ಪತ್ರೆಗೆ ಸಾಗಿಸಲು ಯತ್ನಿಸಿದ್ದಾರೆ. ಆದರೆ, ಮಾರ್ಗ ಮಧ್ಯೆ ಬಾಲಕಿ ಮೃತಪಟ್ಟಿದ್ದಾಳೆ. ನ್ಯಾಮತಿ ತಾಲ್ಲೂಕಿನ ಬೆಳಗುತ್ತಿ ಗ್ರಾಮದ 52 ವರ್ಷ ವಯಸ್ಸಿನ ರೈತ ಮೆಕ್ಕೆಜೋಳದಲ್ಲಿ ಕಳೆ ತೆಗೆಯುವಾಗ ಹಾವು ಕಚ್ಚಿದೆ. ಸಮೀಪದ ಆರುಂಡಿ ಗ್ರಾಮಕ್ಕೆ ಕರೆದೊಯ್ದು ನಾಟಿ ಔಷಧ ಕೊಡಿಸಲಾಗಿದೆ. ಆರೋಗ್ಯದಲ್ಲಿ ಸುಧಾರಣೆ ಕಾಣದಿದ್ದಾಗ ಆಸ್ಪತ್ರೆಗೆ ದಾಖಲಿಸಲಾಗಿದೆ. ಚಿಕಿತ್ಸೆಗೆ ಸ್ಪಂದಿಸದೇ ರೈತ ಮೃತಪಟ್ಟಿದ್ದಾರೆ.

ಹಾವು ಕಚ್ಚಿದಾಗ ನಾಟಿ ಚಿಕಿತ್ಸೆ, ಸಾಂಪ್ರದಾಯಿಕ ಔಷಧ ಪಡೆಯುವ ಬದಲು ಸಮೀಪದ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದ್ದರೆ ಈ ಎರಡು ಜೀವಗಳು ಬದುಕುಳಿಯುವ ಸಾಧ್ಯತೆ ಹೆಚ್ಚಿತ್ತು. ಮೂಢನಂಬಿಕೆಗೆ ಕಟ್ಟುಬಿದ್ದು ವೈಜ್ಞಾನಿಕ ಚಿಕಿತ್ಸೆ ನಿರ್ಲಕ್ಷಿಸಿದ್ದೇ ಈ ಸಾವಿಗೆ ಕಾರಣ ಎಂಬುದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪರಿಶೀಲನೆಯಲ್ಲಿ ದೃಢಪಟ್ಟಿದೆ. ಜಿಲ್ಲೆಯಲ್ಲಿ ಆಗಸ್ಟ್ 31ರವರೆಗೆ ಹಾವು ಕಚ್ಚಿದ 426 ಪ್ರಕರಣಗಳು ದಾಖಲಾಗಿವೆ. ಇದರಲ್ಲಿ ಮೂವರು ಮೃತಪಟ್ಟಿದ್ದಾರೆ. ಇಬ್ಬರು ನಾಟಿ ಚಿಕಿತ್ಸೆ ಪಡೆದು ಪ್ರಾಣ ಕಳೆದುಕೊಂಡಿರುವುದನ್ನು ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆ ಗಂಭೀರವಾಗಿ ಪರಿಗಣಿಸಿದೆ. ನಾಟಿ ಔಷಧ ನೀಡುವವರಿಗೆ ಎಚ್ಚರಿಕೆ ನೀಡಲಾಗುತ್ತಿದ್ದು, ಪ್ರಕರಣ ದಾಖಲಿಸುವ ಬಗ್ಗೆಯೂ ಆಲೋಚಿಸುತ್ತಿದೆ.

• ಪ್ರಜಾತತ್ವ ಮಾನವ ಹಕ್ಕುಗಳ ಫೌಂಡೇಶನ್ ಸಂಸ್ಥಾಪಕ ರಾಜ್ಯಾಧ್ಯಕ್ಷ ನಾರಾಯಣರೆಡ್ಡಿ ಅಭಿಮತ

# ಸಮಾಜದಲ್ಲಿ ಅಳಿಲು ಸೇವೆ,ಹಾಗೂ ಬದಲಾವಣೆ ತರಲು ಸಣ್ಣ ಪ್ರಯತ್ನ

• ಉದಯವಾಹಿನಿ ಚಿಂಚೋಳಿ

ಸಮಾಜದಲ್ಲಿ ಅಳಿಲು ಸೇವೆ ಮಾಡಲು ಹಾಗೂ ಸಮಾಜ ಬದಲಾವಣೆ ತರಲು ಸಣ್ಣ ಪ್ರಯತ್ನ ಮಾಡಲು ರೈತರಿಗೆ,ಬಡವರಿಗೆ, ಧ್ವನಿ ಇಲ್ಲದವರ ಪರವಾಗಿ ಧ್ವನಿ ಎತ್ತಿ ನ್ಯಾಯ ಕೊಡಿಸುವ ಪ್ರಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಪ್ರಜಾತತ್ವ ಮಾನವ ಹಕ್ಕುಗಳ ಪೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ನಾರಾಯಣರೆಡ್ಡಿ ಹೇಳಿದರು. ನಗರದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡ ಪ್ರಜಾತತ್ವ ಮಾನವ ಹಕ್ಕುಗಳ ಪೌಂಡೇಶನ್ ಸಂಘಟನೆಯ ತಾಲ್ಲೂಕಾ ಪದಾಧಿಕಾರಿಗಳ ನೇಮಕ ಹಾಗೂ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು,ಸಮಾಜದಲ್ಲಿ ಸಾರ್ವಜನಿಕರಿಗೆ,ಬಡವರಿಗೆ ರೈತರಿಗೆ,ನಿರ್ಗತಿಕರಿಗೆ ಅನುಕೂಲ ಕಲ್ಪಿಸಿಕೊಡಲು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳು ಜನರಿಗೆ ತಲುಪಿಸಲು ಪ್ರಜಾತತ್ವ ಮಾನವ ಹಕ್ಕುಗಳ ಪೌಂಡೇಶನ್ ಸಂಘಟನೆ ಕೆಲಸ ಮಾಡಲಾಗುತ್ತದೆ.

ಈಗಾಗಲೇ ಸಂಘಟನೆಯಲ್ಲಿ 15 ಜಿಲ್ಲೆಗಳು ಪ್ರವಾಸ ಮಾಡಿದ್ದು 5 ಸಾವಿರಕ್ಕೂ ಹೆಚ್ಚು ಪದಾಧಿಕಾರಿಗಳು ನೇಮಕ ಮಾಡಲಾಗಿದೆ,ಪದಾಧಿಕಾರಿಗಳು ಒಗ್ಗಟ್ಟಾಗಿ ಹೋರಾಟ ಮಾಡಿ ಜನರಿಗೆ ನ್ಯಾಯ ದೊರಕಿಸಿಕೊಡುವುದೆ ಪ್ರಜಾತತ್ವ ಮಾನವ ಹಕ್ಕುಗಳ ಫೌಂಡೇಷನ್ ಸಂಘಟನೆಯ ಮೂಲ ಉದ್ದೇಶವಾಗಿದೆ.

ಯಾವ ಇಲಾಖೆಯಿಂದ ಅನ್ಯಾಯವಾಗಿದೆ ಆಯಾ ಇಲಾಖೆ ಎದುರು ಹೋರಾಟ ಮಾಡಿ ನ್ಯಾಯ ಒದಗಿಸುವುದೆ ಪದಾಧಿಕಾರಿಗಳ ಕೆಲಸವಾಗಿದೆ, ಯಾರಿಗೂ ಬ್ಲಾಕ್ಮೇಲ್ ಮಾಡುವುದು,ಹೆದರಿಸುವುದು, ಬೆದರಿಸುವುದು ನಮ್ಮ ಸಂಘಟನೆಯಲ್ಲಿ ಇಲ್ಲ ಅಂಥವರು ಕಂಡುಬಂದರೆ ತಕ್ಷಣವೇ ಅವರ ವಿರುದ್ಧವು ಕ್ರಮ ಕೈಗೊಳ್ಳಲಾಗುವುದು. ಬಡವ ಶ್ರೀಮಂತ ಅನ್ನದೆ ಜಾತ್ಯಾತೀತ ಮನೋಭಾವ ಇಟ್ಟುಕೊಂಡು ಪ್ರತಿಯೊಂದು ಸಮೂದಾಯದ ಜನರನ್ನು ಒಗ್ಗೂಡಿಸಿ ಯಾರಿಗೂ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು ಎಂದರು.

ಪ್ರಜಾತತ್ವ ಮಾನವ ಹಕ್ಕುಗಳ ಫೌಂಡೇಷನ್ ಸಂಘಟನೆಯ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಆಶಾರಾಣಿ ಮಾತನಾಡಿ ಅನ್ಯಾಯದ ವಿರುದ್ಧ ಹೋರಾಟ ನಡೆಸಿ ನ್ಯಾಯ ಒದಗಿಸುವುದೆ ಸಂಘಟನೆಯ ಉದ್ದೇಶವಾಗಿದೆ. ಕಳಪೆ ಕಾಮಗಾರಿ,ಮಹಿಳೆಯರ ಮೇಲೆ ದೌರ್ಜನ್ಯ,ಪುರುಷರಿಗೆ ಅನ್ಯಾಯ,ಜಾತಿಗಳಿಗೆ ಅನ್ಯಾಯ,ಭ್ರಷ್ಟ ಅಧಿಕಾರಿಗಳ ವಿರುದ್ಧ ಹೋರಾಟ, ಬಡವರಿಗೆ ನ್ಯಾಯ,ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳುವುದು, ಸೇರಿದಂತೆ ಹೀಗೆ ಹತ್ತಾರು ಕೆಲಸಗಳು ನ್ಯಾಯಯುತವಾಗಿ ನಮ್ಮ ಸಂಘಟನೆ ಕಾರ್ಯಕರ್ತರು ಮಾಡಬೇಕು ರಾಜ್ಯಾದ್ಯಂತ ಮಾಡುತ್ತಿದ್ದಾರೆ. ಸ್ಥಳೀಯ ಸಮಸ್ಯೆಗಳು ಬಗೆಹರಿಸುವ ನಿಟ್ಟಿನಲ್ಲಿ ತಾಲ್ಲೂಕಾ ಮಟ್ಟದಿಂದ ಸಂಘಟನೆ ಮಾಡಲಾಗುತ್ತಿದೆ, ತಾಲ್ಲೂಕಾ ಮಟ್ಟದ ಪದಾಧಿಕಾರಿಗಳು ತಾಲ್ಲೂಕಿನ ಸಮಸ್ಯೆಗಳು ಆಯಾ ಇಲಾಖೆಯ ತಾಲ್ಲೂಕಾ ಅಧಿಕಾರಿಗಳ ಜೊತೆ ಚರ್ಚಿಸಿ ಸಮಸ್ಯೆ ಪರಿಹರಿಸಬೇಕು ಸಮಸ್ಯೆಗೆ ಸ್ವಂದನೆ ಆಗದೆಯಿದ್ದಲ್ಲಿ ಆಯಾ ಇಲಾಖೆ ಎದುರು ಹೋರಾಟದ ಮೂಲಕ ಸಮಸ್ಯೆಗೆ ಪರಿಹಾರ ದೊರಕುತ್ತದೆ ಇಲ್ಲಾದಿದ್ದರೆ ಕೊನೆಯಲ್ಲಿ ಜಿಲ್ಲಾ ಘಟಕ ಜಿಲ್ಲೆಯಲ್ಲಿ ಹೋರಾಟ, ಇಲ್ಲಾದಿದ್ದರೆ ರಾಜ್ಯದ ಕೇಂದ್ರ ಸ್ಥಾನದಲ್ಲಿ ಆಯಾ ಇಲಾಖೆಯ ಎದುರು ಹೋರಾಟದ ಮೂಲಕ ಸಮಸ್ಯೆಗೆ ಪರಿಹಾರ ದೊರಕುತ್ತದೆ,ಇಲ್ಲಾದಿದ್ದರೆ ಕೊನೆಯಲ್ಲಿ ಕಾನೂನು ಹೋರಾಟದ ಮೂಲಕ ನ್ಯಾಯ ದೊರಕಿಸಿ ಕೊಡಲಾಗುವುದು ಎಂದರು.

ಪ್ರಜಾತತ್ವ ಮಾನವ ಹಕ್ಕುಗಳ ಫೌಂಡೇಶನ್ ಕಾರ್ಯಕಾರಣಿ ಸಮಿತಿ ಅಧ್ಯಕ್ಷ ಉಮೇಶ ಕೆ.ಸಿ ಹಾಗೂ ಮಹಿಳಾ ಅಧ್ಯಕ್ಷೆ ಮಂಜುಳಾ ಮಾತನಾಡಿದರು.

ಸೂರ್ಯಕಾಂತ ಹುಲಿ, ರೇವಣಸಿದ್ದಪ್ಪಾ ದಾದಾಪುರ, ವಿಜಯಕುಮಾರ ಬೆಳಕೇರಿ, ಚಂದ್ರಶೇಖರ ಪಾರಾ, ಸಿದ್ದಣ್ಣ ಟೇಲರ್,ನಾಗರಾಜ ಕಾಳಗಿ, ಜಗನ್ನಾಥ ಬೀರನಳ್ಳಿ, ಸೋಮಶೇಖರ ಮುಸ್ತಾರಿ,ಮಂಜುನಾಥ ಸ್ವಾಮಿ, ಸಂತೋಷ ಕಸಾಟೀ,ಪುಂಡಲಿಂಕ್ ಮಡಿವಾಳ ಇದ್ದರು.



ಉದಯವಾಹಿನಿ ಚಿತ್ರ

### 5 ಸಾವಿರಕ್ಕೂ ಹೆಚ್ಚು ಪದಾಧಿಕಾರಿಗಳ ನೇಮಕ

### ನೂತನ ಪದಾಧಿಕಾರಿಗಳ ನೇಮಕ

ಪ್ರಜಾತತ್ವ ಮಾನವ ಹಕ್ಕುಗಳ ಫೌಂಡೇಷನ್ ಸಂಘಟನೆ ತಾಲ್ಲೂಕಾ ಅಧ್ಯಕ್ಷ ಬಸವರಾಜ ಚನ್ನೂರ, ಗೌರವಾಧ್ಯಕ್ಷ ಸುರೇಶ ದೇಶಪಾಂಡೆ ಹಾಗೂ ಚನ್ನವೀರಪ್ಪಾ,ಉಪಾಧ್ಯಕ್ಷ ನರೇಶರೆಡ್ಡಿ, ಕಾರ್ಯದರ್ಶಿ ನಾಗರಾಜ ಪಾಟೀಲ,ಮಹಿಳಾ ಘಟಕ ಅಧ್ಯಕ್ಷೆ ಶಕುಂತಲಾ ಹುಲಿ ಪದಾಧಿಕಾರಿಗಳಾಗಿ ನೇಮಕ ಮಾಡಲಾಗಿದೆ ಎಂದು ಸಂಸ್ಥಾಪಕ ರಾಜ್ಯ ಅಧ್ಯಕ್ಷ ನಾರಾಯಣರೆಡ್ಡಿ ಘೋಷಣೆ ಮಾಡಿದರು.

## ಮಿನಿ ನ್ಯೂಸ್

### ಸರ್ಕಾರದ ಸೌಲಭ್ಯ ಪಡೆಯಲು 'ಬ್ರಾಹ್ಮಣ' ಎಂದು ನಮೂದಿಸಿ : ಬಿ.ಪಿ.ಕುಲಕರ್ಣಿ

• ಉದಯವಾಹಿನಿ ಮುದ್ದೇಬಿಹಾಳ



ರಾಜ್ಯ ಸರ್ಕಾರ ನಡೆಸುತ್ತಿರುವ ಶೈಕ್ಷಣಿಕ ಹಾಗೂ ಸಾಮಾಜಿಕ ಸಮೀಕ್ಷೆ ಜೊತೆಗೆ ಕೇಂದ್ರ ಸರ್ಕಾರದ ಜನಗಣತಿ ಪ್ರಕ್ರಿಯೆಯ ಹಿನ್ನೆಲೆಯಲ್ಲಿ, ರಾಜ್ಯಾದ್ಯಂತ ಬ್ರಾಹ್ಮಣ ಸಮಾಜದವರು ತಮ್ಮ ಜಾತಿಯನ್ನು ಕ್ರಮ ಸಂಖ್ಯೆ 210ರಲ್ಲಿ 'ಬ್ರಾಹ್ಮಣ' ಎಂದು ನಮೂದಿಸಬೇಕು ಎಂದು ತಾಲ್ಲೂಕಾ ಬ್ರಾಹ್ಮಣ ಅಭಿವೃದ್ಧಿ ಮಹಾಸಭಾ ಸಂಘದ ಅಧ್ಯಕ್ಷ ಬಿ.ಪಿ.ಕುಲಕರ್ಣಿ ಕರೆ ನೀಡಿದ್ದಾರೆ. ಪತ್ರಿಕಾ ಪ್ರಕಟಣೆ ಮೂಲಕ ಮಾತನಾಡಿದ ಅವರು, ''ಈ ಜಾತಿ ಸಮೀಕ್ಷೆ ಮೂಲಕ ನಮ್ಮ ಸಮಾಜಕ್ಕೆ ಸರ್ಕಾರದ ಶಿಕ್ಷಣ, ಉದ್ಯೋಗ ಹಾಗೂ ವಿವಿಧ ರಾಜ್ಯ ಮತ್ತು ಕೇಂದ್ರ ಯೋಜನೆಗಳ ಸೌಲಭ್ಯ ದೊರಕುವಂತಾಗುತ್ತದೆ. ಹಾಗೆಯೇ ಮೀಸಲಾತಿ ಸಂಬಂಧಿತ ಸೌಲಭ್ಯಗಳನ್ನು ಪಡೆಯಲು ಸಹ ಜಾತಿಯನ್ನು ಸ್ಪಷ್ಟವಾಗಿ ನಮೂದಿಸುವುದು ಅತ್ಯಾವಶ್ಯಕ, ಎಂದು ತಿಳಿಸಿದರು. ಅದಕ್ಕಾಗಿ ಬ್ರಾಹ್ಮಣ ಸಮಾಜದ ಪ್ರತಿಯೊಬ್ಬರೂ ಜಾತಿ ಸಮೀಕ್ಷೆ ಹಾಗೂ ಜನಗಣತಿ ಸಂದರ್ಭದಲ್ಲಿ 'ಕ್ರಮ ಸಂಖ್ಯೆ 210 ಬ್ರಾಹ್ಮಣ' ಎಂದು ಸರಿಯಾಗಿ ದಾಖಲಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ.

### ಡಿಕೆಶಿ ವಿರುದ್ಧ ವಕೀಲರ ಪ್ರತಿಭಟನೆ

• ಉದಯವಾಹಿನಿ ವಿಜಯಪುರ

ಡಿಸಿಎಂ ಡಿ.ಕೆ. ಶಿವಕುಮಾರ ಅವರು ವಕೀಲರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದನ್ನು ಖಂಡಿಸಿ ವಿಜಯಪುರ ನಗರದ ಜಿಲ್ಲಾಧಿಕಾರಿ ಕಚೇರಿಯ ಎದುರು ಬಿಜಾಪುರ ಬಾರ್ ಅಸೋಸಿಯೇಷನ್ ನೇತೃತ್ವದಲ್ಲಿ ಮಂಗಳವಾರ ನ್ಯಾಯವಾದಿಗಳು ಪ್ರತಿಭಟನೆ ನಡೆಸಿದರು.

ಇತ್ತೀಚೆಗೆ ವಿಜಯಪುರ ಜಿಲ್ಲೆಯ ಆಲಮಟ್ಟಿಗೆ ಡಿಸಿಎಂ ಶಿವಕುಮಾರ ಭೇಟಿ ನೀಡಿದ ಸಂದರ್ಭದಲ್ಲಿ ವಕೀಲರ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿದ ವಕೀಲರು ಕೋರ್ಟ್ ಕಲಾಪದಿಂದ ದೂರ ಉಳಿದು ಪ್ರತಿಭಟನೆ ನಡೆಸಿದರು.

ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ನ್ಯಾಯವಾದಿಗಳು ಡಿಸಿಎಂ ಶಿವಕುಮಾರ್ ಅವರು ವಕೀಲರ ವಿರುದ್ಧ ಹೇಳಿಕೆ ನೀಡಿರುವುದು ವಕೀಲರಿಗೆ ಮಾಡಿದ ಅಪಮಾನವಾಗಿದೆ. ಅದಕ್ಕಾಗಿ ಕೋರ್ಟ್ ಕಲಾಪದಿಂದ ದೂರು ಉಳಿದು ನ್ಯಾಯವಾದಿಗಳು ಜಿಲ್ಲಾಧಿಕಾರಿ ಕಚೇರಿ ಎದುರಿಗೆ ಪ್ರತಿಭಟನೆ ಮಾಡಿದರು. ಡಿಸಿಎಂ ಶಿವಕುಮಾರ ತಕ್ಷಣವೇ ವಕೀಲರಿಗೆ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಿರತ ವಕೀಲರು ಆಗ್ರಹಿಸಿದರು.

### ಟೋಲ್‌ಗೇಟ್ ವಿರುದ್ಧ ಪ್ರತಿಭಟನೆ: ಪರಿಸ್ಥಿತಿ ನಿಯಂತ್ರಣಕ್ಕೆ ಪೊಲೀಸರ ಹರಸಾಹಸ

• ಉದಯವಾಹಿನಿ ಕುಂಬಳೆ

ರಾಷ್ಟ್ರೀಯ ಹೆದ್ದಾರಿಯ ಕುಂಬಳೆ ಆರಿಕ್ಕಾಡಿ ಕಡವತ್ನಲ್ಲಿ ಟೋಲ್‌ಗೇಟ್ ನಿರ್ಮಾಣದ ವಿರುದ್ಧ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಹೋರಾಟ ಸಮಿತಿ ನೇತೃತ್ವದಲ್ಲಿ ನಡೆಸಿದ ಪ್ರತಿಭಟನಾ ಜಾಥಾವು ಪೊಲೀಸರು ಮತ್ತು ಪ್ರತಿಭಟನಾಕಾರರ ನಡುವೆ ತಳ್ಳಾಟಕ್ಕೆ ಕಾರಣವಾಯಿತು. ಕುಂಬಳೆ ಪೇಟೆಯಿಂದ ಮೆರವಣಿಗೆ ಮೂಲಕ ಆಗಮಿಸಿದ ಜಾಥಾವನ್ನು ಟೋಲ್‌ಗೇಟ್ ಪರಿಸರದಲ್ಲಿ ಪೊಲೀಸರು ತಡೆದರು. ಈ ಸಂದರ್ಭದಲ್ಲಿ ಪೊಲೀಸರು ಮತ್ತು ಪ್ರತಿಭಟನಾಕಾರರ ನಡುವೆ ನೂಕು ನುಗ್ಗಲು ನಡೆದಿದ್ದು ,ಲಘು ಲಾಠಿ ಪ್ರಹಾರ ನಡೆಸಿದರು. ಪರಿಸ್ಥಿತಿ ವಿಕೋಪಕ್ಕೆ ತಿರುಗದಂತೆ ಪೊಲೀಸರು ಜಲ ಫಿರಂಗಿ ಪ್ರಯೋಗಿಸಿದರು.

ಶಾಸಕ ಎ.ಕೆ.ಎಂ.ಅಶ್ರಫ್ ನೇತೃತ್ವದಲ್ಲಿ ನಡೆದ ಪ್ರತಿಭಟನಾ ಜಾಥಾದಲ್ಲಿ ನೂರಾರು ಮಂದಿ ಪಾಲ್ಗೊಂಡಿದ್ದರು. ಪ್ರತಿಭಟನಾ ಕಾರರನ್ನು ಪೊಲೀಸರು ವಶಕ್ಕೆ ತೆಗೆದು ಬಳಿಕ ಬಿಡುಗಡೆ ಗೊಳಿಸಿದರು. ಕಾನೂನು ವಿರುದ್ಧವಾಗಿ ನಿಬಂಧನೆ ಗಳನ್ನು ಉಲ್ಲಂಘಿಸಿ ಟೋಲ್ ಗೇಟ್ ನಿರ್ಮಾಣ ಕಾಮಗಾರಿ ನಡೆಯುತ್ತಿದ್ದು, ಹೋರಾಟ ಇನ್ನಷ್ಟು ತೀವ್ರ ಗೊಳಿಸಲಾಗುವುದು ಎಂದು ಪ್ರತಿಭಟನಾಕಾರರು ತಿಳಿಸಿದ್ದಾರೆ. ಟೋಲ್ ಗೇಟ್ ಸಂಬಂಧಿತ ಅಂತಿಮ ತೀರ್ಪು ಹೈಕೋರ್ಟಿನಿಂದ ಬಂದ ಬಳಿಕ ಕಾಮಗಾರಿ ಆರಂಭಿಸುವುದೆಂದು ಗುತ್ತಿಗೆದಾರರು ತಿಳಿಸಿದ್ದಾರೆ. ಆದರೆ ಗುತ್ತಿಗೆದಾರರನ್ನು ಒತ್ತಾಯಿಸಿ ಹೆದ್ದಾರಿ ಇಲಾಖೆ ಟೋಲ್ ಗೇಟ್ ಕಾಮಗಾರಿ ನಡೆಸುತ್ತಿದೆ. ಟೋಲ್ ಗೇಟ್ ವಿರುದ್ಧ ಕ್ರಿಯಾ ಸಮಿತಿಯ ಮೇಲ್ಮನವಿ ಹೈಕೋರ್ಟಿನಲ್ಲಿದ್ದು, ಈ ನಡುವೆ ಕಾಮಗಾರಿ ಮುಂದುವರಿಸುತ್ತಿರುವುದು ಪ್ರತಿಭಟನಾರ್ಹ ಎಂದು ಹೇಳಿದರು.

ನಿಯಮದಂತೆ ಒಂದು ಟೋಲ್‌ಗೇಟ್‌ನೊಂದ ಇನ್ನೊಂದಕ್ಕೆ 60ಕಿ. ಮೀ.ಅಂತರ ಇರಬೇಕೆಂದು ನಿಬಂಧನೆ ಇದೆ. ಆದರೆ ತಲಪ್ಪಾಡಿ ಟೋಲ್ ಗೇಟ್ ನಿಂದ ಕೇವಲ 23 ಕಿ.ಮೀ ದೂರದ ಕುಂಬಳೆಯಲ್ಲಿ ಟೋಲ್ ಪ್ಲಾಜಾ ನಿರ್ಮಿಸುತ್ತಿರುವುದು ಈ ಕಾನೂನಿನ ಉಲ್ಲಂಘನೆ ಮತ್ತು ಜನದ್ರೋಹವಾಗಿದೆ. ಟೋಲ್ ಗೇಟ್ ವಿರುದ್ಧ ಗೆಲುವು ಲಭಿಸುವ ತನಕ ಹೋರಾಟ ಮುಂದುವರಿಯಲಿದೆ ಎಂದು ಶಾಸಕ ಎ.ಕೆ.ಎಂ ಅಶ್ರಫ್ ಮುನ್ನೆಚ್ಚರಿಕೆ ನೀಡಿದ್ದಾರೆ.



ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಹಿರಿಯರ ಬಳಿ ನಿಮ್ಮ ಮಹತ್ವಾಕಾಂಕ್ಷೆಗಳನ್ನು ವ್ಯಕ್ತಪಡಿಸಿ .

**ವೃಷಭ** ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸದೃಢವಾಗಿರಲು ಸಹಾಯ ಮಾಡುತ್ತದೆ. ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು.

**ಮಿಥುನ** ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು.

**ಕರ್ಕಾಟಕ** ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು.

**ಸಿಂಹ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ.

**ಕನ್ಯಾ** ಕೆಲಸದಲ್ಲಿ ಹಿರಿಯರಿಂದ ಒತ್ತಡ , ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ಆರ್ಥಿಕ ತೊಂದರೆಗೊಳಗಾಗಬಹುದು.

**ತುಲಾ** ಇತ್ತೀಚೆಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು.

**ವೃಶ್ಚಿಕ** ಹೊರಾಂಗಣ ಚಟುವಟಿಕೆಗಳು ಉಪಯುಕ್ತವಾಗುತ್ತವೆ. ಕೋಟೆಯೊಳಗಿನ ಜೀವನ ಶೈಲಿ , ಯಾವಾಗಲೂ ಭದ್ರತೆಯ ಬಗ್ಗೆ ಯೋಚಿಸುವುದು ನಿಮ್ಮ ದೈಹಿಕ , ನಿಮ್ಮ ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತವೆ.

**ಧನಸ್ಸು** ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು.

**ಮಕರ** ನೀವು ಕೆಲವು ಉನ್ನತ ವ್ಯಕ್ತಿಗಳನ್ನು ಭೇಟಿಯಾಗಬಹುದಾದ್ದರಿಂದ ಗಾಬರಿಯಾಗಬೇಡಿ ಮತ್ತು ವಿಶ್ವಾಸ ಕಳೆದುಕೊಳ್ಳದಿರಿ. ಇದು ವ್ಯಾಪಾರಕ್ಕೆ ಬಂಡವಾಳದಂತೆ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ.

**ಕುಂಭ** ನಿಮ್ಮ ಕೋಪ ಕಡ್ಡಿಯನ್ನು ಗುಡ್ಡ ಮಾಡಬಹುದು, ಕುಟುಂಬದ ಸದಸ್ಯರ ಅಸಮಾಧಾನಕ್ಕೆ ಕಾರಣವಾಗುತ್ತದೆ. ಕೋಪವನ್ನು ನಿಯಂತ್ರಣದಲ್ಲಿಡುವುದನ್ನು ಕಲಿತ ಆ ಮಹಾನ್ ಆತ್ಮಗಳೇ ಅದೃಷ್ಟಶಾಲಿಗಳು.

**ಮೀನ** ಅಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು.

### ಶಾಲಾ–ಕಾಲೇಜ್ ಆವರಣದ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟವಾಗದಂತೆ ನಿಗಾ ವಹಿಸಲು ಆದೇಶ

# ಕೋಟ್ಪಾ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ಸೂಚನೆ

• **ಉದಯವಾಹಿನಿ, ವಿಜಯಪುರ**

ಜಿಲ್ಲೆಯಾದ್ಯಂತ ಇರುವ ಶಾಲಾ-ಕಾಲೇಜ್ ಆವರಣದ 100 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಉತ್ಪನ್ನಗಳ ಮಾರಾಟವಾಗದಂತೆ ನಿಗಾ ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಸೂಚನೆ ನೀಡಿದರು.

**ಪ್ರಗತಿ ಪರಿಶೀಲನಾ ಸಭೆ**

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ತಂಬಾಕು ನಿಯಂತ್ರಣಾ ಕಾರ್ಯಕ್ರಮದ 2025–26ನೇ ಸಾಲಿನ ಎರಡನೇ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಶಾಲೆಯ ಮುಖ್ಯೋಪಾಧ್ಯಾಯರು ಸೇರಿದಂತೆ ಶಾಲಾ ಅಭಿವೃದ್ಧಿ ಸಮಿತಿಯವರು ಕೊಟ್ಪಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು, ಅರಿವುಮೂಡಿಸಬೇಕು. ತಂಬಾಕು ಉತ್ಪನ್ನಗಳ ಉಪಯೋಗದಿಂದ ದುಷ್ಪರಿಣಾಮ ಹಾಗೂ ಕಾಯ್ದೆಯ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ತಂಬಾಕು ಉತ್ಪನ್ನಗಳ ನಿಯಂತ್ರಣಕ್ಕೆ ತನಿಖಾ ದಳಗಳನ್ನು ರಚಿಸಿಕೊಂಡು ಕ್ರಿಯಾಶೀಲತೆಯಿಂದ ಕಾಲ ಕಾಲಕ್ಕೆ ದಾಳಿ ನಡೆಸಬೇಕು. ಎಲ್ಲಾ ಶಾಲೆಗಳಲ್ಲಿ ಆಗಾಗ ಪಾಲಕರ ಸಭೆ ಜರುಗಿಸಿ,ಮಾಹಿತಿ ನೀಡಬೇಕು.

ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಸೂಕ್ತ ತಿಳುವಳಿಕೆ, ಅರಿವು ಮೂಡಿಸುವಂತೆ ಅವರು ಸೂಚಿಸಿದರು.

ಶಾಲಾ ಶಿಕ್ಷಣ ಸಂಸ್ಥೆಗಳು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಯ ಮಾರ್ಗಸೂಚಿಗಳನ್ನು ದಾಖಲಿಸಬೇಕು. ಕೋಟ್ಪಾ ಕಾಯ್ದೆಯನ್ನು ಉಲ್ಲಂಘಿಸುವ ಅಂಗಡಿಗಳ ಮಾಲೀಕರಿಗೆ ಒಂದು ಬಾರಿ ದಂಡ ವಿಧಿಸಿ, ಸೂಕ್ತ ತಿಳುವಳಿಕೆ ನೀಡಿ,ಇದು ಪುನರಾವರ್ತಿವಾಗಿರುವುದು ಕಂಡು ಬಂದರೆ ವ್ಯಾಪಾರದ ಲೈಸೆನ್ಸ್‌ನ್ನು ರದ್ದುಪಡಿಸಲು ಗ್ರಾಮ ಪಂಚಾಯತಿ ಹಾಗೂನಗರ ಸ್ಥಳೀಯ ಸಂಸ್ಥೆಗಳು ಕ್ರಮವಹಿಸಬೇಕು. ಪ್ರತಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಕೋಟ್ಪಾ ಕಾಯ್ದೆಯ ಸೆಕ್ಷನ್–4 ಹಾಗೂ ಸೆಕ್ಷನ್–6ಬಿ ರನ್ವಯ ನಾಮಫಲಕದ ಗೋಡೆ ಬರಹ ಬರೆಸಬೇಕು. ನಾಮಫಲಕವನ್ನು ಶಾಲಾ,ಕಾಲೇಜಿನ ಪ್ರಮುಖ ಸ್ಥಳದಲ್ಲಿ ಹಾಗೂ ಪ್ರವೇಶ ದ್ವಾರದಲ್ಲಿ ಅಳವಡಿಸಬೇಕು. ಶಾಲಾ ಕಾಲೇಜುನಲ್ಲಿ ತಂಬಾಕು ನಿಯಂತ್ರಣ ಸಮಿತಿ ರಚಿಸಿಕೊಂಡು ನಿಯಮಗಳ ಕಟ್ಟು ನಿಟ್ಟಿನ ಅನುಷ್ಠಾನವಾಗುವಂತೆ ನೋಡಿಕೊಳ್ಳಬೇಕು.


ಉದಯವಾಹಿನಿ ಚಿತ್ರ

ಕೋಟ್ಪಾ ಕಾಯ್ದೆಯ ಮಾಹಿತಿ ಶಾಲಾ ಕಾಲೇಜಿನಲ್ಲಿ ಲಭ್ಯವಿರಬೇಕು. ತಂಬಾಕು ಉತ್ಪನ್ನ ಮಾರಾಟ ಮಾಡುವ ಅಂಗಡಿಗಳು ಕೊಟ್ಪಾ ಕಾಯ್ದೆಯನ್ವಯ ನಾಮಫಲಕ ಅಳವಡಿಸಿರುವುದನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ತಂಡ ರಚಿಸಿಕೊಂಡು ಆಗಾಗ ದಾಳಿ ಮಾಡಿ,ಪರಿಶೀಲನೆ ನಡೆಸಬೇಕು ಎಂದು ಅವರು ಹೇಳಿದರು. ಅಂತರ್ ಇಲಾಖೆಯ ಸಮನ್ವಯದೊಂದಿಗೆ ಎಲ್ಲಾ ಗ್ರಾಮಗಳಲ್ಲಿ ಗ್ರಾಮ ಮಟ್ಟದ ತಂಬಾಕು ನಿಯಂತ್ರಣ ಸಮಿತಿ ರಚಿಸಿಕೊಳ್ಳುವುದು. ಸ್ಥಳೀಯ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ತಾಲ್ಲೂಕವಾರು ಗ್ರಾಮಗಳನ್ನು ಆಯ್ದುಕೊಂಡು ಅರಿವು -ಜಾಗೃತಿ ಚಟುವಟಿಕೆ ಹಮ್ಮಿಕೊಳ್ಳಬೇಕು ಎಂದರು.

#### ಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ

ಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಜಿಲ್ಲಾಧಿಕಾರಿಗಳು, ಪ್ರತಿ ಮೂರು ತಿಂಗಳಿಗೊಮ್ಮೆ ಜಿಲ್ಲೆಗೆ ಸರಬರಾಜಾಗುವ ಕುಡಿಯುವ ನೀರಿನ ಮೂಲದಲ್ಲಿಯೇ ಪರೀಕ್ಷೆ ನಡೆಸಿದ ಮಾಹಿತಿಯನ್ನು ಗ್ರಾಮೀಣ ಭಾಗದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಿಗೆ ಸಲ್ಲಿಸಿ ಅಗತ್ಯ ಕ್ರಮ ವಹಿಸಬೇಕು. ಈ ಕಾರ್ಯದಲ್ಲಿ ಯಾವುದೇ ನಿರ್ಲಕ್ಷ್ಯ ತೋರದೆ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಕಲುಷಿತ ನೀರು ಪೂರೈಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಗ್ರಾಮೀಣ ಭಾಗದಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

#### ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆ ಘೋಷಿಸಿ

ತಂತ್ರಾಂಶದಲ್ಲಿ 3325ರ ಶಿಕ್ಷಣ ಸಂಸ್ಥೆಗಳ ಪೈಕಿ 1353 ದಾಖಲಾಗಿದ್ದು, ಬಾಕಿ ಇರುವ 1972 ಸಂಸ್ಥೆಗಳ ಹಾಗೂ 253 ಪದವಿಪೂರ್ವ ಶಿಕ್ಷಣ ಇಲಾಖೆ ಸಂಸ್ಥೆಗಳ ಬಾಕಿ ಇರುವ 50 ಸಂಸ್ಥೆಗಳ ದಾಖಲೀಕರಣ ಮುಂದಿನ ಸಭೆಯೊಳಗೆ ಕಡ್ಡಾಯವಾಗಿ ಮಾರ್ಗಸೂಚಿಯಂತೆ ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆ ಘೋಷಿಸಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶಕ್ಕೆ ವರದಿ ನೀಡುವಂತೆ ಅವರು ಸೂಚನೆ ನೀಡಿದರು. ಜಿಲ್ಲಾ ಮಟ್ಟದಲ್ಲಿ ನಡೆಯುವ ಸಭೆಯು ಪ್ರತಿ ತಿಂಗಳೂ ಪ್ರಗತಿ ಪರಿಶೀಲನೆ ಮಾಡಲಾಗುವುದು. ತಹಶೀಲ್ದಾರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ತಾಲ್ಲೂಕಾ ತನಿಖಾ ತಂಡ ನಿಯಮಿತವಾಗಿ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆ ನಡೆಸಬೇಕು. ಅಬಕಾರಿ ಇಲಾಖೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶಕ್ಕೆ ಅಗತ್ಯ ಸಹಕಾರ ಒದಗಿಸಬೇಕು ಎಂದು ಅವರು ಹೇಳಿದರು.

## ತಾ.ಪಂ ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡ ಶಾಸಕ ಬಸನಗೌಡ ಪಾಟೀಲ್ ತುರ್ವಿಹಾಳ

• **ಉದಯವಾಹಿನಿ, ಸಿಂಧನೂರು**

ಸುಮಾರು 15 ವರ್ಷಗಳಿಂದ ಅದೇ ನೀರನ್ನು ಜನರಿಗೆ ಕುಡಿಸುತ್ತಿರಿ. ಈಗಾಗಿ ಕಾಯಿಲೆಗಳು ಬರುತ್ತವೆ. ಆದ್ದರಿಂದ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆರೆಗಳಲ್ಲಿ ನೀರು ಖಾಲಿ ಮಾಡಿ ಸ್ವಚ್ಛಗೊಳಸಿ ನೀರು ತುಂಬಿಸಿ ಎಂದು ಗ್ರಾಮ ಪಂಚಾಯಿತಿ ಪಿಡಿಒಗಳಿಗೆ ತಾಕೀತು ಮಾಡಿದರು. ಉಮಲೂಟಿ. ಬೇರಿಗೆ. ಗುಂಜಳ್ಳಿ . ಹತ್ತಿಗುಡ್ಡ ಸೇರಿದಂತೆ ಪ್ರಗತಿ ವರದಿಯನ್ನು ಜಿಲ್ಲಾ ಪಂಚಾಯತ್ ಉಪ ವಿಭಾಗಾಧಿಕಾರಿ ಎಇಇ ಪ್ರಕಾಶ್ ಅವರನ್ನು ಕೇಳಿದಾಗ. ನಾನು ಹೊಸದಾಗಿ ಕಚೇರಿಗೆ ಬಂದಿದ್ದೇನೆ ಎಂದು ಉಡಾಫೆ ಉತ್ತರ ನೀಡಿದರು.

ಶಾಸಕರು ಆಕ್ರೋಶ ವ್ಯಕ್ತಪಡಿಸಿ ಅಲ್ಲಿಯೇ ನೀನು ಹೊಸದಾಗಿ ಬಂದಿದ್ದೇನೆ ಎಂದು ಹೇಳುತ್ತಿಯಲ್ಲ. ಕಾಗದ ಪತ್ರಗಳು ಹೊಸದೇನಲ್ಲ. ಎಲ್ಲವೂ ಕಛೇರಿಗಳಲ್ಲಿ ಬಿಟ್ಟು ಹೋಗುತ್ತಾರೆ ಕಾಗದ ಪತ್ರಗಳನ್ನು ತೆಗೆದುಕೊಂಡು ಅವರೇನು ಹೋಗುವುದಿಲ್ಲ. ಮೊದಲ ದಾಖಲೆಗಳನ್ನು ಪರಿಶೀಲಿಸಿ ಅಲ್ಲಿನ ಪರಿಸ್ಥಿತಿ ಬಗ್ಗೆ ಮಾಹಿತಿ ತಿಪ ಪಡೆಯಬೇಕು. ನಿಮ್ಮ ಇಲಾಖೆಯಲ್ಲಿ ಕಾಮಗಾರಿಗಳು ಗುಣಮಟ್ಟದ ಇಲ್ಲದೆ ಕಳಪೆಯಿಂದ ಕೂಡಿವೆ ಎಂದು ಸಂಘ ಸಂಸ್ಥೆಗಳು ಸಾರ್ವಜನಿಕ ದೂರುಗಳ ಬಂದಿದ್ದು ಅದರ ಪಟ್ಟಿ ಇದೆ. ಕೂಡಲೇ ಕಾಮಗಾರಿಗಳು ಸ್ಥಳಗಳನ್ನು ಭೇಟಿ ನೀಡಿ ಪರಿಶೀಲನೆ ನಡೆಸಿ ವರದಿ ಸಲ್ಲಿಸಿ ಎಂದು ತಿಳಿಸಿದರು.

ನಗರದ ತಾಲ್ಲೂಕು ಪಂಚಾಯಿತ ಸಭಾಂಗಣದಲ್ಲಿ ನಡೆದ ತಾಲ್ಲೂಕು ಪಂಚಾಯತಿ ಅಧಿಕಾರಿ ಹಾಗೂ ಜಿಲ್ಲಾ ಪಂ.ಉಪಕಾರ್ಯದರ್ಶಿ ಹಾಲ ಸಿದ್ದಪ್ಪ ಎಚ್ ಪೂಜಾರ ಅವರು ಅಧ್ಯಕ್ಷತೆಯಲ್ಲಿ ನಡೆಯಿತು. ನಂತರ ಸಭೆಯಲ್ಲಿ ಶಾಸಕ ಬಸನಗೌಡ ತುರ್ವಿಹಾಳ ಅವರು ವಿರುಪಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳು ನೀವು ರೋಡ್ ನಲ್ಲಿ ಸಸಿಗಳನ್ನು ಹಾಕಿದ್ದರೆ. ಸಲ್ಪ ರೋಡ್ ಬಿಟ್ಟು ಹಿಂದಕ್ಕೆ ಹಾಕಬೇಕು ಎಂದು ಅರಣ್ಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.ಯಾವಾಗಲೂ ಸಸಿಗಳನ್ನು ರೋಡಿನಲ್ಲಿ ನೆಡುವ ಬಾರದು. ಏಕೆಂದರೆ ಈಗಾಗಲೇ 35 ವರ್ಷಗಳು ಬೆಳೆದು ಮರಗಳು ರೋಡಿಗೆ ಬಂದಿದ್ದರಿಂದ ಕಟ್ಟಾ ಮಾಡುವಂತದ್ದಾಗಿದೆ ಎಂದರು


ಉದಯವಾಹಿನಿ ಚಿತ್ರ

ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ರಸ್ತೆ ಗಳು ಹದಗೆಟ್ಟ ರೈತರು ಹಾಗೂ ಸಾರ್ವಜನಿಕರು ಹರಸಾಹಸ ಪಡುತ್ತಿದ್ದಾರೆ. ಅಲ್ಲಿನ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ, ಜಿಲ್ಲಾ ಉಪ ಕಾರ್ಯದರ್ಶಿಗಳು ವಿವಿಧ ಇಲಾಖೆಗಳ ಅಧಿಕಾರಿಗಳು ಸಮಾಲೋಚನೆ ನಡೆಸಿ ಅಭಿವೃದ್ಧಿ ಪ್ರಗತಿ ಕಾಮಗಾರಿಗಳು ಮಾಹಿತಿ ಪಡೆದರು. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಅವರು ಇದ್ದರು.

**ಅಭಿವೃದ್ಧಿ ಬಗ್ಗೆ ಮಾಹಿತಿ**

ಇಲಾಖೆಗಳಲ್ಲಿ ವಿವಿಧ ಕಾಮಗಾರಿಗಳ ಅಭಿವೃದ್ಧಿ ಪ್ರಗತಿ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ವಿವಿಧ ಊರುಗಳಲ್ಲಿ ಅಂಗನವಾಡಿ ಕೇಂದ್ರಗಳಿಗೆ ಭೇಟಿ ಮಾಡಿದಾಗ ಗೋನಾಳ ಗ್ರಾಮದ ಕೇಂದ್ರದಲ್ಲಿ ಕೇವಲ 04 ಮಕ್ಕಳು ಇದ್ದು ಕಂಡು ಬಂತು. ಇತ್ತೀಚೆಗೆ ಮಕ್ಕಳು ಸಂಖ್ಯೆ ಗಣನೀಯವಾಗಿ ಅಂಗನವಾಡಿ ಕೇಂದ್ರಗಳಲ್ಲಿ ಕಡಿಮೆಯಾಗುತ್ತಿದ್ದು. ಇದಕ್ಕೆ ಯಾರು ಹೊಣೆಗಾರರು ಯಾರು ಎಂದು ಸಿಡಿಪಿಒ ಗಳಿಗೆ ಪ್ರಶ್ನೆ..? ಮಾಡಿದರು. ಇದಕ್ಕೆ ಏನೆಂದು ಕಥೆಗಳನ್ನು ಹೇಳುವುದಕ್ಕೆ ಸುರು ಮಾಡಿದಾಗ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡ ಶಾಸಕರು. ಕಛೇರಿಗಳಲ್ಲಿ ಕೊಡುವುದನ್ನು ಬಿಟ್ಟು ಮೊದಲ ಕೇಂದ್ರಗಳಿಗೆ ಭೇಟಿ ಅಲ್ಲಿನ ಪರಿಸ್ಥಿತಿ ಸ್ಥಿರವಾಗಿದೆ ಅಥವಾ ಇಲ್ಲವೋ ಸಮಸ್ಯೆಗಳನ್ನು ಅರಿತು ಪರಿಹರಿಸಲು ಮುಂದಾಗಬೇಕು ಎಂದು ಪಿಡಿಒಗಳು ಸೂಚಿಸಿದರು.

## ಸಮರ್ಪಕ ಬಸ್ ಸೌಲಭ್ಯ ಒದಗಿಸಿ

• **ಉದಯವಾಹಿನಿ, ಬಾಗಲಕೋಟೆ**

ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಅನುಗುಣವಾಗಿ ಗ್ರಾಮೀಣ ಭಾಗಕ್ಕೆ ಸಮರ್ಪಕ ಬಸ್ ಸೌಲಭ್ಯ ಒದಗಿಸುವಂತೆ ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಕಚೇರಿಯಲ್ಲಿ ನಡೆದ ಬೀಳಗಿ ಕ್ಷೇತ್ರದ ಪ್ರಯಾಣಿಕರ ಸಮಸ್ಯೆಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ದೂರದ ಊರುಗಳಿಗೆ ಹಾಗೂ ಅಂತರರಾಜ್ಯಗಳಿಗೆ ಬಸ್‌ಗಳನ್ನು ಬಿಡುವುದಕ್ಕಿಂತ ಮೊದಲು ಸ್ಥಳೀಯ ಮಟ್ಟದಲ್ಲಿ ಸಂಪೂರ್ಣ ಸಾರಿಗೆ ಸೌಲಭ್ಯ ಒದಗಿಸುವುದು ಮುಖ್ಯವಾಗಿದೆ. ಪ್ರತಿ ಹಳ್ಳಿಗೂ ಕೂಡ ಬಸ್ ಸಂಚರಿಸುವಂತೆ ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದರು.

ಸಭೆಯಲ್ಲಿ ತೆಗೆದುಕೊಂಡ ಪರಿಹಾರಗಳನ್ನು ಕೇವಲ ಚರ್ಚೆಗಳಿಗೆ ಮಾತ್ರ ಸೀಮಿತಗೊಳಿಸದೆ ಅವುಗಳನ್ನು ಕಾರ್ಯರೂಪಕ್ಕೆ ತರುವಂತೆ ಅಧಿಕಾರಿಗಳಿಗೆ ಸೂಚಿಸಿದರು. ವಿಶೇಷವಾಗಿ, ಬಸ್ ಚಾಲಕರಿಗೆ ಸೂಕ್ತ ಅರಿವು ಮೂಡಿಸಿ ಮುಂಜಾನೆಯ ಸಮಯದಲ್ಲಿ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಬಸ್ ಸೇವೆಯನ್ನು ಒದಗಿಸಬೇಕು. ಅದರಂತೆ, ಬೀಳಗಿ ಡಿಪೋದಿಂದ ಎರಡು ದಿನದೊಳಗೆ ವಿಜಯಪುರ ಮಾರ್ಗವಾಗಿ ಸಂಚರಿಸುವ ಎರಡು ಬಸ್‌ಗಳನ್ನು ಸ್ಥಳೀಯ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸಲು ಕ್ರಮವಹಿಸಲು ಸೂಚಿಸಿದರು.

ಬೀಳಗಿ ಕ್ರಾಸ್‌ನಿಂದ ಸರ್ಕಾರಿ ಆಸ್ಪತ್ರೆಗೆ ರಾತ್ರಿ 9 ಗಂಟೆಯವರೆಗೆ ಒಂದು ಬಸ್ ಸೇವೆ ದೊರಕಬೇಕು. ಕ್ಷೇತ್ರದ ಯಾವುದೇ ಗ್ರಾಮದ ವಿದ್ಯಾರ್ಥಿಗಳಿಗೆ ತೊಂದರೆಯಾಗುವ ಸಂದರ್ಭಗಳಲ್ಲಿ ಹಾಗೂ ನಿಗದಿತ ಸ್ಥಳ ಬಿಟ್ಟು ಬೇರೆಕಡೆಗಳಲ್ಲಿ ನಿಲ್ಲುವ ಚಾಲಕರ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು.

## ಮರುರ್ ಕಾಲುವೆ ಬಳಿ ನಡೆದ ಹೃದಯ ವಿದ್ರಾವಕ ಘಟನೆ ಸ್ಥಳಕ್ಕೆ ಖಂಡ್ರೆ ಭೇಟಿ

• **ಉದಯವಾಹಿನಿ ಬೀದರ**

ಭಾಲ್ಕಿ ತಾಲ್ಲೂಕಿನ ಮರುರ್ ಕಾಲುವೆ ಬಳಿ ನಡೆದ ಹೃದಯವಿದ್ರಾವಕ ಘಟನೆ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರು ಇಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೀದರ ತಾಲ್ಲೂಕಿನ ಮೈಲೂರು ನಿವಾಸಿಗಳಾದ ಒಂದೇ ಕುಟುಂಬದ ಆರು ಜನರು ಆತ್ಮಹತ್ಯೆಗೆ ಯತ್ನಿಸಿ, ತಂದೆ ಸೇರಿದಂತೆ ಮೂವರು ನಿರಪರಾಧಿ ಮಕ್ಕಳು ದುರ್ಮರಣ ಹೊಂದಿರುವುದು ಅತೀವ ದುಃಖಕರ ಘಟನೆ. ಅದೃಷ್ಟವಶಾತ್ ತಾಯಿ ಹಾಗೂ ಒಬ್ಬ ಮಗ ಬದುಕುಳಿದಿದ್ದಾರೆ. ಘಟನಾ ಸ್ಥಳಕ್ಕೆ ಭೇಟಿ ನೀಡಿದ ಸಚಿವರು ಮೃತರ ಕುಟುಂಬದವರನ್ನು ಭೇಟಿಯಾಗಿ ಸಾಂತ್ವನ ಹೇಳಿದರು. ಆತ್ಮಹತ್ಯೆಗೆ ಕಾರಣವಾದ ಹಿನ್ನೆಲೆ ಹಾಗೂ ಪ್ರಚೋದನೆ ಸೇರಿದಂತೆ ಎಲ್ಲಾ ವಿಷಯಗಳ ಕುರಿತು ಸಮಗ್ರವಾಗಿ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅದೇ ವೇಳೆ, ಸರ್ಕಾರದ ವತಿಯಿಂದ ಸೂಕ್ತ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದ ಅವರು, ಮೃತರ ಆತ್ಮಗಳಿಗೆ ಶಾಂತಿ ಸಿಗಲಿ ಹಾಗೂ ಬದುಕುಳಿದ ಕುಟುಂಬಕ್ಕೆ

## ಅತಿಥಿ ಉಪನ್ಯಾಸಕರ ನೇಮಕಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ

• **ಉದಯವಾಹಿನಿ ಇಂಡಿ**

ಇಂಡಿ ಅತಿಥಿ ಉಪನ್ಯಾಸಕರ ನೇಮಕವಾಗದೆ ಇರುವದರಿಂದ ಪೂರ್ಣ ಪ್ರಮಾಣದಲ್ಲಿ ತರಗತಿಗಳು ನಡೆಯುತ್ತಿಲ್ಲ . ಆದಷ್ಟು ಬೇಗ ಅತಿಥಿ ಉಪನ್ಯಾಸಕರ ನೇಮಕ ಎಂದು ಆಗ್ರಹಿಸಿ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ ಘಟನೆ ನಡೆಯಿತು.

ಬೆಳಗ್ಗೆ ಕಾಲೇಜಿನಿಂದ ಪ್ರತಿಭಟನಾ ಮೆರವಣಿಗೆ ಆರಂಭಿಸಿದ ವಿದ್ಯಾರ್ಥಿಗಳು ಘೋಷಣೆ ಕೂಗುತ್ತಾ ಪಟ್ಟಣದ ಬಸವೇಶ್ವರ ವೃತ್ತದ ಮೂಲಕ ಆಡಳಿತಸೌಧ ಪಾದಯಾತ್ರೆ ಮೂಲಕ ಘೋಷಣೆ ಕೂಗುತ್ತ ಬಂದರು. ವೈಷ್ಣವಿ ಮುಜಗೊಂಡ ಮಾತನಾಡಿ ಆದಷ್ಟು ಬೇಗ ಅತಿಥಿ ಉಪನ್ಯಾಸಕರ ನೇಮಕ ಮಾಡಿಕೊಂಡು ಈ ಸೆಮಿಸ್ಟರ್ ಅವಧಿಯ ಪಾಠಗಳು ಮುಗಿಯುವಂತೆ ಸರಕಾರ ಇಲಾಖೆ ಕ್ರಮ ಕೈಕೊಳ್ಳಬೇಕು ಎಂದರು.


ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳಾದ ಶಮೀರ ಕರೋಶಿ,ಯಾಸೀನ ಅಂಗಡಿ, ಸಿದ್ದು ಜೇವಣಗಿ,ಶಬೀರ ನದಾಫ, ವೃತಿಕ ಹರದಾಳ, ಸದ್ದಾಂ ಚಪ್ಪರಬಂದ, ಕಾಶಿನಾಥ ನಾಯಿಕೊಡಿ ಬಂದೇನಮಾಜ ಶೇಖ ಈರಣ್ಣ ಮಾದರ, ಮಹಮ್ಮದ ಯಾಸೀನ್ ತಾಂಬೆ, ಗೋವಿಂದ ವಡ್ಡರ, ದಿವ್ಯಾ ಬಿರಾದಾರ, ಜ್ಯೋತಿ ಸಿಂಗಾರೆ, ದಾನಮ್ಮ ಲಾಳಸೇರಿ, ಸಾವಿತ್ರಿ ಗುಬ್ಬೇವಾಡ, ಸಲ್ಮಾ ಚಪ್ಪರಬಂದ ಲಕ್ಷ್ಮೀ ಬಿರಾದಾರ, ಕಾವೇರಿ ತೆಲಸಂಗ ಮತ್ತಿತರಿದ್ದರು. ಶಿರಸ್ತೆದಾರ ಎಸ್.ಆರ್.ಮುಜಗೊಂಡ ಇವರಿಗೆ ಮನವಿ ಸಲ್ಲಿಸಿದರು.

> ಕಳೆದ ಎರಡು ತಿಂಗಳಿಂದ ತರಗತಿಗಳು ಸರಿಯಾಗಿ ನಡೆಯುತ್ತಿಲ್ಲ. ಹೆಚ್ಚಿನ ಸಂಖ್ಯೆಯಲ್ಲಿ ಅತಿಥಿ ಉಪನ್ಯಾಸಕರು ಬೋಧನೆ ಮಾಡುತ್ತಿದ್ದರು. ಅವರನ್ನು ಬಿಡುಗಡೆ ಮಾಡಿ ಹೊಸದಾಗಿ ನೇಮಕವಾಗಿಲ್ಲ. ಮಹಾವಿದ್ಯಾಲಯದಲ್ಲಿ 1300 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಬೋಧನೆ ಮಾಡುತ್ತಿದ್ದು ಕಳೆದ ಬಾರಿ ಮೂವತ್ತು ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದರು.
> –ಬಸವರಾಜ ಹಿರೇಕುರಬರ, ವಿದ್ಯಾರ್ಥಿ ಮುಖಂಡ

## ರಾಷ್ಟ್ರೀಯ ತಂಬಾಕು ವಿರೋಧಿ ದಿನಾಚರಣೆ ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿರಿ: ಕಟ್ಟಿಮನಿ

• **ಉದಯವಾಹಿನಿ, ಚಿಂಚೋಳಿ**

ಇಂದಿನ ಯುವಕರು ನಾಳೆನ ಪ್ರಜೆಗಳು,ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದೆ ದೂರವಿರಬೇಕು,ಒಳ್ಳೆಯ ವಿದ್ಯಾಭ್ಯಾಸ ಮಾಡಿ ಉನ್ನತಮಟ್ಟದ ಶಿಕ್ಷಣ ಪಡೆದು ತಂದೆ ತಾಯಂದಿರ ಹೆಸರು ಅಮರಗೊಳಿಸಬೇಕು,ತಾಲ್ಲೂಕಿನ ಕೀರ್ತಿ ರಾಜ್ಯ,ರಾಷ್ಟ್ರಮಟ್ಟದಲ್ಲಿ ಬೆಳೆಸಬೇಕು ಎಂದು ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಸಲಹೆ ನೀಡಿದರು.

ಪಟ್ಟಣದ ಚಂದಾಪೂರದ ಚೆನ್ನಮ್ಮ ಬಸಪ್ಪಾ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವತಿಯಿಂದ ಹಮ್ಮಿಕೊಂಡ ರಾಷ್ಟ್ರೀಯ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಚಾಲನೆ ನೀಡಿ ಮಾತನಾಡಿದರು. ಈ ಸಂದರ್ಭದಲ್ಲಿ ಸಿ.ಬಿ.ಪಾಟೀಲ ಪ್ರಾಂಶುಪಾಲ


ಉದಯವಾಹಿನಿ ಚಿತ್ರ

ಮಾಣಿಕಮ್ಮ ಸುಲ್ತಾನಪೂರ,ಭಾರತ ಮುಕ್ತಿ ಮೋರ್ಚಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾರುತಿ ಗಂಜಗಿರಿ,ಹಿರಿಯ ಸಮಾಜ ಸೇವಕ ಕೆ.ಎಂ.ಬಾರಿ,ಧರ್ಮಸ್ಥಳ ಕೃಷಿ ಕ್ಷೇತ್ರದ ಸಂಯೋಜಕ ಸತೀಶ,ಎನ್‌ಎಸ್‌ಎಸ್ ಘಟಕದ ಅಧ್ಯಕ್ಷೆ ದಿವ್ಯಾ ವಾಡಿ,ಪ್ರಾಧ್ಯಾಪಕಿ ಸುನೀತಾ ಮತ್ತು ಹೀನಾ, ಪ್ರಾಧ್ಯಾಪಕ ಶಂಕರ ಕೊಡದೂರ, ಸೇವಾ ಪ್ರತಿನಿಧಿಗಳು ಆರತಿ,ಮಹಾಲಕ್ಷ್ಮಿ ಮತ್ತು ಕಾಲೇಜು ವಿದ್ಯಾರ್ಥಿಗಳು ಅನೇಕರಿದ್ದರು.

## ಅಕ್ಷರ ಕಲಿಸಿದ ಗುರುವಿಗೆ ಸನ್ಮಾನ

• **ಉದಯವಾಹಿನಿ ಕಮಲನಗರ**

ಬಾಲಯೋಗಿ ನೀಲಕಂಠ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಡಿಯಲ್ಲಿ ಶಿಕ್ಷಕ ದಿನಾಚರಣೆ ನಿಮಿತ್ಯ ಗುರುಗಳನ್ನು ಗೌರವಿಸುವ ದಿನಾಚರಣೆ ಡೋಣಗಾಂವ (ಎಂ) ಗ್ರಾಮದಲ್ಲಿ ಸಂಭ್ರಮದಿಂದ ನೆರವೇರಿತು.

ಕಮಲನಗರ ಠಾಣೆಯ ಸಿಪಿಐ ಶ್ರೀಕಾಂತ್ ಅಮರವಾಡಿ ಡಾ. ಸರ್ವಪಲ್ಲಿರಾಧಕೃಷ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡುತ್ತಾ, ವಿದ್ಯಾರ್ಥಿಗಳು ಮೊಬೈಲ್ ನೋಡುವುದು ಕಡಿಮೆ ಮಾಡಬೇಕು ಮೊಬೈಲ್ ಬಳಸುವದರಿಂದ ಮಕ್ಕಳು ಮಾನಸಿಕವಾಗಿ ಕುಗ್ಗಿ ಹೋಗುತ್ತಿದ್ದಾರೆ ಎಂದು ನುಡಿದರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿರುವ ಸಂಸ್ಥೆ ಅಧ್ಯಕ್ಷರಾದ ಶಾಲಿವಾನ ಬಿ ಗಂದಗೆ ಮಾತನಾಡಿ ಶಿಕ್ಷಕರ ದಿನಾಚರಣೆ ಕೇವಲ ಶಿಕ್ಷಣ ಸಂಸ್ಥೆಗಳಿಗೆ ಮಾತ್ರ ಸೀಮಿತವಾಗಿವೆ ಇಡೀ ಸಮಾಜ ಶಿಕ್ಷಕರ ದಿನಾಚರಣೆಯನ್ನು ಆಚರಿಸುವ ಮೂಲಕ ಶಿಕ್ಷಕರ ಸಮುದಾಯವನ್ನು ಗೌರವಿಸಬೇಕೆಂದು ನುಡಿದರು, ಅಕ್ಷರ ಕಲಿಸಿದ ಗುರುಗಳನ್ನು ಗೌರವದಿಂದ ಕಾಣಿ ಅವರ ಋಣ ತೀರಿಸಬೇಕು ಎಂದು ಕಾಂಗ್ರೇಸ್ ಪಕ್ಷದ ಮಹಿಳಾ ಘಟಕದ ರಾಜ್ಯ ಅಧ್ಯಕ್ಷರು

## ಜ್ಯುವೆಲರಿ ಶಾಪ್‌ನಲ್ಲಿ ಕಳ್ಳತನ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಕಳವು

• **ಉದಯವಾಹಿನಿ ಉಡುಪಿ**

ಜ್ಯುವೆಲರಿ ವರ್ಕ್ ಶಾಪ್ ವೊಂದಕ್ಕೆ ನುಗ್ಗಿದ ಕಳ್ಳರು ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣಗಳನ್ನು ದೋಚಿದ ಘಟನೆ ಉಡುಪಿ ನಗರದ ಚಿತ್ತರಂಜನ್ ಸರ್ಕಲ್ ಬಳಿ ನಡೆದಿದೆ.

ಚಿತ್ತರಂಜನ್ ಸರ್ಕಲ್ ಬಳಿ ಇರುವ ವೈಭವ ರಿಫೈನರ್ ಎಂಬ ಚಿನ್ನ ಮತ್ತು ಬೆಳ್ಳಿ ಕರಗಿಸುವ ಅಂಗಡಿಯಲ್ಲಿ ಕಳ್ಳತನವಾಗಿದೆ. ದುಷ್ಕರ್ಮಿಗಳು ನಕಲಿ ಕೀ ಬಳಸಿ ಅಂಗಡಿಯೊಳಗೆ ಪ್ರವೇಶಿಸಿದ್ದಾರೆ. ನಕಲಿ ಬೀಗಗಳನ್ನು ಬಳಸಿ ಡ್ರಾವರ್ ತೆರೆದಿದ್ದಾರೆ. ಅದರಲ್ಲಿದ್ದ ಸುಮಾರು 600 ಗ್ರಾಂ ಚಿನ್ನದ ಗಟ್ಟಿ, ಗೋಲ್ಡ್ ಲಿಕ್ವಿಡ್, ಇತರ ಬೆಲೆಬಾಳುವ ವಸ್ತುಗಳನ್ನು ಕಳ್ಳತನ ಮಾಡಿದ್ದಾರೆ. ಈ ಕೃತ್ಯದಲ್ಲಿ ಅಂಗಡಿಯ ಮಾಜಿ ಕೆಲಸಗಾರರ ಕೈವಾಡವಿರುವ ಬಗ್ಗೆ ಪೊಲೀಸರು ಶಂಕಿಸಿದ್ದಾರೆ.

**ಉದಯವಾಹಿನಿ ವಿಶೇಷ**

## ವೀಲ್ ಚೇರ್‌ನಲ್ಲಿ ಕುಳಿತು ಕಣ್ಣೀರು

### ತ್ರಿಚಕ್ರ ವಾಹನಕ್ಕಾಗಿ ಕೈ ಮುಗಿದು ಬೇಡಿಕೊಂಡ ಅಂಗವಿಕಲ

• **ಉದಯವಾನಿ ಕಾರಟಗಿ**

ಅಂಗಕಲ ಇಲಾಖೆ ಎಂದರೆ ಕರ್ನಾಟಕ ಸರ್ಕಾರದ ಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಅಂಗಕಲ ವ್ಯಕ್ತಿಗಳಿಗೆ ಕಲ್ಯಾಣ ಮತ್ತು ಪುನರ್ವಸತಿ ಒದಗಿಸುವುದು, ಅವರ ಹಕ್ಕುಗಳು ಮತ್ತು ಅವಕಾಶಗಳನ್ನು ಖಚಿತಪಡಿಸುವುದು, ಮತ್ತು ವೈದ್ಯಕೀಯ, ಶೈಕ್ಷಣಿಕ, ವೃತ್ತಿಪರ ಹಾಗೂ ಸಾಮಾಜಿಕ–ಆರ್ಥಿಕ ನೆರವು ನೀಡುವುದು ಸೇರಿದಂತೆ ಸಮಗ್ರ ಪುನರ್ವಸತಿ ಒದಗಿಸುವ ಮುಖ್ಯ ಉದ್ದೇಶವನ್ನು ಹೊಂದಿದೆ ಆ ನಿಟ್ಟಿನಲ್ಲಿ ಕಾರ್ಯಪ್ರವೃತ್ತಿಯನ್ನು ಹೊಂದಿದೆ ಆದರೆ ಕೊಪ್ಪಳ ಜಿಲ್ಲೆಯ ಕಾರಟಗಿ ತಾಲ್ಲೂಕಿನಲ್ಲಿ ಅದೆಷ್ಟೋ ಕಲ ಚೇತನರಿಗೆ ಸರ್ಕಾರದ ಸೌಲಭ್ಯಗಳು ದೊರೆಯದೆ ನಿತ್ಯವು ಪರದಾಡುವ ಪರಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಅರ್ಹ ಕಲ ಚೇತನರು ಇಲಾಖೆಯ ಸೌಲಭ್ಯಗಳಿಂದ ವಂಚಿರಾಗುತ್ತಿದ್ದಾರೆ.

ಕಾರಟಗಿ ತಾಲ್ಲೂಕಿನ ಮರ್ಲಾನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಜೂರಟಗಿ ಗ್ರಾಮದ ಕಲ ಚೇತನ ವ್ಯಕ್ತಿಯಾದ ಹುಲಗಪ್ಪ ಇವರಿಗೆ ಬಲಗಾಲು ಇಲ್ಲ ಕೇವಲ ಒಂದೇ ಕಾಲಿನಲ್ಲಿ ದಿನ ನಿತ್ಯದ ಕೆಲಸಗಳಿಗಾಗಿ ತ್ರಿಚಕ್ರ ವಾಹನ ಇಲ್ಲದೆ ಪರದಾಡುತ್ತಿದ್ದಾರೆ, ದವಾಖಾನೆಯಲ್ಲಿ ರೋಗಿಗಳಿಗೆ ಬಳಸುವ ಎಲ್ ಚೇರ್ ನಲ್ಲಿ ದಿನನಿತ್ಯ 5 ಕಿಲೋಮೀಟರ್ ಕಾರಟಗಿಗೆ ಬಂದು ದಿನ ಬಳಕೆಯ ವಸ್ತುಗಳ ಖರೀದಿ ಮಾಡಿಕೊಂಡು ಹೋಗುತ್ತಿದ್ದಾನೆ ಹಾಗೂ ಆಸ್ಪತ್ರೆಗೆ ಬರಲೂ ಇದೇ ಎಲ್ ಚೇರ್ ಬಳಸುತ್ತಿದ್ದಾನೆ.


ಉದಯವಾಹಿನಿ ಚಿತ್ರ

ಹೆದ್ದಾರಿಯಲ್ಲಿ ವೀಲ್ ಚೇರ್ ಬಳಸಲು ಈ ವ್ಯಕ್ತಿ ತುಂಬಾನೆ ತೊಂದರೆ ಅನುಭಸುತ್ತಿದ್ದಾನೆ, ಈ ವೀಲ್ ಚೇರ್ ದಾನಿಗಳೊಬ್ಬರು ನೀಡಿದ್ದಾರೆ. ಬಳಕೆಯ ನಂತರ ನಿರೂಪಯುಕ್ತವಾಗಬಾರದು ಎಂದು ಈ ವ್ಯಕ್ತಿಗೆ ವೀಲ್ ಚೇರ್ ನೀಡಿದ್ದಾರೆ. ಮರ್ಲಾನ ಹಳ್ಳಿಯ ಗ್ರಾಮ ಪಂಚಾಯತಿಯ ಅಧಿಕಾರಿಗಳು ಹಾಗೂ ಸಂಭಂದಿಸಿದ ಅಧಿಕಾರಿಗಳು ಈ ಅಂಗಕಲ ವ್ಯಕ್ತಿಗೆ ಸರ್ಕಾರದ ಸೌಲಭ್ಯ ದೊರಕಿಸಿಕೊಡಬೇಕಾಗಿದೆ, ಈ ಕುರಿತು ಪತ್ರಿಕೆಗೆ ಜೊತೆ ಮಾತನಾಡಿದ ಹುಲುಗಪ್ಪ ಪುಣ್ಯಾತ್ಮರೊಬ್ಬರೂ ನನಗೆ ವೀಲ್‌ಚೇರ್ ನೀಡಿದ್ದಾರೆ ಅವರಿಗೆ ಧನ್ಯವಾದಗಳು ಆದರೆ ಈ ವೀಲ್‌ಚೇರ್‌ನಿಂದ ಕಾರಟಗಿಗೆ ಹೋಗಿ ಬರಲು ಹಾಗೂ ದಿನನಿತ್ಯದ ಕೆಲಸಗಳು ಮಾಡಿ ಕೊಳ್ಳಲು ತುಂಬಾನೆ ತೊಂದರೆಯಾಗಿದೆ ಅಧಿಕಾರಿಗಳು ದಯಟ್ಟು ಕೂಡಲೇ ನನಗೆ ತ್ರಿಚಕ್ರ ವಾಹನ ಹಾಗೂ ಇತರೆ ಸರ್ಕಾರಿ ಸೌಲಭ್ಯಗಳು ನೀಡುವಂತೆ ಬೇಡಿಕೊಂಡಿದ್ದಾನೆ.

# ಟಿಸಿ ಕೊಡಲು ಕಾಲೇಜು ಆಡಳಿತ ಮಂಡಳಿ ಹಣಕ್ಕೆ ಡಿಮ್ಯಾಂಡ್

### ಬಿಬಿಸಿ ನರ್ಸಿಂಗ್ ಕಾಲೇಜಿನಲ್ಲಿ ಶುಲ್ಕ ಬಾಕಿಗೆ ವಿದ್ಯಾರ್ಥಿನಿಯ ತಾಯಿಯ ತಾಳಿ ಹಾಗೂ ಓಲೆಯನ್ನು ಒತ್ತೆಯಾಗಿಟ್ಟುಕೊಂಡ ಆರೋಪ

• **ಉದಯವಾಹಿನಿ ಕೊಪ್ಪಳ,**

ಟಿಸಿ (ವರ್ಗಾವಣೆ ಪ್ರಮಾಣ ಪತ್ರ) ನೀಡಲು ಹಣ ಇಲ್ಲ ಎಂದಿದ್ದಕ್ಕೆ ಕಾಲೇಜು ಆಡಳಿತ ಮಂಡಳಿ, ವಿದ್ಯಾರ್ಥಿನಿ ತಾಯಿಯ ತಾಳಿ ಹಾಗೂ ಕಿವಿ ಕಿವಿ ಓಲೆ ಬಿಚ್ಚಿಸಿಕೊಂಡಿರುವ ಅಮಾನವೀಯ ಘಟನೆ ಕೊಪ್ಪಳದಲ್ಲಿ ನಡೆದಿದೆ. ಹೌದು..ಕೊಪ್ಪಳ ಜಿಲ್ಲೆಯ ಗಂಗಾವತಿಯ ಬಿಬಿಸಿ ನರ್ಸಿಂಗ್ ಕಾಲೇಜಿನಲ್ಲಿ ಶುಲ್ಕ ಬಾಕಿಗೆ ವಿದ್ಯಾರ್ಥಿನಿಯ ತಾಯಿಯ ತಾಳಿ ಹಾಗೂ ಓಲೆಯನ್ನು ಒತ್ತೆಯಾಗಿಟ್ಟುಕೊಂಡ ಆರೋಪ ಕೇಳಿಬಂದಿದೆ. ಟಿಸಿ ಪಡೆಯಲು ಹಣವಿಲ್ಲದ ಕಾರಣ ವಿದ್ಯಾರ್ಥಿನಿಯ ತಾಯಿ ಬಳಿ ಕಾಲೇಜಿನ ಚೇರಮನ್ ಡಾ ಸಿಬಿ ಚಿನಿವಾಲ ಚಿನ್ನ ಪಡೆದುಕೊಂಡಿರುವುದಾಗಿ ಆರೋಪಿಸಲಾಗಿದ್ದು, ಇದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗುತ್ತಿದ್ದಂತೆಯೇ ಕಾಲೇಜು ಆಡಳಿತ ಮಂಡಲಿ ತಾಳಿ, ಕಿವಿ ಓಲೆಯನ್ನು ವಾಪಸ್ ನೀಡಿದೆ.

ಕನಕಗಿರಿ ತಾಲ್ಲೂಕಿನ ಮುಸ್ಲಾಪೂರ ಗ್ರಾಮದ ಕಾವೇರಿ ವಾಲಿಕಾರ್ ಎಂಬ ವಿದ್ಯಾರ್ಥಿನಿ ಗಂಗಾವತಿಯ ಬಿಬಿಸಿ ನರ್ಸಿಂಗ್ ಕಾಲೇಜಿನಲ್ಲಿ ಬಿಎಸ್ಸಿ ನರ್ಸಿಂಗ್‌ಗೆ ಅಡ್ಮಿಶನ್ ಪಡೆದಿದ್ದಳು. ಅಡ್ಮಿಶನ್ ಸಮಯದಲ್ಲಿ ಕಾವೇರಿಯ ಪಾಲಕರು 10,000 ರೂ. ಪಾವತಿಸಿದ್ದರು ಮತ್ತು ಉಳಿದ 90,000 ರೂ. ಬಾಕಿಯನ್ನು ನಂತರ ಪಾವತಿಸುವುದಾಗಿ ಭರವಸೆ ನೀಡಿದ್ದರು. ಆದರೆ, ಇತ್ತೀಚೆಗೆ ಕಾವೇರಿಗೆ ಗದಗಿನ ಸರಕಾರಿ ನರ್ಸಿಂಗ್ ಕಾಲೇಜಿನಲ್ಲಿ ಸೀಟು ದೊರೆತ ಕಾರಣ, ಅವರು ಬಿಬಿಸಿ ಕಾಲೇಜಿನಿಂದ ಟಿಸಿ ಕೇಳಿದ್ದಾರೆ. ಆಗ ಕಾಲೇಜು ಚೇರಮನ್ ಡಾ ಚಿನಿವಾಲ ಉಳಿದ 90,000 ರೂ. ಪಾವತಿಸಿದರೆ ಮಾತ್ರ ಟಿಸಿ ನೀಡುವುದಾಗಿ ಹೇಳಿದ್ದಾರೆ. ಆದರೆ ಸದ್ಯ ಕುಟುಂಬದ ಆರ್ಥಿಕ ಪರಿಸ್ಥಿತಿಯಿಂದ ಹಣ ಪಾವತಿಸಲು ಸಾಧ್ಯವಿಲ್ಲ ಎಂದು ಕಾವೇರಿಯ ಪಾಲಕರು ಅಳಲುತೋಡಿಕೊಂಡಿದ್ದಾರೆ. ಇದಕ್ಕೆ ಒಪ್ಪದ ಚೇರಮನ್ ಡಾ. ಚಿನಿವಾಲ, 'ಹಣ ಇಲ್ಲದಿದ್ದರೆ ನಿಮ್ಮ ಮೈಮೇಲಿನ ಬಂಗಾರವನ್ನಾದರೂ ಕೊಡಿ ಎಂದು ಒತ್ತಾಯಿಸಿದ್ದಾರೆ ಎನ್ನಲಾಗಿದೆ. ಈ ಒತ್ತಡದಿಂದಾಗಿ ಕಾವೇರಿಯ ತಾಯಿ ತಮ್ಮ ತಾಳಿಯನ್ನೇ ಬಿಚ್ಚಿಕೊಟ್ಟು ಟಿಸಿ ಪಡೆದಿದ್ದಾರೆ. ಬಳಿಕ ಈ ಸುದ್ದಿ ಗೊತ್ತಾಗಿ ಕಾಲೇಜು ವಿರುದ್ಧ ಆಕ್ರೋಶಗಳು ವ್ಯಕ್ತವಾಗುತ್ತಿದ್ದಂತೆಯೇ ಮಹಿಳೆಗೆ ತಾಳಿ ವಾಪಸ್ ನೀಡಿದ್ದಾರೆ ಎಂದು ತಿಳಿದುಬಂದಿದೆ.



ಉದಯವಾಹಿನಿ ಚಿತ್ರ

**ತಾಳಿ, ಕಿವಿ ಓಲೆ ವಾಪಸ್**

#### ವಿದ್ಯಾರ್ಥಿನಿ ತಾಯಿ ಹೇಳಿದ್ದೇನು?

ಇನ್ನು ಈ ಬಗ್ಗೆ ವಿದ್ಯಾರ್ಥಿನಿ ಕಾವೇರಿ ತಾಯಿ ರೇಣುಕಮ್ಮಾ ಪ್ರತಿಕ್ರಿಯಿಸಿದ್ದು, ಬಂಗಾರ ಕೊಟ್ರೆ ಮಗಳ ಟಿಸಿ, ಮಾರ್ಕ್ಸ್‌ಕಾರ್ಡ್ ಕೊಡ್ತೀನಿ ಅಂದ್ರು. ನಾನು ಬಂಗಾರದ ತಾಳಿಕೊಟ್ಟೆ. ನಮ್ಮ ಮಗಳು ಕಾವೇರಿ ಬಿಬಿಸಿ ಕಾಲೇಜ್ ನಲ್ಲಿ ಮೊದಲ ವರ್ಷ ನರ್ಸಿಂಗ್ ಓದುತ್ತಿದ್ದಳು. ನಾವು ಈಗಾಗಲೇ 10 ಸಾವಿರು ರೂಪಾಯಿ ಕೊಟ್ಟಿದ್ವಿ. ಈ ವರ್ಷ ದ ಇನ್ನೂ 90 ಸಾವಿರ ಕೊಡಬೇಕಾಗಿತ್ತು. ಆದ್ರೆ, ಕಾಲೇಜ್ ಸಿಬ್ಬಂದಿ ನಾಲ್ಕು ವರ್ಷದ ಹಣ ಕಟ್ಟಿ ಅಂದರು. ನಮ್ಮ ಬಳಿ ಹಣ ಇರಲಿಲ್ಲ. ಬಂಗಾರ ಕೊಡಿ ಅಂದ್ರು. ನಾವು ಬಂಗಾರ ಕೊಟ್ಟ ಮೇಲೆ ಮಾರ್ಕ್ಸ್ ಕಾರ್ಡ್ ಟಿಸಿ ಕೊಟ್ರು. ಮಗಳಿಗಾಗಿ ನಾನು ತಾಳಿ,ಒಲೆ ಕೊಟ್ಟೆ ಎಂದು ಕಣ್ಣೀರಿಟ್ಟಿದ್ದಾಳೆ.

> ಇನ್ನು ಮಗಳಿಗಾಗಿ ಹೆಂಡ್ತಿ ತಾಳಿ ಕೊಟ್ಟಿರುವ ಬಗ್ಗೆ ಪತಿ ಹನುಮಂತಪ್ಪ ಮಾತನಾಡಿದ್ದು, ನಾವು ಎರಡು ಮೂರು ಬಾರಿ ಕೇಳಿದರೂ ಅವರು ಟಿಸಿ ಕೊಟ್ಟಿರಲಿಲ್ಲ. ಟಿಸಿ ಕೇಳುವುದಕ್ಕೆ ಹೋದಾಗ ಹಣ ಕೇಳಿದ್ರು. ನಾವು ಕೂಲಿ ಮಾಡಿ ಜೀವನ ಮಾಡೋರು ಹಣ ಇಲ್ಲ ಅಂದಾಗ ಬಂಗಾರ ನೋಡಿ ಬಂಗಾರ ಕೇಳಿದ್ರು. ನನ್ನ ಹೆಂಡತಿ ಬಂಗಾರ ಕೊಟ್ಟ ಬಳಿಕವೇ ಮಾರ್ಕ್ಸ್ ಕಾರ್ಡ್ ಟಿಸಿ ಕೊಟ್ರು. ನಿನ್ನೆ ಒಂದು ಗಂಟೆ ಅವರು ನನ್ನ ಪತ್ನಿಯ ಬಂಗಾರ ಇಟ್ಟುಕೊಂಡಿದ್ದರು. ನಂತರ ಅವರ ತಪ್ಪಿನ ಅರಿವಾಗಿ ಬಂಗಾರವನ್ನು ವಾಪಸ್ ಕೊಟ್ಟಿದ್ದಾರೆ.–ಹನುಮಂತಪ್ಪ , ವಿದ್ಯಾರ್ಥಿನಿ ತಂದೆ

# ದೋಹಾದಲ್ಲಿ ಇಸ್ರೇಲ್ ದಾಳಿಯನ್ನು ಖಂಡಿಸಿದ ಯುಎಇ

**ಅಬು ದಾಬಿ:** ಕತಾರ್ ರಾಜಧಾನಿ ದೋಹಾದಲ್ಲಿ ಹಮಾಸ್ ನಾಯಕರನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ದಾಳಿಯನ್ನು, ಸಂಯುಕ್ತ ಅರಬ್ ಸಂಸ್ಥಾನ ತೀವ್ರವಾಗಿ ಖಂಡಿಸಿದೆ. ಈ ಕುರಿತು ಮಾತನಾಡಿರುವ ಯುಎಇ ಉಪಪ್ರಧಾನಮಂತ್ರಿ, ವಿದೇಶಾಂಗ ಸಚಿವ ಶೇಖ್ ಅಬ್ದುಲ್ಲಾ ಬಿನ್ ಜಾಯೆದ್ ಅಲ್ ನಹ್ಯಾನ್, ಕತಾರ್ ಮೇಲೆ ನಡೆದ ದಾಳಿ ಹೇಡಿತನದ ಕೃತ್ಯ ಎಂದು ಟೀಕಿಸಿದ್ದಾರೆ. ದೋಹಾದಲ್ಲಿ ಇಸ್ರೇಲ್ ವೈಮಾನಿಕ ದಾಳಿ ಕತಾರ್‌ನ ಸಾರ್ವಭೌಮತ್ವದ ಸ್ಪಷ್ಟ ಉಲ್ಲಂಘನೆಯಾಗಿದ್ದು, ಅಂತಾರಾಷ್ಟ್ರೀಯ ಕಾನೂನು ಮತ್ತು ವಿಶ್ವಸಂಸ್ಥೆಯ ಚಾರ್ಟರ್‌ನ ಉಲ್ಲಂಘನೆ, ಪ್ರಾದೇಶಿಕ ಮತ್ತು ಜಾಗತಿಕ ಭದ್ರತೆಗೆ ಬೆದರಿಕೆ ಹಾಕುವ ಬೇಜವಾಬ್ದಾರಿಯುತ ವರ್ತನೆ ಎಂದು ಶೇಖ್ ಅಬ್ದುಲ್ಲಾ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕತಾರ್ ಜೊತೆ ಯುಎಇಯ ಸಂಪೂರ್ಣ ಒಗ್ಗಟ್ಟನ್ನು ಅವರು ಪುನರುಚ್ಚರಿಸಿದ ಶೇಖ್ ಅಬ್ದುಲ್ಲಾ, ಕತಾರ್ ತನ್ನ ಭದ್ರತೆ, ನಾಗರಿಕರ ಸುರಕ್ಷತೆಯನ್ನು ಕಾಪಾಡಲು ತೆಗೆದುಕೊಳ್ಳುವ ಎಲ್ಲಾ



ಕ್ರಮಗಳಿಗೆ ಯುಎಇ ಬೆಂಬಲ ವ್ಯಕ್ತಪಡಿಸುತ್ತದೆ ಎಂದು ಭರವಸೆ ನೀಡಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಇಸ್ರೇಲ್‌ನ ಆಕ್ರಮಣಕಾರಿ ವರ್ತನೆಯನ್ನು ತಡೆಯುವಂತೆ ಅಂತಾರಾಷ್ಟ್ರೀಯ ಸಮುದಾಯ, ವಿಶ್ವಸಂಸ್ಥೆ ಭದ್ರತಾ ಮಂಡಳಿಯನ್ನು ಒತ್ತಾಯಿಸಿರುವ ಯುಎಇ ಉಪಪ್ರಧಾನಿ, ಜಾಗತಿಕ ಸಂಸ್ಥೆಗಳು ತಮ್ಮ ಕಾನೂನು ಮತ್ತು ನೈತಿಕ ಜವಾಬ್ದಾರಿಗಳನ್ನು ಪೂರೈಸಬೇಕೆಂದು ಆಗ್ರಹಿಸಿದ್ದಾರೆ.

2024ರಲ್ಲಿ ಲೆಬನಾನ್ ಮೇಲೆ ಇಸ್ರೇಲ್ ವಾಯುದಾಳಿ ಮಾಡಿತ್ತು.

### ಶಾಂತಿ, ಭದ್ರತೆಗೆ ವ್ಯತಿರಿಕ್ತ ಪರಿಣಾಮ

**ಕತಾರ್ ಕೂಡ ಇಸ್ರೇಲ್ ದಾಳಿಯ ಬಗ್ಗೆ ಅಂತಾರಾಷ್ಟ್ರೀಯ ಸಮುದಾಯದ ಪ್ರತಿಕ್ರಿಯೆ ಬಯಸಿದೆ. ಇದೇ ವೇಳೆ ಈ ಪ್ರದೇಶದಲ್ಲಿ ಮಿಲಿಟರಿ ಉಲ್ಬಣವನ್ನು ತಡೆಯುವ ತುರ್ತು ಅಗತ್ಯವನ್ನು ಒತ್ತಿ ಹೇಳಿದ ಯುಎಇ ವಿದೇಶಾಂಗ ಸಚಿವರು, ಯಾವುದೇ ಆತುರದ ನಿರ್ಧಾರವು ಮಧ್ಯ ಪ್ರಾಚ್ಯವನ್ನೂ ಒಳಗೊಂಡಂತೆ ಅಂತರರಾಷ್ಟ್ರೀಯ ಶಾಂತಿ, ಭದ್ರತೆಗೆ ವ್ಯತಿರಿಕ್ತ ಪರಿಣಾಮಗಳನ್ನು ಬೀರುತ್ತದೆ ಎಂದು ಎಚ್ಚರಿಸಿದ್ದಾರೆ.**

ಅಂತಾರಾಷ್ಟ್ರೀಯ ಮಟ್ಟದಲ್ಲಿ ದೃಢವಾದ ಪ್ರತಿಕ್ರಿಯೆಯಿಲ್ಲದೆ ಇಂತಹ ಆಕ್ರಮಣಗಳನ್ನು ತಡೆಗಟ್ಟಲು ಸಾಧ್ಯವಿಲ್ಲ ಎಂದಿರುವ ಶೇಖ್ ಅಬ್ದುಲ್ಲಾ, ಪ್ರಾದೇಶಿಕ, ಜಾಗತಿಕ ಭದ್ರತೆಗೆ ಪೂರಕವಾಗಿ ನಾವು ನಿರ್ಧಾರಗಳನ್ನು ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ. ದೋಹಾದಲ್ಲಿ ಹಮಾಸ್ ಅಧಿಕಾರಿಗಳನ್ನು ಗುರಿಯಾಗಿಸಿಕೊಂಡು ನಡೆದ ದಾಳಿಯ ನಂತರ, ಕತಾರ್ ಇದನ್ನು ವಿರೋಧಿಸಿ ತೀಕ್ಷ್ಣವಾದ ಹೇಳಿಕೆ ನೀಡಿದ ಕೆಲವೇ ಸಮಯದ ಬಳಿಕ, ಯುಎಇ ಕೂಡ ದಾಳಿಯನ್ನು ಖಂಡಿಸಿ ಹೇಳಿಕೆ ಬಿಡುಗಡೆ ಮಾಡಿದೆ. ಕತಾರ್ ರಾಜಧಾನಿ ದೋಹಾದಲ್ಲಿ ಹಮಾಸ್ ರಾಜಕೀಯ ಬ್ಯೂರೋದ ಹಲವಾರು ಸದಸ್ಯರನ್ನು ಹೊಂದಿರುವ ವಸತಿ ಕಟ್ಟಡಗಳನ್ನು ಗುರಿಯಾಗಿಸಿಕೊಂಡು, 'ಇಸ್ರೇಲ್ ದಾಳಿ ನಡೆಸಿತ್ತು. ಇಸ್ರೇಲ್ ರಕ್ಷಣಾ ಪಡೆ, ಇಸ್ರೇಲ್ ಭದ್ರತಾ ಸಂಸ್ಥೆ ಜಂಟಿಯಾಗಿ ನಡೆಸಿದ ಈ ವೈಮಾನಿಕ ದಾಳಿಯಲ್ಲಿ, ಆರು ಜನ ಮೃತಪಟ್ಟಿರುವುದಾಗಿ ಮೂಲಗಳು ಖಚಿತಪಡಿಸಿವೆ.

ಆದರೆ ಹಮಾಸ್ ಮೂಲಗಳು ಮಾತ್ರ, ತನ್ನ ಉನ್ನತ ನಾಯಕತ್ವ ಸುರಕ್ಷಿತವಾಗಿದೆ ಎಂದು ಪ್ರತಿಪಾದಿಸಿದೆ. ಅತ್ತ ಅಮೆರಿಕ ಕೂಡ ದೋಹಾದಲ್ಲಿ ಇಸ್ರೇಲ್ ನಡೆಸಿದ ದಾಳಿಯಿಂದ ಅಸಮಾಧಾನಗೊಂಡಿರುವುದಾಗಿ ಹೇಳಿದೆ. ಇತ್ತೀಚಿಗೆ ನಡೆದ ಇಸ್ರೇಲ್-ಸಿರಿಯಾ ಸಂಘರ್ಷವನ್ನೂ ಅಮೆರಿಕ ಖಂಡಿಸಿತ್ತು.


## ಜಾರ್ಖಂಡ್ ಎಟಿಎಸ್ ಜಂಟಿ ಕಾರ್ಯಾಚರಣೆ ಇಬ್ಬರು ಶಂಕಿತ ಐಎಸ್‌ಐಎಸ್ ಉಗ್ರರು ಅರೆಸ್ಟ್

**ನವದೆಹಲಿ:** ದೆಹಲಿ ಪೊಲೀಸರು, ಜಾರ್ಖಂಡ್ ಭಯೋತ್ಪಾದನಾ ನಿಗ್ರಹ ದಳ, ರಾಂಚಿ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿದ್ದು, ಇಬ್ಬರು ಶಂಕಿತ ಐಸಿಸ್ ಉಗ್ರರನ್ನು ಬಂಧಿಸಿದ್ದಾರೆ. ಬೊಕಾರೊ ಮೂಲದ ಆಶರ್ ಡ್ಯಾನಿಶ್ ಎಂದು ಗುರುತಿಸಲಾದ ಪ್ರಮುಖ ಆರೋಪಿಯನ್ನು ರಾಂಚಿಯಲ್ಲಿ ಬಂಧಿಸಲಾಗಿದೆ.

ಐಸಿಸ್-ಸಂಬಂಧಿತ ಮಾಡ್ಯೂಲ್‌ಗೆ ಸಂಬಂಧಿಸಿದಂತೆ ದೆಹಲಿ ಪೊಲೀಸ್ ವಿಶೇಷ ಘಟಕವು ಆಶರ್ ಡ್ಯಾನಿಶ್ ವಿರುದ್ಧ ಪ್ರಕರಣ ದಾಖಲಿಸಿದ್ದು, ಆತನಿಗಾಗಿ ಹುಡುಕಾಟ ನಡೆಸುತ್ತಿತ್ತು. ಏಕಕಾಲದಲ್ಲಿ ನಡೆಸಿದ ಸಂಘಟಿತ ದಾಳಿಯಲ್ಲಿ ಅಫ್ತಾಬ್ ಎಂಬ ಮತ್ತೊಬ್ಬ ಶಂಕಿತ ಐಸಿಸ್ ಉಗ್ರನನ್ನು ದೆಹಲಿಯಲ್ಲಿ ಬಂಧಿಸಲಾಗಿದೆ. ಬಂಧಿತರು ಐಸಿಸ್ ಸಂಘಟನೆಯೊಂದಿಗೆ ಸಂಪರ್ಕದಲ್ಲಿದ್ದರು. ಅಲ್ಲದೇ ಭಾರತದಲ್ಲಿ ಭ ಯೋತ್ಪಾದಕ ಕೃತ್ಯಗಳನ್ನು ನಡೆಸಲು ಸಂಚು ರೂಪಿಸಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಿಎಂ, ಸಚಿವರನ್ನು ಗೌರವಾನ್ವಿತ ಎಂದು ಸಂಬೋಧಿಸಿ: ಕೇರಳ ಸರ್ಕಾರ ಸುತ್ತೋಲೆ

**ತಿರುವನಂತಪುರ:** ಸಾರ್ವಜನಿಕರ ದೂರು ಅಥವಾ ಅರ್ಜಿಗಳಿಗೆ ಉತ್ತರಿಸುವಾಗ ಮುಖ್ಯಮಂತ್ರಿ, ಸಚಿವರ ಹೆಸರಿನ ಮುಂದೆ 'ಗೌರವಾನ್ವಿತ' ಎನ್ನುವ ಪದ ಬಳಸಬೇಕು ಎಂದು ಕೇರಳ ಸರ್ಕಾರದ ಆಡಳಿತ ಸುಧಾರಣೆ ಇಲಾಖೆ ಸುತ್ತೋಲೆ ಹೊರಡಿಸಿದೆ.ಈ ಬಗ್ಗೆ ಆಗಸ್ಟ್ 30ರಂದು ಸುತ್ತೋಲೆ ಹೊರಡಿಸಲಾಗಿದ್ದು, ದೂರುಗಳಿಗೆ ನೀಡುವ



ಉತ್ತರದಲ್ಲಿ ಮುಖ್ಯಮಂತ್ರಿ ಅಥವಾ ಸಚಿವರ ಹೆಸರಿನ ಮುಂದೆ 'ಬಹುಮಾನಪಟ್ಟ' ಎಂದು ಬಳಸಬೇಕು ಎಂದು ಇಲಾಖೆಯ ಕಾರ್ಯದರ್ಶಿಗಳಿಗೆ, ಜಿಲ್ಲಾಧಿಕಾರಿಗಳಿಗೆ ಹಾಗೂ ಕಚೇರಿಗಳ ಮುಖ್ಯಸ್ಥರಿಗೆ ಸೂಚಿಸಲಾಗಿದೆ.

ಉತ್ತರಗಳನ್ನು ಬರೆಯುವಾಗ ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ಒಂದು ವೇಳೆ ನಿಯಮ ಉಲ್ಲಂಘಿಸಿದರೆ ಕ್ರಮ ಎದುರಿಸಬೇಕಾದೀತು ಎಂದೂ ಎಚ್ಚರಿಕೆ ನೀಡಲಾಗಿದೆ. ಅಧಿಕೃತ ಸಂವಹನದಲ್ಲಿ ಗೌರವದಿಂದ ಸಂಬೋಧಿಸುವ ಸಂಪ್ರದಾಯ ಕಡಿಮೆಯಾಗುತ್ತಿದೆ ಎನ್ನುವ ಅಭಿಪ್ರಾಯಗಳು ದೇಶದಾದ್ಯಂತ ಕೇಳಿ ಬರುತ್ತಿರುವಾಗಲೇ, ಕೇರಳ ಸರ್ಕಾರದಿಂದ ಈ ನಡೆ ಬಂದಿದೆ.

ಆಡಳಿತ ಸುಧಾರಣಾ ಇಲಾಖೆಯು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ, ಈ ಸುತ್ತೋಲೆಯು ಅವರ ಸೂಚನೆಗಳನ್ನು ಪ್ರತಿಬಿಂಬಿಸುತ್ತದೆ ಎನ್ನಲಾಗಿದೆ. ಆದರೆ ಸರ್ಕಾರ ಈ ನಿರ್ಧಾರದ ಹಿಂದಿನ ಕಾರಣ ತಿಳಿಸಿಲ್ಲ. ಸರ್ಕಾರದ ಈ ಸುತ್ತೋಲೆ ಸಾಮಾಜಿಕ ಜಾಲತಾಣಗಳಲ್ಲಿ ಪರ ವಿರೋಧದ ಚರ್ಚೆಗೆ ಎಡೆ ಮಾಡಿಕೊಟ್ಟಿದೆ.

# ಹೊಸ ಆಟ ಶುರು ಮಾಡಿದ ಟ್ರಂಪ್

### ರಷ್ಯನ್ ತೈಲ ಗೆಳೆಯರ ಮೇಲೆ ಶೇ. 100ರಷ್ಟು ಸುಂಕ ಹೇರುವಂತೆ ಇಯುಗೆ ಟ್ರಂಪ್ ಸಲಹೆ

**ವಾಷಿಂಗ್ಟನ್:** ಉಕ್ರೇನ್‌ನಲ್ಲಿ ಮಾಸ್ಕೋ ತನ್ನ ಯುದ್ಧವನ್ನು ಕೊನೆಗೊಳಿಸಲು ಒತ್ತಡವನ್ನು ಹೆಚ್ಚಿಸುವ ಸಾಮೂಹಿಕ ಪ್ರಯತ್ನದ ಭಾಗವಾಗಿ, ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುವ ಭಾರತ, ಚೀನಾದ ಮೇಲೆ 100ರಷ್ಟು ಸುಂಕ ವಿಧಿಸುವಂತೆ, ಯುರೋಪಿಯನ್ ಯೂನಿಯನ್‌ಗೆ ಅಮೆರಿಕ ಅಧ್ಯಕ್ಷ ಸಲಹೆ ನೀಡಿದ್ದಾರೆ. ಉಕ್ರೇನ್‌ನಲ್ಲಿ ಶಾಂತಿ ನೆಲೆಸಬೇಕಾದರೆ ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುವ ಭಾರತ ಮತ್ತು ಚೀನಾದ ಮೇಲೆ ದಂಡನಾತ್ಮಕ ಸುಂಕಗಳನ್ನು ವಿಧಿಸಬೇಕು. ಈ ಹಿನ್ನೆಲೆಯಲ್ಲಿ ಯುರೋಪಿಯನ್ ಒಕ್ಕೂಟ ಅಮೆರಿಕದ ಪ್ರಯತ್ನಗಳಿಗೆ ಕೈಜೋಡಿಸಬೇಕು ಎಂದು ಡೊನಾಲ್ಡ್ ಟ್ರಂಪ್ ಕರೆ ಕೊಟ್ಟಿದ್ದಾರೆ.

**ಯಾವುದೇ ಪ್ರತಿಕ್ರಿಯೆ ನೀಡಿಲ್ಲ**


ಅಮೆರಿಕ ಈಗಾಗಲೇ ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ವಿಧಿಸಿದೆ. ರಷ್ಯಾಗೆ ಅಗತ್ಯವಿರುವ ಆದಾಯವನ್ನು ಕಡಿಮೆ ಮಾಡುವ ಮಾರ್ಗಗಳನ್ನು ಚರ್ಚಿಸಲು, ವಾಷಿಂಗ್ಟನ್‌ನಲ್ಲಿ ನಡೆದ ಹಿರಿಯ ಅಮೆರಿಕ, ಇಯು ಅಧಿಕಾರಿಗಳ ಸಭೆಯಲ್ಲಿ, ಭಾರತ, ಚೀನಾ ಮೇಲೆ ಶೇ. 100ರಷ್ಟು ಸುಂಕ ಹೇರುವಂತೆ ಯುರೋಪಿಯನ್ ಒಕ್ಕೂಟವನ್ನು ಕೇಳಿಕೊಂಡರು. ಆದರೆ ಇಯು ಈ ವಿಚಾರವಾಗಿ ಇದುವರೆಗೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ವಿಪರ್ಯಾಸವೆಂದರೆ ಇಯು ಒಕ್ಕೂಟದ ಕೆಲವು ರಾಷ್ಟ್ರಗಳೇ ಕಳ್ಳ ಬೆಕ್ಕಿನ ಹಾಗೆ ರಷ್ಯಾದೊಂದಿಗಿನ ತಮ್ಮ ತೈಲ ಮತ್ತು ಅನಿಲ ಸಂಬಂಧವನ್ನು ಮುಂದುವರೆಸಿದೆ.

**ಟ್ರಂಪ್ ಹತಾಶೆ:** ಉಕ್ರೇನ್ ಮತ್ತು ರಷ್ಯಾ ನಡುವೆ ಕದನ ವಿರಾಮದ ಮಧ್ಯಸ್ಥಿಕೆ ವಹಿಸಲು ಇನ್ನಿಲ್ಲದ ಕಸರತ್ತು ನಡೆಸುತ್ತಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇದಕ್ಕಾಗಿ ಸಾಧ್ಯವಿರುವ ಎಲ್ಲಾ ಮಾರ್ಗಗಳನ್ನು ಅನ್ವೇಷಿಸುತ್ತಿದ್ದಾರೆ. ಹೇಗಾದರೂ ಮಾಡಿ ಉಕ್ರೇನ್-ರಷ್ಯಾ ಕದನ ವಿರಾಮ ಒಪ್ಪಂದದ ಕ್ರೆಡಿಟ್ ಪಡೆಯಬೇಕು ಎಂಬುದು ಟ್ರಂಪ್ ಅವರ ಬಯಕೆ. ಆದರೆ ಈ ನಿಟ್ಟಿನಲ್ಲಿ ಡೊನಾಲ್ಡ್ ಟ್ರಂಪ್ ಸಾಧಿಸಿರುವ ಪ್ರಗತಿ ಮಾತ್ರ ಶೂನ್ಯ. ಇದೇ ಕಾರಣಕ್ಕೆ ಇತ್ತೀಚಿಗೆ ಡೊನಾಲ್ಡ್ ಟ್ರಂಪ್ ಅವರು ಹತಾಶರಾಗಿ ರಷ್ಯಾ-ಉಕ್ರೇನ್ ಕದನ ನಿಲ್ಲಿಸಲು ವಿಫಲ ಆಗಿರುವುದಾಗಿ ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ರಷ್ಯಾದಿಂದ ತೈಲ ಖರೀದಿಸುವ ಭಾರತ ಮತ್ತು ಚೀನಾ ಮೇಲೆ ಶೇ. 100ರಷ್ಟು ಸುಂಕ ವಿಧಿಸುವಂತೆ ಇಯು ರಾಷ್ಟ್ರಗಳಿಗೆ ಅಮೆರಿಕ ಅಧ್ಯಕ್ಷರು ಸಲಹೆ ನೀಡಿರುವುದು, ಟ್ರಂಪ್ ಅದೆಷ್ಟರ ಮಟ್ಟಿಗೆ ಹತಾಶರಾಗಿದ್ದಾರೆ ಎಂಬುದಕ್ಕೆ ಸಾಕ್ಷಿ ಒದಗಿಸಿದೆ.

**ಭಾರತದ ಮೇಲೇನು ಪರಿಣಾಮ?:** ಭಾರತ, ಯುರೋಪಿಯನ್ ಒಕ್ಕೂಟದ ನಡುವೆ ಸದ್ಯ ಮುಕ್ತ ವ್ಯಾಪಾರ ಒಪ್ಪಂದದ ಕುರಿತು ಮಾತುಕತೆಗಳು ನಡೆಯುತ್ತಿವೆ. ಈ ಕುರಿತು ಮಾತನಾಡಿರುವ ಭಾರತದ ವಾಣಿಜ್ಯ ಸಚಿವ ಪಿಯುಷ್ ಗೋಯಲ್, ಭಾರತ-ಇಯು ನಡುವಿನ ಮುಕ್ತ ವ್ಯಾಪಾರ ಒಪ್ಪಂದ ಮಾತುಕತೆಗಳು ಅಂತಿಮ ಹಂತದಲ್ಲಿವೆ ಎಂದು ಹೇಳಿದ್ದಾರೆ. ಯುರೋಪಿಯನ್ ವ್ಯಾಪಾರ ಆಯುಕ್ತ ಮಾರೋಸ್ ಸೆಫ್ಕೋವಿಕ್ ಅವರೊಂದಿಗಿನ ಮಾತುಕತೆ ಬಳಿಕ, ಪಿಯುಷ್ ಗೋಯಲ್ ಅವರು ಉಭಯ ಬಣ ಸಮ್ಮತಿಸುವ ಒಪ್ಪಂದ ಜಾರಿಯಾಗಲಿದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.

ಇಯು ಕೂಡ ಭಾರತದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಳ್ಳಲು ಉತ್ಸುಕವಾಗಿದೆ. 2023ರ ಅಂಕಿ-ಅಂಶಗಳನ್ನು ಗಮನಿಸಿದರೆ, ಭಾರತ ಮತ್ತು ಇಯು ದ್ವಿಪಕ್ಷೀಯ ವ್ಯಾಪಾರ ಮೌಲ್ಯ 124 ಶತಕೋಟಿ ಯುರೋಗೆ ತಲುಪಿದೆ. ಭಾರತವು ಇಯುನ 9ನೇ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿ ಹೊರಹೊಮ್ಮಿದೆ. ಅದೇ ರೀತಿ ಇಯುನೊಂದಿಗೆ ಭಾರತದ ಸರಕುಗಳ ವ್ಯಾಪಾರವು 2023-24 ರ ಹಣಕಾಸು ವರ್ಷದಲ್ಲಿ, 137.41 ಶತಕೋಟಿ ಅಮೆರಿಕನ್ ಡಾಲರ್‌ಗೆ ತಲುಪಿದೆ.



ಆದರೀಗ ಡೊನಾಲ್ಡ್ ಟ್ರಂಪ್ ಅವರು ಭಾರತದ ಮೇಲೆ ಇಯು ಶೇ. 100ರಷ್ಟು ಸುಂಕ ವಿಧಿಸಬೇಕು ಎಂದು ಒತ್ತಾಯಿಸುತ್ತಿದ್ದು, ಇಯು ಈ ವಿಚಾರವಾಗಿ ಟ್ರಂಪ್ ಒತ್ತಡಕ್ಕೆ ಮಣಿದರೆ, ಖಂಡಿತವಾಗಿಯೂ ಅದು ಭಾರತ-ಇಯು ದ್ವಿಪಕ್ಷೀಯ ವ್ಯಾಪಾರ ಸಂಬಂಧದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ.

### ಟ್ರಂಪ್ ದ್ವಿಮುಖ ನೀತಿ

**ಒಂದು ಕಡೆ ಭಾರತವನ್ನು ಅಮೆರಿಕದ ಕಾರ್ಯತಂತ್ರದ ಪ್ರಮುಖ ಪಾಲುದಾರ ರಾಷ್ಟ್ರ ಎಂದು ಕರೆಯುತ್ತಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಆಪ್ತಸ್ನೇಹಿತ ಎಂದು ಬಣ್ಣಿಸುತ್ತಿದ್ದಾರೆ. ಇಷ್ಟೇ ಅಲ್ಲದೇ ಭಾರತ-ಅಮೆರಿಕ ನಡುವಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಮಾತುಕತೆಯನ್ನು ಪುನರಾರಂಭಿಸುವ ಉದ್ದೇಶದಿಂದ, ನರೇಂದ್ರ ಮೋದಿ ಅವರಿಗೆ ಕರೆ ಮಾಡುತ್ತೇನೆ ಎಂದು ಟ್ರಂಪ್ ಘೋಷಿಸಿದ್ದಾರೆ. ಆದರೆ ಅದೇ ವೇಳೆಗೆ ಮತ್ತೊಂದು ಕಡೆ ಡೊನಾಲ್ಡ್ ಟ್ರಂಪ್ ಭಾರತದ ವಿರುದ್ಧ ಯುರೋಪಿಯನ್ ಒಕ್ಕೂಟವನ್ನು ಎತ್ತಿ ಕಟ್ಟುತ್ತಿದ್ದಾರೆ. ಭಾರತ ಮತ್ತು ಚೀನಾ ಮೇಲೆ ಶೇ. 100ರಷ್ಟು ಸುಂಕ ವಿಧಿಸುವಂತೆ ಇಯುವನ್ನು ಪುಸಲಾಯಿಸುತ್ತಿರುವ ಟ್ರಂಪ್, ಅಮೆರಿಕದ ನಿರ್ಧಾರಗಳನ್ನು ಬೆಂಬಲಿಸುವಂತೆ ಒಕ್ಕೂಟದ ಮೇಲೆ ಒತ್ತಡ ಹೇರುತ್ತಿದ್ದಾರೆ.**

## ಮೋದಿ ಮಣಿಪುರ ಭೇಟಿ ಸಾಧ್ಯತೆ; ಕಣ್ಣೀರು ಬತ್ತಿಲ್ಲದ ಕಾರಣ ನರ್ತಿಸಲಾಗದು

**ಇಂಫಾಲ್:** ನಮ್ಮ ಶೋಕ ಈಗಲೂ ಕೊನೆಗೊಂಡಿಲ್ಲ. ನಮ್ಮ ಕಣ್ಣೀರು ಇನ್ನೂ ಬತ್ತಿಲ್ಲ. ನಮ್ಮ ಗಾಯಗಳು ಈಗಲೂ ಗುಣವಾಗಿಲ್ಲ. ಹೀಗಾಗಿ ಪ್ರಧಾನಿ ಭೇಟಿಯ ಸಂದರ್ಭದಲ್ಲಿ ಸಂಭ್ರಮಿಸಿ ನರ್ತಿಸಲು ನಮ್ಮಿಂದ ಆಗುವುದಿಲ್ಲ ಎಂದು ಮಣಿಪುರದ ವಿದ್ಯಾರ್ಥಿ ಸಂಘಟನೆಗಳು ಹೇಳಿವೆ. ಪ್ರಧಾನಿ ನರೇಂದ್ರ ಮೋದಿ ಅವರು ಸೆ. 13ರಂದು ಮಣಿಪುರಕ್ಕೆ ಭೇಟಿ ನೀಡುವ ಸಾಧ್ಯತೆ ಕುರಿತು ಸಂಘಟನೆ ಪ್ರತಿಕ್ರಿಯಿಸಿದೆ. ಜತೆಗೆ ಇನ್ನೂ ಹಲವು ಸಂಸ್ಥೆಗಳು ಹೇಳಿಕೆ ನೀಡಿವೆ.



ಜನಾಂಗೀಯ ಹಿಂಸಾಚಾರಕ್ಕೆ ಒಳಗಾಗಿರುವ ರಾಜ್ಯಕ್ಕೆ ಪ್ರಧಾನಿ ಭೇಟಿ ಸ್ವಾಗತಾರ್ಹ. ಆದರೆ ಕಣ್ಣುಗಳು ತೇವವಾಗಿರುವಾಗ ಅವರನ್ನು ಸ್ವಾಗತಿಸಲು ನರ್ತಿಸಲು ಸಾಧ್ಯವಿಲ್ಲ. ಈ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ಅವರು ಜನಾಂಗೀಯ ಹಿಂಸಾಚಾರಕ್ಕೆ ತುತ್ತಾದವರೊಂದಿಗೆ ಸಮಾಲೋಚನೆ ನಡೆಸಬೇಕು ಎಂದು ಕುಕಿ ಝೊ ಸಮುದಾಯ ಪ್ರತಿನಿಧಿಸುವ ವಿವಿಧ ಸಂಘಟನೆಗಳ ಮುಖಂಡರು ಹೇಳಿದ್ದಾರೆ. ರಾಜ್ಯಕ್ಕೆ ಭೇಟಿ ನೀಡುತ್ತಿರುವ ಪ್ರಧಾನಿಯನ್ನು ಸ್ವಾಗತಿಸಬೇಕು. ಆದರೆ ಕುಕಿ ರೂ ಜನರ ಸಂಘಟಿತ ಆಶೋತ್ತರಗಳಿಗೆ ನ್ಯಾಯ ಸಿಗಬೇಕು. ತಾತ್ಕಾಲಿಕ ಪರಿಹಾರ ಕ್ರಮಗಳಿಂದ ಯಾವುದೇ ಪ್ರಯೋಜನವಾಗದು. ಏನೇ ಪರಿಹಾರ ನೀಡುವುದಿದ್ದರೂ ಅದು ಸ್ಪಷ್ಟವಾಗಿ ಮತ್ತು ಖಾತ್ರಿ ಇರುವಂಥದ್ದಾಗಬೇಕು ಎಂದು ಕುಕಿ ಇಂಪಿ ಮಣಿಪುರ ಸಂಘಟನೆ ಒತ್ತಾಯಿಸಿದೆ.

ಮೈತೇಯಿ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿರುವ ಇಂಫಾಲ್ ಕಣಿವೆಗೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡುವ ಸಾಧ್ಯತೆಗಳಿದ್ದು, ಇದು ಸಾಕಷ್ಟು ಅವಕಾಶಗಳನ್ನು ತೆರೆಯಲಿದೆ ಎಂದು ಮೈತೇಯಿ ಸಮುದಾಯ ಹೇಳಿದೆ. ಪ್ರಧಾನಿ ಭೇಟಿ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾಗಲು ಮೈತೇಯಿ ಸಮುದಾಯಕ್ಕೆ ಅವಕಾಶ ನೀಡಬೇಕು ಭದ್ರತೆಯನ್ನೂ ಒದಗಿಸಬೇಕು ಎಂದು ಮಹಿಳಾ ಸಂಘಟನೆ ಆಗ್ರಹಿಸಿದೆ.

## ಅಧಿಕಾರದಲ್ಲಿರುವವರು ಸಂವಿಧಾನದ ರಕ್ಷಣೆ ಮಾಡುತ್ತಿಲ್ಲ

**ಜುನಾಗಢ:** ಸಂವಿಧಾನ, ಪ್ರಜಾಪ್ರಭುತ್ವವನ್ನು ರಕ್ಷಿಸುವುದೇ ಕಾಂಗ್ರೆಸ್‌ನ ಪ್ರಮುಖ ಜವಾಬ್ದಾರಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಹೇಳಿದ್ದು, ಅಧಿಕಾರದಲ್ಲಿರುವವರು ಅದನ್ನು ರಕ್ಷಿಸುವ ಕಾರ್ಯವನ್ನು ಮಾಡುತ್ತಿಲ್ಲ ಎಂದು ಆರೋಪಿಸಿದ್ದಾರೆ.

ಗುಜರಾತ್ ಕಾಂಗ್ರೆಸ್‌ನ ಜಿಲ್ಲಾ, ನಗರ ಅಧ್ಯಕ್ಷರುಗಳಿಗಾಗಿ ಇಲ್ಲಿ ಆಯೋಜಿಸಿದ್ದ 10 ತರಬೇತಿ ಶಿಬಿರವನ್ನು ಉದ್ಘಾಟಿಸುವ ಮುನ್ನ ಅವರು ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಪ್ರಧಾನಿ ಮೋದಿ ಮತ್ತು




ಗೃಹ ಸಚಿವ ಅಮಿತ್ ಶಾ ಅವರ ವಿರುದ್ಧ ಪರೋಕ್ಷ ದಾಳಿ ನಡೆಸಿದ ಅವರು, ಅವರಿಬ್ಬರಿಗೂ ದೇಶದ ಸಂವಿಧಾನ ಮತ್ತು ಪ್ರಜಾಪ್ರಭುತ್ವ ಉಳಿಸುವುದು ಬೇಕಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಪ್ರಜಾಪ್ರಭುತ್ವದಲ್ಲಿ ಚುನಾವಣೆ ಎದುರಿಸುವುದು ಸಾಮಾನ್ಯ. ಪ್ರಜಾಪ್ರಭುತ್ವ, ಸಂವಿಧಾನವನ್ನು ರಕ್ಷಿಸುವುದು ನಮ್ಮ ಪ್ರಮುಖ ಜವಾಬ್ದಾರಿ. ಗುಜರಾತ್ ಎಂಬುದು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿರುವ ನಾಡು. ಅವರಿಂದಾಗಿ ದೇಶವು ಸ್ವಾತಂತ್ರ್ಯಗೊಂಡು ಒಗ್ಗಟ್ಟಾಗಿದ್ದು, ಅದಕ್ಕಾಗಿ ಅವರು ಗೌರವಕ್ಕೆ ಪಾತ್ರರು.**
**- ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ**

## ಸೇನೆ ನಿಯಂತ್ರಣದಲ್ಲಿ ನೇಪಾಳ, ಸಹಜ ಸ್ಥಿತಿಯತ್ತ ರಾಜಧಾನಿ

**ಕಠ್ಮಂಡು:** ಹಿಂಸಾತ್ಮಕ ಸರ್ಕಾರಿ ವಿರೋಧಿ ಪ್ರತಿಭಟನೆಗಳು ಭುಗಿಲೆದ್ದು, ಓಲಿ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿದ ನಂತರ ಸೇನಾ ಪಡೆ ಇಡಿ ನೇಪಾಳವನ್ನು ಕಂಟ್ರೋಲ್‌ಗೆ ತೆಗೆದುಕೊಂಡಿದೆ. ರಾಜಧಾನಿ ಕಠ್ಮಂಡು ಮತ್ತಿತರ ನಗರಗಳಲ್ಲಿ ನಿರ್ಬಂಧಿತ ಆದೇಶಗಳನ್ನು ಜಾರಿಗೊಳಿಸಿ ಶಾಂತತೆಯನ್ನು ಪುನಃಸ್ಥಾಪಿಸುವಲ್ಲಿ ಯಶಸ್ವಿಯಾಗಿವೆ. ತಡರಾತ್ರಿ 10 ಗಂಟೆಗೆ ರಾಷ್ಟ್ರವ್ಯಾಪಿ ಭದ್ರತಾ ಕಾರ್ಯಾಚರಣೆಗಳ ಅಧಿಪತ್ಯ ವಹಿಸಿಕೊಂಡ ನೇಪಾಳಿ ಸೇನೆಯು, ಓಲಿ ಅಧಿಕಾರದಿಂದ ಕೆಳಗಿಳಿದ ನಂತರವೂ ಮುಂದುವರಿದ ಅಶಾಂತಿಯನ್ನು ನಿಯಂತ್ರಿಸಲು ಕಠ್ಮಂಡು, ಲಲಿತಪುರ ಮತ್ತು ಭಕ್ತಪುರ ನಗರಗಳು ಸೇರಿದಂತೆ ದೇಶಾದ್ಯಂತ ಹಲವಾರು ಪ್ರದೇಶಗಳಲ್ಲಿ ನಿರ್ಬಂಧಗಳನ್ನು ವಿಧಿಸಿತು.

ಕಠಿಣ ಪರಿಸ್ಥಿತಿಯ ಅನಗತ್ಯ ಲಾಭವನ್ನು ಪಡೆದುಕೊಳ್ಳುತ್ತಿರುವ ಮತ್ತು ಸಾಮಾನ್ಯ ನಾಗರಿಕರು ಮತ್ತು ಸಾರ್ವಜನಿಕ ಆಸ್ತಿಗೆ ತೀವ್ರ ಹಾನಿಯನ್ನುಂಟುಮಾಡುತ್ತಿರುವ ಕೆಲವು ಗುಂಪುಗಳ ಕ್ರಮಗಳ ಬಗ್ಗೆ ಸೇನೆಯು ಒಂದು ಹೇಳಿಕೆಯಲ್ಲಿ ಕಳವಳ ವ್ಯಕ್ತಪಡಿಸಿದೆ. ಲೂಟಿ ಮತ್ತು ವಿಧ್ವಂಸಕ ಕೃತ್ಯಗಳು ಸೇರಿದಂತೆ ಯಾವುದೇ ಅಹಿತಕರ ಘಟನೆಗಳನ್ನು ತಡೆಗಟ್ಟಲು ನಾವು ನಮ್ಮ ಸೈನಿಕರನ್ನು ನಿಯೋಜಿಸಿದ್ದೇವೆ ಎಂದು ನೇಪಾಳ ಸೇನಾ ಪ್ರಧಾನ ಕಚೇರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಹೆಚ್ಚಿನ ಅಶಾಂತಿಯನ್ನು ತಡೆಗಟ್ಟುವ ಸಲುವಾಗಿ, ಸಂಪೂರ್ಣವಾಗಿ ಅಗತ್ಯವಿಲ್ಲದಿದ್ದರೆ ನಿವಾಸಿಗಳು ಮನೆಯೊಳಗೆ ಇರಲು ಅಧಿಕಾರಿಗಳು ಆದೇಶಗಳನ್ನು ಹೊರಡಿಸಿದ್ದಾರೆ ಎಂದು ಅವರು ಹೇಳಿದರು. ಬೆಳಿಗ್ಗೆಯಿಂದಲೇ, ಕಠ್ಮಂಡುವಿನ ಸಾಮಾನ್ಯವಾಗಿ ಜನದಟ್ಟಣೆಯ ಬೀದಿಗಳು ನಿರ್ಜನವಾಗಿದ್ದವು. ಕೆಲವೇ ನಿವಾಸಿಗಳು ಮಾತ್ರ ಹೊರಗೆ ಬಂದರು, ಮುಖ್ಯವಾಗಿ ದೈನಂದಿನ ಅಗತ್ಯ ವಸ್ತುಗಳನ್ನು



ಸಂಗ್ರಹಿಸಲು.ರಸ್ತೆಗಳಲ್ಲಿ ಭದ್ರತಾ ಸಿಬ್ಬಂದಿಗಳು ಹೆಚ್ಚಿನ ಗಸ್ತು ತಿರುಗುತ್ತಿದ್ದರು ಮತ್ತು ಪ್ರತಿಭಟನಾಕಾರರು ಬೆಂಕಿ ಹಚ್ಚಿದ ಸರ್ಕಾರಿ ಮತ್ತು ಖಾಸಗಿ ಕಟ್ಟಡಗಳಲ್ಲಿ ಬೆಂಕಿಗೆ ಅಗ್ನಿಶಾಮಕ ವಾಹನಗಳು ಸ್ಪಂದಿಸುತ್ತಿದ್ದವು.

ಪ್ರತಿಭಟನಾಕಾರರು ಸಂಸತ್ತು, ಅಧ್ಯಕ್ಷರ ಕಚೇರಿ, ಪ್ರಧಾನಿ ನಿವಾಸ, ಸರ್ಕಾರಿ ಕಟ್ಟಡಗಳು, ರಾಜಕೀಯ ಪಕ್ಷಗಳ ಕಚೇರಿಗಳು ಮತ್ತು ಹಿರಿಯ ನಾಯಕರ ಮನೆಗಳಿಗೆ ಬೆಂಕಿ ಹಚ್ಚಿದರು.ಭ್ರಷ್ಟಾಚಾರ ಮತ್ತು ಸಾಮಾಜಿಕ ಮಾಧ್ಯಮದ ಮೇಲಿನ ಸರ್ಕಾರದ ನಿಷೇಧದ ಕುರಿತು ಜನರಲ್ ಝಡ್ ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸ್ ಕ್ರಮದಲ್ಲಿ ಕನಿಷ್ಠ 19 ಜನರ ಸಾವಿಗೆ ರಾಜೀನಾಮೆ ನೀಡುವಂತೆ ಒತ್ತಾಯಿಸಿ ನೂರಾರು ಪ್ರತಿಭಟನಾಕಾರರು ಪ್ರಧಾನಿ ಕಚೇರಿಗೆ ಪ್ರವೇಶಿಸಿದ ಸ್ವಲ್ಪ ಸಮಯದ ನಂತರ ಪ್ರಧಾನಿ ಓಲಿ ರಾಜೀನಾಮೆ ನೀಡಿದರು. ರಾತ್ರಿ ಸಾಮಾಜಿಕ ಮಾಧ್ಯಮದ ಮೇಲಿನ ನಿಷೇಧವನ್ನು ತೆಗೆದುಹಾಕಲಾಯಿತು.

# ನೂತನ ಉಪರಾಷ್ಟ್ರಪತಿಗಳನ್ನು ಅಭಿನಂದಿಸಿದ ಕಾಂಗ್ರೆಸ್

### ಸರ್ವಪಲ್ಲಿ ರಾಧಾಕೃಷ್ಣನ್ ನೆನಪಿಸಿದ ಕಾಂಗ್ರೆಸ್, ನಿಷ್ಪಕ್ಷಪಾತ ರಾಜ್ಯಸಭೆ ಕಲಾಪದ ಭರವಸೆ ವ್ಯಕ್ತಪಡಿಸಿದ ಕೈ ನಾಯಕರು


**ಹೊಸದಿಲ್ಲಿ:** ಭಾರತದ ನೂತನ ಉಪರಾಷ್ಟ್ರಪತಿಯಾಗಿ ಆಯ್ಕೆಯಾಗಿರುವ ಸಿ.ಪಿ. ರಾಧಾಕೃಷ್ಣನ್ ಅವರಿಗೆ, ಪ್ರತಿಪಕ್ಷ ಕಾಂಗ್ರೆಸ್ ಅಭಿನಂದನೆ ಸಲ್ಲಿಸಿದೆ. ಇದೇ ವೇಳೆ ರಾಜ್ಯಸಭೆ ಸಭಾಪತಿಯಾಗಿ ನ್ಯಾಯಯುತ ಮತ್ತು ನಿಷ್ಪಕ್ಷಪಾತ ಕಲಾಪ ನಡೆಸುವ ಭರವಸೆ ವ್ಯಕ್ತಪಡಿಸಿದೆ. ಇದಕ್ಕಾಗಿ ಸಿ.ಪಿ. ರಾಧಾಕೃಷ್ಣನ್



ಅವರಿಗೆ ಭಾರತದ ಮೊದಲ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಕಾರ್ಯವೈಖರಿಯನ್ನು ಕಾಂಗ್ರೆಸ್ ಉದಾಹರಣೆಯಾಗಿ ನೀಡಿದೆ.

ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಕಾಂಗ್ರೆಸ್ ರಾಷ್ಟ್ರೀಯ ಸಂವಹನ ಉಸ್ತುವಾರಿ ಮತ್ತು ರಾಜ್ಯಸಭೆ ಸಂಸದ ಜೈರಾಮ್ ರಮೇಶ್, ನೂತನ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಮಾಜಿ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಮಾದರಿಯಲ್ಲಿ ಕಲಾಪ ನಡೆಸುತ್ತಾರೆ ಎಂಬ ಭರವಸೆ ಇದೆ ಎಂದು ಹೇಳಿದ್ದಾರೆ. ಭಾರತದ ನೂತನ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರಿಗೆ ಶುಭಾಶಯಗಳು. ರಾಜ್ಯಸಭೆಯಸಭಾಪತಿಗಳಾಗಿ ಅವರು

**ವಿರೋಧ ಪಕ್ಷಗಳು ಸರ್ಕಾರದ ನೀತಿಗಳನ್ನು ನ್ಯಾಯಯುತವಾಗಿ ಮತ್ತು ಮುಕ್ತವಾಗಿ ಟೀಕಿಸದಿದ್ದರೆ, ಪ್ರಜಾಪ್ರಭುತ್ವವು ದಬ್ಬಾಳಿಕೆಗೆ ಗುರಿಯಾಗಿ ಅವನತಿ ಹೊಂದುತ್ತದೆ ಎಂದು ಮಾಜಿ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಹೇಳಿದ್ದರು. ನೂತನ ಉಪರಾಷ್ಟ್ರಪತಿಗಳು ಅವರ ಮಾರ್ಗದಲ್ಲಿಯೇ ವಿಪಕ್ಷಗಳನ್ನು ಗೌರವಯುತವಾಗಿ ನಡೆಸಿಕೊಳ್ಳಲಿದ್ದಾರೆ ಎಂಬ ಭರವಸೆ ಇದೆ**
**-ಜೈರಾಮ್ ರಮೇಶ್ ,**



ಭಾರತದ ಮೊಟ್ಟ ಮೊದಲ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಮಾದರಿಯಲ್ಲಿ ಅಧಿಕಾರ ಚಲಾಯಿಸಲಿದ್ದಾರೆ ಎಂಬ ಭರವಸೆ ಇದೆ. ರಾಜ್ಯಸಭೆಯ ಉದ್ಘಾಟನಾ ದಿನದಂದು ಸರ್ವಪಲ್ಲಿ ರಾಧಾಕೃಷ್ಣನ್ ಅವರು ಸಂಸದೀಯ ಪ್ರಜಾಪ್ರಭುತ್ವದ ಅತ್ಯುನ್ನತ ಸಂಪ್ರದಾಯಗಳನ್ನು ಎತ್ತಿಹಿಡಿಯುವುದಾಗಿ ಮತ್ತು ಪ್ರತಿಪಕ್ಷದ ಬಗ್ಗೆ ನ್ಯಾಯಯುತ ಮತ್ತು ನಿಷ್ಪಕ್ಷಪಾತವಾಗಿರುವುದಾಗಿ ಭರವಸೆ ನೀಡಿದ್ದರು ಎಂದು ಜೈರಾಮ್ ರಮೇಶ್ ಟ್ವೀಟ್ ಮಾಡಿದ್ದಾರೆ.

### ಅಭಿನಂದನೆ ಸಲ್ಲಿಸಿರುವುದು ವಿಶೇಷ

**ಭಾರತದ ನೂತನ ಉಪರಾಷ್ಟ್ರಪತಿಯಾಗಿ ಎನ್‌ಡಿಎ ಅಭ್ಯರ್ಥಿ ಸಿ.ಪಿ. ರಾಧಾಕೃಷ್ಣನ್ ಆಯ್ಕೆಯಾಗಿದ್ದಾರೆ. ಅವರು ತಮ್ಮ ಪ್ರತಿಸ್ಪರ್ಧಿ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ನಿವೃತ್ತ ನ್ಯಾ. ಬಿ. ಸುದರ್ಶನ್ ರೆಡ್ಡಿ ಅವರನ್ನು 152 ಮತಗಳ ಅಂತರದಿಂದ ಸೋಲಿಸಿದ್ದಾರೆ. ಈ ಮಧ್ಯೆ ಪ್ರತಿಪಕ್ಷ ಕಾಂಗ್ರೆಸ್ ನೂತನ ಉಪರಾಷ್ಟ್ರಪತಿಗಳಿಗೆ ಅಭಿನಂದನೆ ಸಲ್ಲಿಸಿದ್ದು, ನಿಷ್ಪಕ್ಷಪಾತ ರಾಜ್ಯಸಭೆ ಕಲಾಪದ ಭರವಸೆ ವ್ಯಕ್ತಪಡಿಸಿದೆ. ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಅವರು, ಭಾರತದ ಮೊದಲ ಉಪರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಕಾರ್ಯವೈಖರಿಯನ್ನು ನೆನಪಿಸಿ, ಸಿ.ಪಿ. ರಾಧಾಕೃಷ್ಣನ್ ಅವರಿಗೆ ಅಭಿನಂದನೆ ಸಲ್ಲಿಸಿರುವುದು ವಿಶೇಷ.**

**ಮಲ್ಲಿಕಾರ್ಜುನ ಖರ್ಗೆ ಅಭಿನಂದನೆ:** ಇನ್ನು ನೂತನ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರಿಗೆ ಶುಭ ಕೋರಿರುವ ರಾಜ್ಯಸಭಾ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಗಳು ಸಾಮಾನ್ಯ. ಹೀಗಾಗಿಯೇ ನಾವು ಉಪರಾಷ್ಟ್ರಪತಿ ಚುನಾವಣೆಗೆ ಅಭ್ಯರ್ಥಿಯನ್ನು ನಿಲ್ಲಿಸಿದ್ದೇವು. ಈಗ ಚುನಾವಣೆ ನುಗಿದು ಸಿ.ಪಿ. ರಾಧಾಕೃಷ್ಣನ್ ಅವರು ಉಪರಾಷ್ಟ್ರಪತಿಗಳಾಗಿ ಆಯ್ಕೆಯಾಗಿದ್ದಾರೆ.

ನಾವು ಅವರನ್ನು ಅಭಿನಂದಿಸುತ್ತೇವೆ. ಅವರ ನೇತೃತ್ವದಲ್ಲಿ ರಾಜ್ಯಸಭೆ ಕಲಾಪ ನಿಷ್ಪಕ್ಷಪಾತವಾಗಿ ನಡೆಯುತ್ತದೆ ಎಂಬ ಭರವಸೆ ಇದೆ ಎಂದು ಹೇಳಿದ್ದಾರೆ. ಇದಕ್ಕೂ ಮೊದಲು ಮಾಜಿ ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ನೂತನ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಅಭಿನಂದಿಸಿದ್ದರು. ಉಪರಾಷ್ಟ್ರಪತಿ ಹುದ್ದೆಯು ಸಿ.ಪಿ. ರಾಧಾಕೃಷ್ಣನ್ ಅವರ ಅಪಾರ ಅನುಭವದಿಂದ ಹೆಚ್ಚಿನ ವೈಭವವನ್ನು ಪಡೆಯುತ್ತದೆ ಎಂದು ಜಗದೀಪ್ ಧನ್ ಕರ್ ಅಭಿನಂದನಾ ಪತ್ರ ಉಲ್ಲೇಖಿಸಿದೆ.

ಏತನ್ಮಧ್ಯೆ, ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ನಡೆದ ಉಪರಾಷ್ಟ್ರಪತಿ ಚುನಾವಣೆಯಲ್ಲಿ, ಸಿ.ಪಿ. ರಾಧಾಕೃಷ್ಣನ್ ಅವರು ತಮ್ಮ ಪ್ರತಿಸ್ಪರ್ಧಿ ಬಿ. ಸುದರ್ಶನ್ ರೆಡ್ಡಿ ಅವರನ್ನು 152 ಮತಗಳ ಅಂತರದಿಂದ ಸೋಲಿಸಿದರು. ಈ ಚುನಾವಣೆಯಲ್ಲಿ ಶೇ. 98.20ರಷ್ಟು ಮತದಾನವಾಗಿದ್ದು, ಅರ್ಹ 781 ಮತದಾರರಲ್ಲಿ 767 ಸಂಸದರು ತಮ್ಮ ಮತ ಚಲಾಯಿಸಿದ್ದಾರೆ. ಎನ್‌ಡಿಎ ಅಭ್ಯರ್ಥಿ ಸಿ.ಪಿ. ರಾಧಾಕೃಷ್ಣನ್ ಅವರು 452 ಪ್ರಥಮ ಪ್ರಾಶಸ್ತ್ಯ ಮತಗಳನ್ನು ಪಡೆದರೆ, ಇಂಡಿಯಾ ಬ್ಲಾಕ್ ಅಭ್ಯರ್ಥಿ ನಿವೃತ್ತ ನ್ಯಾಯಮೂರ್ತಿ ಬಿ. ಸುದರ್ಶನ್ ರೆಡ್ಡಿ ಅವರು 300 ಪ್ರಥಮ ಪ್ರಾಶಸ್ತ್ಯ ಮತಗಳನ್ನು ಪಡೆದರು. ಒಟ್ಟು 15 ಮತಗಳನ್ನು ಅಮಾನ್ಯವೆಂದು ಪರಿಗಣಿಸಲಾಗಿದೆ.

## ಮಿನಿ ನ್ಯೂಸ್

### ರಾಂಚಿಯಲ್ಲಿ ಶಂಕಿತ ಐಸಿಸ್ ಉಗ್ರ ಡ್ಯಾನಿಶ್ ಸೆರೆ

**ರಾಂಚಿ:** ಮಹತ್ವದ ಬೆಳವಣಿಗೆಯಲ್ಲಿ ಶಂಕಿತ ಐಸಿಸ್ ಭಯೋತ್ಪಾದಕ ಅಶರ್ ಡ್ಯಾನಿಶ್‌ನನ್ನು ಭದ್ರತಾ ಪಡೆಗಳು ಬಂಧಿಸಿವೆ. ಜಾರ್ಖಂಡ್ ರಾಜಧಾನಿ ರಾಂಚಿಯಲ್ಲಿ ಬಂಧಿಸಲಾಗಿದೆ. ಅಶರ್ ಡ್ಯಾನಿಶ್ ಬೊಕಾರೊ ಜಿಲ್ಲೆಯ ಪೆಟ್ವಾರ್ ಮೂಲದವನು.

ದೆಹಲಿಯ ವಿಶೇಷ ಘಟಕ, ಜಾರ್ಖಂಡ್ ಎಟಿಎಸ್, ರಾಂಚಿ ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ರಾಂಚಿಯ ಇಸ್ಲಾಂ ನಗರದಲ್ಲಿ ಆತನನ್ನು ಬಂಧಿಸಲಾಗಿದೆ. ದೆಹಲಿಯಲ್ಲಿ ದಾಖಲಾದ ಪ್ರಕರಣದ ಆಧಾರದ ಮೇಲೆ, ದೆಹಲಿ ವಿಶೇಷ ದಳದ ತಂಡವು ಬಹಳ ಸಮಯದಿಂದ ಆತನನ್ನು ಹುಡುಕುತ್ತಿತ್ತು. ಬಂಧಿತ ಶಂಕಿತ ಭಯೋತ್ಪಾದಕನನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಇದೇ ರೀತಿ, ಇಂದು ದೆಹಲಿಯಲ್ಲಿ ಮತ್ತೊಬ್ಬ ಐಸಿಸ್ ಶಂಕಿತ ಭಯೋತ್ಪಾದಕ ಅಫ್ತಾಬ್‌ನನ್ನು ಬಂಧಿಸಲಾಗಿತ್ತು. ದೇಶದ ವಿವಿಧ ರಾಜ್ಯಗಳಲ್ಲಿ 12 ಕ್ಕೂ ಹೆಚ್ಚು ಸ್ಥಳಗಳಲ್ಲಿ ವಿಶೇಷ ಘಟಕಗಳು ಮತ್ತು ಕೇಂದ್ರ ಸಂಸ್ಥೆಗಳು ಬೃಹತ್ ದಾಳಿ ಮತ್ತು ಶೋಧ ಕಾರ್ಯಾಚರಣೆಗಳನ್ನು ನಡೆಸುತ್ತಿರುವಾಗ ಈ ಬಂಧನ ಮಾಡಲಾಗಿದೆ. ಈ ಸಮಯದಲ್ಲಿ, 8 ಕ್ಕೂ ಹೆಚ್ಚು ಶಂಕಿತರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ.

### ಬಿಹಾರ ಮತದಾರರ ಗುರುತಿಗೆ ಆಧಾರ್ ಪರಿಗಣಿಸಲು ಆಯೋಗ ಸೂಚನೆ

**ನವದೆಹಲಿ:** ಸುಪ್ರೀಂ ಕೋರ್ಟ್‌ನ ನಿರ್ದೇಶನದ ನಂತರ ಮತದಾರರ ಗುರುತನ್ನು ಪತ್ತೆ ಮಾಡಲು ಆಧಾರ್ ಕಾರ್ಡ್ ಅನ್ನು ಹನ್ನೆರಡನೇ ದಾಖಲೆಯಾಗಿ ಸ್ವೀಕರಿಸಬೇಕು ಎಂದು ಚುನಾವಣಾ ಆಯೋಗವು ಬಿಹಾರ ಚುನಾವಣಾ ಆಯೋಗಕ್ಕೆ ಸೂಚನೆ ಕೊಟ್ಟಿದೆ. ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಪತ್ರ ಬರೆದಿರುವ ಆಯೋಗವು ಆಧಾರ್ ಕಾರ್ಡ್ ಅನ್ನು ಪಟ್ಟಿ ಮಾಡಲಾದ 11 ದಾಖಲೆಗಳ ಜೊತೆಗೆ 12 ನೇ ದಾಖಲೆಯಾಗಿ ಪರಿಗಣಿಸಲಾಗುವುದು. ಆಧಾರ್ ಕಾಯಿದೆಯ ಸೆಕ್ಷನ್ 9ರ ಪ್ರಕಾರ, ಆಧಾರ್ ಕಾರ್ಡ್ ಅನ್ನು ಗುರುತಿನ ಪುರಾವೆಯಾಗಿ, ಪೌರತ್ವದ ಪುರಾವೆಯಾಗಿ ಅಲ್ಲ ಎಂದು ಸ್ವೀಕರಿಸಿ ಬಳಸಬೇಕು ಎಂದು ಆಯೋಗ ಸ್ಪಷ್ಟಪಡಿಸಿದೆ.

ಜನ ಪ್ರಾತಿನಿಧ್ಯ ಕಾಯಿದೆ, 1950 ರ ಸೆಕ್ಷನ್ 23 (4)ರ ಅಡಿಯಲ್ಲಿ, ಆಧಾರ್ ಕಾರ್ಡ್ ಈಗಾಗಲೇ ವ್ಯಕ್ತಿಯ ಗುರುತನ್ನು ಸ್ಥಾಪಿಸುವ ಉದ್ದೇಶಕ್ಕಾಗಿ ಎಣಿಸಿದ ದಾಖಲೆಗಳಲ್ಲಿ ಒಂದಾಗಿದೆ. ಈ ನಿರ್ದೇಶನದ ಅನುಸಾರವಾಗಿ ಯಾವುದೇ ಅನುಸರಣೆ, ಆಧಾರ್ ಅನ್ನು ಸ್ವೀಕರಿಸಲು ನಿರಾಕರಿಸುವ ಯಾವುದೇ ನಿದರ್ಶನವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಚುನಾವಣಾ ಸಮಿತಿಯು ಎಚ್ಚರಿಸಿದೆ. ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯದಲ್ಲಿ ಮತದಾರರ ಗುರುತಿನ ಪುರಾವೆಯಾಗಿ ಆಧಾರ್ ಕಾರ್ಡ್ ಅನ್ನು ಸೇರಿಸಬೇಕು ಎಂದು ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ ಮತ್ತು ಸೆಪ್ಟೆಂಬರ್‌ನೊಳಗೆ ನಿರ್ದೇಶನವನ್ನು ಜಾರಿಗೆ ತರುವಂತೆ ಚುನಾವಣಾ ಆಯೋಗಕ್ಕೆ ಸೂಚಿಸಿದೆ.

### ರಾಮಮಂದಿರದ ಬಗ್ಗೆ ಹೆಮ್ಮೆಪಡದವರು ಭಾರತೀಯರೇ ಎಂಬುದು ಅನುಮಾನ

**ಗೋರಖಪುರ:** ಅಯೋಧ್ಯೆಯ ಶ್ರೀರಾಮ ಜನ್ಮಭೂಮಿಯಲ್ಲಿರುವ ಭವ್ಯ ರಾಮಮಂದಿರವನ್ನು ನೋಡಿ ಯಾರಾದರೂ ಹೆಮ್ಮೆಪಟ್ಟುಕೊಳ್ಳದಿದ್ದರೆ ಅವರು ಭಾರತೀಯರೇ ಎಂದು ಅನುಮಾನಪಟ್ಟುಕೊಳ್ಳಬೇಕು ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ, ಯೋಗಿ ಆದಿತ್ಯನಾಥ ಬುಧವಾರ ತಿಳಿಸಿದ್ದಾರೆ. ಗೋರಖನಾಥ ದೇಗುಲದ ಆವರಣದಲ್ಲಿ ಮಹಂತ್ ದಿಗ್ವಿಜಯನಾಥ್ ಅವರ 56ನೇ, ಮಹಂತ್ ಅವೈದ್ಯನಾಥ್ ಅವರ 11ನೇ ಪುಣ್ಯತಿಥಿಯಲ್ಲಿ ಮಾತನಾಡಿದ ಆದಿತ್ಯನಾಥ, ಭಾರತದಲ್ಲಿ ಇದ್ದುಕೊಂಡು ಅಯೋಧ್ಯೆಯ ರಾಮಮಂದಿರದ ಬಗ್ಗೆ ಹೆಮ್ಮೆಪಟ್ಟುಕೊಳ್ಳದಿದ್ದರೆ ಅವರು ಭಾರತೀಯರೇ ಎಂಬುದೇ ಅನುಮಾನ ಎಂದು ತಿಳಿಸಿದ್ದಾರೆ.

ಈ ಮಹಾನ್ ವ್ಯಕ್ತಿಗಳು ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರದ ಕನಸನ್ನು ಕಂಡಿದ್ದರು. ಅದೀಗ ಸಾಕಾರಗೊಂಡಿದೆ ಎಂದು ಆದಿತ್ಯನಾಥ ಉಲ್ಲೇಖಿಸಿದ್ದಾರೆ. ದೇಶ ಹಾಗೂ ಧರ್ಮಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟ ಮಹಂತರು ತಮ್ಮ ಬದ್ಧತೆ, ತ್ಯಾಗದ ಮೂಲದ ಸಮಾಜ ಹಾಗೂ ರಾಷ್ಟ್ರಕ್ಕೆ ಮಾರ್ಗದರ್ಶನ ನೀಡಿದರು ಎಂದು ಆದಿತ್ಯನಾಥ ಹೇಳಿದ್ದಾರೆ. ರಾಮಮಂದಿರವು ಮಹಂತರ ದೃಢ ಸಂಕಲ್ಪ ಹಾಗೂ ಹೋರಾಟದ ಸಂಕೇತವಾಗಿದೆ ಎಂದು ಅವರು ಹೇಳಿದ್ದಾರೆ.

### ಎಐ ಅಳವಡಿಸಿಕೊಳ್ಳುವಲ್ಲಿ ಜಗತ್ತಿನಲ್ಲೇ ಮುಂಚೂಣಿಯಲ್ಲಿದೆ ಭಾರತ: ವರದಿ

**ನವದೆಹಲಿ:** ದೇಶದ ಸುಮಾರು ಅರ್ಧದಷ್ಟು ಕಂಪನಿಗಳು ಕೃತಕ ಬುದ್ಧಿಮತ್ತೆಯನ್ನು ತಮ್ಮ ಕಾರ್ಯವಿಧಾನಗಳಲ್ಲಿ ಅಳವಡಿಸಿಕೊಂಡಿದೆ. ಭಾರತದ ಈ ಸಾಧನೆ ಜಾಗತಿಕ ಮಟ್ಟದಲ್ಲಿ ಅತಿ ಹೆಚ್ಚು ಸ್ವೀಕಾರ ಪ್ರಮಾಣವಾಗಿದೆ ಎಂದು ಅಧ್ಯಯನ ವರದಿಯೊಂದು ಹೇಳಿದೆ. ಓಪನ್ ಟೆಕ್ಸ್ ಮತ್ತು ಪೊನೆಮಾನ್ ಸಂಸ್ಥೆಯು ನಡೆಸಿದ ಅಧ್ಯಯನದ ಪ್ರಕಾರ, ಡಿಜಿಟಲ್ ಪರಿವರ್ತನೆಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದರೂ ದುರ್ಬಲ ಡಾಟಾ ನೆಲೆಗಳು ಮತ್ತು ಸೈಬರ್ ಅಪಾಯಗಳು ಕೃತಕ ಬುದ್ಧಿಮತ್ತೆಯ ಮೂಲಕ ಪ್ರಯೋಜನ ಪಡೆದುಕೊಳ್ಳಲು ಅಡ್ಡಿಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದೆ. ಕೃತಕ ಬುದ್ಧಿಮತ್ತೆಯನ್ನು ಅಳವಡಿಸಿಕೊಳ್ಳುವಲ್ಲಿ ಭಾರತೀಯ ಕಂಪನಿಗಳು ಜಗತ್ತಿನಲ್ಲೇ ಮುಂಚೂಣಿಯಲ್ಲಿವೆ. ಆದರೆ ಮಾಹಿತಿ ಸಿದ್ಧತೆ, ಆಡಳಿತ ವ್ಯವಸ್ಥೆ ಮತ್ತು ಅಪಾಯ ನಿರ್ವಹಣೆಗಳನ್ನು ಬಲಪಡಿಸುವುದು ಅತ್ಯವಶ್ಯಕ' ಎಂದು ಈ ಅಧ್ಯಯನ ಅಭಿಪ್ರಾಯಪಟ್ಟಿದೆ.

ಭಾರತೀಯ ಸಂಸ್ಥೆಗಳು ಮಾಹಿತಿ ತಂತ್ರಜ್ಞಾನ, ವ್ಯವಹಾರ ಕ್ಷೇತ್ರಗಳಲ್ಲಿ ಈಗಾಗಲೇ ಕೃತಕ ಬುದ್ಧಿಮತ್ತೆಯನ್ನು ಅಳವಡಿಸಿದ್ದು ಅದರ ಪ್ರಮಾಣ ಶೇ 48ರಷ್ಟಿದೆ. ಇದು ಇಡೀ ಜಗತ್ತಿನಲ್ಲೇ ಅತ್ಯಧಿಕ. ಆದರೆ ಕೃತಕ ಬುದ್ಧಿಮತ್ತೆಯಲ್ಲಿ ಹೂಡಿಕೆ ಮಾಡಿರುವ ಕಂಪನಿಗಳಲ್ಲಿ ಲಾಭಾಂಶ ನಿರೀಕ್ಷಿಸುತ್ತಿರುವ ಕಂಪನಿಗಳ ಸಂಖ್ಯೆ ಶೇ 15 ಮಾತ್ರ ಎಂದಿದೆ. ಈ ಸಮೀಕ್ಷೆಯಲ್ಲಿ ಐಟಿ ಕಂಪನಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 1,900ಕ್ಕೂ ಅಧಿಕ ಹಿರಿಯರು ಮತ್ತು ಜಾಗತಿಕ ಮಟ್ಟದ ಸೈಬರ್ ಭದ್ರತೆ ವಿಭಾಗದ ತಜ್ಞರು ಪಾಲ್ಗೊಂಡಿದ್ದರು. ಇದರಲ್ಲಿ ಭಾರತದ 337 ಜನರು ಇದ್ದರು. ಕೃತಕ ಬುದ್ಧಿಮತ್ತೆಯನ್ನು ಅಳವಡಿಸುವಲ್ಲಿ ಮತ್ತು ಭವಿಷ್ಯದ ತಂತ್ರಜ್ಞಾನಕ್ಕೆ ಮುಖ ಮಾಡುವಲ್ಲಿ, ಡಿಜಿಟಲ್ ಪರಿವರ್ತನೆಗೆ ಆದ್ಯತೆ ನೀಡುವಲ್ಲಿ ಜಾಗತಿಕ (ಶೇ 44) ಮಟ್ಟದ ಕಂಪನಿಗಳಿಗಿಂತ ಭಾರತದ (ಶೇ 54) ಕಂಪನಿಗಳು ಮುಂಚೂಣಿಯಲ್ಲಿವೆ. ಹೀಗಿದ್ದರೂ ದುರ್ಬಲ ಡೇಟಾ ನೆಲಗಳು, ಅಸಂಘಟಿತ ಮಾಹಿತಿಯ ಜಟಿಲತೆ, ಭದ್ರತಾ ಅಪಾಯಗಳು ಹಾಗೂ ಆಡಳಿತ ಮಾರ್ಗಸೂಚಿಗಳ ಕೊರತೆ ಈಗಲೂ ಕೃತಕ ಬುದ್ಧಿಮತ್ತೆ ಕ್ಷೇತ್ರದ ಬೆಳವಣಿಗೆಯ ಹಾದಿಯಲ್ಲಿ ಅಡ್ಡಗಲ್ಲುಗಳಾಗಿವೆ ಎಂಬುದು ಈ ವರದಿಯ ಅಭಿಪ್ರಾಯ.

# ಸಂಜಯ್ ಕಪೂರ್ 30,000 ಕೋಟಿ ಆಸ್ತಿ..



ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆ

ಇತ್ತೀಚೆಗಷ್ಟೇ ನಿಧನ ಹೊಂದಿದ ಉದ್ಯಮಿ ಸಂಜಯ್ ಕಪೂರ್ ಅವರ 30,000 ಕೋಟಿ ರೂಪಾಯಿ ಆಸ್ತಿ ಹಂಚಿಕೆ ಸಂಬಂಧ ಅವರ 2ನೇ ಹೆಂಡತಿ ಹಾಗೂ ನಟಿ ಕರಿಷ್ಮಾ ಕಪೂರ್ ಅವರ ಮಕ್ಕಳು ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಸದ್ಯ ಸಂಜಯ್ ಕಪೂರ್ ನಿಧನದ ನಂತರ ಅವರ ಆಸ್ತಿಯನ್ನು ಅವರ ಮೂರನೇ ಹೆಂಡತಿ ಪ್ರಿಯಾ ಸಚ್‌ದೇವ್ ಅವರು ನಿರ್ವಹಣೆ ಮಾಡುತ್ತಿದ್ದಾರೆ. ಈಗ ಹೆಂಡತಿ ನಟಿ ಕರಿಷ್ಮಾ ಕಪೂರ್ ಅವರ ಮಕ್ಕಳು ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆ ಮಾಡಿದ್ದರಿಂದ ಪ್ರಿಯಾ ಸಚ್‌ದೇವ್ ಅವರ ನಡುವಳಿ ಮೇಲೆ ಪ್ರಶ್ನೆಗಳು ಎದ್ದಿವೆ. ಆಸ್ತಿಯಲ್ಲಿ ಕರಿಷ್ಮಾ ಕಪೂರ್ ಅವರ ಮಕ್ಕಳು ಕೂಡ ಪಾಲುದಾರರು ಎಂದು ಹೇಳಲಾಗಿದೆ.

ಸಂಜಯ್ ಕಪೂರ್‌ಗೆ ಸಂಬಂಧಿಸಿದ ಆಸ್ತಿ, ಲೆಕ್ಕಪತ್ರಗಳ ಹಂಚಿಕೆ ಪ್ರತಿಪಾದನೆಗೆ ಅರ್ಜಿ ಸಲ್ಲಿಕೆ ಮಾಡಿ ಶಾಶ್ವತ ತಡೆಯಾಜ್ಞೆಗೆ ಕೋರಿದ್ದಾರೆ. ತಂದೆ ಸಂಜಯ್ ಕಪೂರ್ ಅವರು ನಿಧನ ಹೊಂದಿದ ಮೇಲೆ ಮಲತಾಯಿ ಪ್ರಿಯಾ ಸಚ್‌ದೇವ್ ಅವರು ಆಸ್ತಿ, ದಾಖಲೆ ಪತ್ರಗಳಿಗೆ ಸಂಬಂಧಿಸಿದಂತೆ ಇತರೆ ಮಾಹಿತಿ ಹಂಚಿಕೊಳ್ಳಲು ನಿರಾಕರಣೆ ಮಾಡಿದ್ದಾರೆ. ಅಲ್ಲದೇ ನಮಗೆ ಆಸ್ತಿ ಸಿಗದಂತೆ ಮಾಡಲು ಮುಂದಾಗಿದ್ದಾರೆ.

ಇಡೀ ಆಸ್ತಿಯನ್ನು ತಮ್ಮ ನಿಯಂತ್ರಣಕ್ಕೆ ತೆಗೆದುಕೊಳ್ಳಲು ತಂದೆಯ ವಿಲ್ ಅನ್ನು ನಕಲು ಮಾಡಲು ಯತ್ನಿಸಿದ್ದಾರೆ ಎಂದು ಆರೋಪಿಸಲಾಗಿದೆ. ಜುಲೈ 30, 2025ರಂದು ನಡೆದ ಕೌಟುಂಬಿಕ ಸಭೆಯಲ್ಲಿ ತಮ್ಮ ಮಲತಾಯಿ ಏಳು ವಾರಗಳಿಗೂ ಹೆಚ್ಚು ಕಾಲ ದಿನೇಶ್ ಅಗರ್ವಾಲ್ ಮತ್ತು ನಿತಿನ್ ಶರ್ಮಾ ಎಂಬ ಇಬ್ಬರು ಸಹಚರರೊಂದಿಗೆ ಸಂಚು ರೂಪಿಸಿ ತಮ್ಮನ್ನು ಹತ್ತಿಕ್ಕಿದ್ದರು ಎಂದು ದೂರಲಾಗಿದೆ.

# ಇಮ್ರಾನ್ ಹಶ್ಮಿಗೆ ದಿಶಾ ಪಟಾನಿ ನಾಯಕಿ

ಸೂಪರ್ ಹಿಟ್ ಅವರಾಪನ್ ಚಿತ್ರದ ಸೀಕ್ವೆಲ್



2007ರಲ್ಲಿ ತೆರೆಕಂಡು ಸೂಪರ್ ಹಿಟ್ ಆದ ಬಾಲಿವುಡ್‌ನ ಅವರಾಪನ್ ಸಿನಿಮಾ ಪಾರ್ಟ್-2ಗೆ ಸಿದ್ಧತೆ ನಡೆದಿದೆ. ಈ ಸಿನಿಮಾದಲ್ಲಿ ಇಮ್ರಾನ್ ಹಶ್ಮಿಗೆ ನಾಯಕಿಯಾಗಿ ಈ ಬಾರಿ ದಿಶಾ ಪಟಾನಿ ಕಾಣಿಸಿಕೊಳ್ಳಲಿದ್ದಾರಂತೆ. ಸದ್ಯ ತಂಡ ರೆಡಿಯಾಗಿದ್ದು, ಸಿನಿಮಾ ಇದೇ ತಿಂಗಳ ಅಂತ್ಯದೊಳಗೆ ಶೂಟಿಂಗ್ ಶುರುಮಾಡುವ ಎಲ್ಲಾ ತಯಾರಿಯನ್ನ ಮಾಡಿಕೊಳ್ಳಲಾಗಿದೆಯಂತೆ.

ಅವರಾಪನ್ ಸಿನಿಮಾದ ಮೊದಲ ಭಾಗದಲ್ಲಿ ನಟ ಇಮ್ರಾನ್ ಹಶ್ಮಿಗೆ ನಾಯಕಿಯಾಗಿ ಶ್ರಿಯಾ ಶರಣ್ ಹಾಗೂ ಮೃಣಾಲಿನಿ ಶರ್ಮಾ ನಟಿಸಿದ್ದರು. ಇನ್ನು ಮೋಹಿತ್ ಸೂರಿ ನಿರ್ದೇಶನದ ಜವಾಬ್ದಾರಿ ಹೊತ್ತುಕೊಂಡಿದ್ದರು. ಈ ನಿತೀನ್ ಕಕ್ಕರ್ ನಿರ್ದೇಶಕ ಕ್ಯಾಪ್ ಹಾಕಲಿದ್ದು, ಇಮ್ರಾನ್ ಹಶ್ಮಿ ಈ ಸಿನಿಮಾದ ಪಾತ್ರಕ್ಕಾಗಿ ಸಾಕಷ್ಟು ತಯಾರಿ ಮಾಡಿ ಕೊಳ್ಳುತ್ತಿದ್ದಾರೆ. ಇಮ್ರಾನ್‌ಗೆ ನಾಯಕಿಯಾಗಿ ಬಾಲಿವುಡ್ ಬ್ಯೂಟಿ ದಿಶಾ ಹಾಟ್ ಅವತಾರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಮುಖೇಶ್ ಭಟ್ ಈ ಸಿನಿಮಾಗೆ ಬಂಡವಾಳ ಹೂಡಿ ನಿರ್ಮಾಣ ಮಾಡುತ್ತಿದ್ದಾರೆ. ಅವರಾಪನ್ ಸಿನಿಮಾದ ಮೂಲಕ ಕೋಟಿ ಕೋಟಿ ಬಾಚಿಕೊಂಡ ನಿರ್ಮಾಪಕ ಈ ಬಾರಿ ಬಹುಕೋಟಿ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣ ಮಾಡಲು ತಯಾರಿ ಮಾಡಿಕೊಂಡಿದ್ದಾರೆ. ಇಮ್ರಾನ್ ಹಶ್ಮಿ ಅಂದ್ಮೇಲೆ ಹಸಿಬಿಸಿ ದೃಶ್ಯಗಳಿಗೇನು ಕಮ್ಮಿ ಇರೋದಿಲ್ಲ. ಶೀಘ್ರದಲ್ಲೇ ಶೂಟಿಂಗ್ ಆರಂಭಿಸಿ, ಮುಂದಿನವರ್ಷ ಸಿನಿಮಾವನ್ನ ತೆರೆಗೆ ತರುವ ಪ್ರಯತ್ನದಲ್ಲಿ ಚಿತ್ರತಂಡ ಯೋಜನೆ ಹಾಕಿಕೊಂಡಿದೆ.

# ಸಂಜನಾ ಗಲ್ರಾನಿ ಆರ್ಭಟ

ಕಣ್ಣೀರು ಹಾಕಿದ ನಟಿ



ಕನ್ನಡದ ನಟಿ ಸಂಜನಾ ಗಲ್ರಾನಿ ತೆಲುಗು ಬಿಗ್‌ಬಾಸ್ ಸೀಸನ್ 9ಕ್ಕೆ ಸ್ಪರ್ಧಿಯಾಗಿ ಹೋಗಿದ್ದಾರೆ. ತೆಲುಗಿನಲ್ಲಿಯೂ ಹಲವು ಸಿನಿಮಾಗಳಲ್ಲಿ ನಟಿಸಿರುವ ಸಂಜನಾ ಗಲ್ರಾನಿ ತೆಲುಗು ಪ್ರೇಕ್ಷಕರಿಗೆ ಚಿರ ಪರಿಚಿತ ನಟಿ. ಇದೀಗ ಸಂಜನಾ ಗಲ್ರಾನಿ ಮೊದಲ ವಾರದಲ್ಲಿಯೇ ಬಿಗ್‌ಬಾಸ್ ಮನೆಯಲ್ಲಿ ತಮ್ಮ ವಿಶ್ವರೂಪ ದರ್ಶನ ಮಾಡಿದ್ದಾರೆ. ಖ್ಯಾತ ನಟಿಯೊಟ್ಟಿಗೆ ಜಗಳವಾಡಿ ಕಣ್ಣೀರು ಹಾಕಿಸಿದ್ದಾರೆ.

ಕನ್ನಡದ ನಟಿ ಸಂಜನಾ ಗಲ್ರಾನಿ ತೆಲುಗು ಬಿಗ್‌ಬಾಸ್ ಮನೆ ಸೇರಿಕೊಂಡಿದ್ದಾರೆ. 12 ವರ್ಷಗಳ ಹಿಂದೆ ಕನ್ನಡದ ಮೊದಲ ಬಿಗ್‌ಬಾಸ್‌ಗೆ ಸ್ಪರ್ಧಿಯಾಗಿ ಹೋಗಿದ್ದ ನಟಿ ಸಂಜನಾ ಈಗ ಒಂದು ದಶಕಕ್ಕೂ ಹೆಚ್ಚು ಸಮಯದ ಬಳಿಕ ತೆಲುಗು ಬಿಗ್‌ಬಾಸ್ ಮನೆ ಪ್ರವೇಶಿಸಿದ್ದಾರೆ. ಸಂಜನಾ, ಇದೀಗ ತೆಲುಗು ಬಿಗ್‌ಬಾಸ್‌ನಲ್ಲಿ ತಮ್ಮ ವಿಶ್ವರೂಪ ದರ್ಶನ ಮಾಡಿಸುತ್ತಿದ್ದಾರೆ. ಮನೆ ಮಂದಿಯ ಮೇಲೆ ಹಾರಿ ಬಿದ್ದಿದ್ದು, ಹಲವರೊಟ್ಟಿಗೆ ಜಗಳ ಮಾಡಿದ್ದಾರೆ. ಖ್ಯಾತ ನಟಿಯನ್ನು ಟಾರ್ಗೆಟ್ ಮಾಡಿ ವಾಗ್ವಾಳಿ ನಡೆಸಿದ್ದು, ನಟಿ ಕಣ್ಣೀರು ಹಾಕಿದ್ದಾರೆ. ಕನ್ನಡ ಸೇರಿದಂತೆ ಹಲವಾರು ಭಾಷೆಗಳಲ್ಲಿ ಸೂಪರ್ ಸ್ಟಾರ್ ನಟರುಗಳೊಟ್ಟಿಗೆ ನಟಿಸಿರುವ ಫ್ಲೋರಾ ಸೈನಿ ಅವರಿಗೆ ಮೊದಲ ವಾರ ಬಾತ್‌ರೂಂ ಸ್ವಚ್ಛ ಮಾಡುವ ಜವಾಬ್ದಾರಿ ನೀಡಲಾಗಿದೆ. ಫ್ಲೋರಾ ಸೈನಿ ಅದನ್ನು ಶ್ರದ್ಧೆಯಿಂದಲೇ ಮಾಡುತ್ತಿದ್ದಾರೆ. ಆದರೆ ಅವರಿಗೆ ಸಂಜನಾ ಪದೇ ಪದೇ ಕಿರಿ-ಕಿರಿ ನೀಡುತ್ತಿದ್ದಾರೆ. ಇದರಿಂದಾಗಿ ಈ ಇಬ್ಬರ ನಡುವೆ ದೊಡ್ಡ ಜಗಳವೇ ಆಗಿದೆ. ಇದು ಮನೆಯ ಇತರೆ ಸದಸ್ಯರ ಮೇಲೂ ಸಹ ಪರಿಣಾಮ ಬೀರಿದೆ.

# ಪಡ್ಡೆಗಳ ನಿದ್ದೆ ಕದ್ದ ಹಾಟ್ ಬ್ಯೂಟಿ

ಜ್ಯೋತಿ ರೈ ಕಾಮೆಂಟ್ಸ್ ಸೆಕ್ಷನ್ ಆಫ್



ಬೋಲ್ಡ್ ಫೋಟೋಗಳಿಂದ ಇನ್‌ಸ್ಟಾದಲ್ಲಿ ಕಿಚ್ಚು ಹಚ್ಚುವ ಮಾದಕ ಚೆಲುವೆ ಜ್ಯೋತಿ ರೈ. ಇದೀಗ ಹೊಸ ಫೋಟೋಗಳನ್ನ ಅಪ್‌ಲೋಡ್ ಮಾಡಿದ್ದು, ಪಡ್ಡೆಗಳ ನಿದ್ದೆ ಕದ್ದಿದ್ದಾರೆ. ಸ್ಕಿನ್‌ಫಿಟ್ ಜೀನ್ಸ್ ಧರಿಸಿರುವ ಸಿಂಪಲ್ ಫೋಟೋಶೂಟ್ ಇದು. ಆದರೆ ಇದರಲ್ಲಿ ಜ್ಯೋತಿ ರೈ ಕ್ಯಾಪ್ಷನ್ ಹಾಕಿರುವುದೇ ಭಾರೀ ವಿಶೇಷ. ಮತ್ತೊಂದು ಮಾದಕ ಫೋಟೋದೊಂದಿಗೆ ಬಂದ ಜ್ಯೋತಿ ರೈ ಕಾಮೆಂಟ್ಸ್ ಸೆಕ್ಷನ್ ಆಫ್ ಮಾಡಿದ್ದಾರೆ. ಒಂದ್ವೇಳೆ ಆನ್ ಇದ್ರೆ ಅದೆಂತೆಂಥಾ ಕಾಮೆಂಟ್ಸ್ ಬರ್ತಿದ್ದವೋ ಏನೋ. ಅಷ್ಟಕ್ಕೂ ಜ್ಯೋತಿ ರೈ ಫೋಟೋಗಿಂತ ಅವರು ಹಾಕಿರುವ ಕ್ಯಾಪ್ಷನ್ ಭಾರಿ ಚರ್ಚೆಯಾಗುತ್ತಿದೆ. ಯಾಕಂದ್ರೆ ಅವರು ಹೇಳಿರುವುದು ಹೊಂದಿಕೊಳ್ಳೋದಕ್ಕೆ ಇಲ್ಲಿ ಇಲ್ಲ, ಇನ್ನಷ್ಟು ಬೆಳೆಯೋದಕ್ಕೆ ಎಂದಿದ್ದಾರೆ. ಒಳ್ಳೆಯ ರೀತಿಯಲ್ಲಿ ಯೋಚಿಸಿದ್ರೆ ಹೊಂದಿಕೊಂಡು ಹೋಗುವುದು ಯಾರಿಗೂ ಬೇಕಾಗಿಲ್ಲ, ಇನ್ನಷ್ಟು ಬೆಳೆಯಬೇಕು ಎಂದು ಅರ್ಥ ಮಾಡಿಕೊಳ್ಳಬಹುದು. ಅದೇನೇ ಇದ್ದರೂ ಇನ್‌ಸ್ಟಾದಲ್ಲಿ ಜ್ಯೋತಿ ರೈ ಪೋಸ್ಟ್ ಒಂದು ಬಂದಿದೆ. ಅಂದರೆ ಅದು ರೋಚಕತೆ ಹುಟ್ಟಿಸೋದ್ರಲ್ಲಿ ಮಿಸ್ ಆಗಲ್ಲ.

# ಬಿಗ್‌ಬಾಸ್‌ಗೆ ಹೋಗ್ತಾರಾ ಸುಧಾರಾಣಿ



ಕನ್ನಡದ ಬಿಗ್‌ಬಾಸ್ ಸೀಸನ್ 12ರ ಪ್ರಸಾರದ ದಿನಾಂಕ ಫಿಕ್ಸ್ ಆಗಿರುವುದರಿಂದ ಮನೆಯೊಳಗೆ ಹೋಗುವ ಸ್ಪರ್ಧಿಗಳ ಕುರಿತು ನಿರೀಕ್ಷೆ ಜೋರಾಗಿದೆ.

ಕಾರ್ಯಕ್ರಮ ಪ್ರಸಾರವಾಗೋದಕ್ಕೂ ಮುನ್ನವೇ ಕೆಲವು ಸ್ಪರ್ಧಿಗಳ ಹೆಸರು ಬಹಿರಂಗವಾಗುವುದು ಸಾಮಾನ್ಯ. ಅದರಂತೆ ಈ ಬಾರಿಯೂ ದೊಡ್ಮನೆಗೆ ಹೋಗುವ ಸ್ಪರ್ಧಿಗಳ ಸಂಭವನೀಯ ಪಟ್ಟಿ ಮುನ್ನಲೆಗೆ ಬಂದಿದ್ದು ಅದರಲ್ಲಿ ಹಿರಿಯ ನಟಿ ಸುಧಾರಾಣಿ ಹೆಸರು ಚಾಲ್ತಿಯಲ್ಲಿದೆ.

ಖ್ಯಾತ ನಟಿ ಸುಧಾರಾಣಿ, ಸುದೀಪ್ ಜೊತೆಯೂ ನಟಿಸಿದ್ದ ನಟಿ, ಇವರು ಬಿಗ್‌ಬಾಸ್‌ಗೆ ಹೋಗ್ತಾರೆ ಎನ್ನುವ ಸುದ್ದಿ ಹರಿದಾಡುತ್ತಿದೆ. ಸದ್ಯ ಧಾರಾವಾಹಿ ಹಾಗೂ ಸಿನಿಮಾಗಳಲ್ಲಿ ಹೆಚ್ಚು ಸಕ್ರಿಯವಾಗಿರುವ ನಟಿ ಸುಧಾರಾಣಿ ಸೋಶಿಯಲ್ ಮೀಡಿಯಾದಲ್ಲೂ ಆಕ್ಟೀವ್ ಆಗಿದ್ದು, ಹೆಚ್ಚು ಫಾಲವೋರ್ಸ್ ಹೊಂದಿರುವ ಹಿರಿಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಇವರು ಬಿಗ್‌ಬಾಸ್ ಸೀಸನ್ 12ರ ಹೈಲೈಟ್ ಕಂಟೆಸ್ಟಂಟ್ ಎನ್ನಲಾಗುತ್ತಿದೆ.

ಸಾಮಾನ್ಯವಾಗಿ ಬಿಗ್‌ಬಾಸ್ ಸ್ಪರ್ಧೆಯಲ್ಲಿ ಸ್ಪರ್ಧಿಗಳನ್ನ ಆಯ್ಕೆ ಮಾಡಿಕೊಳ್ಳುವಾಗ ಎಲ್ಲಾ ವಯೋಮಾನ ಹಾಗೂ ಸಿನಿಮಾ, ಸೀರಿಯಲ್, ಸೋಷಿಯಲ್ ಮೀಡಿಯಾ ಎಲ್ಲದರ ಖ್ಯಾತಿಯನ್ನ ಗಣನೆಗೆ ತೆಗೆದುಕೊಳ್ಳಲಾಗುತ್ತೆ. ಅದರಂತೆ ಸುಧಾರಾಣಿ ಅವರಿಗೆ ಆಹ್ವಾನ ಹೋಗಿದೆ ಎನ್ನಲಾಗುತ್ತಿದೆ.

# ಪವರ್ ಪ್ಲೇನಲ್ಲೇ ಪಂದ್ಯ ಮುಗಿಸಿದ ಟೀಂ ಇಂಡಿಯಾ

ಭಾರತ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ನಡುವಿನ ಏಷ್ಯಾಕಪ್ ಪಂದ್ಯದಲ್ಲಿ ನಿರೀಕ್ಷಿತ ಫಲಿತಾಂಶವೇ ಹೊರಬಿದ್ದಿದೆ. ಪಂದ್ಯದ ಆರಂಭದಿಂದಲೂ ಯುಎಇ ಮೇಲೆ ಸವಾರಿ ಮಾಡಿದ ಭಾರತ ತಂಡ ಸಾಂಘಿಕ ಪ್ರದರ್ಶನ ನೀಡಿ ಸುಲಭ ಜಯ ದಾಖಲಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಯುಎಇ ತಂಡ ಸಂಪೂರ್ಣ 20 ಓವರ್‌ಗಳನ್ನು ಆಡದೆ 13.1 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ಕೇವಲ 57 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಟೀಂ ಇಂಡಿಯಾ ಕೇವಲ 4.3 ಓವರ್‌ಗಳಲ್ಲಿ ಗೆಲುವಿನ ನಗೆ ಬೀರಿತು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಯುಎಇ ತಂಡ ಭಾರತದ ಮಾರಕ ಬೌಲಿಂಗ್ ಮುಂದೆ ತರಗೆಲೆಗಳಂತೆ ಉದುರಿತು. ಪರಿಣಾಮವಾಗಿ ಇಡೀ ತಂಡವು ಕೇವಲ 57 ರನ್‌ಗಳಿಗೆ ಆಲೌಟ್ ಆಯಿತು. ತಂಡದ ಎಂಟು ಬ್ಯಾಟ್ಸ್‌ಮನ್‌ಗಳಿಗೆ ಎರಡಂಕಿಯ ಗಡಿ ತಲುಪಲು ಸಾಧ್ಯವಾಗಲಿಲ್ಲ. ಯುಎಇ ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ನಾಯಕ ಮೊಹಮ್ಮದ್ ವಾಸಿಮ್ ಮತ್ತು ಅಲಿಶಾನ್ ಮೊದಲ ವಿಕೆಟ್‌ಗೆ 26 ರನ್‌ಗಳ ಜೊತೆಯಾಟ ನೀಡಿದರು. ಇಲ್ಲಿ ದಾಳಿಗಿಳಿದ ಜಸ್ಪ್ರೀತ್ ಬುಮ್ರಾ, ಅಲಿಶಾನ್ (22 ರನ್) ಅವರ ವಿಕೆಟ್ ಉರುಳಿಸಿದರು. ಇದರ ನಂತರ, ಮೊಹಮ್ಮದ್ ಜೊಹೆಬ್ (2 ರನ್) ಕೂಡ ವರುಣ್ ಚಕ್ರವರ್ತಿ ಎಸೆತದಲ್ಲಿ 29 ರನ್ ಗಳಿಸಿ ಔಟಾದರು. ಒಂಬತ್ತನೇ ಓವರ್‌ನಲ್ಲಿ, ಕುಲ್ದೀಪ್ ಯಾದವ್ ತಮ್ಮ ಮ್ಯಾಜಿಕ್ ಪ್ರದರ್ಶಿಸಿ ಒಂದೇ ಓವರ್‌ನಲ್ಲಿ ಮೂರು ವಿಕೆಟ್‌ಗಳನ್ನು ಪಡೆದರು.

4.3 ಓವರ್‌ಗಳಲ್ಲಿ ಗೆದ್ದ ಭಾರತ



ಇದರ ಪರಿಣಾಮವಾಗಿ ಯುಎಇ 50 ರನ್‌ಗಳಿಗೆ ಐದು ವಿಕೆಟ್‌ಗಳನ್ನು ಕಳೆದುಕೊಂಡಿತು. ಈ ವೇಳೆ ದಾಳಿಗಿಳಿದ ಶಿವಂ ದುಬೆ ಆಸಿಫ್ ಖಾನ್ (2) ಅವರನ್ನು ಔಟ್ ಮಾಡುವ ಮೂಲಕ ಯುಎಇ ತಂಡಕ್ಕೆ ಆರನೇ ಹೊಡೆತ ನೀಡಿದರು. ನಂತರ ಅಕ್ಷರ್ ಪಟೇಲ್ ಸಿಮ್ರಂಜಿತ್ ಸಿಂಗ್ (1) ಅವರನ್ನು ಔಟ್ ಮಾಡುವ ಮೂಲಕ ಏಳನೇ ವಿಕೆಟ್ ಉರುಳಿಸಿದರು. ಶೀಘ್ರದಲ್ಲೇ ದುಬೆ, ಧ್ರುವ್ ಪರಾಶರ್ (1) ಮತ್ತು ಜುನೈದ್ ಸಿದ್ದಿಕಿ (2) ಅವರನ್ನು ಔಟ್ ಮಾಡಿದರು. ಅಂತಿಮವಾಗಿ ಕುಲ್ದೀಪ್ ಹೈದರ್ ಅಲಿ (1) ಅವರನ್ನು ಔಟ್ ಮಾಡುವ ಮೂಲಕ ಯುಎಇ ಇನ್ನಿಂಗ್ಸ್‌ಗೆ ಅಂತ್ಯ ಹಾಡಿದರು. ಭಾರತ ಪರ ಕುಲ್ದೀಪ್ ಯಾದವ್ ಗರಿಷ್ಠ 4 ವಿಕೆಟ್‌ಗಳನ್ನು ಪಡೆದರೆ, ಶಿವಂ ದುಬೆ 3 ವಿಕೆಟ್‌ಗಳನ್ನು ಪಡೆದರು. ಜಸ್ಪ್ರೀತ್ ಬುಮ್ರಾ, ಅಕ್ಷರ್ ಪಟೇಲ್ ಮತ್ತು ವರುಣ್ ಚಕ್ರವರ್ತಿ ತಲಾ 1 ವಿಕೆಟ್ ಪಡೆದರು.

ಗೆಲ್ಲಲು 52 ರನ್‌ಗಳ ಗುರಿ ಬೆನ್ನಟ್ಟಿದ ಟೀಂ ಇಂಡಿಯಾಕ್ಕೆ ಅಭಿಷೇಕ್ ಶರ್ಮಾ ಮತ್ತು ಶುಭ್‌ಮನ್ ಗಿಲ್ ಉತ್ತಮ ಆರಂಭ ನೀಡಿದರು. ಅದರಲ್ಲೂ ಅಭಿಷೇಕ್ ಮೊದಲ ಎಸೆತದಿಂದಲೇ ಆಕ್ರಮಣಕಾರಿಯಾಗಿ ಇನ್ನಿಂಗ್ಸ್ ಪ್ರಾರಂಭಿಸಿದರು. ಆದಾಗ್ಯೂ, ಅಭಿಷೇಕ್ ಶರ್ಮಾ 15 ಎಸೆತಗಳಲ್ಲಿ 2 ಬೌಂಡರಿ ಮತ್ತು 3 ಸಿಕ್ಸರ್‌ಗಳನ್ನು ಒಳಗೊಂಡಂತೆ 30 ರನ್‌ಗಳನ್ನು ಗಳಿಸಿ ಔಟಾದರು . ಅದೇ ಸಮಯದಲ್ಲಿ, ಶುಭ್‌ಮನ್ ಗಿಲ್ 8 ಎಸೆತಗಳಲ್ಲಿ 16 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರೆ, ನಾಯಕ ಸೂರ್ಯಕುಮಾರ್ ಯಾದವ್ 1 ಎಸೆತವನ್ನು ಆಡಿ ಅದರಲ್ಲಿ ಸಿಕ್ಸರ್ ಬಾರಿಸಿದರು. ಇದರಿಂದಾಗಿ ಭಾರತ ಕೇವಲ 4.3 ಓವರ್‌ಗಳಲ್ಲಿ 1 ವಿಕೆಟ್ ಕಳೆದುಕೊಂಡು ಗುರಿ ಮುಟ್ಟಿತು.

# ಎಲ್ಲಾ ದಾಖಲೆಗಳನ್ನು ಮುರಿದ ಡೆವಾಲ್ಡ್ ಬ್ರೆವಿಸ್

ನಾಲ್ಕನೇ ಆವೃತ್ತಿಯ ಎಸ್‌ಎ20 ಲೀಗ್‌ನ ಹರಾಜು ಜೋಹಾನ್ಸ್‌ಬರ್ಗ್‌ನಲ್ಲಿ ನಡೆಯಿತು. ಈ ಹರಾಜಿನಲ್ಲೂ ನಿರೀಕ್ಷೆಯಂತೆಯೇ ದಕ್ಷಿಣ ಆಫ್ರಿಕಾ ತಂಡದ ಸ್ಟಾರ್ ಆಟಗಾರರ ಮೇಲೆ ಹಣದ ಮಳೆಯೇ ಸುರಿಯಿತು. ಅದರಲ್ಲೂ ಕೆಲವೇ ದಿನಗಳ ಹಿಂದೆ ಸಿಡಿಲಬ್ಬರದ ಶತಕ ಸಿಡಿಸಿ ಎಲ್ಲರ ಗಮನ ಸೆಳೆದಿದ್ದ ಡೆವಾಲ್ಡ್ ಬ್ರೆವಿಸ್ ಅವರನ್ನು ದಾಖಲೆಯ ಮೊತ್ತಕ್ಕೆ ಖರೀದಿಸಲಾಗಿದೆ.

ಈ ಮೊದಲೇ ನಿರೀಕ್ಷಿಸಿದಂತೆ 22 ವರ್ಷದ ಡೆವಾಲ್ಡ್ ಬ್ರೆವಿಸ್‌ಗೆ ಹೆಚ್ಚಿನ ಬೇಡಿಕೆಯಿತ್ತು. ಬ್ರೆವಿಸ್ ಇತ್ತೀಚೆಗೆ ಐಪಿಎಲ್ ಮತ್ತು ಆಸ್ಟ್ರೇಲಿಯಾದಲ್ಲಿ ಅದ್ಭುತ ಪ್ರದರ್ಶನ ನೀಡಿದ್ದರು, ಇದರಿಂದಾಗಿ ಎಲ್ಲಾ ಫ್ರಾಂಚೈಸಿಗಳು ಅವರ ಮೇಲೆ ಭಾರಿ ಬಿಡ್ ಮಾಡಿದ್ದವು. ಅಂತಿಮವಾಗಿ ಪ್ರಿಟೋರಿಯಾ ಕ್ಯಾಪಿಟಲ್ಸ್ ತಂಡವು ಬ್ರೆವಿಸ್ ಅವರನ್ನು ಖರೀದಿಸುವಲ್ಲಿ ಯಶಸ್ವಿಯಾಯಿತು. ಈ ಮೂಲಕ ಡೆವಾಲ್ಡ್ ಬ್ರೆವಿಸ್ ಈ ಲೀಗ್‌ನ ಇತಿಹಾಸದಲ್ಲಿ ಅತ್ಯಂತ ದುಬಾರಿ ಆಟಗಾರ ಎನಿಸಿಕೊಂಡಿದ್ದಾರೆ. ಡೆವಾಲ್ಡ್ ಬ್ರೆವಿಸ್‌ಗಾಗಿ ಹರಾಜಿನಲ್ಲಿ ಫ್ರಾಂಚೈಸಿಗಳ ನಡುವೆ ಭರ್ಜರಿ ಹೋರಾಟ ನಡೆಯಿತು.

ಅತ್ಯಧಿಕ ಮೊತ್ತಕ್ಕೆ ಹರಾಜು

ಆದಾಗ್ಯೂ, ಪ್ರಿಟೋರಿಯಾ ಕ್ಯಾಪಿಟಲ್ಸ್ ತಂಡವು ಬಿಡ್ ಅನ್ನು ಗೆಲ್ಲುವಲ್ಲಿ ಯಶಸ್ವಿಯಾಯಿತು. ಡೆವಾಲ್ಡ್ ಬ್ರೆವಿಸ್‌ರನ್ನು ತಮ್ಮ ತಂಡದ ಭಾಗವಾಗಿಸಲು ಪ್ರಿಟೋರಿಯಾ ಕ್ಯಾಪಿಟಲ್ಸ್ 16 ಮಿಲಿಯನ್ ರಾಂಡ್‌ಗಳನ್ನು ಅಂದರೆ 8.06 ಕೋಟಿ ರೂ.ಗಳನ್ನು ಖರ್ಚು ಮಾಡಿತು. ಇದರೊಂದಿಗೆ ಬ್ರೆವಿಸ್ ಈ ಲೀಗ್‌ನ ಇತಿಹಾಸದಲ್ಲಿ ಅತ್ಯಂತ ದುಬಾರಿ ಆಟಗಾರ ಎಂಬ ದಾಖಲಲೆ ಬರೆದರು.

ಡೆವಾಲ್ಡ್ ಬ್ರೆವಿಸ್ ಮಾತ್ರವಲ್ಲದೆ ದಕ್ಷಿಣ ಆಫ್ರಿಕಾದ ಸ್ಟಾರ್ ಬ್ಯಾಟ್ಸ್‌ಮನ್ ಮತ್ತು ಟಿ20 ತಂಡದ ನಾಯಕ ಏಡೆನ್ ಮಾರ್ಕ್ರಾಮ್ ಕೂಡ ಈ ಹರಾಜಿನಲ್ಲಿ ಇತಿಹಾಸ ನಿರ್ಮಿಸಿದರು. ಡರ್ಬನ್ ಸೂಪರ್ ಜೈಂಟ್ಸ್ ಅವರನ್ನು 7 ಕೋಟಿ ರೂ.ಗಳ ದಾಖಲೆಯ ಮೊತ್ತಕ್ಕೆ ಖರೀದಿಸಿತು, ಇದು ಖ20 ನಲ್ಲಿ ಇದುವರೆಗಿನ ಎರಡನೇ ಅತ್ಯಧಿಕ ಬಿಡ್ ಆಗಿದೆ. ಈ ಹಿಂದೆ ಸನ್‌ರೈಸರ್ಸ್ ಈಸ್ಟರ್ನ್ ಕೇಪ್ ತಂಡದ ಪರ ಆಡಿದ ಮಾರ್ಕ್ರಾಮ್ ತಂಡವನ್ನು ಎರಡು ಬಾರಿ ಚಾಂಪಿಯನ್ ಮಾಡಿದ್ದರು. ಆದರೆ ಈ ಬಾರಿ ಹರಾಜಿನಲ್ಲಿ ಭಾಗವಹಿಸಲು ನಿರ್ಧರಿಸಿದ್ದ ಮಾರ್ಕ್ರಾಮ್ ಮುಂದಿನ ಆವೃತ್ತಿಯಲ್ಲಿ ಡರ್ಬನ್ ಸೂಪರ್ ಜೈಂಟ್ಸ್ ತಂಡದ ಪರ ಬ್ಯಾಟ್ ಬೀಸಲಿದ್ದಾರೆ. ಏಕದಿನ ಕ್ರಿಕೆಟ್‌ನ ನಂಬರ್-1 ಬೌಲರ್ ಎನಿಸಿಕೊಂಡಿರುವ ಕೇಶವ್ ಮಹಾರಾಜ್ ಕೂಡ ಈ ಬಾರಿ ಪ್ರಿಟೋರಿಯಾ ಕ್ಯಾಪಿಟಲ್ಸ್‌ನ ಭಾಗವಾದರು.



# ಪೃಥ್ವಿ ಶಾಗೆ 100 ರೂ ದಂಡ



ಕೊನೆಯ ಅವಕಾಶ ನೀಡಿದ ನ್ಯಾಯಾಲಯ

ಮುಂಬೈನ ದಿನೋಶಿ ಸೆಷನ್ಸ್ ನ್ಯಾಯಾಲಯವು ಟೀಂ ಇಂಡಿಯಾದ ಯುವ ಕ್ರಿಕೆಟಿಗ ಪೃಥ್ವಿ ಶಾ ಅವರಿಗೆ 100 ರೂ. ದಂಡ ವಿಧಿಸಿದೆ. ಕೋಟಿಗಳ ಒಡೆಯನಾಗಿರುವ ಪೃಥ್ವಿ ಶಾಗೆ ನ್ಯಾಯಾಲಯ ಕೇವಲ 100 ರೂ.ಗಳನ್ನು ದಂಡವಾಗಿ ವಿಧಿಸಲು ಕಾರಣವೇನು ಎಂಬ ಪ್ರಶ್ನೆ ನಿಮ್ಮ ಮನದಲ್ಲಿ ಮೂಡುವುದು ಸಹಜ. ಅದಕ್ಕೆ ಉತ್ತರ, ಪೃಥ್ವಿ ಶಾ ಅವರ ನಿರ್ಲಕ್ಷತನ. ವಾಸ್ತವವಾಗಿ 2023 ರಲ್ಲಿ ಸೋಶಿಯಲ್ ಮೀಡಿಯಾ ಸ್ಟಾರ್ ಸಪ್ನಾ ಗಿಲ್ ಹಾಗೂ ಪೃಥ್ವಿ ಶಾ ನಡುವೆ ಸೆಲ್ಫಿ ವಿಚಾರವಾಗಿ ನಡೆದಿದ್ದ ಗಲಾಟೆಯ ಘಟನೆ ನಿಮಗೆಲ್ಲ ನೆನಪಿರಬಹುದು. ಅದೇ ಘಟನೆಗೆ ಸಂಬಂಧಿಸಿದಂತೆ ಇದೀಗ ಪೃಥ್ವಿ ಅವರಿಗೆ ನ್ಯಾಯಾಲಯ ಎಚ್ಚರಿಕೆ ನೀಡಿರುವುದಲ್ಲದೆ ದಂಡವನ್ನು ಸಹ ವಿಧಿಸಿದೆ.

**2023 ರಲ್ಲಿ ನಡೆದಿದ್ದ ಘಟನೆ:** ಅಷ್ಟಕ್ಕೂ ಪೃಥ್ವಿ ಶಾ ಅವರಿಗೆ ನ್ಯಾಯಾಲಯ ದಂಡ ವಿಧಿಸಲು ಕಾರಣವೇನು ಎಂಬುದನ್ನು ನೋಡುವುದಾದರೆ.. ಮೇಲೆ ಹೇಳಿದಂತೆ 2023 ರಲ್ಲಿ ಮುಂಬೈನ ಅಂಧೇರಿಯಲ್ಲಿರುವ ಪಬ್‌ನಲ್ಲಿ ಸಪ್ನಾ ಗಿಲ್ ಮತ್ತು ಪೃಥ್ವಿ ಶಾ ನಡುವೆ ಸೆಲ್ಫಿ ವಿಚಾರವಾಗಿ ಜಗಳವಾಗಿತ್ತು. ಸಪ್ನಾ ಗಿಲ್ ಹಾಗೂ ಆಕೆಯ ಸ್ನೇಹಿತರು ಪೃಥ್ವಿ ಶಾ ಅವರಿಂದ ಸೆಲ್ಫಿ ತೆಗೆದುಕೊಳ್ಳಲು ಪದೇ ಪದೇ ಬೇಡಿಕೆ ಇಟ್ಟಿದ್ದರು. ಆರಂಭದಲ್ಲಿ ಶಾ ಫೋಟೋಗಳಿಗೆ ಪೋಸ್ ನೀಡಿದರು.

ಆದರೆ ಆ ಬಳಿಕ ಸೆಲ್ಫಿ ನೀಡಲು ನಿರಾಕರಿಸಿದ ಬಳಿಕ ಶಾ ತನ್ನ ಸ್ನೇಹಿತ ಆಶಿಶ್ ಯಾದವ್ ಜೊತೆ ಹೊರಗೆ ಬಂದಾಗ, ಸಪ್ನಾ ಗಿಲ್ ಹಾಗೂ ಆಕೆಯ ಸ್ನೇಹಿತರು ಬೇಸ್‌ಬಾಲ್ ಬ್ಯಾಟ್‌ನಿಂದ ದಾಳಿ ಮಾಡಿದ್ದರು ಎಂದು ಆರೋಪಿಸಿ ಪೃಥ್ವಿ ಶಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಅಲ್ಲದೆ ಸಪ್ನಾ ಗಿಲ್ ಹಾಗೂ ಆಕೆಯ ಸ್ನೇಹಿತರು ನನ್ನನ್ನು ಹಿಂಬಾಲಿಸಿ 50,000 ರೂ.ಗೆ ಬೇಡಿಕೆ ಇಟ್ಟಿದ್ದಾರೆ ಎಂಬ ಆರೋಪವನ್ನು ಹೊರಿಸಿದ್ದರು. ಆ ನಂತರ, ಪೊಲೀಸರು ಪ್ರಕರಣ ದಾಖಲಿಸಿಕೊಂಡು ಫೆಬ್ರವರಿ 17 ರಂದು ಸಪ್ನಾ ಗಿಲ್ ಅವರನ್ನು ಬಂಧಿಸಿದರು, ಮೂರು ದಿನಗಳ ನಂತರ ಅವರಿಗೆ ಜಾಮೀನು ಸಿಕ್ಕಿತು.

# ಕೇವಲ ಬಾಳೆಹಣ್ಣುಗಳ ಖರೀದಿಗೆ 35 ಲಕ್ಷ ಖರ್ಚು..!

12 ಕೋಟಿ ರೂಪಾಯಿ ದುರುಪಯೋಗದ ಪ್ರಕರಣದಲ್ಲಿ ಉತ್ತರಾಖಂಡ ಹೈಕೋರ್ಟ್ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಗೆ ನೋಟಿಸ್ ಜಾರಿ ಮಾಡಿದೆ. ವರದಿಯ ಪ್ರಕಾರ ಬಿಸಿಸಿಐ, ಉತ್ತರಾಖಂಡ ಕ್ರಿಕೆಟ್ ಅಸೋಸಿಯೇಷನ್‌ಗೆ ನೀಡಿದ ಹಣವನ್ನು ದುರುಪಯೋಗಪಡಿಸಿಕೊಂಡಿದ್ದು, ಈ ವಿಚಾರವಾಗಿ ತನಿಖೆಗೆ ಒತ್ತಾಯಿಸಲಾಗುತ್ತಿದೆ. 12 ಕೋಟಿ ರೂಪಾಯಿಗಳಲ್ಲಿ 35 ಲಕ್ಷ ರೂಪಾಯಿಗಳನ್ನು ಉತ್ತರಾಖಂಡದ ಆಟಗಾರರಿಗೆ ಬಾಳೆಹಣ್ಣು ಖರೀದಿಸಲು ಖರ್ಚು ಮಾಡಲಾಗಿದೆ. ಇದರ ಜೊತೆಗೆ ಇತರ ವಿಷಯಗಳಿಗೂ ಹೆಚ್ಚಿನ ಹಣವನ್ನು ಖರ್ಚು ಮಾಡಲಾಗಿದೆ ಎಂದು ಉತ್ತರಾಖಂಡ ಕ್ರಿಕೆಟ್ ಅಸೋಸಿಯೇಷನ್‌ನ ಆಡಿಟ್ ವರದಿಯಲ್ಲಿ ಬಹಿರಂಗವಾಗಿದೆ ಟೈಮ್ಸ್ ಆಫ್ ಇಂಡಿಯಾ ವರದಿಯ ಪ್ರಕಾರ, ಬಿಸಿಸಿಐ ನೀಡಿರುವ 12 ಕೋಟಿ ರೂಗಳಲ್ಲಿ 35 ಲಕ್ಷ ರೂಗಳನ್ನು ಬರಿ ಬಾಳೆಹಣ್ಣುಗಳನ್ನು ಖರೀದಿಸುವುದಕ್ಕಾಗಿಯೇ ಖರ್ಚು ಮಾಡಲಾಗಿದೆ. ಹೀಗಾಗಿ ಈ ಬಗ್ಗೆ ತನಿಖೆ ನಡೆಸಬೇಕೆಂದು ದೂರುದಾರರು ಉತ್ತರಾಖಂಡ ಹೈಕೋರ್ಟ್ ಮೊರೆ ಹೋಗಿದ್ದಾರೆ. ಅದರಂತೆ ಈಗ ಈ ಪ್ರಕರಣದ ವಿಚಾರಣೆ ಸೆಪ್ಟೆಂಬರ್ 19 ರಂದು ನಡೆಯಲಿದ್ದು, ಈ ಆರೋಪಕ್ಕೆ ಸಂಬಂಧಿಸಿದಂತೆ ಈಗಾಗಲೇ ಬಿಸಿಸಿಐನಿಂದ ಉತ್ತರವನ್ನು ಕೇಳಲಾಗಿದೆ. ಉತ್ತರಾಖಂಡದ ಲೆಕ್ಕಪರಿಶೋಧನಾ ವರದಿಯ ಪ್ರಕಾರ, ಆಡಿಟ್ ವರದಿಯು ಈವೆಂಟ್ ನಿರ್ವಹಣೆಗೆ 6.4 ಕೋಟಿ ರೂಪಾಯಿಗಳನ್ನು ಮತ್ತು ಟೂರ್ನಮೆಂಟ್-ಟ್ರಯಲ್ ವೆಚ್ಚಗಳಿಗಾಗಿ ಒಟ್ಟು 26.3 ಕೋಟಿ ರೂಪಾಯಿಗಳನ್ನು ಖರ್ಚು ಮಾಡಲಾಗಿದೆ ಎಂದು ಬಹಿರಂಗಪಡಿಸಿದೆ. ಇದು ಹಿಂದಿನ ಹಣಕಾಸು ವರ್ಷದ 22.3 ಕೋಟಿ ರೂಪಾಯಿಗಳಿಗಿಂತ ಹೆಚ್ಚಾಗಿದೆ. ಉತ್ತರಾಖಂಡ್ ಅಸೋಸಿಯೇಷನ್ ಆಹಾರ ಮತ್ತು ಪಾನೀಯ ವೆಚ್ಚಗಳ ಹೆಸರಿನಲ್ಲಿ ಕೋಟ್ಯಂತರ ರೂಪಾಯಿಗಳನ್ನು ದುರುಪಯೋಗಪಡಿಸಿಕೊಂಡಿದೆ ಎಂದು ಹೈಕೋರ್ಟ್‌ನಲ್ಲಿ ಅರ್ಜಿದಾರರು ಆರೋಪಿಸಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966